ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 17 ಸೋಮವಾರ 2025

ಸಂಪುಟ: 45 | ಸಂಚಿಕೆ: 327 | ಪುಟಗಳು: 10

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಕೆಪಿಸಿಸಿ ಅಧ್ಯಕ್ಷ ಸ್ಥಾನದಿಂದ ಮುಕ್ತನಾಗುತ್ತೇನೆ...

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಚ್ಚರಿ ಹೇಳಿಕೆ



ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಸನ್ಮಾನಿಸಲಾಯಿತು.

ಬೆಂಗಳೂರು, ಮಾ.16– ನಾನು ಕೆಪಿಸಿಸಿ ಅಧ್ಯಕ್ಷ ಸ್ಥಾನದಿಂದ ಮುಕ್ತನಾಗುತ್ತೇನೆ, ಕಾಯಿರಿ ಎಂದು ಡಿ.ಕೆ. ಶಿವಕುಮಾರ್ ಅಚ್ಚರಿ ಹೇಳಿಕೆ ನೀಡಿವ ಮೂಲಕ ಸಂಚಲನ ಉಂಟು ಮಾಡಿದ್ದಾರೆ. ಕಾಂಗ್ರೆಸ್‌ನಲ್ಲಿ ಈಗ ಬಿಸಿ ಬಿಸಿ ಚರ್ಚೆಗೆ ಗ್ರಾಸವಾಗಿದೆ.

ಶನಿವಾರ ಕೆಪಿಸಿಸಿ ಕಚೇರಿಯಲ್ಲಿ ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು, ಡಿಸಿಸಿ ಅಧ್ಯಕ್ಷರು, ಮುಂಚೂಣಿ ಘಟಕ ಹಾಗೂ ಸೆಲ್ ವಿಭಾಗಗಳ ಅಧ್ಯಕ್ಷರೊಂದಿಗೆ ಡಿಕೆಶಿ ಸಭೆ ನಡೆಸಿ, ಪಕ್ಷದ ಬಲವರ್ಧನೆ ಹಾಗೂ ಮುಂದೆ ಕೈಗೊಳ್ಳಬೇಕಿರುವ ಕಾರ್ಯಕ್ರಮಗಳ ಕುರಿತು ಚರ್ಚೆ ನಡೆಸಿದರು.

ಈ ಸಭೆಯಲ್ಲಿ ಡಿಕೆಶಿ ಯಾರು ಬೇಕಾದರೂ ಕೆಪಿಸಿಸಿ ಜವಾಬ್ದಾರಿ ತೆಗೆದುಕೊಳ್ಳಬಹುದು ಎಂದು ಹೇಳಿದ್ದಾರೆ. ಸಭೆಯಲ್ಲಿ ಕೆಪಿಸಿಸಿ ಪದಾಧಿಕಾರಿಯೊಬ್ಬರು ಜಿಲ್ಲಾ ಮಟ್ಟದಲ್ಲಿ ಎರಡು ಹುದ್ದೆಗಳ ಬಗ್ಗೆ ಪ್ರಸ್ತಾಪ ಮಾಡಿದರು. ಆಗ ಡಿಕೆಶಿ ತಕ್ಷಣವೇ, ನೋಡ್ರಪ್ಪ, ಸಮಯ, ಸಂದರ್ಭ ನೋಡಿಕೊಂಡು ನಮ್ಮ ಪಾರ್ಟಿಯಲ್ಲಿ ಹಂಗೆ ಆಗುತ್ತೆ. ಖರ್ಗೆ ಸಾಹೇಬ್ರು ಎಐಸಿಸಿ ಅಧ್ಯಕ್ಷರು, ರಾಜ್ಯಸಭೆ ವಿರೋಧ ಪಕ್ಷದ ನಾಯಕರಾಗಿದ್ದಾರೆ. ನಾನು ಕೆಪಿಸಿಸಿ ಅಧ್ಯಕ್ಷ, ಡಿಸಿಎಂ, ಎರಡು ಖಾತೆ ಕೂಡ ನಿರ್ವಹಿಸಿದ್ದೇನೆ ಎಂದು ತಿಳಿಸಿದರು.

ಮುಂದುವರಿದು ಮಾತನಾಡಿದ ಅವರು, 100 ಕಾಂಗ್ರೆಸ್ ಕಚೇರಿಗಳ ಶಂಕುಸ್ಥಾಪನೆ ಬಳಿಕ ನಾನು ಕೆಪಿಸಿಸಿ ಅಧ್ಯಕ್ಷ ಸ್ಥಾನದಿಂದ ಮುಕ್ತನಾಗುತ್ತೇನೆ. ಬೇರೆಯವರು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಜವಾಬ್ದಾರಿ ವಹಿಸಿಕೊಳ್ಳಲಿ ಎಂದು ಹೇಳಿದರು.

ಕಾಂಗ್ರೆಸ್ ನಿಯಮದ ಪ್ರಕಾರ ಒಬ್ಬರಿಗೆ ಒಂದು ಹುದ್ದೆ ಮಾತ್ರ ಸಿಗಬೇಕು. ಸದ್ಯ ಡಿ.ಕೆ.ಶಿವಕುಮಾರ್ ಡಿಸಿಎಂ ಜೊತೆಗೆ ಕಾಂಗ್ರೆಸ್ ಅಧ್ಯಕ್ಷರಾಗಿದ್ದಾರೆ. ಈ ಹಿಂದೆಯೇ ಪಕ್ಷದ ಒಳಗಡೆಯೇ ಅಧ್ಯಕ್ಷ ಸ್ಥಾನ ಮತ್ತು ಡಿಸಿಎಂ ಎರಡನ್ನೂ ನಿಭಾಯಿಸುತ್ತಿರುವುದಕ್ಕೆ ಅಪಸ್ವರ ಎದ್ದಿತ್ತು. ಈಗ ಡಿಕೆಶಿ ಅವರೇ ಕೆಪಿಸಿಸಿ ಅಧ್ಯಕ್ಷ ಸ್ಥಾನದಿಂದ ಮುಕ್ತನಾಗು ತ್ತೇನೆ, ಕಾಯಿರಿ ಎಂದು ಹೇಳುವ ಮೂಲಕ ಪಕ್ಷದಲ್ಲಿ ಸಂಚಲನ ಮೂಡಿಸಿದ್ದಾರೆ. ಡಿಕೆಶಿ ಅವರ ಈ ಹೇಳಿಕೆಯು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಮತ್ತೊಂದೆಡೆ ಡಿ.ಕೆ.ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷರಾಗಿ 5 ವರ್ಷ ಪೂರೈಸಿರುವ ಸಂಭ್ರಮಕ್ಕೆ ಮಧ್ಯ ದಾವಣಗೆರೆ ಅಥವಾ ಚಿತ್ರದುರ್ಗದಲ್ಲಿ ಬೃಹತ್ ಸಮಾವೇಶಕ್ಕೆ ಪ್ಲ್ಯಾನ್ ಮಾಡಲಾಗಿದೆ. ಡಿಕೆಶಿ ಅಧ್ಯಕ್ಷ ಪಟ್ಟದಿಂದ ಇಳಿಯುವ ಮೊದಲು ಶಕ್ತಿ ಪ್ರದರ್ಶನ ಮಾಡಲಿದ್ದಾರೆ ಎನ್ನಲಾಗುತ್ತಿದೆ.

ಏಪ್ರಿಲ್ ಅಥವಾ ಮೇನಲ್ಲಿ ಶಕ್ತಿ ಪ್ರದರ್ಶನಕ್ಕೆ ಡಿ.ಕೆ.ಶಿವಕುಮಾರ್ ಆಪ್ತರು ಮುಂದಾ ಗಿದ್ದಾರೆ. ಆದರೆ ಬೆಂಬಲಿಗರು, ಆಪ್ತರ ಪ್ಲ್ಯಾನ್‌ಗೆ ಇನ್ನೂ ಡಿಕೆಶಿಯಿಂದ ಗ್ರೀನ್ ಸಿಗ್ನಲ್ ಸಿಕ್ಕಿಲ್ಲ ಎನ್ನಲಾಗಿದೆ. ಎಐಸಿಸಿಯಿಂದ ಅನುಮತಿ ಪಡೆದು ದೊಡ್ಡ ಸಮಾವೇಶ ನಡೆಸುವ ಪ್ರಸ್ತಾಪವಿದೆ. ಪವರ್ ಶೇರ್‌ಗೂ ಮುನ್ನ ಶಕ್ತಿಪ್ರದರ್ಶನಕ್ಕೆ ಎಐಸಿಸಿ ಅವಕಾಶ ಕೊಡುತ್ತಾ ಎಂಬುದನ್ನು ಕಾದುನೋಡಬೇಕಿದೆ.

ಹೋಳಿ ಊಟ ಸೇವಿಸಿ ಖಾಸಗಿ ವಸತಿ ಶಾಲೆ ವಿದ್ಯಾರ್ಥಿ ಸಾವು

ಇಬ್ಬರ ಸ್ಥಿತಿ ಚಿಂತಾಜನಕ, 27 ಮಂದಿ ಅಸ್ವಸ್ಥ, ಮೂವರ ಬಂಧನ

- ಆಸ್ಪತ್ರೆಗೆ ಸಚಿವ ಚಲುವರಾಯಸ್ವಾಮಿ, ಶಾಸಕ ನರೇಂದ್ರಸ್ವಾಮಿ ಸೇರಿ ಅಧಿಕಾರಿಗಳ ಭೇಟಿ
- ತನಿಖೆಗೆ ಡಿಸಿ ಡಾ.ಕುಮಾರ ಆದೇಶ, ಮಂಡ್ಯ, ಮೈಸೂರಿನ ವಿವಿಧ ಆಸ್ಪತ್ರೆಯಲ್ಲಿ ಚಿಕಿತ್ಸೆ
- ವಸತಿ ಶಾಲಾ ಆಡಳಿತ ಮಂಡಳಿ ವಿರುದ್ಧ ಕ್ರಮಕ್ಕೆ ಸಚಿವ ಚಲುವರಾಯಸ್ವಾಮಿ ಸೂಚನೆ



ಮಳವಳ್ಳಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಅಸ್ವಸ್ಥರ ಆರೋಗ್ಯ ವಿಚಾರಿಸಿದ ಕ್ಷೇತ್ರದ ಶಾಸಕ ಪಿ.ಎಂ.ನರೇಂದ್ರಸ್ವಾಮಿ

ಮಂಡ್ಯ, ಮಾ.16– ಹೋಳಿ ಹಬ್ಬದ ವೇಳೆ ಮಹಾ ದುರಂತ ಸಂಭವಿಸಿದ್ದು, ಉದ್ಯಮಿಯೊಬ್ಬರು ನೀಡಿದ ಹೋಳಿ ಊಟ ಸೇವಿಸಿ ಖಾಸಗಿ ವಸತಿ ಶಾಲೆಯ ಓರ್ವ ವಿದ್ಯಾರ್ಥಿ ಸಾವನ್ನಪ್ಪಿ, ಇಬ್ಬರು ಗಂಭೀರ ಸ್ಥಿತಿಯಲ್ಲಿದ್ದರೆ, 27 ಮಂದಿ ಅಸ್ವಸ್ಥಗೊಂಡಿದ್ದಾರೆ.

ಮಳವಳ್ಳಿ ತಾಲೂಕಿನ ಟಿ.ಕಾಗೇಪುರ ಗ್ರಾಮದಲ್ಲಿ ಸಂಭವಿಸಿದ್ದ ದುರ್ಘಟನೆಯಲ್ಲಿ ಟಿ.ಕಾಗೇಪುರದ ಗೋಕುಲ ವಿದ್ಯಾಸಂಸ್ಥೆಯ ಹಾಸ್ಟೆಲ್‌ನ 30 ವಿದ್ಯಾರ್ಥಿಗಳು ತೀವ್ರ ಅಸ್ವಸ್ಥಗೊಂಡಿದ್ದು, ಈ ಪೈಕಿ ಮೇಘಾಲಯ ಮೂಲದ ಬಾಲಕ ಕಿರ್ಶನ್ ಲ್ಯಾಂಗ್(13) ಮೃತಪಟ್ಟರೆ, ಇನ್ನಿಬ್ಬರ ಸ್ಥಿತಿ ಚಿಂತಾಜನಕವಾಗಿದ್ದು, ಮಂಡ್ಯ ಮಿಮ್ಸ್‌ನ ಐಸಿಯು ಘಟಕದಲ್ಲಿ ಚಿಕಿತ್ಸೆ ಕೊಡಲಾಗುತ್ತಿದೆ.

ಘಟನೆ ವಿವರ: ಕಳೆದ ಶುಕ್ರವಾರ ಹೋಳಿಹಬ್ಬದ ಹಿನ್ನೆಲೆಯಲ್ಲಿ ಮಳವಳ್ಳಿ ಪಟ್ಟಣದ ಹೊರವಲಯದ ಬುಗತಹಳ್ಳಿ ಸಮೀಪವಿರುವ ಮದನ್ ಮೋಹನ್ ಸಮುದಾಯ ಭವನದಲ್ಲಿ ಮಾರ್ವಾಡಿ ಸಮುದಾಯವರು ಹೋಳಿ ಹಬ್ಬ ಆಚರಣೆ ಆಯೋಜಿಸಿದ್ದರು. ಉದ್ಯಮಿ ಪುಷ್ಪೇಂದ್ರಕುಮಾರ್ ನೇತೃತ್ವದಲ್ಲಿ ನಡೆದ ಹೋಳಿ ಸಂಭ್ರಮ ಮುಗಿದ ಬಳಿಕ ಊಟ ಸೇವಿಸಲು ಮಳವಳ್ಳಿ ಪಟ್ಟಣದ ಲಕ್ಷ್ಮಿನರಸಿಂಹಸ್ವಾಮಿ ಹೋಟೆಲ್‌ನ ಸಿದ್ದರಾಜು ಅವರಿಂದ ಬಾತ್ ಮತ್ತು ಚಟ್ನಿ ಸಿದ್ಧಪಡಿಸಿ ಪುಷ್ಪೇಂದ್ರ ಕುಮಾರ್‌ಗೆ ಕಳುಹಿಸಿಕೊಟ್ಟಿದ್ದರು.

ಬಳಿಕ ಎಲ್ಲರೂ ಬಾತ್ ಸೇವಿಸಿ, ಉಳಿಕೆ ಊಟವನ್ನು ಸಮುದಾಯದ ಮ್ಯಾನೇಜರ್ ಕೃಷ್ಣ ಅವರು ಟಿ.ಕಾಗೇಪುರದ ಗೋಕುಲ ವಿದ್ಯಾಸಂಸ್ಥೆಗೆ ಅಲ್ಲಿನ ಮುಖ್ಯಸ್ಥ ಲಂಕೇಶ್ ಮತ್ತು ಸಿಬ್ಬಂದಿ ಅಭಿಷೇಕ್ ಮೂಲಕ ಶುಕ್ರವಾರ ಮಧ್ಯಾಹ್ನ ಕೊಡಿಸಿದ್ದಾನೆ. ಊಟ ತಿಂದ ■ 5ನೇ ಪುಟಕ್ಕೆ

> ವಸತಿ ಶಾಲೆ ಆಡಳಿತ ಮಂಡಳಿ ವಿರುದ್ಧ ಎಫ್ಐಆರ್ ದಾಖಲು ಮಾಡಲಾಗಿದೆ. ವಸತಿ ಶಾಲೆ ನಡೆಸಲು ಯಾವುದೇ ಅನುಮತಿ ಪಡೆದಿಲ್ಲ. ಅನಧಿಕೃತವಾಗಿ ವಸತಿ ಶಾಲೆ ನಡೆಸಲಾಗುತ್ತಿತ್ತು. ಶಾಲಾ ಆಡಳಿತ ಮಂಡಳಿ ವಿರುದ್ಧ ಕ್ರಮ ತೆಗೆದುಕೊಳ್ಳಲಿದ್ದೇವೆ. ಘಟನೆಯಲ್ಲಿ ಓರ್ವ ವಿದ್ಯಾರ್ಥಿ ಸಾವನ್ನಪ್ಪಿದ್ದಾನೆ. ಹೋಳಿ ಬಣ್ಣ ಊಟದ ಜೊತೆ ಸೇರಿತ್ತು ಎಂದು ಹೇಳಲಾಗುತ್ತಿದ್ದು, ಇದರ ಬಗ್ಗೆ ಸೂಕ್ತ ತನಿಖೆಗೆ ಸೂಚನೆ ನೀಡಿದ್ದೇನೆ.
>
> – ಡಾ.ಕುಮಾರ, ಜಿಲ್ಲಾಧಿಕಾರಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ



ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ ಟಿ.ಕಾಗೇಪುರದ ಖಾಸಗಿ ವಸತಿ ಶಿಕ್ಷಣ ಸಂಸ್ಥೆಯಲ್ಲಿ ವಿಷಾಹಾರ ಸೇವಿಸಿ ವಿದ್ಯಾರ್ಥಿಯೊಬ್ಬ ಮೃತಪಟ್ಟು ಹಲವು ಮಕ್ಕಳು ತೀವ್ರ ಅಸ್ವಸ್ಥಗೊಂಡ ವಿಚಾರ ತಿಳಿದು ನೋವಾಯಿತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಎಕ್ಸ್‌ನಲ್ಲಿ ಈ ಕುರಿತು ಪೋಸ್ಟ್ ಮಾಡಿರುವ ಅವರು, ಘಟನೆ ನನ್ನ ಗಮನಕ್ಕೆ ಬಂದ ಕೂಡಲೇ ಮಂಡ್ಯ ಜಿಲ್ಲಾಧಿಕಾರಿಗಳ ಜೊತೆ ಮಾತನಾಡಿ, ಮಕ್ಕಳಿಗೆ ಸೂಕ್ತ ಚಿಕಿತ್ಸೆಯ ವ್ಯವಸ್ಥೆ ಮಾಡುವಂತೆ ಹಾಗೂ ಘಟನೆಗೆ ಕಾರಣರಾದವರ ಮೇಲೆಯೂ ಕಠಿಣ ಕ್ರಮ ಜರುಗಿಸುವಂತೆ ಸೂಚನೆ ನೀಡಿದ್ದೆ. ಈ ಸಂಬಂಧ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿ ತನಿಖೆ ಮುಂದುವರೆಸಿದ್ದಾರೆ.

ಈ ದುರ್ಘಟನೆಯಲ್ಲಿ ಮಡಿದ ಬಾಲಕನ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಲಾಗುವುದು. ಬೇರೆಡೆ ತಯಾರಿಸಿದ ಆಹಾರವನ್ನು ಸೇವಿಸುವ ಮುನ್ನ ಅದರಲ್ಲಿಯೂ ಚಿಕ್ಕ ಮಕ್ಕಳಿಗೆ ನೀಡುವ ಮುನ್ನ ಹೆಚ್ಚು ಜಾಗ್ರತೆ ವಹಿಸಿ. ಅಜಾಗರೂಕತೆಗೆ ಅಮೂಲ್ಯ ಜೀವಗಳು ಬಲಿಯಾಗದಿರಲಿ ಎಂದಿದ್ದಾರೆ.

ನಮ್ಮ ಸರ್ಕಾರದಲ್ಲಿ ಸಚಿವರಿಗೆ, ಕಾರ್ಯದರ್ಶಿಗೆ ತಾಳ ಮೇಳ ಇಲ್ಲ

ಕಂದಾಯ ಇಲಾಖೆಯ ವಿರುದ್ಧವೇ ಗುಡುಗಿದ ಕೈ ಶಾಸಕ ರಾಜುಕಾಗೆ



ಬೆಳಗಾವಿ, ಮಾ.16– ಕಂದಾಯ ಇಲಾಖೆಯ ವಿರುದ್ಧವೇ ಕಾಂಗ್ರೆಸ್ ಶಾಸಕ ರಾಜುಕಾಗೆ ಆಕ್ರೋಶ ಹೊರಹಾಕಿದ್ದಾರೆ.

ಕಾಗವಾಡ ಪಟ್ಟಣದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಪ್ರಜಾಸೌಧ ಕಟ್ಟಡ ನಿರ್ಮಾಣಕ್ಕೆ ಅನುಮೋದನೆ ನೀಡಿ ಎಂದು ಕೇಳಿದಾಗ, ಕಂದಾಯ ಇಲಾಖೆ ಕಾರ್ಯದರ್ಶಿ ರಾಜೇಂದ್ರ ಕಠಾರಿಯಾ ಅವರು, ಅಲ್ಲಿ ಕೆರೆ ಇತ್ತು. ನಿಮಗೆ ಬುದ್ಧಿ ಇದೆಯೋ ಇಲ್ಲವೋ ಹೋಗಿ ಅಂತ ಹೇಳಿ ನನಗೆ ಅಪಮಾನ ಮಾಡಿದ್ದಾರೆ. ನನಗೆ ಅಪಮಾನ ಮಾಡಿದ ಕಾರ್ಯದರ್ಶಿ ವಿರುದ್ಧ ನಾಳೆ ಅಧಿವೇಶನದಲ್ಲಿ ಹಕ್ಕುಚ್ಯುತಿ ಮಂಡಿಸುತ್ತೇನೆ ■ 5ನೇ ಪುಟಕ್ಕೆ

ಕೊಡಗಿನಲ್ಲಿ ಗುಡುಗು ಸಹಿತ ಆಲಿಕಲ್ಲು ಮಳೆ

ನಾಪೋಕ್ಲು ವ್ಯಾಪ್ತಿಯಲ್ಲಿ ತಂಪನೆರೆದ ವರುಣರಾಯ



ಮಡಿಕೇರಿ,ಮಾ.16– ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನ ಅಧಿಕವಾಗುತ್ತಿರುವಾಗಲೇ ನಾಪೋಕ್ಲು ವ್ಯಾಪ್ತಿಯ ಎಮ್ಮೆಮಾಡು ಸೇರಿದಂತೆ ಹಲವು ಗ್ರಾಮಗಳಲ್ಲಿ ಭಾನುವಾರ ಸಂಜೆ ಗುಡುಗು ಸಹಿತ ಆಲಿಕಲ್ಲು ಮಳೆ ಸುರಿದು ಭೂವಿಗೆ ತಂಪೆರೆದಿದೆ.

ನಾಪೋಕ್ಲು ವ್ಯಾಪ್ತಿಯ ಎಮ್ಮೆಮಾಡು, ಪಡಿಯಾಣಿ, ನೆಲಜಿ, ಬಲ್ಲಮಾವಟಿ, ಚೇರಂಬಾಣೆ, ಬೇಂಗೂರು ಗ್ರಾಮ ವ್ಯಾಪ್ತಿಯಲ್ಲಿ ಭಾನುವಾರ ಸಂಜೆ ಒಂದು ಇಂಚಿಗೂ ಅಧಿಕ ಮಳೆ ಸುರಿದು ಕಾದ ಭುವಿಗೆ ವರುಣ ತಂಪೆರೆದಿದ್ದಾನೆ. ಎಮ್ಮೆಮಾಡು ಗ್ರಾಮದಲ್ಲಿ ಭಾನುವಾರ ಸಂಜೆ ಆಲಿಕಲ್ಲು ಸಹಿತ ಉತ್ತಮ ಮಳೆಯಾಗಿದೆ. ವ್ಯಾಪ್ತಿಯ ಹಲವು ಕಡೆ ಕಾಫಿ ಕೊಯ್ಲು ಕಾರ್ಯ ಪೂರ್ಣಗೊಂಡು ಬೆಳೆಗಾರರು ಹೂ ಮಳೆಗಾಗಿ ಹಾತೊರೆಯುತ್ತಿರುವಾಗಲೇ ಭಾನುವಾರ ವರುಣನ ಆಗಮನದಿಂದ ಬೆಳೆಗಾರರು ಹರ್ಷಗೊಂಡಿದ್ದಾರೆ.

ಕೆರೆ ಸಹಿತ ಬೋರ್‌ವೆಲ್ ಮೂಲಕ ಕಾಫಿ ತೋಟಗಳಿಗೆ ನೀರು ಹಾಯಿಸಿದ ಬೆಳೆಗಾರರು ಕೂಡ ವರುಣನ ಆಗಮನದಿಂದ ತೃಪ್ತರಾಗಿದ್ದಾರೆ. ನಾಪೋಕ್ಲು ಪಟ್ಟಣ ಸೇರಿದಂತೆ ವ್ಯಾಪ್ತಿಯ ಇನ್ನು ಕೆಲವು ಗ್ರಾಮಗಳಲ್ಲಿ ಮೋಡ ಕವಿದ ವಾತಾವರಣ ಕಂಡು ಬಂದಿತ್ತಾದರೂ ಮಳೆ ■ 5ನೇ ಪುಟಕ್ಕೆ

ನಟಿ ರನ್ಯಾ ಕೇಸ್‌ನಲ್ಲಿ ನಂಟಿರುವ ಸಚಿವರು ಹೆಸರು ಅಧಿವೇಶನದಲ್ಲಿ ಬಹಿರಂಗಪಡಿಸುತ್ತೇನೆ

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಬಾಂಬ್



ವಿಜಯಪುರ, ಮಾ.16– ರನ್ಯಾ ರಾವ್ ಚಿನ್ನ ಕಳ್ಳಸಾಗಣೆ ಪ್ರಕರಣದ ನಂಟು ಹೊಂದಿರುವ ಸಚಿವರು ಯಾರು ಎಂಬುದು ಗೊತ್ತಿದೆ. ಅಧಿವೇಶನದಲ್ಲಿ ಸಚಿವರ ಹೆಸರು ಬಹಿರಂಗಪಡಿಸುತ್ತೇನೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೊಸ ಬಾಂಬ್ ಸಿಡಿಸಿದ್ದಾರೆ.

ವಿಜಯಪುರದಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರನ್ಯಾ ಜೊತೆಗೆ ಸಂಬಂಧ ಹೊಂದಿದವರು, ಆಕೆಗೆ ಪ್ರೋಟೋಕಾಲ್ (ಶಿಷ್ಟಾಚಾರ) ಕೊಟ್ಟವರ ಮಾಹಿತಿ ಸಂಗ್ರಹ ಮಾಡಿದ್ದೇವೆ. ಗೋಲ್ಡ್ ಎಲ್ಲಿಂದ ತಂದರು, ಅದನ್ನು ಎಲ್ಲಿಟ್ಟುಕೊಂಡು ತಂದರು, ಎಲ್ಲವೂ ಗೊತ್ತಿದೆ ಎಂದು ಶಾಸಕ ಯತ್ನಾಳ್ ಹೇಳಿದರು.

ರನ್ಯಾ ಪ್ರಕರಣದಲ್ಲಿ ಕೇಂದ್ರದವರ ತಪ್ಪಿದೆ ಎಂಬ ಸಚಿವ ಲಾಡ್ ಆರೋಪ ಕುರಿತು ಪ್ರತಿಕ್ರಿಯಿಸಿದ ಯತ್ನಾಳ್, ಯಾರು ತಪ್ಪು ಮಾಡಿದರೂ ಅದು ತಪ್ಪೆ. ನಾವು ಬಿಜೆಪಿಯವರು ಯಾರನ್ನೂ ಸಮರ್ಥನೆ ಮಾಡಿಕೊಳ್ಳುತ್ತಿಲ್ಲ. ಕೇಂದ್ರದ ಅಧಿಕಾರಿಗಳ ತಪ್ಪಿದ್ದರೂ ತಪ್ಪೆ. ■ 5ನೇ ಪುಟಕ್ಕೆ



ಪ್ರವಾಸೋದ್ಯಮ ಇಲಾಖೆಯ 18 ಕೋಟಿ ರೂ. ಯೋಜನೆ ತಿರಸ್ಕರಿಸಿದ ಮೈಸೂರು ಮೃಗಾಲಯ

- ಕಾರಂಜಿಕೆರೆ ಆವರಣದಲ್ಲಿ ಜಿಪ್‌ಲೈನ್, ಫ್ಲೈಓವರ್ ಫುಟ್‌ಪಾತ್ ನಿರ್ಮಾಣ, ಮೃಗಾಲಯದಿಂದ ಕಾರಂಜಿಕೆರೆಗೆ ಸಂಪರ್ಕ ಮಾರ್ಗದ ಯೋಜನೆಯ ಪ್ರಸ್ತಾವನೆಗೆ ನಕಾರ
- ಮೃಗಾಲಯದ ಆವರಣದಲ್ಲಿ ನನೆಗುದಿಗೆ ಬಿದ್ದಿರುವ ಅಕ್ವೇರಿಯಂಗೆ ಹಣ ಬಳಸುವಂತೆ ಮನವಿ ಮಾಡಿದ ಮೃಗಾಲಯ

● ಎಂ.ಟಿ.ಯೋಗೇಶ್ ಕುಮಾರ್


ಮೈಸೂರು, ಮಾ.16– ದೇಶದ ಮುಂಚೂಣಿ ಮೃಗಾಲಯಗಳಲ್ಲಿ ಒಂದಾದ ಮೈಸೂರಿನ ಚಾಮರಾಜೇಂದ್ರ ಮೃಗಾಲಯ ಹಾಗೂ ಕಾರಂಜಿಕೆರೆ ಆವರಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಾಗಿ ಪ್ರವಾಸೋದ್ಯಮ ಇಲಾಖೆಯ 18 ಕೋಟಿ ರೂ. ಯೋಜನೆಯನ್ನು ಮೃಗಾಲಯ ಪ್ರಾಧಿಕಾರ ತಿರಸ್ಕರಿಸಿದ್ದು, 15 ವರ್ಷದಿಂದ ನನೆಗುದಿಗೆ ಬಿದ್ದಿರುವ ಅಕ್ವೇರಿಯಂ ಕಾಮಗಾರಿ ಪೂರ್ಣಗೊಳಿಸಲು ಹಣ ವಿನಿಯೋಗಿಸುವಂತೆ ಮನವಿ ಮಾಡಿದೆ.

ಅತ್ಯುತ್ತಮ ಮೃಗಾಲಯಗಳಲ್ಲಿ ಮುಂಚೂಣಿ ಸ್ಥಾನದಲ್ಲಿರುವ ಮೈಸೂರಿನ ಚಾಮರಾಜೇಂದ್ರ ಮೃಗಾಲಯ ಹಾಗೂ ಮೃಗಾಲಯದ ವ್ಯಾಪ್ತಿಗೆ ಒಳಪಡುವ ಕಾರಂಜಿಕೆರೆ ಆವರಣದಲ್ಲಿ ಪ್ರವಾಸೋದ್ಯಮ ಇಲಾಖೆ ವಿವಿಧ ಅಭಿವೃದ್ಧಿ ಕಾಮಗಾರಿ ನಡೆಸಿ, ಪ್ರವಾಸಿಗರನ್ನು ಸೆಳೆಯುವ ನಿಟ್ಟಿನಲ್ಲಿ 18 ಕೋಟಿ ರೂ.ಗಳ ಯೋಜನೆ ರೂಪಿಸಿತ್ತು. ಈ ಯೋಜನೆ ಅನುಷ್ಠಾನಕ್ಕಾಗಿ ಮೈಸೂರು ಮೃಗಾಲಯ ಹಾಗೂ ಮೃಗಾಲಯ ಪ್ರಾಧಿಕಾರದ ಸಮ್ಮತಿಗಾಗಿ ಪ್ರಸ್ತಾವನೆ ಕಳುಹಿಸಿತ್ತು. ಆದರೆ, ಪ್ರವಾಸೋದ್ಯಮ ಇಲಾಖೆ ನಡೆಸಲು ಉದ್ದೇಶಿಸಿರುವ ವಿವಿಧ ಅಭಿವೃದ್ಧಿ ಯೋಜನೆಗಳು ಮೃಗಾಲಯ ಹಾಗೂ ಕಾರಂಜಿಕೆರೆಯ ನೈಜ ಪರಿಸರಕ್ಕೆ ಧಕ್ಕೆಯುಂಟಾಗುವ ಹಿನ್ನೆಲೆಯಲ್ಲಿ 18 ಕೋಟಿ ರೂ. ಯೋಜನೆಯನ್ನು ತಿರಸ್ಕರಿಸಿ, ಅದರ ಬದಲಾಗಿ ಮೃಗಾಲಯದ ಆವರಣದಲ್ಲಿರುವ ಬೃಹತ್ ಅಕ್ವೇರಿಯಂ ಕಟ್ಟಡವನ್ನು ಪೂರ್ಣಗೊಳಿಸುವಂತೆ ಮೃಗಾಲಯದ ಕೋರಿದೆ.

ಏನದು ಯೋಜನೆ: ಪ್ರವಾಸೋದ್ಯಮ ಇಲಾಖೆ 18 ಕೋಟಿ ರೂ. ವೆಚ್ಚದಲ್ಲಿ ಮೈಸೂರು ಮೃಗಾಲಯ ಹಾಗೂ ಕಾರಂಜಿಕೆರೆ ಆವರಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿ ನಡೆಸಲು ನೀಲನಕ್ಷೆ ರೂಪಿಸಿದೆ. ಅದರಲ್ಲಿ ಮೃಗಾಲಯದಿಂದ ಕಾರಂಜಿಕೆರೆಗೆ ಆಂತರಿಕ ಸಂಪರ್ಕ ಕಲ್ಪಿಸುವ ಮಾರ್ಗ, ಫ್ಲೈಓವರ್ ಫುಟ್‌ಪಾತ್, ಜಿಪ್‌ಲೈನ್ ಸೇರಿದಂತೆ ವಿವಿಧ ಕಾಮಗಾರಿ ಒಳಗೊಂಡಿದೆ. ಈ ಕಾಮಗಾರಿಗಳು ನಡೆದರೆ, ಮೃಗಾಲಯ ಹಾಗೂ ಕಾರಂಜಿಕೆರೆಯ ನೈಜ ಪರಿಸರಕ್ಕೆ ಧಕ್ಕೆಯಾಗುತ್ತದೆ. ಈ ಹಿನ್ನೆಲೆಯಲ್ಲಿ ಮೃಗಾಲಯದ ವಾತಾವರಣ ಕಾಪಾಡಿಕೊಳ್ಳುವುದರೊಂದಿಗೆ ಕಾರಂಜಿಕೆರೆಯ ಜೀವವೈವಿಧ್ಯತೆಗೆ ಹಾನಿಯಾಗದಂತೆ ಕಟ್ಟೆಚ್ಚರ ವಹಿಸುವ ನಿಟ್ಟಿನಲ್ಲಿ 18 ಕೋಟಿ ರೂ. ಯೋಜನೆಯನ್ನು ಮೃಗಾಲಯ ತಿರಸ್ಕರಿಸಿದೆ.

ಅಕ್ವೇರಿಯಂ ಪೂರ್ಣಗೊಳಿಸಿ: ಮೈಸೂರು ಮೃಗಾಲಯದ ಆವರಣದಲ್ಲಿ ಕಾರಂಜಿಕೆರೆ ಭಾಗದಲ್ಲಿ 2010–11ನೇ ಸಾಲಿನಲ್ಲಿ ಅಂದಾಜು 4.26 ಕೋಟಿ ರೂ. ವೆಚ್ಚದಲ್ಲಿ ಬೃಹತ್ ಅಕ್ವೇರಿಯಂ ನಿರ್ಮಿಸಲು ಯೋಜನೆ ರೂಪಿಸಲಾಗಿತ್ತು. 14 ವರ್ಷದಿಂದ ವಿವಿಧ ಹಂತದಲ್ಲಿ ಅಕ್ವೇರಿಯಂ ಕಾಮಗಾರಿ ಮುಂದುವರೆಸುವುದಕ್ಕೆ ಸಂಬಂಧಿಸಿದಂತೆ ವಿವಿಧ ಚಟುವಟಿಕೆ ನಡೆದರೂ, ಇದುವರೆಗೂ ಅಕ್ವೇರಿಯಂ ಕಾಮಗಾರಿ ಪೂರ್ಣಗೊಳ್ಳದೆ ಕಟ್ಟಡ ನನೆಗುದಿಗೆ ಬಿದ್ದಿದೆ. ಕೋಟ್ಯಾಂತರ ರೂ. ವೆಚ್ಚದಲ್ಲಿ ನಿರ್ಮಿಸಿರುವ ಅಕ್ವೇರಿಯಂ ಕಟ್ಟಡ ಪ್ರವಾಸಿಗರು ಹಾಗೂ ಮೃಗಾಲಯದ ಬಳಕೆಗೂ ಲಭ್ಯವಾಗದೇ ಪಾಳು ಬಿದ್ದಿರುವುದರಿಂದ ಮಳೆ, ಬಿಸಿಲಿಗೆ ಕಟ್ಟಡ ಶಿಥಿಲಗೊಳ್ಳುವ ಆತಂಕ ನಿರ್ಮಾಣವಾಗಿದೆ. ಈ ಹಿನ್ನೆಲೆಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗೆ ಬಳಸಲು ಉದ್ದೇಶಿಸಿರುವ ಹಣವನ್ನು ಅಕ್ವೇರಿಯಂ ಕಟ್ಟಡ ಕಾಮಗಾರಿ ಪೂರ್ಣಗೊಳಿಸಲು ಬಳಸುವುದು ಸೂಕ್ತ ಎಂದು ಸಾರ್ವಜನಿಕರು ಮಾತ್ರವಲ್ಲದೆ, ಕರ್ನಾಟಕ ಮೃಗಾಲಯ ಪ್ರಾಧಿಕಾರ ಅಭಿಪ್ರಾಯಪಟ್ಟಿದೆ.

ನಿರಂತರ ವೈಫಲ್ಯ: ಅರ್ಧಂಬರ್ಧ ತಲೆ ಎತ್ತಿ ನಿಂತಿದ್ದ ಅಕ್ವೇರಿಯಂ ಕಟ್ಟಡದ ಕಾಮಗಾರಿ ಪೂರ್ಣಗೊಳಿಸುವುದಕ್ಕೆ ವಿವಿಧ ಪ್ರಯತ್ನ ನಡೆದರೂ ಸಫಲವಾಗದೆ ಕಟ್ಟಡ ಕಾಮಗಾರಿ ಅಪೂರ್ಣ ಸ್ಥಿತಿಯಲ್ಲಿಯೇ ಇದೆ. 2018ರಲ್ಲಿ ಮೈಸೂರು ನಗರ ಪಾಲಿಕೆ ಅಕ್ವೇರಿಯಂ ಕಟ್ಟಡವನ್ನು ಮೃಗಾಲಯಕ್ಕೆ ಹಸ್ತಾಂತರಿಸಿತು. ■ 5ನೇ ಪುಟಕ್ಕೆ





ಕಾರಂಜಿಕೆರೆಯ ವಿಹಂಗಮ ನೋಟ. ಬಲಚಿತ್ರದಲ್ಲಿ ಮೃಗಾಲಯದ ಆವರಣದ ಅಕ್ವೇರಿಯಂ ಕಟ್ಟಡದಿಂದ ಕಾರಂಜಿಕೆರೆಗೆ ಸಂಪರ್ಕ ಕಲ್ಪಿಸುವ ಮಾರ್ಗ. /ಚಿತ್ರ: ಎಂ.ಎಸ್.ಲಕ್ಷ್ಮೀನಾರಾಯಣ ಯಾದವ್

ಅಭಿವೃದ್ಧಿ ಕಾಮಗಾರಿಯಿಂದ ಮೃಗಾಲಯದ ನೈಜ ಪರಿಸರ ಹಾಳಾಗಬಾರದು

ಪ್ರವಾಸೋದ್ಯಮ ಇಲಾಖೆ 18 ಕೋಟಿ ರೂ. ವೆಚ್ಚದ ಯೋಜನೆಯಲ್ಲಿ ಜಿಪ್‌ಲೈನ್, ಫ್ಲೈಓವರ್ ಫುಟ್‌ಪಾತ್, ಮೃಗಾಲಯದಿಂದ ಕಾರಂಜಿಕೆರೆಗೆ ಆಂತರಿಕ ಸಂಪರ್ಕ ಮಾರ್ಗ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿ ನಡೆಸಲು ನಿರ್ಧರಿಸಿದೆ. ಇದರಿಂದ ಮೃಗಾಲಯ ಹಾಗೂ ಕಾರಂಜಿಕೆರೆಯ ನೈಜ ಪರಿಸರಕ್ಕೆ ಧಕ್ಕೆಯಾಗುತ್ತದೆ. ಮೃಗಾಲಯದಲ್ಲಿ ಜಿಪ್‌ಲೈನ್‌ನಂತಹ ಚಟುವಟಿಕೆ ಅಗತ್ಯವಿಲ್ಲ. ಮೃಗಾಲಯದ ಪ್ರಾಧಿಕಾರದ ನಿಯಮವೂ ಇಂತಹ ಅಭಿವೃದ್ಧಿ ಕಾಮಗಾರಿಗೆ ಒಪ್ಪುವುದಿಲ್ಲ. ಆ ಕಾರಣದಿಂದ ಪ್ರವಾಸೋದ್ಯಮ ಇಲಾಖೆಯ ಪ್ರಸ್ತಾವನೆಯನ್ನು ತಿರಸ್ಕರಿಸಲಾಗಿದೆ. ಅದರ ಬದಲಾಗಿ, ಅಕ್ವೇರಿಯಂ ಕಟ್ಟಡದ ಕಾಮಗಾರಿ ಪೂರ್ಣಗೊಳಿಸಲು ಪ್ರವಾಸೋದ್ಯಮ ಇಲಾಖೆ ಅನುದಾನ ನೀಡುವಂತೆ ಮನವಿ ಸಲ್ಲಿಸಲಾಗುವುದು. ಅಕ್ವೇರಿಯಂ ಕಟ್ಟಡಕ್ಕೆ 30–50 ಕೋಟಿ ವೆಚ್ಚ ಮಾಡಿದರೂ ಮೃಗಾಲಯ ವಿರೋಧಿಸುವುದಿಲ್ಲ. ಅಕ್ವೇರಿಯಂ ಪೂರ್ಣಗೊಂಡ ನಂತರ ಬರುವ ಆದಾಯದಲ್ಲಿ ಮೃಗಾಲಯದ ಪಾಲು ನೀಡಿದರೆ ಸಾಕು ಎಂದು ಹೇಳಿಕೊಳ್ಳುತ್ತೇವೆ.


– ರಂಗಸ್ವಾಮಿ, ಕಾರ್ಯನಿರ್ವಾಹಕ ನಿರ್ದೇಶಕ, ಮೈಸೂರು ಮೃಗಾಲಯ

ಮೈಸೂರು ಮಿತ್ರ

ಸೋಮವಾರ 17 ಮಾರ್ಚ್ 2025

ಹಾಸನ ಮಿತ್ರ

ಬೇಲೂರಲ್ಲಿ ಪುಂಡಾನೆ ಸೆರೆ; ಮೊದಲನೇ ದಿನವೇ ಫಲ ನೀಡಿದ ಕಾರ್ಯಾಚರಣೆ



ಹಾಸನ,ಮಾ.16–ಹಾಸನ ಜಿಲ್ಲೆಯಲ್ಲಿ ಮೊದಲ ದಿನದ ಕಾಡಾನೆ ಸೆರೆ ಕಾರ್ಯಾಚರಣೆ ಮಾಡಲಾಗಿದ್ದು, ಸತತ ನಾಲ್ಕು ಗಂಟೆಗಳ ಕಾರ್ಯಾಚರಣೆ ನಂತರ ಒಂಟಿಸಲಗವನ್ನು ಬೇಲೂರು ತಾಲೂಕಿನ ಬಿಕ್ಕೋಡು ಬಳಿಯ ಎಸ್ಟೇಟ್‌ನಲ್ಲಿ ಸೆರೆ ಹಿಡಿಯಲಾಗಿದೆ.

ಜಿಲ್ಲೆಯ ಮಲೆನಾಡು ಭಾಗದಲ್ಲಿ ಕಾಡಾನೆಗಳ ದಾಳಿಯ ಪ್ರಮಾಣ ಹೆಚ್ಚಾದ ಹಿನ್ನೆಲೆಯಲ್ಲಿ ಸರ್ಕಾರ ಮೂರು ಪುಂಡಾನೆಗಳ ಸೆರೆಗೆ ಅನುಮತಿ ನೀಡಿದ್ದು, ಇಂದಿನಿಂದ ಅಧಿಕೃತ ಕಾರ್ಯಾಚರಣೆ ಪ್ರಾರಂಭವಾಗಿತ್ತು. ಅರವಳಿಕೆ ಮದ್ದು ನೀಡಿ ಅರಣ್ಯ ಸಿಬ್ಬಂದಿ ಕಾಡಾನೆ ಸೆರೆ ಹಿಡಿದಿದ್ದಾರೆ. ಕ್ಯಾಪ್ಟನ್ ಪ್ರಶಾಂತ್ ನೇತೃತ್ವದಲ್ಲಿ ನಡೆದ ಕಾಡಾನೆ ಸೆರೆ ಯಶಸ್ವಿ ಆಗಿದೆ.

ಬೇಲೂರು ತಾಲೂಕಿನ ಬಿಟ್ಟೋಡು ಕ್ಯಾಂಪಿಗೆ ಮಾ.15ರಂದು ಮತ್ತಿಗೋಡು ಮತ್ತು ದುಬಾರೆ ಆನೆ ಶಿಬಿರಗಳಿಂದ ಏಳು ಸಾಕಾನೆಗಳು ಆಗಮಿಸಿದ್ದವು. ಈ ಕಾರ್ಯಾಚರಣೆಯಲ್ಲಿ ಅರಣ್ಯ ಇಲಾಖೆಯ ಭೀಮ, ಕಂಜನ್, ಪ್ರಶಾಂತ, ಹರ್ಷ, ಧನಂಜಯ, ಮಹೇಂದ್ರ ಮತ್ತು ಏಕಲವ್ಯ ಭಾಗವಹಿಸಿದ್ದವು. ಕಾರ್ಯಾಚರಣೆಗೂ ಮುನ್ನ, ಸ್ಥಳೀಯ ಶಾಸಕ ಎಚ್.ಕೆ.ಸುರೇಶ್, ತಹಸೀಲ್ದಾರ್ ಮಮತಾ, ಮತ್ತು ಅರಣ್ಯಾಧಿಕಾರಿಗಳ ಉಪಸ್ಥಿತಿಯಲ್ಲಿ ಪೂಜೆ ಸಲ್ಲಿಸಲಾಯಿತು.

ಅರಣ್ಯ ಇಲಾಖೆ ವಿಶೇಷ ಕಾರ್ಯ ತಂಡದ ಸಿಬ್ಬಂದಿ ಪುಂಡಾನೆಗಳನ್ನು ಗುರುತಿಸಲು ಕಾಡಿಗೆ ತೆರಳಿದ್ದು, ಸತತ 4 ಗಂಟೆಯ ನಂತರ ಕೊನೆಗೂ ಪುಂಡಾನೆಯೊಂದನ್ನು ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.

ವರ್ಷದ ಮೊದಲ ವಾರವೇ ಓರ್ವನನ್ನು ಬಲಿ ಪಡೆದಿದ್ದ ಕಾಡಾನೆ, ನಂತರ 2 ತಿಂಗಳ ಅವಧಿಯಲ್ಲಿ ಸಕಲೇಶಪುರ ಮತ್ತು ಬೇಲೂರು ಭಾಗದಲ್ಲಿ ನಾಲ್ವರು ಕಾಡಾನೆ ದಾಳಿಗೆ ಬಲಿಯಾದ ಹಿನ್ನೆಲೆಯಲ್ಲಿ ಕಾಡಾನೆ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುವಂತೆ ಸ್ಥಳೀಯರು ಪ್ರತಿಭಟನೆ ನಡೆಸಿದ್ದರು.

ಹೀಗಾಗಿ ಅರಣ್ಯ ಇಲಾಖೆ ತಾತ್ಕಾಲಿಕವಾಗಿ ಮಾನವ ಮತ್ತು ಕಾಡಾನೆ ಸಂಘರ್ಷವನ್ನು ತಡೆಯಲು ಕ್ರಮಗಳನ್ನು ಕೈಗೊಂಡಿದ್ದು, ಇಂದಿನಿಂದ ಕಾಡಾನೆಯನ್ನು ಹಿಡಿಯಲು ಸರ್ಕಾರದ ಅನುಮತಿಯೊಂದಿಗೆ ಅರಣ್ಯ ಇಲಾಖೆ ಮುಂದಾಗಿತ್ತು. ಮೊದಲ ದಿನವೇ ಅರಣ್ಯ ಇಲಾಖೆಯ ಶ್ರಮಕ್ಕೆ ಫಲ ಸಿಕ್ಕಿದ್ದು, ಪುಂಡಾನೆಯೊಂದು ಸೆರೆಯಾಗಿರುವುದು ಸ್ಥಳೀಯರ ಆತಂಕವನ್ನು ಸ್ವಲ್ಪ ಕಡಿಮೆ ಮಾಡಿದೆ.

ಪ್ರಾಮಾಣಿಕವಾಗಿ ನಿಮ್ಮ ಜೊತೆ ಹೋರಾಡಿ ಹಾಸನ ವಿವಿ ಉಳಿಸುತ್ತೇನೆ



ದುಂಡು ಮೇಜಿನ ಸಭೆಯಲ್ಲಿ ಸಂಸದ ಶ್ರೇಯಸ್ ಪಟೇಲ್ ಮಾತನಾಡಿದರು.

ಹಾಸನ: ಪಕ್ಷ ಭೇದ ಮರೆತು ಪ್ರಾಮಾಣಿಕವಾಗಿ ನಿಮ್ಮ ಜೊತೆ ಹಾಸನ ವಿವಿ ಉಳಿಸುವ ಕೆಲಸ ಮಾಡುವೆ. ಯಾವುದೇ ರೀತಿಯ ಅನುಮಾನ ಬೇಡ. ಎಲ್ಲಾ ಶಾಸಕರು ಒಟ್ಟುಗೂಡಿ, ನಮ್ಮ ಜೊತೆ ಸಮಿತಿಯಿಂದ 15 ಜನರ ತಂಡ ಈ ವಾರದಲ್ಲಿ ದಿನ ನಿಗದಿ ಮಾಡಿ ಸಿಎಂ, ಡಿಸಿಎಂ ಹಾಗೂ ಸಚಿವರನ್ನು ಭೇಟಿ ಮಾಡುವ ಕೆಲಸ ಮಾಡಿ ಗಮನ ಸೆಳೆಯಲಾಗುವುದು ಎಂದು ಸಂಸದ ಶ್ರೇಯಸ್ ಪಟೇಲ್ ಭರವಸೆ ನೀಡಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಹಾಸನ ವಿಶ್ವವಿದ್ಯಾಲಯ ಉಳಿಸಿ ಬೆಳೆಸಲು ಭಾನುವಾರ ಕರೆಯಲಾಗಿದ್ದ ದುಂಡು ಮೇಜಿನ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ವಿಶ್ವವಿದ್ಯಾಲಯದ ಕುರಿತು ದುಂಡು ಮೇಜಿನ ಸಭೆಯಲ್ಲಿ ಮೌಲ್ಯಾಧಾರಿತ ಚರ್ಚೆಗಳು ನಡೆದಿದ್ದು, ಅಭಿವೃದ್ಧಿ ಮತ್ತು ಯೋಗಕ್ಷೇಮ ಬಂದಾಗ ಪಕ್ಷ ಮರೆತು ಜಿಲ್ಲೆಯ ಅಭಿವೃದ್ಧಿಗೆ ಮುಂದಾಗಬೇಕಾಗುತ್ತದೆ. ಎಲ್ಲರ ಪರ ನಿಂತುಕೊಳ್ಳುವ ಕೆಲಸ ಮಾಡಲಾಗುವುದು. ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳಿಗೆ ಸಂಬಂಧಪಟ್ಟ ಸಚಿವರ ಜೊತೆ ಮಾತನಾಡಲಾಗುವುದು ಎಂದರು.

ವಿಶ್ವವಿದ್ಯಾಲಯವನ್ನು ಮುಚ್ಚುವ ನಿರ್ಧಾರವನ್ನು ಇಲ್ಲಿವರೆಗೂ ತೆಗೆದುಕೊಂಡಿಲ್ಲ. ಯಾರೂ ಗಾಬರಿಪಡಬಾರದೆಂದು ಶಿಕ್ಷಣ ಸಚಿವರು ಹೇಳಿದ್ದು, ಈಗ ಅಧಿವೇಶನ ನಡೆಯುತ್ತಿರುವುದರಿಂದ ಎಲ್ಲಾ ಶಾಸಕರು ಒಳಗೊಂಡಂತೆ ಸಮಿತಿ ರಚಿಸಿ ಸಿಎಂ, ಡಿಸಿಎಂ ಹಾಗೂ ಸಚಿವರನ್ನು ಭೇಟಿ ಮಾಡಿ ಆಗಬಹುದಾದಂತಹ ಬೇಡಿಕೆಯನ್ನು ಮುಂದಿಟ್ಟು ಮನವಿಯನ್ನು ಮಾಡೋಣ ಎಂದರು.

ಶಾಸಕ ಎ.ಮಂಜು ಮಾತನಾಡಿ, ನಾನು ಶಾಸಕನಾಗಿದ್ದಾಗ ಮೈಸೂರು ವಿಶ್ವವಿದ್ಯಾನಿಲಯ ಇಲ್ಲಿ ಪ್ರಾರಂಭವಾಯಿತು. ಹಳ್ಳಿ ಸೇರಿದಂತೆ ಎಲ್ಲಾ ಮಕ್ಕಳಿಗೂ ವಿದ್ಯೆ ಸಿಗಬೇಕಾದರೇ ವಿವಿಗಳು ಆಯಾ ಜಿಲ್ಲೆಯಲ್ಲಿ ಇರಬೇಕು. ಆಗ ಮಾತ್ರ ಹೆಚ್ಚಿನ ಅವಕಾಶಗಳು ದೊರೆಯುತ್ತದೆ. ವಿಶ್ವವಿದ್ಯಾಲಯದ ಅಭಿವೃದ್ಧಿ ಆಗಬೇಕು. ಹೆಚ್ಚಿನ ಹೋರಾಟಕ್ಕೆ ಮುಂದಾದ ಜಿಲ್ಲೆ ಇದ್ದರೇ ಹಾಸನ. ಈ ಹೋರಾಟದಲ್ಲಿ ಯಾವ ರಾಜಕಾರಣ ಆಗಬಾರದು. ಯೂನಿವರ್ಸಿಟಿ ರಾಜ್ಯ ಸರಕಾರದಿಂದ ಮಾತ್ರ ನಡೆಯುವುದಿಲ್ಲ. ಕೇಂದ್ರದ ಯುಜಿಸಿ ಸ್ಕೇಲ್ ಕೂಡ ಇದೆ ಎಂದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಹೆಚ್.ಎಲ್.ಮಲ್ಲೇಶ್‌ಗೌಡ, ಹಸಿರುಭೂಮಿ ಪ್ರತಿಷ್ಠಾನದ ಬಿ.ಕೆ. ಮಂಜುನಾಥ್ ಮಾತನಾಡಿದರು. ಹಾಸನ ವಿಶ್ವವಿದ್ಯಾಲಯ ಉಳಿಸಿ ಹೋರಾಟ ಸಮಿತಿಯ ಡಾ.ವೈ.ಎಸ್. ವೀರಭದ್ರಪ್ಪ, ಆರ್.ಪಿ.ವೆಂಕಟೇಶ್ ಮೂರ್ತಿ, ಧರ್ಮೇಶ್, ಹೆಚ್.ಕೆ. ಸಂದೇಶ್, ಹುಡಾ ಮಾಜಿ ಅಧ್ಯಕ್ಷ ನವಿಲೆ ಅಣ್ಣಪ್ಪ, ಹೆಚ್.ಪಿ.ಮೋಹನ್, ಹಿರಿಯ ಪತ್ರಕರ್ತ ವೆಂಕಟೇಶ್, ಹೆಚ್.ಆರ್.ನವೀನ್‌ಕುಮಾರ್, ಎಂ.ಜಿ. ಪೃಥ್ವಿ, ಸಾಹಿತಿ ರೂಪ ಹಾಸನ್, ತಾರಾ ಚಂದನ್, ರಮೇಶ್, ಪುಷ್ಪ, ಸಮೀರ್ ಅಹಮದ್ ಇತರರು ಉಪಸ್ಥಿತರಿದ್ದರು.

ಛತ್ರಪತಿ ಶಿವಾಜಿ ಮಹಾರಾಜರ ತತ್ವ ಆದರ್ಶ ಅನುಸರಿಸಿ



ಹಾಸನ: ಇಡೀ ದೇಶಕ್ಕೆ ಮಾದರಿ ಮತ್ತು ಕ್ರಾಂತಿವೀರರಾದ ಛತ್ರಪತಿ ಶಿವಾಜಿ ಮಹಾರಾಜರ ತತ್ವ, ಆದರ್ಶಗಳನ್ನು ಎಲ್ಲರೂ ಅನುಸರಿಸಬೇಕು ಎಂದು ಸಂಸದ ಶ್ರೇಯಸ್ ಪಟೇಲ್ ಕರೆ ನೀಡಿದರು.

ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಭಾನುವಾರ ಆಯೋಜಿಸಿದ್ದ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶಿವಾಜಿ ಅವರ ಧೈರ್ಯ, ಶೌರ್ಯ, ನೇರ ನುಡಿಯನ್ನು ಎಲ್ಲರೂ ಮೆಚ್ಚಲೇಬೇಕು. ಅವರು ಹಾಕಿಕೊಟ್ಟಿರುವ ದಾರಿಯಲ್ಲಿ ನಡೆಯೋಣ ಎಂದರು.

ಬೆಂಗಳೂರಿನ ಗೋಸಾಯಿ ಮಠದ ಮಂಜುನಾಥ ಸ್ವಾಮೀಜಿ ಮಾತನಾಡಿ, ಛತ್ರಪತಿ ಶಿವಾಜಿಯವರು ಕೇವಲ ಮರಾಠ ಸಮಾಜಕ್ಕೆ ಸೀಮಿತವಲ್ಲ. ಇಡೀ ವಿಶ್ವಕ್ಕೆ ಆದರ್ಶಪುರುಷರಾಗಿದ್ದಾರೆ. ವಿಶ್ವಕ್ಕೆ ಕೊಡುಗೆ ಸಲ್ಲಿಸಿದ ಮಹನೀಯರ ಆದರ್ಶಗಳನ್ನು ಮೈಗೂಡಿಸಿಕೊಂಡು ಅನುಷ್ಠಾನಕ್ಕೆ ತರಬೇಕು ಎಂದರು.

ಶಾಸಕ ಹೆಚ್.ಪಿ.ಸ್ವರೂಪ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಎಚ್.ಪಿ. ತಾರಾನಾಥ್, ಹಾಸನ ಜಿಲ್ಲಾ ನೌಕರರ ಸಂಘದ ಗೌವಾಧ್ಯಕ್ಷ ಈ. ಕೃಷ್ಣೇಗೌಡ, ವಕೀಲರಾದ ವಿಜಯಕುಮಾರ್ ನಾರ್ವೆ, ಕರ್ನಾಟಕ ಕ್ಷತ್ರಿಯ ಮರಾಠ ಪರಿಷತ್ತಿನ ಹಾಸನ ಜಿಲ್ಲಾಧ್ಯಕ್ಷ ಲೀಲಾಕುಮಾರ್, ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ರುದ್ರ ಪ್ಪಾಜಿರಾವ್ ಘೋರ್ಪಡೆ, ಗೌರವಾಧ್ಯಕ್ಷ ತುಳಜಿರಾವ್ ಠಾಣ್ಗೆ, ಖಜಾಂಚಿ ಪ್ರಕಾಶ್, ನಿರ್ದೇಶಕ ಸುರೇಶ್ ಇದ್ದರು.

ದೇಶದ ದೇವಾಲಯಗಳಿಗೆ ಕರ್ನಾಟಕ ವಾಸ್ತುಶಿಲ್ಪ ಸ್ಫೂರ್ತಿ

ಸಾಧಕರೊಂದಿಗೆ ಸಂವಾದದಲ್ಲಿ ವಾಸ್ತು ತಜ್ಞ ಪ್ರಭಾಕರ್ ಅಭಿಪ್ರಾಯ

ಮೈಸೂರು, ಮಾ.16(ಜಿಎ)– ಕರ್ನಾಟಕದ ದೇವಾಲಯ ವಾಸ್ತುಶಿಲ್ಪ ದೇಶದ ವಿವಿಧ ರಾಜ್ಯದ ದೇವಾಲಯಗಳಿಗೆ ಸ್ಫೂರ್ತಿಯಾಗಿದೆ ಎಂದು ದೇವಾಲಯಗಳ ವಾಸ್ತು ತಜ್ಞ ಎಂ.ಎನ್.ಪ್ರಭಾಕರ್ ಇಂದಿಲ್ಲಿ ಅಭಿಪ್ರಾಯಪಟ್ಟರು.

ಮೈಸೂರಿನ ಅಗ್ರಹಾರದ ರಾಮಾನುಜ ರಸ್ತೆಯಲ್ಲಿರುವ ಮೈಸೂರು ಆರ್ಟ್ ಗ್ಯಾಲರಿ ವತಿಯಿಂದ ಆಯೋಜಿಸಿದ್ದ ಸಾಧಕರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಪ್ರಾಚೀನ ದೇವಾಲಯಗಳ ವಾಸ್ತುಶಿಲ್ಪ ಶೈಲಿಗಳು ಕರ್ನಾಟಕದಲ್ಲಿಯೇ ಆರಂಭವಾಗಿದ್ದು, 1834ರಿಂದ ದೇವಾಲಯಗಳ ಬಗ್ಗೆ ಮಾಹಿತಿ ದೊರೆಯುತ್ತದೆ ಎಂಬ ಮಾಹಿತಿ ಇದೆ. ಆದರೆ, ಯಾವುದೇ ನಿಖರತೆ ಇಲ್ಲ ಎಂದರು.

ಕರ್ನಾಟಕದ ದೇವಾಲಯಗಳು ಕಾಳಿಂಗ, ನಾಗರ, ದ್ರಾವಿಡ, ದಕ್ಷಿಣಾತ್ಯ, ಔತ್ತರೇಯ ಸೇರಿದಂತೆ ಅನೇಕ ಶೈಲಿಗಳನ್ನು ಹೊಂದಿದೆ. ವಾಸ್ತುಶಿಲ್ಪಗಳಿಗೆ ಸಂಬಂಧಿಸಿದ ಗ್ರಂಥಗಳ ಅಧ್ಯಯನದಿಂದ ದೇವಾಲಯಗಳು ಮತ್ತು ವಾಸ್ತುಶಿಲ್ಪಗಳ ಅಧ್ಯಯನ ಸುಲಭವಾಗುತ್ತದೆ. ಆದ್ದರಿಂದ ವಾಸ್ತುಶಿಲ್ಪಗಳ ಕುರಿತು ಅಧ್ಯಯನ ಮತ್ತು ಸಂಶೋಧನೆ ಮಾಡಲು ಆಸಕ್ತಿ ಇರುವವರು ಮೊದಲು ವಾಸ್ತುಶಿಲ್ಪ ಗ್ರಂಥಗಳನ್ನು ಅಧ್ಯಯನ ಮಾಡಬೇಕು ಎಂದು ಸಲಹೆ ನೀಡಿದರು.



ಮೈಸೂರಿನ ಮೈಸೂರು ಆರ್ಟ್ ಗ್ಯಾಲರಿ ವತಿಯಿಂದ ಆಯೋಜಿಸಿದ್ದ ಸಾಧಕರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ವಾಸ್ತುತಜ್ಞ ಎಂ.ಎನ್.ಪ್ರಭಾಕರ್ ಅವರನ್ನು ಅಭಿನಂದಿಸಲಾಯಿತು.

ದೇಶದ ಚರಿತ್ರೆಯನ್ನು ಸಾರುವ ಅತ್ಯಂತ ಸುಂದರವಾದ ಕಲಾಕೃತಿ ಮತ್ತು ವಾಸ್ತುಶಿಲ್ಪಗಳನ್ನು ಒಳಗೊಂಡಿರುವ ಸಾಕಷ್ಟು ಪ್ರಾಚೀನ ದೇವಾಲಯಗಳು ಅಳಿವಿನಂಚಿನಲ್ಲಿವೆ. ಅವುಗಳನ್ನು ಉಳಿಸಿಕೊಳ್ಳುವ ಜವಾಬ್ದಾರಿ ಸಾರ್ವಜನಿಕರು ಮತ್ತು ಸರ್ಕಾರದ ಮೇಲಿದೆ ಎಂದರು.

ಮೈಸೂರು ಆರ್ಟ್ ಗ್ಯಾಲರಿ ಸಂಸ್ಥಾಪಕ ಅಧ್ಯಕ್ಷ ಎಲ್.ಶಿವಲಿಂಗಪ್ಪ ಮಾತನಾಡಿ, ದೇವಾಲಯಗಳ ಶಾಸನಗಳಲ್ಲಿ ಆಯಾ ಕಾಲದ ರಾಜರ ಹೆಸರುಗಳನ್ನು ಮಾತ್ರ ನಮೂದಿಸಲಾಗಿದೆ. ಆದರೆ ದೇವಾಲಯಗಳ ಶಿಲ್ಪಗಳನ್ನು ಕೆತ್ತಿದ, ವಾಸ್ತುಶಿಲ್ಪ ಶೈಲಿಗಳನ್ನು ರೂಪಿಸಿದ ಎಷ್ಟೋ ಶಿಲ್ಪಿಗಳು, ಕುಶಲಕರ್ಮಿಗಳು ತಾವು ರೂಪಿಸಿದ ಶಿಲ್ಪಕಲೆಗಳಲ್ಲಿ ತಮ್ಮ ಹೆಸರುಗಳನ್ನು ನಮೂದಿಸಿರುವುದಿಲ್ಲ. ಹಾಗಾಗಿ ಆಯಾ ಕಾಲದಲ್ಲಿ ಜೀವಿಸಿದ್ದ ಶಿಲ್ಪ ಕಲಾವಿದರು ಯಾರೆಂಬುದೇ ಚರಿತ್ರೆಯಲ್ಲಿ ದಾಖಲಾಗಿಲ್ಲ. ಜೊತೆಗೆ ಪ್ರಾಚೀನ ಕಾಲದ ಶಿಲ್ಪಿಗಳನ್ನು, ಕಲಾವಿದರ ಚರಿತ್ರೆಯನ್ನು ದಾಖಲಿಸುವ ಕೆಲಸವೂ ಸಮರ್ಪಕವಾಗಿ ಆಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ವಿಶ್ರಾಂತ ಇತಿಹಾಸ ಉಪನ್ಯಾಸಕ ಪ್ರೊ.ಲಾ.ನಾ. ಸ್ವಾಮಿ ಮಾತನಾಡಿ, ಕಾವೇರಿ, ಕಪಿಲ, ತುಂಗಭದ್ರಾ ನದಿಗಳ ತೀರ ಪ್ರದೇಶ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪ್ರಾಚೀನ ದೇವಾಲಯಗಳು ಸಿಗುತ್ತವೆ. ಇದುವರೆಗಿನ ಅನುಭವ ಮತ್ತು ಇತ್ತೀಚಿನ ವರ್ಷಗಳಲ್ಲಿನ ತಂತ್ರಜ್ಞಾನದ ನೆರವಿನಿಂದ ದೇವಾಲಯಗಳ ಉತ್ಖನನ ಮಾಡಿದರೆ ಕರ್ನಾಟಕದ ಸಾಕಷ್ಟು ಪ್ರಾಚೀನ ದೇವಾಲಯಗಳು ಮತ್ತು ಅವುಗಳಲ್ಲಿನ ಶಿಲೆಯ ಕಲೆಯನ್ನು ಬೆಳಕಿಗೆ ತರಬಹುದು ಎಂದರು.

ಕಾರ್ಯಕ್ರಮದಲ್ಲಿ ಮೈಸೂರು ಆರ್ಟ್‌ಗ್ಯಾಲರಿ ಕಾರ್ಯದರ್ಶಿ ಡಾ.ಜಮುನಾರಾಣಿ ಮಿರ್ಲೆ, ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ಗಮಕಿ ಜಿ.ಎನ್.ಪದ್ಮ, ವಿಶ್ರಾಂತ ಇತಿಹಾಸ ಪ್ರಾಧ್ಯಾಪಕಿ ಡಾ.ಉಷಾರಾಣಿ ಮತ್ತಿತರರು ಉಪಸ್ಥಿತರಿದ್ದರು.

ಅಜೀಜ್ ಸೇಠ್ ಬ್ಲಾಕ್ ಕಾಂಗ್ರೆಸ್ ಸಮಿತಿಯಿಂದ ಇಫ್ತಾರ್ ಕೂಟ



ಮೈಸೂರಿನ ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಅಜೀಜ್ ಸೇಠ್ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ನೆಲ್ಸನ್ ಮಂಡೇಲಾ ರಸ್ತೆಯ ಖಾಸಗಿ ಹೋಟೇಲ್‌ನಲ್ಲಿ ರಂಜಾನ್ ಇಫ್ತಾರ್ ಕೂಟ ಆಯೋಜಿಸಲಾಗಿತ್ತು. ಮೈಸೂರಿನ ಕ್ರೈಸ್ತ ಧರ್ಮದ ಆಡಳಿತಾಧಿಕಾರಿ ಬರ್ನಾರ್ಡ್ ಮೊರಾಸ್ ಅವರು ಶಾಸಕ ತನ್ವೀರ್ ಸೇಠ್ ಅವರಿಗೆ ಖರ್ಜೂರ ತಿನ್ನಿಸುವ ಮೂಲಕ ಇಫ್ತಾರ್ ಕೂಟಕ್ಕೆ ಚಾಲನೆ ನೀಡಿದರು. ಈ ವೇಳೆ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಶಾಸಕ ಕೆ.ಹರೀಶ್ ಗೌಡ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸೈಯದ್ ಇಕ್ಬಾಲ್, ಉಪಾಧ್ಯಕ್ಷ ಶೆನ್ಸಾ ಅಹಮದ್, ಪಾಲಿಕೆ ಮಾಜಿ ಸದಸ್ಯ ಶೌಕತ್ ಪಾಷಾ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶಹಬುದ್ದೀನ್, ಯುವ ಕಾಂಗ್ರೆಸ್ ಮಾಜಿ ಅಧ್ಯಕ್ಷ ಶೌಕತ್ ಅಲಿ, ಕಾಂಗ್ರೆಸ್ ಮುಖಂಡ ಅಫ್ರೋಜ್ ಖಾನ್, ಪ್ರದೀಪ್, ಅಣ್ಣಯ್ಯ ನಾಗೇಶ್ ಕರಿಯಪ್ಪ ಮತ್ತಿತರರಿದ್ದರು.

ಇಂದು ಪ್ರೊ.ಮುಜಾಫರ್ ಅಸ್ಸಾದಿಗೆ ನುಡಿ ನಮನ



ಮೈಸೂರು,ಮಾ.16(ಜಿಎ)– ಮೈಸೂರು ವಿವಿಯ ರಾಜ್ಯಶಾಸ್ತ್ರ ಮತ್ತು ಸಾರ್ವಜನಿಕ ಆಡಳಿತ ವಿಭಾಗಗಳ ಸಂಯುಕ್ತಾಶ್ರಯದಲ್ಲಿ ಮಾ.17ರಂದು ಮಾನಸಗಂಗೋತ್ರಿ ಮಾನವಿಕ ಸಭಾಂಗಣದಲ್ಲಿ ದಿವಂಗತ ಪ್ರೊ.ಮುಜಾಫರ್ ಅಸ್ಸಾದಿ ಅವರಿಗೆ ನುಡಿ ನಮನ ಕಾರ್ಯಕ್ರಮ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ರಾಜ್ಯಶಾಸ್ತ್ರ ವಿಭಾಗದ ಪ್ರೊ.ಜಿ.ಟಿ.ರಾಮಚಂದ್ರಪ್ಪ ಈ ವಿಷಯ ತಿಳಿಸಿ, ಅಂದು ಬೆಳಗ್ಗೆ 10ರಿಂದ ಸಂಜೆ 6 ಗಂಟೆವರೆಗೆ ನುಡಿ ನಮನ ಕಾರ್ಯಕ್ರಮ ನಡೆಯಲಿದ್ದು, ಪ್ರಗತಿಪರ ಚಿಂತಕರು, ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಅಸ್ಸಾದಿ ಅವರೊಡನೆ ಸಂಬಂಧ ಹೊಂದಿದ್ದ ಇನ್ನಿತರರು ಪಾಲ್ಗೊಂಡು ಅವರನ್ನು ತಾವು ಕಂಡ ಬಗೆ ಕುರಿತು ಮುಕ್ತವಾಗಿ ಮಾತನಾಡಲಿದ್ದಾರೆ. ಅವರ ಚಿಂತನ ಮಂಥನ, ಆಚಾರ, ವಿಚಾರಗಳ ನೆನಪು ಮಾಡಿಕೊಳ್ಳಲಿದ್ದಾರೆ ಎಂದರು.

ಮೂತ್ರಜನಕಾಂಗ ಉಚಿತ ತಪಾಸಣೆ ಶಿಬಿರ

ಮೈಸೂರು,ಮಾ.16–ಮೈಸೂರಿನ ಸುಯೋಗ್ ಆಸ್ಪತ್ರೆಯಲ್ಲಿ ಮಾ.17ರಿಂದ 22ರವರೆಗೆ ಉಚಿತ ಮೂತ್ರಜನಕಾಂಗ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ. ಮೂತ್ರಜನಕಾಂಗ ತಜ್ಞವೈದ್ಯ ಡಾ.ಅಭಿಜಿತ್ ನೇತೃತ್ವದಲ್ಲಿ ಶಿಬಿರ ನಡೆಯಲಿದೆ. ಮೂತ್ರ ವಿಸರ್ಜಿಸುವಾಗ ನೋವು, ಮೂತ್ರದಲ್ಲಿ ರಕ್ತ, ಮೂತ್ರದಲ್ಲಿ ಹೆಚ್ಚಿನ ಪ್ರೋಟೀನ್ ವಿಸರ್ಜನೆ, ಮೂತ್ರಜನಕಾಂಗದಲ್ಲಿ ಕಲ್ಲು, ಮೂತ್ರದಲ್ಲಿ ಸೋಂಕು ಮುಂತಾದ ಮೂತ್ರಜನಕಾಂಗದ ಸಮಸ್ಯೆಗಳಿರುವವರು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವುದು. ಮಾಹಿತಿಗೆ 0821–2533600, 99863 99862 ಸಂಪರ್ಕಿಸಬಹುದು.

ಅರೆಕಾಲಿಕ ಶಿಕ್ಷಕರ ತಾತ್ಕಾಲಿಕ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮೈಸೂರು, ಮಾ.16– ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಮೈಸೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಬಾಲಕರ ಬಾಲಕಿಯರ ಬಾಲಮಂದಿರ ಹಾಗೂ ಸರ್ಕಾರಿ ಬಾಲಕ ವೀಕ್ಷಣೆಯಲ್ಲಿರುವ ಮಕ್ಕಳಿಗೆ ಅರೆಕಾಲಿಕ ಶಿಕ್ಷಕರ ಸೇವೆಯು (Part Time) ಅಗತ್ಯವಿದ್ದು, ಬಿಎಸ್ಸಿ/ಬಿಇಡಿ ಪದವೀಧರ ಶಿಕ್ಷಕರು, ದೈಹಿಕ/ಯೋಗ ಶಿಕ್ಷಕರು, ಆರ್ಟ್ ಕ್ರಾಫ್ಟ್ ಶಿಕ್ಷಕರು ಹಾಗೂ ಸಂಗೀತ ಶಿಕ್ಷಕರ ಅರೆಕಾಲಿಕ ಹುದ್ದೆಗಳಿಗೆ (Part Time) ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಮಾರ್ಚ್ 18ರೊಳಗೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿ, ಅಂಜನಾದ್ರಿ ಮುಖ್ಯ ರಸ್ತೆ, 2ನೇ ಫೇಸ್, ವಿಜಯನಗರ 4ನೇ ಹಂತ, ಮೈಸೂರು ಇಲ್ಲಿ ಅರ್ಜಿ ಪಡೆಯಬಹುದಾಗಿದೆ. ಮಾಹಿತಿಗಾಗಿ ದೂ.ಸಂ. 0821–2543003 ಸಂಪರ್ಕಿಸಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ತಿಳಿಸಿದ್ದಾರೆ.

ಆಯುರ್ವೇದ ವೈದ್ಯ ದಂಪತಿಗೆ ಯೋಗ ವೈದ್ಯರತ್ನ ಪ್ರಶಸ್ತಿ ಪ್ರದಾನ




ಮೈಸೂರು ಯೋಗ ಒಕ್ಕೂಟದ ವತಿಯಿಂದ ಪರಮಹಂಸ ಯೋಗ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಆಯುರ್ವೇದ ವೈದ್ಯರಾದ ಡಾ.ಎ.ಎಸ್.ಚಂದ್ರಶೇಖರ್ ದಂಪತಿಗೆ ಯೋಗ ವೈದ್ಯರತ್ನ ಪ್ರಶಸ್ತಿ ನೀಡಿ, ಅಭಿನಂದಿಸಲಾಯಿತು.

ಮೈಸೂರು, ಮಾ. 16(ಜಿಎ)–ಮೈಸೂರು ಯೋಗ ಒಕ್ಕೂಟದ ವತಿಯಿಂದ ರಾಮಕೃಷ್ಣ ನಗರದ ಪರಮಹಂಸ ಯೋಗ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಆಯುರ್ವೇದ ವೈದ್ಯರಾದ ಡಾ.ಎ.ಎಸ್.ಚಂದ್ರಶೇಖರ್ ದಂಪತಿಗೆ ಯೋಗ ವೈದ್ಯರತ್ನ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು. ಡಾ.ಎ.ಎಸ್.ಚಂದ್ರಶೇಖರ್ ಹಾಗೂ ಡಾ.ಜಯಶ್ರೀ ದಂಪತಿ ಆಯುರ್ವೇದ ವೈದ್ಯರಾಗಿದ್ದುಕೊಂಡು ಕಳೆದ ಮೂರ್ನಾಲ್ಕು ದಶಕಗಳಿಂದ ಮಾಡುತ್ತಿರುವ ಸಮಾಜಮುಖಿ ಸೇವೆ ಹಾಗೂ ಯೋಗ ಕ್ಷೇತ್ರಕ್ಕೆ ನೀಡಿರುವ ಸೇವೆಯನ್ನು ಗುರುತಿಸಿ ಯೋಗ ವೈದ್ಯರತ್ನ ಪ್ರಶಸ್ತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ನಗರದ ವಿವಿಧ ಯೋಗ ಒಕ್ಕೂಟದ ಪದಾಧಿರಾಗಿಗಳು, ವಿಧಾನಪರಿಷತ್ ಮಾಜಿ ಸದಸ್ಯ ತೋಂಟದಾರ್ಯ, ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ, ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ.ವಿ. ಲಕ್ಷ್ಮೀನಾರಾಯಣ ಶೆಣೈ, ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ ನಿವೃತ್ತ ಪ್ರಾಧ್ಯಾಪಕ ಡಾ.ಸದಾನಂದ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸುಯೋಗ ಆಸ್ಪತ್ರೆ ಅಧ್ಯಕ್ಷ ಡಾ.ಎಸ್.ಪಿ. ಯೋಗಣ್ಣ, ಎಂಐಟಿ ಅಧ್ಯಕ್ಷ ಡಾ.ಎಸ್. ಮುರಳಿ, ಹಿಮಾಲಯ ಪ್ರತಿಷ್ಠಾನ ಅಧ್ಯಕ್ಷ ಎನ್.ಅನಂತು, ಒಕ್ಕೂಟದ ಕಾರ್ಯಾಧ್ಯಕ್ಷ ಶಿವಪ್ರಕಾಶ್, ಗೌರವಾಧ್ಯಕ್ಷ ಟಿ.ಜಲೇಂದ್ರ ಕುಮಾರ್, ಪ್ರಧಾನ ಕಾರ್ಯದರ್ಶಿ ಯೋಗಕುಮಾರ್, ಆಶಾದೇವಿ, ಅಧ್ಯಕ್ಷ ಕೆ.ಜಿ.ದೇವರಾಜು, ಕಾರ್ಯಾಧ್ಯಕ್ಷ ಬಿ.ಪಿ. ಮೂರ್ತಿ, ಖಜಾಂಚಿ ನರಸಿಂಹ, ಜೆಎಸ್‌ಎಸ್ ಸಂಸ್ಥಾಪಕ ಶ್ರೀಹರಿ ದ್ವಾರಕನಾಥ್, ಬಿ.ಶಾಂತಾರಾಂ, ಶಶಿಕುಮಾರ್ ಸೇರಿದಂತೆ ಮೈಸೂರು ಯೋಗ ಒಕ್ಕೂಟದ ಎಲ್ಲಾ ಪದಾಧಿಕಾರಿಗಳು, ಮತ್ತಿತರರು ಪಾಲ್ಗೊಂಡಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

17.03.2025 ಸೋಮವಾರ, ಮಳೆ ನಕ್ಷತ್ರ: ಪೂರ್ವಭಾದ್ರಾ 04.03.2025ರಿಂದ 16.03.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಫಾಲ್ಗುಣ ಮಾಸ, ಕೃಷ್ಣ ಪಕ್ಷ,
ತಿಥಿ: ತದಿಗೆ, ನಕ್ಷತ್ರ: ಚಿತ್ತ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30 ರಿಂದ ಯೋಗ ಮಾಡಿ ಆರೋಗ್ಯವಾಗಿರಿ, ದೇಹ, ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9 ರಿಂದ ಇಸುಬು ತಪಾಸಣಾ ಶಿಬಿರ, ಒಟೋಮೈಕೋಸಿಸ್–ಕಿವಿಯ ಫಂಗಲ್ ಸೋಂಕಿಗೆ ಚಿಕಿತ್ಸಾ ಶಿಬಿರ, ಸಂಯಾಟೀಕ ರೋಗದ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ.
- **ಮಹಾರಾಣಿ ಮಹಿಳಾ ಕಲಾ ಕಾಲೇಜು, ಕನ್ನಡ ವಿಭಾಗ, ಕನ್ನಡ ಸಂಘ, ಆಂತರಿಕ ಗುಣಮಟ್ಟದ ಭರವಸೆ ಕೋಶ:** ವಿಶೇಷ ಉಪನ್ಯಾಸ ಕಾರ್ಯಕ್ರಮ, ವಿಷಯ: ಸಾಹಿತ್ಯ ಮತ್ತು ರಂಗಭೂಮಿ ವರ್ತಮಾನದ ಸ್ಪಂದನೆ, ಸ್ಥಳ: ಶ್ರೀಮತಿ ಜಯಲಕ್ಷ್ಮಮ್ಮಣ್ಣಿ ಸಭಾಂಗಣ, ಕಾಲೇಜು ಆವರಣ, ಬೆಳಗ್ಗೆ 10.45ಕ್ಕೆ.
- **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.
- **ಮೈಸೂರು ವಿಶ್ವವಿದ್ಯಾನಿಲಯ ರಾಷ್ಟ್ರೀಯ ಸೇವಾ ಯೋಜನೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಸರ್ಕಾರ :** ರಾಜ್ಯ ಮಟ್ಟದ ಯುವ ಜನೋತ್ಸವ–2024–25, ಅಧ್ಯಕ್ಷತೆ: ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಉದ್ಘಾಟನೆ: ರಾಜ್ಯ ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿ ಡಾ.ಪ್ರತಾಪ್ ಲಿಂಗಯ್ಯ, ಸ್ಥಳ: ಎನ್‌ಎಸ್‌ಎಸ್ ಭವನ, ಸಾಹುಕಾರ್ ಚನ್ನಯ್ಯ ರಸ್ತೆ, ಬೆಳಗ್ಗೆ 11ಕ್ಕೆ.
- **ಟೆರೇಷಿಯನ್ ಕಾಲೇಜು:** 'ಗ್ರಾಹಕರ ನಡವಳಿಯ ಪ್ರವೃತ್ತಿಗಳು ಮತ್ತು ಸವಾಲುಗಳು' ಕುರಿತು ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ, ಉದ್ಘಾಟನಾ ಭಾಷಣ: ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಸ್ಥಳ: ಅವೇ ಮರಿಯಾ ಗೋಲ್ಡನ್ ಜ್ಯುಬಿಲಿ ಆಡಿಟೋರಿಯಂ, ಟೆರೇಷಿಯನ್ ಕಾಲೇಜು, ಬೆಳಗ್ಗೆ 11 ಗಂಟೆಗೆ.
- **ಬೆಟ್ಟದ ಮಾರಮ್ಮನ ಸೇವಾ ಸಮಿತಿ ಟ್ರಸ್ಟ್:** ಬೆಟ್ಟದ ಮಾರಮ್ಮ ದೇವಸ್ಥಾನದ 20ನೇ ವರ್ಷದ ಪೂಜಾ ಮಹೋತ್ಸವ, ಸಂಜೆ 6.30ರಿಂದ ಗಣಪತಿ, ನವಗ್ರಹ, ದುರ್ಗಾಹೋಮ, ಮಧ್ಯಾಹ್ನ 12 ಗಂಟೆಗೆ ಅನ್ನಸಂತರ್ಪಣೆ, ಸ್ಥಳ: ದೇವಸ್ಥಾನದ ಪ್ರಾಂಗಣ, ಜೆಎಸ್‌ಎಸ್ ಸ್ಕೂಲ್ ಹತ್ತಿರ, ಜಿ.ಬಿ.ಪಾಳ್ಯ, ರಾಜೇಂದ್ರನಗರ.
- **ಕರ್ನಾಟಕ ಸರ್ಕಾರ ಧಾರ್ಮಿಕ ದತ್ತಿ ಇಲಾಖೆ:** ಶ್ರೀ ಪ್ರಸನ್ನ ನಂಜುಂಡೇಶ್ವರ ಸ್ವಾಮಿಯವರ ಬ್ರಹ್ಮೋತ್ಸವ, ರಾತ್ರಿ ಕೈಲಾಸ ವಾಹನೋತ್ಸವ, ಶಯನೋತ್ಸವ, ಸ್ಥಳ: ದೇವಸ್ಥಾನದ ಪ್ರಾಂಗಣ, ಹಳೇ ಸಂತೇಪೇಟೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10–ಚಿಂತನ, ಮುತ್ತುರಾಜ್, 6.15–ಗೀತಾರಾಧನ, 6.35 ಮತ್ತು ಸಂಜೆ 6.10: ಆಧಾರ ಶಿಲೆ, ಮೈಸೂರು ಸುತ್ತಲಿನ ಪ್ರಾಗೈತಿಹಾಸಿಕ ತಾಣಗಳ ಪರಿಚಯ ಮಾಲಿಕೆ. ಪ್ರಸ್ತುತಿ: ಡಾ.ರಾಮದಾಸ್ ರೆಡ್ಡಿ, 6.40–ಅರಿವಿನ ಶಿಖರ, ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಸದಾಶಿವ ಪಾಟೀಲ್, ಶಾಂತಲಾ ವಟ್ಟಂ, ವ್ಯಾಖ್ಯಾನ–ಕೆ.ಎಲ್.ಪದ್ಮಿನಿ ಹೆಗಡೆ, 6.50–ರೈತರಿಗೆ ಸಲಹೆ, 7.15–ಭರವಸೆ ಹೊನಲು, ವೈದ್ಯರ ಕಿವಿಮಾತು–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು–ಟ್ರಸ್ಟ್‌ವೆಲ್ ಆಸ್ಪತ್ರೆ, ಜೆ.ಸಿ.ರಸ್ತೆ, ಬೆಂಗಳೂರು, 8.30–ಕನ್ನಡ ಚಿತ್ರಗೀತೆಗಳು, 9.00–ನೆನಪಿನಂಗಳ (ಧ್ವನಿ ಭಂಡಾರದಿಂದ) ಬಹುಮುಖ ಪ್ರತಿಭೆಯ ಹಿರಿಯ ವಿದ್ವಾಂಸರು ಹಾಗೂ ಕವಿಗಳು ಆದ ಡಾ.ಸಿ.ಪಿ.ಕೃಷ್ಣಕುಮಾರ್ ಅವರೊಂದಿಗೆ ಜಿ.ಕೆ.ರವೀಂದ್ರಕುಮಾರ್ ಅವರು ನಡೆಸಿದ್ದ ಸಂವಾದದ ಮೊದಲ ಭಾಗ, 10.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಎಂ.ರಾಘವೇಂದ್ರ, ಹಾಡುಗಾರಿಕೆ, 11.00–ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ, ಗೇಮ್ ಶೋ, ಪ್ರಸ್ತುತಿ: ದಿಗ್ವಿಜಯ್ ಬಿ., ಮಧ್ಯಾಹ್ನ: 12.05–ವನಿತಾ ವಿಹಾರ, 12.35–ದೇವರನಾಮ–ಇಂದ್ರಾಣಿ ಅನಂತರಾಮ್, 12.45–ನಮ್ಮ ಆರೋಗ್ಯ–ವಿಶ್ವ ಬೊಜ್ಜುತನ ಜಾಗೃತಿ ದಿನದ ಸಂದರ್ಭದಲ್ಲಿ ಬೊಜ್ಜುತನ, ಕಾರಣಗಳು ಮತ್ತು ಚಿಕಿತ್ಸೆ ಕುರಿತು ಎಂಡೋಕ್ರೈನಾಲಜಿ ಮತ್ತು ಡಯಾಬಿಟಿಸ್ ತಜ್ಞರಾದ ಡಾ.ಲಕ್ಷ್ಮೀ ನಾಗೇಂದ್ರ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 1.00–ಪ್ರಗತಿ ಪಥ– ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳ ಸರಣಿ ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ ಕುರಿತು ಮಾಹಿತಿ, 1.20–ಭಾವಗೀತೆಗಳು–ಅಮೂಲ್ಯ ಎಂ, 2.40–ಚಿತ್ರಗೀತೆಗಳು, 3.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಡಾ.ಎಸ್.ವಿಜಯರಾಘವನ್, ವೀಣಾವಾದನ, 4.00–ಮಹಿಳಾರಂಗ–ನಾನು ನನ್ನ ಕಂಪನಿ ಬೀಟೆ ಮರ ಬಳಸಿ ಕರಕುಶಲ ವಸ್ತುಗಳನ್ನು ತಯಾರಿಸುವ ಜ್ಯೋತಿ ಅವರೊಂದಿಗೆ ಮಾತುಕತೆ, ಪ್ರಸ್ತುತಿ: ಸಹನಾ, 4.45–ಹಿಂದಿ ಪಾಠ–ಪ್ರಸ್ತುತಿ: ಡಾ.ಮಾಧವಿ ಭಂಡಾರಿ, 5.05–ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50–ಕೃಷಿರಂಗ : ರೈತರಿಗೆ ಬ್ಯಾಂಕಿನಿಂದ ದೊರೆಯುವ ಸೌಲಭ್ಯಗಳನ್ನು ಕುರಿತು ಸಂವಾದ. ಭಾಗವಹಿಸುತ್ತಾರೆ –ಮೈಸೂರಿನ ಕರ್ಣಾಟಕ ಬ್ಯಾಂಕ್ ಪ್ರಾದೇಶಿಕ ಕಚೇರಿಯ ಸಹಾಯಕ ಮಹಾಪ್ರಬಂಧಕ ಡಾ.ಟಿ.ಆರ್.ಅರುಣ್ ಮತ್ತು ಕೃಷಿ ಅಧಿಕಾರಿ ಆರ್.ಚಂದನಾ, ಪ್ರಸ್ತುತಿ: ಎನ್.ಕೇಶವಮೂರ್ತಿ, 7.45–ವಿಧಾನಮಂಡಲದಲ್ಲಿ ಇಂದು, 8.00–ಯುವವಾಣಿ–ಇತ್ತೀಚೆಗೆ ಜರುಗಿದ ಮೈಸೂರು ವಿಶ್ವವಿದ್ಯಾಲಯದ 105ನೇ ಘಟಿಕೋತ್ಸವದಲ್ಲಿ ಎಂ.ಕಾಂ ವಿಷಯದಲ್ಲಿ ಪ್ರಥಮ rankನೊಂದಿಗೆ 3 ಚಿನ್ನದ ಪದಕ ಹಾಗೂ ನಗದು ಪುರಸ್ಕಾರ ಗಳಿಸಿದ ಮೈಸೂರಿನ ಸಂಜನಾ ಪ್ರಭು. ಎಸ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ –ಬೇದ್ರೆ ಮಂಜುನಾಥ್, 9.30–ಕರ್ನಾಟಕ ಶಾಸ್ತ್ರೀಯ ಸಂಗೀತ: ಎಂ.ಬಾಲಮುರಳಿಕೃಷ್ಣ–ಹಾಡುಗಾರಿಕೆ, 10.00–ರೂಪಕ ಹರಿಯನ್ನರಸಿದ ವನಿತೆಯರು, ರಚನೆ ಮತ್ತು ಪ್ರಸ್ತುತಿ–ಡಾ.ಸುಕನ್ಯಾ ಪ್ರಭಾಕರ್, 10.30–ಸವಿನೆನಪು ಶ್ರೀನಿವಾಸ ಪ್ರಭು, ನಿರ್ದೇಶನ : ರವಿಪ್ರಸಾದ್, ಸ್ಥಳ: ರಂಗಮಂದಿರ, ಕಲಾಮಂದಿರ ಆವರಣ, ಸಂಜೆ 6.30ಕ್ಕೆ

ಒಂಟಿಕೊಪ್ಪಲಿನಲ್ಲಿ ಗ್ರಾಮದೇವತೆ ಮಾರಮ್ಮನವರ ಹಬ್ಬದ ಸಂಭ್ರಮ

ವಿಜೃಂಭಣೆಯಿಂದ ನೆರವೇರಿದ ತಂಬಿಟ್ಟಿನ ಮೆರವಣಿಗೆ

ಮಾರಮ್ಮನ ದೇವಸ್ಥಾನದಲ್ಲಿ ಮಹಾಮಂಗಳಾರತಿ ಸೇರಿ ವಿವಿಧ ಪೂಜಾ ಕೈಂಕರ್ಯ





ಒಂಟಿಕೊಪ್ಪಲು ಗ್ರಾಮದೇವತೆ ಮಾರಮ್ಮನವರ ಹಬ್ಬದ ಪ್ರಯುಕ್ತ ಭಾನುವಾರ ತಂಬಿಟ್ಟಿನ ಮೆರವಣಿಗೆ ವಿಜೃಂಭಣೆಯಿಂದ ನೆರವೇರಿತು. ಮತ್ತೊಂದು ಚಿತ್ರದಲ್ಲಿ ಭಗೀರಥ ಸಿನಿಮಾ ನಾಯಕ ನಟ ಎಸ್.ಜಯಪ್ರಕಾಶ್ (ಜೆಪಿ) ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆಯುತ್ತಿರುವುದನ್ನು ಕಾಣಬಹುದು.

ಮೈಸೂರು,ಮಾ.16(ಪಿಎಂ)– ಒಂಟಿಕೊಪ್ಪಲು ಗ್ರಾಮದೇವತೆಯ ಹಬ್ಬದ (ಮಾರಮ್ಮನವರ ಹಬ್ಬ) ಪ್ರಯುಕ್ತ ಭಾನುವಾರ ತಂಬಿಟ್ಟಿನ ಮೆರವಣಿಗೆ ವಿಜೃಂಭಣೆಯಿಂದ ನೆರವೇರಿತು. ಇಲ್ಲಿನ ಶ್ರೀ ಮಾರಮ್ಮನವರ ದೇವಸ್ಥಾನದ ಆವರಣಕ್ಕೆ ಸಾವಿರಾರು ಸಂಖ್ಯೆಯಲ್ಲಿ ತಂಬಿಟ್ಟು ಹೊತ್ತು ತಂದ ಮಹಿಳೆಯರು, ತಾಯಿ ಮಾರಮ್ಮನಿಗೆ ಸಮರ್ಪಿಸಿ, ಭಕ್ತಿಯ ಪರಾಕಾಷ್ಠೆ ಮೆರೆದರು.

ದೇವಸ್ಥಾನದ ಗರ್ಭಗುಡಿಯಲ್ಲಿರುವ ಮಾರಮ್ಮನವರ ಮೂರ್ತಿಗೆ ಕೊಳಗ ಧಾರಣೆಯೊಂದಿಗೆ ವಿವಿಧ ಪೂಜಾ ವಿಧಿವಿಧಾನಗಳು ಇಂದು ಬೆಳಗ್ಗೆಯಿಂದಲೇ ಆರಂಭಗೊಂಡವು. ದೇವಸ್ಥಾನದ ಅರ್ಚಕ ಶಿವಶಂಕರ್ ನೇತೃತ್ವದಲ್ಲಿ ಮಾರಮ್ಮನವರ ಮೂರ್ತಿಗೆ ಪಂಚಾಮೃತ ಅಭಿಷೇಕ, ಹಣ್ಣಿನ ಅಭಿಷೇಕ, ರಸಾಯನ ಅಭಿಷೇಕ ಮಾಡಲಾಯಿತು. ಬಳಿಕ ಸೀರೆ ಧಾರಣೆಯೊಂದಿಗೆ ಅಲಂಕಾರದ ವಿಧಿವಿಧಾನವು ಸಂಪ್ರದಾಯದಂತೆ ನೆರವೇರಿದವು.

ಸಂಜೆ ವೇಳಗೆ ತಂಬಿಟ್ಟು ಮೆರವಣಿಗೆಯ ಸಂಭ್ರಮ ಗ್ರಾಮದಲ್ಲಿ ಕಳೆಗಟ್ಟಿತು. ತಮಟೆ ಬಾರಿಸುವ ಮೂಲಕ ಊರಿನಲ್ಲಿ ತಂಬಿಟ್ಟು ಮೆರವಣಿಗೆಗೆ ಸಿದ್ಧರಾಗಲು ಸಂದೇಶ ಸಾರಲಾಯಿತು. ಬಳಿಕ ಹೂವಿನ ಅಲಂಕಾರದಲ್ಲಿ ಶೃಂಗಾರಗೊಂಡ ತಂಬಿಟ್ಟು ಹೊತ್ತ ಮಹಿಳೆಯರು ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದರು. ತಟ್ಟೆಯಲ್ಲಿ ತಂಬಿಟ್ಟು ಮಾತ್ರವಲ್ಲದೆ, ಬಾಳೆ ಹಣ್ಣು ಸೇರಿದಂತೆ ವಿವಿಧ ಪೂಜಾ ಸಾಮಗ್ರಿಗಳನ್ನು ಹೊತ್ತು ಸಾಗಿದರು.

ತಂಬಿಟ್ಟಿನ ಮೆರವಣಿಗೆಯು ಮಾರಮ್ಮನ ದೇವಸ್ಥಾನದ ಆವರಣ ತಲುಪುತ್ತಿದ್ದಂತೆ ಅಲ್ಲಿ ಹಾಸಲಾಗಿದ್ದ ಶ್ವೇತವರ್ಣದ ಮಡಿ ವಸ್ತ್ರದ ಮೇಲೆ ಗ್ರಾಮದ ಮಹಿಳೆಯರು ಮಾರಮ್ಮನಿಗೆ ಸಮರ್ಪಿಸಲು ತಂದಿದ್ದ ತಂಬಿಟ್ಟು ತಟ್ಟೆಗಳನ್ನು ಸಾಲಾಗಿ ಇಟ್ಟು ನಿಂತರು. ನಂತರ ಎಲ್ಲಾ ತಂಬಿಟ್ಟು ತಟ್ಟೆಗಳಿಗೂ ಒಮ್ಮೆಗೆ ಪೂಜೆ ಸಲ್ಲಿಸಲಾಯಿತು. ಬಳಿಕ ಎಲ್ಲಾ ತಂಬಿಟ್ಟು ಸಂಗ್ರಹಿಸಿ ಮಾರಮ್ಮನವರ ದೇವಸ್ಥಾನದಲ್ಲಿ ರಾಶಿ ಹಾಕಿ ಮಹಾ ಮಂಗಳಾರತಿ ನೇರವೇರಿಸಲಾಯಿತು.

ತಂಬಿಟ್ಟು ತಂದಿದ್ದ ಮಹಿಳೆಯರು ಮಾತ್ರವಲ್ಲದೆ, ಗ್ರಾಮದ ಪುರುಷರು, ಮಕ್ಕಳು ಹಾಗೂ ನೆಂಟರಿಷ್ಟರು ಸಾಲಿನಲ್ಲಿ ನಿಂತು ಮಾರಮ್ಮನ ದರ್ಶನ ಪಡೆದು ತಮ್ಮ ಇಷ್ಟಾರ್ಥ ಪ್ರಾಪ್ತಿಗಾಗಿ ಪ್ರಾರ್ಥಿಸಿದರು. ಮಾರಮ್ಮನವರ ದೇವಸ್ಥಾನ ಸೇರಿದಂತೆ ಗ್ರಾಮದ ಪ್ರಮುಖ ರಸ್ತೆಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು.

ಶ್ರೀ ಪ್ರಸನ್ನ ಆಂಜನೇಯಸ್ವಾಮಿ ದೇವಸ್ಥಾನ ಧರ್ಮದರ್ಶಿ ಸಮಿತಿ ನೇತೃತ್ವದಲ್ಲಿ ಪ್ರತಿ ವರ್ಷದಂತೆ ಎರಡು ದಿನಗಳ ಮಾರಮ್ಮನ ಹಬ್ಬ ನಡೆಯುತ್ತಿದೆ. 'ಮೈಸೂರು ಮಿತ್ರ' ನೊಂದಿಗೆ ಮಾತನಾಡಿದ ಸಮಿತಿ ಅಧ್ಯಕ್ಷ ಸಿ.ನಾಗರಾಜು, ಮಾ.16 ಮತ್ತು 17 ಸೇರಿದಂತೆ ಎರಡು ದಿನ ಹಬ್ಬ ನಡೆಯಲಿದ್ದು, ಈ ದಿನಗಳಲ್ಲಿ ಮಾಂಸಾಹಾರ ಇರುವುದಿಲ್ಲ. ಮಾ.18ರ ಮಂಗಳವಾರ ಅವರವರ ಮನೆಯಲ್ಲಿ ಗ್ರಾಮಸ್ಥರು ಮಾಂಸಾಹಾರ ಸೇರಿದಂತೆ ವಿವಿಧ ಭಕ್ಷ್ಯಗಳನ್ನು ಸಿದ್ಧಪಡಿಸಿ, ತಾವೂ ಸೇವಿಸಿ ನೆಂಟರಿಷ್ಟರಿಗೆ ಉಣಬಡಿಸಲಿದ್ದಾರೆ ಎಂದರು.

ಭಗೀರಥ ಸಿನಿಮಾ ನಾಯಕ ನಟರೂ ಆದ ಧರ್ಮದರ್ಶಿ ಸಮಿತಿ ಸದಸ್ಯ ಎಸ್.ಜಯಪ್ರಕಾಶ್ (ಜೆಪಿ) ಹಾಗೂ ಸದರಿ ಸಿನಿಮಾದ ನಿರ್ಮಾಪಕ ಚೇತನ್ ಎಸ್.ರಮೇಶ್ ಸೇರಿದಂತೆ ಇನ್ನಿತರ ಗಣ್ಯರು ಮಾರಮ್ಮನ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಧರ್ಮದರ್ಶಿ ಸಮಿತಿಯ ಉಪಾಧ್ಯಕ್ಷ ಪೈಚಿಕ್ಕಪುಟ್ಟಿ, ಕಾರ್ಯದರ್ಶಿ ಹೆಚ್.ರವಿಕುಮಾರ್, ಖಜಾಂಚಿ ಎನ್.ಶ್ರೀಕಂಠ ಸೇರಿದಂತೆ ಪದಾಧಿಕಾರಿಗಳು ಹಾಜರಿದ್ದರು.

ಇಂದು ಬಾಯಿ ಬೀಗ ಮೆರವಣಿಗೆ...

ನಾಳೆ ಮಾ.17ರ ಸೋಮವಾರ ಸಂಜೆ 4 ಗಂಟೆಗೆ ಶ್ರೀ ಮಹದೇಶ್ವರ ಸ್ವಾಮಿ ಕರಗ ಉತ್ಸವದೊಂದಿಗೆ ಬಾಯಿ ಬೀಗದ ಮೆರವಣಿಗೆ ಸಾಗಲಿದೆ. ಹರಕೆ ಹೊತ್ತ ಮಹಿಳೆಯರು, ಪುರುಷರು ಬಾಯಿ ಬೀಗ ಹಾಕಿಕೊಳ್ಳಲಿದ್ದಾರೆ. ಮಹದೇಶ್ವರಸ್ವಾಮಿ ಕಳಸ ಹೊತ್ತವರ ಹಿಂದೆ ಬಾಯಿ ಬೀಗ ಹಾಕಿಕೊಂಡ ಭಕ್ತ ಸಮೂಹ ಸಾಗಲಿದೆ ಮಾರಮ್ಮನವರ ದೇವಸ್ಥಾನದ ಮುಂಭಾಗದಿಂದ ಆರಂಭವಾಗುವ ಮೆರವಣಿಗೆಯು ವಾಲ್ಮೀಕಿ ರಸ್ತೆ ಸೇರಿದಂತೆ ವಿವಿಧ ರಸ್ತೆಗಳಲ್ಲಿ ಸಾಗಿ ಮಾರಮ್ಮನ ದೇವಸ್ಥಾನಕ್ಕೆ ಮರಳಿ ಮುಕ್ತಾಯಗೊಳ್ಳಲಿದೆ.

ಆರ್‌ಎಸ್‌ಎಸ್‌ಗಿಂತ ದೊಡ್ಡ ಸ್ವಯಂಸೇವ ಸಂಘ ವಿಶ್ವದಲ್ಲಿಲ್ಲ

ಪ್ರಧಾನಿ ಮೋದಿ ಗುಣಗಾನ



ನವದೆಹಲಿ, ಮಾ.16– ಆರ್‌ಎಸ್‌ಎಸ್‌ಗಿಂತ ದೊಡ್ಡ ಸ್ವಯಂಸೇವ ಸಂಘ ಜಗತ್ತಿನಲ್ಲಿ ಇಲ್ಲ. ಆರ್‌ಎಸ್‌ಎಸ್ ನಂತಹ ಗೌರವಾನ್ವಿತ ಸಂಸ್ಥೆಯಿಂದ ನಾನು ಜೀವನದ ಸಾರ ಮತ್ತು ಮೌಲ್ಯಗಳನ್ನು ಕಲಿತಿದ್ದೇನೆ. ನಾನು ನನ್ನ ಜೀವನದ ಉದ್ದೇಶ ಕಂಡುಕೊಂಡಿದ್ದೇನೆ ಎಂದು ಪ್ರಧಾನಿ ನರೇಂದ್ರ ಮೋದಿ ಆರ್‌ಎಸ್‌ಎಸ್ ಗುಣಗಾನ ಮಾಡಿದರು.

ಲೆಕ್ಸ್ ಫ್ರಿಡ್‌ಮನ್ ಪಾಡ್‌ಕಾಸ್ಟ್‌ನಲ್ಲಿ ಮಾತನಾಡಿದ ಅವರು, ಆರ್‌ಎಸ್‌ಎಸ್ ಜೊತೆಗಿನ ಸಂಬಂಧ ಹಾಗೂ ಹಳೆಯ ನೆನಪುಗಳನ್ನು ಹಂಚಿಕೊಂಡರು. ಬಾಲ್ಯದಲ್ಲಿ ಆರ್‌ಎಸ್‌ಎಸ್ ಕೂಟಗಳಲ್ಲಿ ಭಾಗವಹಿಸುವುದು ಸಂತೋಷವಾಗುತ್ತಿತ್ತು. ಆಗಲೂ ನನ್ನ ಮನಸ್ಸಿನಲ್ಲಿ ಯಾವಾಗಲೂ ಒಂದು ಗುರಿ ಇತ್ತು. ಅದರಂತೆ ದೇಶಕ್ಕೆ ಉಪಯೋಗವಾಗುವುದನ್ನು ಮಾಡಲು 'ಸಂಘ' ನನಗೆ ಕಲಿಸಿದೆ. ಈ ವರ್ಷ ಆರ್‌ಎಸ್‌ಎಸ್ 100 ವರ್ಷಗಳನ್ನು ಪೂರೈಸಿದೆ ಎಂಬುದು ಹೆಮ್ಮೆ ಎಂದು ಶ್ಲಾಘಿಸಿದರು. ಆರ್‌ಎಸ್‌ಎಸ್‌ಗಿಂತ ದೊಡ್ಡ 'ಸ್ವಯಂಸೇವ ಸಂಘ' ಜಗತ್ತಿನಲ್ಲಿ ಇಲ್ಲ. ಆರ್‌ಎಸ್‌ಎಸ್‌ನ ಕಾರ್ಯವನ್ನು ಅರ್ಥಮಾಡಿಕೊಳ್ಳುವುದು ಸುಲಭದ ಕೆಲಸವಲ್ಲ. ನಮ್ಮ ವೈದಿಕ ಸಂತರು ಮತ್ತು ಸ್ವಾಮಿ ವಿವೇಕಾನಂದರು ಏನನ್ನು ಕಲಿಸಿದರೋ ಅದೇ ರೀತಿ 'ಸಮಾಜ ಸೇವೆಯೇ ದೇವರ ಸೇವೆ' ಎಂದು ಸಂಘ ಕಲಿಸುತ್ತದೆ ಎಂದು ಹೇಳಿದರು.

ಊಟ ಖಾಲಿ ಎಂದಿದ್ದಕ್ಕೆ ಹೋಟೆಲ್ ಮಾಲೀಕ, ನೌಕರನ ಮೇಲೆ ಹಲ್ಲೆ

ಮೈಸೂರು, ಮಾ.16(ಎಸ್‌ಬಿಡಿ)– ಊಟ ಖಾಲಿಯಾಗಿದೆ ಎಂದಿದ್ದಕ್ಕೆ ಗುಂಪೊಂದು ಹೋಟೆಲ್ ಮಾಲೀಕ ಹಾಗೂ ನೌಕರನ ಮೇಲೆ ಹಲ್ಲೆ ನಡೆಸಿರುವುದಾಗಿ ಮೈಸೂರಿನ ಕೆ.ಆರ್.ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಎಂ.ಜಿ.ರಸ್ತೆ, ಜೆಎಸ್‌ಎಸ್ ಆಸ್ಪತ್ರೆ ಬಳಿ ನಾಟಿ ಸೊಗಡು ಹೋಟೆಲ್‌ನಲ್ಲಿ ಶುಕ್ರವಾರ ರಾತ್ರಿ ಈ ಘಟನೆ ನಡೆದಿದ್ದು, ಹೋಟೆಲ್ ಮಾಲೀಕ ಎನ್.ವಿಜಯ್‌ಕುಮಾರ್ ದೂರು ನೀಡಿದ್ದಾರೆ. ಮೂಲತಃ ಉಡುಪಿ ಜಿಲ್ಲೆಯವರಾದ ವಿಜಯ್‌ಕುಮಾರ್ ಹಾಗೂ ಪ್ರಭಾಕರ್ ಈ ಹೋಟೆಲ್ ನಡೆಸುತ್ತಿದ್ದು, ಶುಕ್ರವಾರ ರಾತ್ರಿ 10.45ರ ಸಮಯದಲ್ಲಿ ಬಾಗಿಲು ಮುಚ್ಚುವಾಗ ಧಾವಿಸಿದ ಗುಂಪೊಂದು ಊಟ ಕೇಳಿದೆ. ಆಗ ಸಪ್ಲೈಯರ್ ಸೂರ್ಯ, ಊಟ ಖಾಲಿಯಾಗಿದೆ ಹಾಗಾಗಿ ಬಾಗಿಲು ಮುಚ್ಚುತ್ತಿರುವುದಾಗಿ ಹೇಳಿದ್ದಾನೆ. ಇದರಿಂದ ಸಿಟ್ಟಿಗೆದ್ದ ಗುಂಪು, ಸೂರ್ಯ ಹಾಗೂ ಆತನ ರಕ್ಷಣೆಗೆ ಮುಂದಾದ ಮಾಲೀಕ ವಿಜಯ್‌ಕುಮಾರ್ ಮೇಲೆ ಹಲ್ಲೆ ನಡೆಸಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಜೂಜು ಅಡ್ಡೆ ಮೇಲೆ ಪೊಲೀಸರ ದಾಳಿ; 8 ದ್ವಿಚಕ್ರ ವಾಹನ ವಶ

ಮೈಸೂರು, ಮಾ.16(ಎಸ್‌ಬಿಡಿ)– ಮೈಸೂರಿನ ಸೆನ್ ಹಾಗೂ ವರುಣ ಠಾಣೆ ಪೊಲೀಸರು ಜೂಜು ಅಡ್ಡೆ ಮೇಲೆ ದಾಳಿ ನಡೆಸಿ, 8 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ. ಮೈಸೂರು ತಾಲೂಕು ಮೆಲ್ಲಹಳ್ಳಿ ಗ್ರಾಮದ ಎಟಿಎಂಇ ಕಾಲೇಜು ಎದುರಿನ ಆನಗಲ್ ಗುಂಡಿ ಬಳಿ ಬೈಕ್‌ಗಳನ್ನು ಸುತ್ತಲೂ ನಿಲ್ಲಿಸಿ ಕೊಂಡು ಏಳೆಂಟು ಮಂದಿ ಜೂಜಾಟದಲ್ಲಿ ತೊಡಗಿದ್ದರ ಬಗ್ಗೆ ಖಚಿತ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಸೆನ್ ಪೊಲೀಸ್ ಠಾಣೆ ಡಿವೈಎಸ್ಪಿ ಎನ್.ರಘು ನೇತೃತ್ವದಲ್ಲಿ ದಾಳಿ ನಡೆಸಲಾಗಿದೆ.

ಕ್ರೈಂ ಬಾಕ್ಸ್

ಈ ವೇಳೆ ಜೂಜಾಡುತ್ತಿದ್ದವರು ಪರಾರಿಯಾಗಿದ್ದು, ಸ್ಥಳದಲ್ಲಿದ್ದ 8 ದ್ವಿಚಕ್ರ ವಾಹನಗಳು ಇನ್ನಿತರ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಕಾರ್ಯಾಚರಣೆಯಲ್ಲಿ ವರುಣ ಠಾಣೆ ಸಬ್‌ಇನ್ಸ್‌ಪೆಕ್ಟರ್ ಸದಾಶಿವ ತಿಪ್ಪರೆಡ್ಡಿ, ಸಿಬ್ಬಂದಿ ಲಿಂಗರಾಜು, ಸೆನ್ ಠಾಣೆಯ ಸಿಬ್ಬಂದಿ ಮೋಹನ್, ಮಂಜುನಾಥ್, ಮಹೇಶ್‌ಕುಮಾರ್, ಮಹೇಶ್, ಆದರ್ಶ ಹಾಗೂ ಅಭಿಷೇಕ್ ಪಾಲ್ಗೊಂಡಿದ್ದರು. ಈ ಸಂಬಂಧ ವರುಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮಹಿಳೆಯ ರೋಲ್ಡ್‌ಗೋಲ್ಡ್ ಸರ ಅಪಹರಣ!

ಮೈಸೂರು, ಮಾ.16(ಎಸ್‌ಬಿಡಿ)– ವಾಯುವಿಹಾರ ಮುಗಿಸಿ ಮನೆಗೆ ತೆರಳುತ್ತಿದ್ದ ಮಹಿಳೆಯ ಮಾಂಗಲ್ಯ ಸರ ಕಿತ್ತುಕೊಂಡು ಆಟೋದಲ್ಲಿ ಪರಾರಿಯಾಗಿರುವ ಘಟನೆ ಮೈಸೂರಿನ ಕುವೆಂಪುನಗರದಲ್ಲಿ ನಡೆದಿದೆ. ಆದರೆ ಆತ ಕಿತ್ತುಕೊಂಡು ಹೋಗಿರುವುದು ರೋಲ್ಡ್‌ಗೋಲ್ಡ್ ಸರವಾಗಿದ್ದು, ಚಿನ್ನದ ತಾಳಿಯನ್ನು ಮಹಿಳೆ ಬಿಗಿಯಾಗಿ ಹಿಡಿದುಕೊಂಡು ರಕ್ಷಿಸಿಕೊಂಡಿದ್ದಾರೆ.

ಕುವೆಂಪುನಗರ 2ನೇ ಹಂತ, ಎಂ ಬ್ಲಾಕ್ ನಿವಾಸಿ ಲಕ್ಷ್ಮೀ(57) ಅವರು ಶುಕ್ರವಾರ ರಾತ್ರಿ 8.30ರ ವೇಳೆಯಲ್ಲಿ ಜ್ಯೋತಿ ಶಾಲೆ ಬಳಿ ವಾಯುವಿಹಾರ ತೆರಳಿ, ಮನೆಗೆ ವಾಪಸ್ಸಾಗುವಾಗ ಆಟೋ ಬಳಿ ನಿಂತಿದ್ದ ವ್ಯಕ್ತಿಯೊಬ್ಬ 'ಬನ್ನಿ ನಿಮ್ಮ ಮನೆವರೆಗೂ ಡ್ರಾಪ್ ಮಾಡುತ್ತೇನೆ' ಎಂದಿದ್ದಾನೆ. ಆಗ ಲಕ್ಷ್ಮೀ ಅವರು 'ಬೇಡ ನಮ್ಮ ಮನೆ ಹತ್ತಿರದಲ್ಲೇ ಇದೆ, ನಾನು ನಡೆದುಕೊಂಡೇ ಹೋಗುತ್ತೇನೆ' ಎಂದಿದ್ದಾರೆ.

ಆಗ ಆಟೋದಲ್ಲಿ ಕುಳಿತು ಸ್ಟಾರ್ಟ್ ಮಾಡಿದ ಖದೀಮ ಮತ್ತೆ ಕೆಳಗಿಳಿದು ಏಕಾಏಕಿ ಲಕ್ಷ್ಮೀ ಅವರ ಮಾಂಗಲ್ಯ ಸರ ಕಿತ್ತಿಕೊಳ್ಳಲು ಯತ್ನಿಸಿದ್ದಾನೆ. ಆ ವೇಳೆ ಲಕ್ಷ್ಮೀ ಅವರು ತಾಳಿಯನ್ನು ಬಿಗಿಯಾಗಿ ಹಿಡಿದುಕೊಂಡು ಕಿರುಚಿಕೊಂಡಿದ್ದಾರೆ. ಆದರೂ ಸರ ಕಿತ್ತುಕೊಂಡು ಆಟೋದಲ್ಲಿ ಪರಾರಿಯಾಗಿದ್ದಾನೆ. ಲಕ್ಷ್ಮೀ ಅವರು ಸಮಯಪ್ರಜ್ಞೆಯಿಂದ ಚಿನ್ನದ ತಾಳಿಯನ್ನು ರಕ್ಷಿಸಿಕೊಂಡಿದ್ದಾರೆ. ಈ ಸಂಬಂಧ ಲಕ್ಷ್ಮೀ ಅವರು ನೀಡಿದ ದೂರಿನನ್ವಯ ಕುವೆಂಪುನಗರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಖದೀಮನ ಪತ್ತೆಗೆ ಕ್ರಮ ಕೈಗೊಂಡಿದ್ದಾರೆ.

ಮೇಕೆ ಕದಿಯಲು ಬಂದ ಮೂವರನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ ಗ್ರಾಮಸ್ಥರು

ಮೈಸೂರು, ಮಾ.16(ಎಸ್‌ಬಿಡಿ)– ನೀರು ಕೇಳುವ ನೆಪದಲ್ಲಿ ಮನೆ ಮುಂದೆ ಮೇಯುತ್ತಿದ್ದ ಮೇಕೆಯನ್ನು ಕಾರಿನಲ್ಲಿ ಕದ್ದೊಯ್ಯುತ್ತಿದ್ದರೆಂದು ಆರೋಪಿಸಿ ಮೂವರನ್ನು ಗ್ರಾಮಸ್ಥರೇ ಹಿಡಿದು, ಪೊಲೀಸರಿಗೊಪ್ಪಿಸಿರುವ ಘಟನೆ ವರುಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಮೈಸೂರು ತಾಲೂಕು, ಮೆಲ್ಲಹಳ್ಳಿ ಗ್ರಾಮದ ರತ್ನಮ್ಮ ಎಂಬುವವರು ಶನಿವಾರ ಸಂಜೆ ತಮ್ಮ ಮನೆಯ ಮುಂದೆ ಮೇಕೆಗಳನ್ನು ಮೇಯಿಸುತ್ತಿದ್ದಾಗ ಕಾರು ಬಂದು ನಿಂತಿದೆ. ಅದರಲ್ಲಿದ್ದ ವ್ಯಕ್ತಿಯೊಬ್ಬ ರತ್ನಮ್ಮ ಅವರ ಬಳಿ ಬಂದು ಕುಡಿಯಲು ನೀರು ಕೇಳಿದ್ದಾನೆ. ಗೌರಮ್ಮ ಮನೆಯೊಳಗಿಂದ ನೀರು ತರುವಷ್ಟರಲ್ಲಿ ಕಾರಿನೊಳಗೆ ಮೇಕೆಯೊಂದನ್ನು ತುಂಬುವುದನ್ನು ಗಮನಿಸಿ, ಕೂಗಿಕೊಂಡಿದ್ದಾರೆ. ಆಗ ಗ್ರಾಮಸ್ಥರು ಕಾರನ್ನು ತಡೆದು, ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕಾಗಮಿಸಿದ ಪೊಲೀಸರು, ಕಾರು ಹಾಗೂ ಅದರಲ್ಲಿದ್ದ ಮೂವರನ್ನೂ ವಶಕ್ಕೆ ಪಡೆದಿದ್ದಾರೆ. ರತ್ನಮ್ಮ ನೀಡಿದ ದೂರಿನನ್ವಯ ಪ್ರಕರಣ ದಾಖಲಿಸಿಕೊಂಡು, ಮುಂದಿನ ಕ್ರಮ ಕೈಗೊಂಡಿದ್ದಾರೆ. ಮೇಕೆ ಕದಿಯಲು ಯತ್ನಿಸಿದ ಮೂವರೂ ಮೈಸೂರಿನವರೆಂದು ತಿಳಿದು ಬಂದಿದೆ.

ಬೈಕ್ ಡಿಕ್ಕಿ; ಮೊಪೆಡ್ ಸವಾರ ಸಾವು

ಮೈಸೂರು, ಮಾ.16(ಎಸ್‌ಬಿಡಿ)– ಬೈಕ್ ಡಿಕ್ಕಿ ಹೊಡೆದ ಪರಿಣಾಮ ಮೊಪೆಡ್ ಸವಾರ ಸಾವನ್ನಪ್ಪಿ, ಇಬ್ಬರು ಗಾಯಗೊಂಡಿರುವ ಘಟನೆ ಇಲವಾಲ ಹೋಬಳಿ ಗುಂಗ್ರಾಲ್‌ಛತ್ರ ಗ್ರಾಮದಲ್ಲಿ ನಡೆದಿದೆ. ಗ್ರಾಮದ ನಿವಾಸಿ, ಮೊಪೆಡ್ ಸವಾರ ಪುಟ್ಟನಾಯಕ(60) ಅಪಘಾತದಲ್ಲಿ ಮೃತಪಟ್ಟಿದ್ದು, ರಟ್ಟನಹಳ್ಳಿ ಗ್ರಾಮದ ಸುಜಿತ್ ಹಾಗೂ ಪ್ರೀತಂ ಗಾಯಗೊಂಡಿದ್ದಾರೆ. ಪುಟ್ಟನಾಯಕ ಅವರು ಶುಕ್ರವಾರ ಮಧ್ಯಾಹ್ನ ತಮ್ಮ ಎಕ್ಸೆಲ್ ಸೂಪರ್ ಮೊಪೆಡ್(ಕೆಎ–09, ಹೆಚ್‌ವಿ–6778)ಗೆ ಪೆಟ್ರೋಲ್ ಹಾಕಿಸಿಕೊಂಡು ಬರಲು ಹೋಗಿದ್ದಾಗ ಹೊಸಕೋಟೆ ಕಡೆಯಿಂದ ಇಲವಾಲದ ಕಡೆಗೆ ಬರುತ್ತಿದ್ದ ಫ್ಯಾಷನ್ ಪ್ರೋ ಬೈಕ್(ಕೆಎ–09, ಹೆಚ್.ಪಿ.6589) ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ ಗಾಯಗೊಂಡ ಮೂವರನ್ನೂ ಆಂಬುಲೆನ್ಸ್‌ನಲ್ಲಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ಕರೆದೊಯ್ಯುವಷ್ಟರಲ್ಲಿ ಪುಟ್ಟನಾಯಕ ಮೃತಪಟ್ಟಿದ್ದಾರೆ. ಈ ಸಂಬಂಧ ಇಲವಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರಿಂದ ಶಾಸ್ತ್ರೀಯ ಕನ್ನಡ ಅಧ್ಯಯನ ಕೇಂದ್ರ ಸ್ಥಳಾಂತರಿಸದಂತೆ ಸಚಿವರಿಗೆ ಮನವಿ

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭರವಸೆ ನೀಡಿದ್ದಾಗಿ ಸ.ರ.ಸುದರ್ಶನ್ ಹೇಳಿಕೆ

ಮೈಸೂರು, ಮಾ.16(ಎಸ್‌ಬಿಡಿ)– ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರವನ್ನು ಮೈಸೂರಿನಿಂದ ಸ್ಥಳಾಂತರಿಸದಂತೆ ಸಂಬಂಧಪಟ್ಟ ಸಚಿವರಿಗೆ ಮನವಿ ಮಾಡುವುದಾಗಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭರವಸೆ ನೀಡಿದ್ದಾರೆ ಎಂದು ಕನ್ನಡ ಕ್ರಿಯಾ ಸಮಿತಿಯ ಪ್ರಧಾನ ಕಾರ್ಯದರ್ಶಿ ಸ.ರ.ಸುದರ್ಶನ್ ಹೇಳಿದ್ದಾರೆ.

ಖಾಸಗಿ ಕಾರ್ಯಕ್ರಮ ನಿಮಿತ್ತ ಶನಿವಾರ ಮೈಸೂರಿಗೆ ಆಗಮಿಸಿದ್ದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಕನ್ನಡ ಕ್ರಿಯಾ ಸಮಿತಿ ಹಾಗೂ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ ಉಳಿಸಿ ಹೋರಾಟ ಸಮಿತಿ ನಿಯೋಗವು ಭೇಟಿ ಮಾಡಿ, ಮನವಿ ಸಲ್ಲಿಸಿದ್ದಾಗಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಿರಿಯರಾದ ಪ್ರೊ.ನಂಜರಾಜ ಅರಸು ಅವರ ನೇತೃತ್ವದಲ್ಲಿ ಮನವಿ ನೀಡಿ, ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಪೂರಕವಾದ ವಾತಾವರಣವಿದೆ. ಅಲ್ಲದೆ ಪ್ರಸಾರಂಗ, ಪ್ರಾಚ್ಯವಸ್ತು ವಿದ್ಯಾಸಂಸ್ಥೆಯ ಹಸ್ತಪ್ರತಿ ಭಂಡಾರ, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ, ಅರಮನೆಯ ಸರಸ್ವತಿ ಭಂಡಾರ ಸೇರಿದಂತೆ ಅಗತ್ಯ ಸಂಪನ್ಮೂಲ ಸಂಸ್ಥೆಗಳಿವೆ. ಮೈಸೂರಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿರದ ಕಾರಣ ಸಂಸ್ಥೆಯ ಕಾರ್ಯ ನಿರ್ವಹಣೆಗೂ ಅನುಕೂಲಕರವಾಗಿದೆ. ಮುಖ್ಯವಾಗಿ ಕೇಂದ್ರಕ್ಕಾಗಿ ಈಗಾಗಲೇ ಸರ್ಕಾರದಿಂದ 4 ಎಕರೆ 2 ಗುಂಟೆ ಜಾಗವೂ ಮಂಜೂರಾಗಿದೆ. ಆದ್ದರಿಂದ ಯಾವುದೇ ಕಾರಣಕ್ಕೂ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರವನ್ನು ಮೈಸೂರಿನಿಂದ ಸ್ಥಳಾಂತರಿಸದಂತೆ ಒತ್ತಾಯಿಸಲಾಯಿತು.

ಇದಕ್ಕೆ ಪೂರಕವಾಗಿ ಸ್ಪಂದಿಸಿದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಮೈಸೂರಿನಲ್ಲೇ ಈ ಸಂಸ್ಥೆಯನ್ನು ಉಳಿಸುವ ನಿಟ್ಟಿನಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರಿಗೆ ಪತ್ರ ಬರೆದು, ಮಾತನಾಡುವುದಾಗಿ ಭರವಸೆ ನೀಡಿದರು. ಈ ವೇಳೆ ಸಾಮಾಜಿಕ ಚಳವಳಿಗಾರ ಅರವಿಂದ್ ಶರ್ಮ, ಕರ್ನಾಟಕ ಕನ್ನಡ ವೇದಿಕೆ ಅಧ್ಯಕ್ಷ ಸುರೇಶ್ ಬಾಬು ಮತ್ತಿತರರಿದ್ದರು ಎಂದು ಸರ.ಸುದರ್ಶನ್ ತಿಳಿಸಿದ್ದಾರೆ.

ಸ್ವಚ್ಛತೆಯಲ್ಲಿ ಮೈಸೂರು ಪ್ರಥಮ ಸ್ಥಾನಕ್ಕೆ ಬರಲು ಕೈಜೋಡಿಸಿ

ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮನವಿ



ಕ್ಲೀನ್ ಚಾಮುಂಡಿ ಹಿಲ್ ಡ್ರೈವ್ 2025ರಲ್ಲಿ ಸಂಸದ ಯದುವೀರ್ ಭಾಗವಹಿಸಿದ್ದರು

ಮೈಸೂರು, ಮಾ.16– ಸ್ವಚ್ಛತೆಯಲ್ಲಿ ಕೆಳಗೆ ಇಳಿದಿರುವ ಮೈಸೂರನ್ನು ಮತ್ತೆ ಪ್ರಥಮ ಸ್ಥಾನ ಪಡೆಯುವಂತೆ ಮಾಡಲು ಎಲ್ಲರೂ ಕೈ ಜೋಡಿಸಬೇಕಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮನವಿ ಮಾಡಿದರು.

ಭಾನುವಾರ ಚಾಮುಂಡಿಬೆಟ್ಟದಲ್ಲಿ ಗಂಧದಗುಡಿ ಫೌಂಡೇಷನ್ ವತಿಯಿಂದ ಆಯೋಜಿಸಿದ್ದ ಕ್ಲೀನ್ ಚಾಮುಂಡಿ ಹಿಲ್ ಡ್ರೈವ್ 2025 ಚಾಮುಂಡಿಬೆಟ್ಟವನ್ನು ಸ್ವಚ್ಛ ಬೆಟ್ಟವನ್ನಾಗಿ ಮಾಡುವ ಕಾರ್ಯ ಕ್ರಮಕ್ಕೆ ಕಸ ಹೆಕ್ಕುವ ಮೂಲಕ ಚಾಲನೆ ನೀಡಿ, ಅವರು ಮಾತನಾಡಿದರು.

2015 ಮತ್ತು 2016ರಲ್ಲಿ ದೇಶದಲ್ಲಿಯೇ ಸ್ವಚ್ಛತೆಯಲ್ಲಿ ಮೈಸೂರು ಪ್ರಥಮ ಸ್ಥಾನ ಪಡೆದಿತ್ತು. ಆದರೆ, ಈಗ 25, 26ನೇ ಸ್ಥಾನಕ್ಕೆ ಇಳಿದಿದೆ. ಬೇರೆ ನಗರಗಳು ಈ ನಿಟ್ಟಿನಲ್ಲಿ ಇನ್ನೂ ಹೆಚ್ಚಿನ ಸುಧಾರಣೆಗಳನ್ನು ತಂದಿದ್ದಾರೆ. ಹೀಗಾಗಿ ಅವರು ಸ್ವಚ್ಛತೆಯಲ್ಲಿ ಪ್ರಥಮ ಸ್ಥಾನಕ್ಕೆ ಬಂದಿದ್ದಾರೆ. ನಾವು ಕೆಲವು ಬದಲಾವಣೆಯ ಮೂಲಕ ಸ್ವಚ್ಛನಗರಕ್ಕೆ ಸೇವೆ ಸಲ್ಲಿಸಬಹುದು ಎಂದು ಸಲಹೆ ನೀಡಿದರು.

ರಸ್ತೆ ಬದಿಗಳಲ್ಲಿ, ಮೈದಾನ, ಎಲ್ಲೆಂದರಲ್ಲಿ ಪ್ಲಾಸ್ಟಿಕ್ ಕಸವನ್ನು ಹಾಕಬಾರದು. ನಗರ ಪಾಲಿಕೆಯ ಸೂಚನೆಯಂತೆ ನಾವು ಕಸ ಹಾಕಬೇಕು. ವಾಹನಗಳಲ್ಲಿ ಹೋಗುವಾಗ ಅಥವಾ ಬರುವಾಗ, ತಿಂಡಿ ತಿನಿಸುಗಳನ್ನು ತಿಂದು, ಪ್ಲಾಸ್ಟಿಕ್‌ಗಳನ್ನು ರಸ್ತೆಯ ಮಧ್ಯದಲ್ಲಿಯೇ ಎಸೆಯಬಾರದು. ಮನೆಗೆ ತೆಗೆದುಕೊಂಡು ಬಂದು ಮನೆಯ ಕಸದೊಂದಿಗೆ ಸೇರಿಸಿ, ಬೇರೆ ಕಡೆ ಇರುವ ಕಸದೊಂದಿಗೆ ಸೇರಿಸಿ ಸ್ವಚ್ಛತಾ ಸಿಬ್ಬಂದಿಗೆ ಕೊಡಬೇಕು ಎಂದು ಹೇಳಿದರು.

ಕೆಲವು ತ್ಯಾಜ್ಯದ ಸ್ಥಳವನ್ನು ಸ್ಥಳಾಂತರ ಮಾಡಲು ಹಾಗೂ ಎಕ್ಸಲ್‌ಪ್ಲಾಂಟ್ ತ್ಯಾಜ್ಯ ತೆಗೆಸಲು ಟೆಂಡರ್ ಕೆಲಸ ಕೂಡ ನಡೆಯುತ್ತಿದೆ. ತ್ಯಾಜ್ಯ ಕಡಿಮೆ ಮಾಡಿ, ಸ್ವಚ್ಛತೆ ಕಾಪಾಡಿದರೆ, ಮೈಸೂರು ಸ್ವಚ್ಛತೆಯಲ್ಲಿ ಉನ್ನತಮಟ್ಟಕ್ಕೆ ಹೋಗಬಹುದು. ಚಾಮುಂಡಿ ಬೆಟ್ಟ ಸ್ವಚ್ಛ ಮಾಡಿದಂತೆ, ಮೈಸೂರನ್ನು ಚಾಮುಂಡಿಬೆಟ್ಟದ ಆವರಣದಂತೆ ಎಂದು ತಿಳಿದು ಸ್ವಚ್ಛತೆ ಕಾಪಾಡಬೇಕು ಎಂದು ತಿಳಿಸಿದರು.

ಗಂಧದಗುಡಿ ಫೌಂಡೇಷನ್‌ನ ಗೌರವಾಧ್ಯಕ್ಷ ನಾಗೇಂದ್ರ ಪ್ರಸಾದ್, ರಾಜ್ಯಾಧ್ಯಕ್ಷ ಆರ್ಯನ್ ಗಂಧದಗುಡಿ, ರಾಜ್ಯ ಉಪಾಧ್ಯಕ್ಷ ಮನೋಹರ ಗೌಡ, ಬೆಂಗಳೂರು ನಗರ ಅಧ್ಯಕ್ಷ ಸಿದ್ದೇಶ್ವರ ಪ್ರಸಾದ್, ಯಂಗ್ ಆರ್ಮಿ ಫೌಂಡೇಷನ್‌ನ ಅಧ್ಯಕ್ಷ ಪೃಥ್ವಿರಾಜ್, ನೆವರ್ ಫೇಡ್ ಅವೇ ಎಂ. ಡಿ ಮಧುಶಂಕರ್, ದುಶ್ಯಂತ್, ಪ್ರದೀಪ್, ಅಭಿನಂದನ್ ಅರಸ್, ಮೇಘನರಾಜ್, ವೇಣುಗೋಪಾಲ್, ಮಹದೇವಶೆಟ್ಟಿ ಮತ್ತಿತರರು ಇದ್ದರು.

ರಾಜ್ಯದಲ್ಲಿ ಮೂರು ದಿನ ಬಿಸಿ ಗಾಳಿ ಸಾಧ್ಯತೆ

ಬೆಂಗಳೂರು,ಮಾ.16–ರಾಜ್ಯದ ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ಇದೇ 18ರಿಂದ 20ರವರೆಗೆ ಬಿಸಿ ಗಾಳಿ ಬೀಸುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬಾಗಲಕೋಟೆ, ಬೀದರ್, ಕಲಬುರಗಿ, ರಾಯಚೂರು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಮೂರು ದಿನಗಳು ಬಿಸಿ ಗಾಳಿಯ ಪರಿಸ್ಥಿತಿ ಹೆಚ್ಚಾಗಿ ಇರುವ ಸಂಭವವಿದೆ. ಈ ಜಿಲ್ಲೆಗಳಿಗೆ 'ಯೆಲ್ಲೊ ಅಲರ್ಟ್' ನೀಡಲಾಗಿದೆ. ಆದ್ದರಿಂದ ಜನರು ಮುನ್ನೆಚ್ಚರಿಕೆ ವಹಿಸಬೇಕು ಎಂದು ಇಲಾಖೆ ತಿಳಿಸಿದೆ.

ಉತ್ತರ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ಗರಿಷ್ಠ ಉಷ್ಣಾಂಶವು ಸಾಮಾನ್ಯಕ್ಕಿಂತ 3 ಡಿಗ್ರಿ ಸೆಲ್ಸಿಯಸ್‌ವರೆಗೂ ಹೆಚ್ಚಳವಾಗಿದೆ. ಮುಂದಿನ ಐದು ದಿನಗಳಲ್ಲಿ ಉತ್ತರ ಒಳನಾಡಿನಲ್ಲಿ ಗರಿಷ್ಠ ಉಷ್ಣಾಂಶವು 2ರಿಂದ 4 ಡಿಗ್ರಿ ಸೆಲ್ಸಿಯಸ್, ದಕ್ಷಿಣ ಒಳನಾಡಿನಲ್ಲಿ 2ರಿಂದ 3 ಡಿಗ್ರಿ ಸೆಲ್ಸಿಯಸ್ ಹೆಚ್ಚಳವಾಗುವ ಸಂಭವವಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಕನ್ನಡ, ಮೈಸೂರು, ಹಾಸನ ಮತ್ತು ಕೊಡಗು ಜಿಲ್ಲೆಯ ಒಂದು ಅಥವಾ ಎರಡು ಸ್ಥಳಗಳಲ್ಲಿ ಸೋಮವಾರ ಗುಡುಗು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ತಿಳಿಸಿದೆ.

ಅಯೋಧ್ಯೆ ಪ್ರವಾಸದಲ್ಲಿದ್ದ ಮೈಸೂರು ಮಹಿಳೆ ಹೃದಯಾಘಾತದಿಂದ ಸಾವು



ಮೈಸೂರು,ಮಾ.16(ಪಿಎಂ)– ಮೈಸೂರಿನಿಂದ ಅಯೋಧ್ಯೆ ಸೇರಿದಂತೆ ಉತ್ತರ ಭಾರತದ ವಿವಿಧ ಭಾಗಗಳಿಗೆ ಪ್ರವಾಸಕ್ಕೆ ತೆರಳಿದ್ದ ಮಹಿಳೆಯೊಬ್ಬರು ಅಲ್ಲಿನ ಲಕ್ನೋದಲ್ಲಿ ಹೃದಯಾಘಾತದಿಂದ ಮೃತಪಟ್ಟಿದ್ದಾರೆ.

ಮೈಸೂರಿನ ಕುವೆಂಪುನಗರದ ಆರ್‌ಎಂಪಿ ಕ್ವಾರ್ಟರ್ಸ್ ನಿವಾಸಿ ವಿನುತಾ ಸುಧೀರ್ ಆಚಾರ್ಯ (49) ಮೃತಪಟ್ಟವರಾಗಿದ್ದು, ಇವರು ಮೈಸೂರಿನಿಂದ ಮಾ.12ರಂದು ಹೆಚ್.ಡಿ.ಕೋಟೆ ನಿವಾಸಿ ತಿರುಮಲಾಚಾರ್ ಕಡಂಬಿ ಅವರ ನೇತೃತ್ವದಲ್ಲಿ ಸುಮಾರು 70 ಜನರ ತಂಡದೊಂದಿಗೆ ಪ್ರವಾಸಕ್ಕೆ ತೆರಳಿದ್ದರು.

ಪ್ರವಾಸದ ವೇಳೆ ಇವರ ಆರೋಗ್ಯದಲ್ಲಿ ಸಮಸ್ಯೆ ಕಂಡು ಬಂದಿದ್ದು, ಸ್ಥಳೀಯ ಆಸ್ಪತ್ರೆಯಲ್ಲಿ ಅವರಿಗೆ ಚಿಕಿತ್ಸೆ ಕೊಡಿಸಲಾಗಿತ್ತು. ನಂತರ ಪ್ರವಾಸವನ್ನು ಮುಂದುವರೆಸಿದ್ದರು. ಆದರೆ ಈ ನಡುವೆ ವಸತಿ ಗೃಹದಲ್ಲಿ ಉಳಿದುಕೊಂಡಿದ್ದ ಸಂದರ್ಭದಲ್ಲಿ ತೀವ್ರ ಆಯಾಸಗೊಂಡಿದ್ದರು. ಈ ಹಿನ್ನೆಲೆಯಲ್ಲಿ ಅವರನ್ನು ಆಸ್ಪತ್ರೆಗೆ ಕರೆದೊಯ್ಯುವಾಗ ಮಾರ್ಗ ಮಧ್ಯೆದಲ್ಲಿ ಹೃದಯಾಘಾತದಿಂದ ಕೊನೆಯುಸಿರೆಳೆದರು. ಮೃತರು ಪತಿ, ಪುತ್ರ ಹಾಗೂ ಅಪಾರ ಬಂಧುರ್ವಗವನ್ನು ಅಗಲಿದ್ದಾರೆ.

ಮೃತ ಮಹಿಳೆಯ ಪತಿಯನ್ನು ಮೈಸೂರಿನಿಂದ ಕರೆಸಿಕೊಂಡು ಅಲ್ಲಿಂದ ಕಾರ್ಗೋ ವಿಮಾನದ ಮೂಲಕ ವಿನುತಾ ಅವರ ಮೃತದೇಹವನ್ನು ಭಾನುವಾರ ಮೈಸೂರಿಗೆ ತರಲಾಯಿತು. ಬಳಿಕ ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು. ವಿನುತಾ ಅವರು ಮೂಲತಃ ಹೆಚ್‌ಡಿ ಕೋಟೆ ಪಟ್ಟಣದವರು. ಇಲ್ಲಿನ ದಿವಂಗತ ಗೀತಾ ಮತ್ತು ದಿವಂಗತ ರಾಮಕೃಷ್ಣ ಅವರ ಪುತ್ರಿಯಾದ ವಿನುತಾ, ಪತಿ ಸುಧೀರ್ ಆಚಾರ್ಯ ಹಾಗೂ ಪುತ್ರನೊಂದಿಗೆ ಮೈಸೂರಿನಲ್ಲಿ ನೆಲೆಸಿದ್ದರು.

ಮೈಸೂರಲ್ಲಿ ಕರ್ನಾಟಕ ಗೃಹ ಮಂಡಳಿಯಿಂದ

ಹೆರಿಟೇಜ್ ಹೈಟ್ ಹೆಸರಲ್ಲಿ ಗುಂಪು ಮನೆ ನಿರ್ಮಿಸಲು ಸಿದ್ಧತೆ



ಮೈಸೂರು, ಮಾ.16(ಎಸ್‌ಪಿಎನ್)– ಮೈಸೂರು ಹೊರವಲಯದಲ್ಲಿ ಕರ್ನಾಟಕ ಗೃಹ ಮಂಡಳಿಯು 99 ಕೋಟಿ ರೂ. ವೆಚ್ಚದಲ್ಲಿ ಜಿಪ್ಲಸ್ 7 ಮಾದರಿಯಲ್ಲಿ ಬರೋಬ್ಬರಿ 192 ಫ್ಲ್ಯಾಟ್‌ಗಳನ್ನು 'ಹೆರಿಟೇಜ್ ಹೈಟ್ಸ್' ಹೆಸರಿನಲ್ಲಿ ನಿರ್ಮಿಸಲು ಮುಂದಾಗಿದೆ.

ಮೈಸೂರು ಹೊರವಲಯದ ಕೆಂಚಲಗೂಡು ಗ್ರಾಮದಲ್ಲಿ ಕೆಎಚ್‌ಬಿಯು ಗುಂಪು ವಸತಿ ಯೋಜನೆಯಡಿ ಇದೇ ಮೊದಲ ಬಾರಿಗೆ ಮನೆಗಳನ್ನು ನಿರ್ಮಿಸಲು ಮುಂದಾಗಿದೆ. ಈ ಮೊದಲು ಗುಂಪು ಮನೆಗಳನ್ನು ನಿರ್ಮಿಸಲು ಮುಂದಾಗಿದ್ದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಯೋಜನೆ ನನೆಗುದಿಗೆ ಬಿದ್ದಿರುವ ಹಿನ್ನೆಲೆಯಲ್ಲಿ ಇದೀಗ ಆ ಯೋಜನೆಯನ್ನು ಕೆಎಚ್‌ಬಿ ಕೈಗೆತ್ತಿಕೊಂಡಿದೆ. ಇಂತಹ ಮನೆಗಳಿಗೆ ಬೇಡಿಕೆ ಇದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ಸಮೀಕ್ಷೆ ನಡೆಸಲು ಕೆಎಚ್‌ಬಿ ಮುಂದಾಗಿದೆ.

ಮೈಸೂರು–ಮಾನಂದವಾಡಿ ರಸ್ತೆ ಶ್ರೀರಾಂಪುರ ರಿಂಗ್‌ರೋಡ್‌ನಿಂದ 4.5 ಕಿ.ಮೀ. ದೂರದಲ್ಲಿರುವ ಕೆಂಚಲಗೂಡು ಗ್ರಾಮದಲ್ಲಿನ ಕೆಎಚ್‌ಬಿ ವಸತಿ ಬಡಾವಣೆಯಲ್ಲಿ 'ಹೆರಿಟೇಜ್ ಹೈಟ್ಸ್' ಹೆಸರಿನಲ್ಲಿ ವಸತಿ ಸಮುಚ್ಚಯ ನಿರ್ಮಿಸಲು ಯೋಜನೆ ರೂಪಿಸಿದೆ.

ಸೌಲಭ್ಯಗಳು: ಈ ವಸತಿ ಸಮುಚ್ಚಯದಲ್ಲಿ ಕ್ಲಬ್ ಹೌಸ್, ಪಾರ್ಟಿ ಹಾಲ್, ಜಿಮ್, ಲೈಬ್ರರಿ, ಕ್ರೀಡಾಂಗಣ, ಪಾರ್ಕಿಂಗ್, ಸೋಲಾರ್, ಈಜುಕೊಳ, ಮಕ್ಕಳ ಆಟದ ಮೈದಾನ, ಉದ್ಯಾನ, ಕುಡಿಯುವ ನೀರು, ಮಳೆ ನೀರು ಕೊಯ್ಲು ಭದ್ರತಾ ವ್ಯವಸ್ಥೆ ಇರಲಿದೆ.

> ಮೈಸೂರಿನಲ್ಲಿ ಅಪಾರ್ಟ್‌ಮೆಂಟ್ ಸಂಸ್ಕೃತಿ ಹೆಚ್ಚಾದ ಹಿನ್ನೆಲೆಯಲ್ಲಿ ಜನತೆ ಕೂಡ ಫ್ಲ್ಯಾಟ್ ವಾಸಕ್ಕೆ ಹೊಂದಿಕೊಳ್ಳುತ್ತಿದ್ದಾರೆ. 8 ವರ್ಷದ ಬಳಿಕ ವಸತಿ ಸಮುಚ್ಚಯ ಯೋಜನೆಗೆ ಜೀವ ಬಂದಿದ್ದು, 99 ಕೋಟಿ ರೂ. ವೆಚ್ಚದಲ್ಲಿ ಹೆರಿಟೇಜ್ ಹೈಟ್ಸ್ ಹೆಸರಿನಲ್ಲಿ ವಸತಿ ಸಮುಚ್ಚಯ ನಿರ್ಮಿಸಲಾಗುತ್ತಿದೆ.
> – ಕೃಷ್ಣಪ್ಪ, ಎಇಇ, ಕೆಎಚ್‌ಬಿ

ಈಗಾಗಲೇ 186 ಎಕರೆ ಪ್ರದೇಶದಲ್ಲಿ ವ್ಯವಸ್ಥಿತವಾಗಿ ಬಡಾವಣೆಯನ್ನು ಅಭಿವೃದ್ಧಿಪಡಿಸಿ 2,397 ನಿವೇಶನಗಳನ್ನು ಮಾರಾಟ ಮಾಡಿರುವ ಕರ್ನಾಟಕ ಗೃಹ ಮಂಡಳಿಯು, ಈ ಬಡಾವಣೆ ಜಾಗದಲ್ಲಿ ಬೆಂಗಳೂರು ಮಾದರಿಯಲ್ಲಿ ವಸತಿ ಸಮುಚ್ಚಯ ನಿರ್ಮಿಸಲು 1.5 ಎಕರೆ ಪ್ರದೇಶವನ್ನು ಗುರುತಿಸಿದೆ.

ಉದ್ದೇಶಿತ 2 ಬಿಎಚ್‌ಕೆ ವರ್ಗದಲ್ಲಿ 160 ಫ್ಲಾಟ್‌ಗಳನ್ನು ನಿರ್ಮಿಸಲು ಉದ್ದೇಶಿಸಿದ್ದು, ಇದಕ್ಕೆ ನೋಂದಣಿ ಶುಲ್ಕ ಸಾವಿರ ರೂ., ಆರಂಭಿಕ ಠೇವಣಿಯಾಗಿ 2 ಲಕ್ಷ ರೂ.ಗಳನ್ನಿಡಬೇಕು. ಪ್ರತಿ ಫ್ಲಾಟ್‌ನ ತಾತ್ಕಾಲಿಕ ಬೆಲೆ 49.46 ಲಕ್ಷ ರೂ.ಗಳು. ಅಂತೆಯೇ ಉದ್ದೇಶಿತ 3ಬಿಎಚ್‌ಕೆ ವರ್ಗದಲ್ಲಿ 32 ಫ್ಲಾಟ್‌ಗಳನ್ನು ನಿರ್ಮಿಸಲು ಉದ್ದೇಶಿಸಿದ್ದು, ಇದಕ್ಕೆ ನೋಂದಣಿ ಶುಲ್ಕವಾಗಿ 1500 ರೂ., ಆರಂಭಿಕ ಠೇವಣಿ 3 ಲಕ್ಷ ರೂ.ಗಳನ್ನಿಡಬೇಕು. ಪ್ರತಿ ಫ್ಲಾಟ್‌ನ ತಾತ್ಕಾಲಿಕ ಬೆಲೆ 63.09 ಲಕ್ಷ ರೂ.ಗಳು. ಪ್ರತಿ ಚದರ ಮೀಟರ್‌ಗೆ 64,314.80 ರೂ.ಗಳು. (ಪ್ರತಿ ಚದರಡಿಗೆ 5975 ರೂ.)

> ಸಮೂಹ ಮನೆಗಳು ಜನರಿಗೆ ಬೇಕೆ, ಬೇಡವೇ ಎಂಬುದರ ಬಗ್ಗೆ ಸಮೀಕ್ಷೆ ನಡೆಸಲಾಗುತ್ತಿದ್ದು, ನಿವೇಶನಾಕಾಂಕ್ಷಿಗಳಿಂದ ಪ್ರತಿಕ್ರಿಯೆಗಳನ್ನು ಆಧರಿಸಿ, ಫ್ಲಾಟ್‌ಗಳ ನಿರ್ಮಾಣ ಮಾಡಲಾಗುವುದು.
> –ಜಿ.ಆರ್.ಜಗದೀಶ್, ಇಇ, ಕೆಎಚ್.ಬಿ.

> ಬಡ ಮತ್ತು ಮಧ್ಯಮ ವರ್ಗದವರಿಗೆ ಮುಡಾ ನಿವೇಶನ ಸಿಗುವುದೇ ಕನಸಿನ ಮಾತಾಗಿದೆ. ಮುಡಾ ಗುಂಪು ಮನೆ ನಿರ್ಮಿಸುವುದಾಗಿ ಹೇಳಿ, ವರ್ಷಗಳೇ ಕಳೆದಿವೆ. ಕರ್ನಾಟಕ ಗೃಹ ಮಂಡಳಿಯಾದರೂ ಬಡವರ ಆಸೆ ಈಡೇರಿಸಲಿ
> – ಎ.ಪಿ.ವಿರೂಪಾಕ್ಷ, ಕೃಷ್ಣಮೂರ್ತಿ ಲೇಔಟ್

ಫ್ಲಾಟ್‌ಗಳ ಖರೀದಿಗೆ ಆಸಕ್ತಿ ಇರುವ ಗ್ರಾಹಕರು, ಮಾ.7ರಿಂದ ಆರಂಭಿಕ ಠೇವಣಿ ಇಟ್ಟು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಏ.2 ರಂದು ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ಕೆಎಚ್‌ಬಿ ವೆಬ್‌ಸೈಟ್: www.khb.karnataka.gov.in ಸಂಪರ್ಕಿಸಬಹುದು.

ನಕ್ಕರೆ ಅದೇ ಸ್ವರ್ಗ

ಗುಂಡ, ತಿಮ್ಮ ಅಪರಾಧ ಪ್ರಕರಣದಲ್ಲಿ ಜೈಲು ಸೇರಿದ್ದರು.
ಗುಂಡ : ಪೊಲೀಸರು ನಿನ್ನನ್ನು ಏಕೆ ಹಿಡಿದರು?
ತಿಮ್ಮ : ಬ್ಯಾಂಕ್ ದರೋಡೆ ಮಾಡಿ, ಹಣ ಎಣಿಸುವಾಗ ಸಿಕ್ಕಿಬಿದ್ದೆ.
ಗುಂಡ : ಹಣ ಎತ್ಕೊಂಡು ಓಡಿ ಹೋಗೋದಲ್ವಾ ಎಣಿಸ್ಕೊಂಡ್ ಕೂತಿದ್ಯಾಕೆ?
ತಿಮ್ಮ : 'ಕೌಂಟರ್‌ನಿಂದ ಹೊರಡುವ ಮುನ್ನ ಹಣವನ್ನು ಎಣಿಸಿ' ಎಂದು ಬೋರ್ಡ್ ಹಾಕಲಾಗಿತ್ತು. ಅದಕ್ಕೆ...!

ಮೈಸೂರು ಮಿತ್ರ
ಸೋಮವಾರ, 17 ಮಾರ್ಚ್ 2025
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

'ಸದಾ ಬೆಳಗುವ ಸೂರ್ಯನನ್ನು ನೋಡಿ ಕತ್ತಲು ಭಯಪಡುತ್ತದೆ. ಹಾಗೆ ಪ್ರತಿ ದಿನ ಕಷ್ಟಪಡುವ ವ್ಯಕ್ತಿಯನ್ನು ನೋಡಿ ಸೋಲು ಕೂಡ ಭಯಪಡುತ್ತದೆ'

ವೇದ ಸುಳ್ಳಾದರೂ { ಕೊಟ್ಟಿದ್ದು ತನಗೆ
ಗಾದೆ ಸುಳ್ಳಾಗದು { ಬಚ್ಚಿಟ್ಟಿದ್ದು ಪರರಿಗೆ

ನಿಮ್ಮ ಪತ್ರಗಳು

■ ತನಿಖಾ ವರದಿಗಳ ಕಥೆ–ವ್ಯಥೆ

ಮಾನ್ಯರೆ,

ರಾಜ್ಯದಲ್ಲಿ ಈ ಹಿಂದೆ ಅಧಿಕಾರದಲ್ಲಿದ್ದ ಬಿಜೆಪಿ ಆಡಳಿತದ ಅವಧಿಯಲ್ಲಿ ನಡೆದಿದೆಯೆಂದು ಹೇಳಲಾದ 40% ಕಮಿಷನ್ ಆರೋಪದ ಬಗ್ಗೆ ನ್ಯಾಯಮೂರ್ತಿ ನಾಗಮೋಹನ್ ದಾಸ್‌ರವರ ನೇತೃತ್ವದ ಸಮಿತಿ ತನ್ನ 20,000 ಪುಟಗಳ ತನಿಖಾ ವರದಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಇತ್ತೀಚೆಗೆ ಸಲ್ಲಿಸಿದೆ. ಜುಲೈ 26, 2019ರಿಂದ 2023ರ ಮಾರ್ಚ್ ತಿಂಗಳವರೆಗೆ ನಡೆದಿರುವ ಕಾಮಗಾರಿಗಳಲ್ಲಿ ಶೇ.40ರಷ್ಟು ಭ್ರಷ್ಟಾಚಾರ ನಡೆದಿದೆ ಎಂದು ಅಂದಿನ ವಿರೋಧ ಪಕ್ಷವಾಗಿದ್ದ ಕಾಂಗ್ರೆಸ್ ಅಂದಿನ ಬಿಜೆಪಿ ಸರ್ಕಾರದ ವಿರುದ್ಧ ಆರೋಪ ಮಾಡಿತ್ತು. ಇದು ರಾಜ್ಯದಲ್ಲಿ ಸಂಚಲನವನ್ನು ಉಂಟು ಮಾಡಿ ಕೊನೆಗೆ ಬಿಜೆಪಿ ರಾಜ್ಯದಲ್ಲಿ ಅಧಿಕಾರ ಕಳೆದುಕೊಳ್ಳುವ ಸ್ಥಿತಿ ನಿರ್ಮಿಸಿತ್ತು.

ಈ ರೀತಿಯ ಭ್ರಷ್ಟಾಚಾರ ಆರೋಪಗಳು ಕೇಳಿ ಬಂದಾಗ, ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ತನಿಖಾ ಆಯೋಗ ರಚಿಸಿ ಕೈತೊಳೆದುಕೊಳ್ಳುವ ಪ್ರವೃತ್ತಿ ರಾಜ್ಯದಲ್ಲಿ ಹಲವಾರು ದಶಕಗಳಿಂದ ನಡೆದುಕೊಂಡು ಬಂದಿದೆ. ಈ ರೀತಿ ಸಲ್ಲಿಕೆಯಾದ ಬಹುತೇಕ ವರದಿಗಳು ವಿಧಾನಸೌಧದ ಕೊಠಡಿಗಳಲ್ಲಿ ದೂಳು ಹಿಡಿದು ಕುಳಿತಿವೆ. ಉದಾಹರಣೆಗೆ, ರಾಜ್ಯದಲ್ಲಿ ಕನ್ನಡಿಗರಿಗೆ ಹೆಚ್ಚಿನ ರೀತಿಯ ಉದ್ಯೋಗಾವಕಾಶಗಳನ್ನು ಕಲ್ಪಿಸಲು ದಶಕಗಳ ಹಿಂದೆಯೇ ರಾಜ್ಯ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದ ಬಹು ಚರ್ಚಿತ ಸರೋಜಿನಿ ಮಹಿಷಿ ವರದಿಯ ಕಥೆ ಏನಾಗಿದೆಯೋ ಗೊತ್ತಿಲ್ಲ. ಅದೇ ರೀತಿಯಲ್ಲಿ ಚಿನ್ನಪ್ಪ ರೆಡ್ಡಿ ಆಯೋಗದ ವರದಿ ಸೇರಿದಂತೆ ಬಹುತೇಕ ವರದಿಗಳು ಅನುಷ್ಠಾನಗೊಳ್ಳದೇ ನಿಷ್ಕ್ರಿಯಗೊಂಡಿವೆ.

ಯಾವುದೇ ಆಯೋಗದ ವರದಿಯನ್ನು ಒಪ್ಪುವುದು ಅಥವಾ ತಿರಸ್ಕರಿಸುವುದು ಆಳುವ ಸರ್ಕಾರದ ಪರಮಾಧಿಕಾರ. ಈ ಹಿನ್ನೆಲೆಯಲ್ಲಿ ನ್ಯಾಯಮೂರ್ತಿ ನಾಗಮೋಹನ್‌ದಾಸ್ ಪ್ರತಿಕ್ರಿಯಿಸಿ "ದೂರುಗಳ ಬಗ್ಗೆ ಕೂಲಂಕಷವಾಗಿ ತನಿಖೆ ನಡೆಸಿ ಸಲಹೆ, ಅಭಿಪ್ರಾಯಗಳ ಜೊತೆ ವರದಿ ತಯಾರಿಸಲಾಗಿದೆ. ಇದರ ಸ್ವೀಕಾರ ಅಥವಾ ತಿರಸ್ಕಾರ ಸರ್ಕಾರಕ್ಕೆ ಬಿಟ್ಟ ವಿಚಾರ" ಎಂದು ಹೇಳಿದ್ದಾರೆ.

ಇದುವರೆಗೆ ಯಾವುದೇ ಸರ್ಕಾರವಾಗಲಿ ಇಂತಹ ತನಿಖಾ ವರದಿಗಳನ್ನು ಗಂಭೀರವಾಗಿ ಪರಿಗಣಿಸಿದ ಉದಾಹರಣೆ ಬಹಳ ಕಡಿಮೆ. ಇಂತಹ ತನಿಖಾ ವರದಿಗಳನ್ನು ಪಡೆಯಲು ರಾಜ್ಯ ಸರ್ಕಾರ ಕೋಟ್ಯಂತರ ರೂಪಾಯಿಗಳನ್ನು ರಾಜ್ಯದ ಬೊಕ್ಕಸದಿಂದ ಪಾವತಿಸುತ್ತದೆ. ಅಂದರೆ ಇದು ಜನರ ತೆರಿಗೆ ಹಣ ಕೂಡ ಹೌದು. ರಾಜ್ಯ ಸರ್ಕಾರ ಇನ್ನು ಮುಂದಾದರೂ ತನಿಖಾ ವರದಿಗಳನ್ನು ಗಂಭೀರವಾಗಿ ಪರಿಗಣಿಸಲಿ.

–ಕೆ.ವಿ.ವಾಸು, ವಕೀಲರು, ನೋಟರಿ, ವಿವೇಕಾನಂದನಗರ, ಮೈಸೂರು.

■ ಕಮರ್ಷಿಯಲ್ ಕಾಂಪ್ಲೆಕ್ಸ್‌ಗಳಲ್ಲಿ ಪಾರ್ಕಿಂಗ್ ಸೆಲ್ಲಾರ್ ದುರುಪಯೋಗ

ಮಾನ್ಯರೆ,

ಮೈಸೂರಿನ ಪ್ರತಿಷ್ಠಿತ ಬಡಾವಣೆಗಳಲ್ಲಿ ಒಂದಾದ ಕುವೆಂಪುನಗರದ ಕಾಂಪ್ಲೆಕ್ಸ್ ಬಳಿ ಬಟ್ಟೆ ಅಂಗಡಿಯೊಂದು ಇದೆ. ಈಗ ಇದರ ಬಲ ಭಾಗದಲ್ಲಿ ಕೂಡ ಹೊಸದಾಗಿ ಇವರದೇ ಮೂರು ಅಂತಸ್ತಿನ ಮತ್ತೊಂದು ಶೋರೂಮ್ ಆರಂಭವಾಗಿದೆ. ಈ ಅಂಗಡಿಗಳಿಗೆ ಸಂಜೆ ವೇಳೆ ಬಹಳಷ್ಟು ಜನರು ಭೇಟಿ ನೀಡುತ್ತಾರೆ. ಅದರಲ್ಲೂ ಹಬ್ಬ ಹರಿದಿನಗಳಂದು ಹೆಚ್ಚು ಜನರು ಭೇಟಿ ನೀಡುತ್ತಾರೆ. ಆದರೆ ಅಂಗಡಿ ಇರುವ ರಸ್ತೆಯು ಚಿಕ್ಕದಾಗಿದ್ದು, ಅಂಗಡಿಗೆ ಬರುವ ಗ್ರಾಹಕರು ತಮ್ಮ ದ್ವಿ ಚಕ್ರ ವಾಹನವನ್ನು ಕೂಡ ಇದರ ಮುಂದೆಯೇ ಪಾರ್ಕಿಂಗ್ ಮಾಡುತ್ತಾರೆ. ನಗರ ಸಾರಿಗೆ ಬಸ್‌ಗಳು ಕೂಡ ಇದರ ಮುಂದೆಯೇ ನಿಲುಗಡೆ ಮಾಡುತ್ತವೆ. ಅಂಗಡಿಗೆ ಬರುವ ಗ್ರಾಹಕರಿಗೆ ಕಾರ್ ಪಾರ್ಕಿಂಗ್ ಮಾಡಲು ಸ್ಥಳಾವಕಾಶ ಇಲ್ಲದ ಕಾರಣ ಬೇರೆ ಕಡೆ ನಿಲ್ಲಿಸಿ ಬರಬೇಕು ಇಲ್ಲವೇ ಅಂಗಡಿ ಮುಂದೆ ರಸ್ತೆಯಲ್ಲೇ ನಿಲ್ಲಿಸುತ್ತಾರೆ. ಇದರಿಂದ ಸಂಜೆ ವೇಳೆ ವಾಹನಗಳ ಸುಗಮ ಸಂಚಾರಕ್ಕೆ ಅಡ್ಡಿಯಾಗಿದೆ.

ಯಾವುದೇ ವಾಣಿಜ್ಯ ಕಟ್ಟಡಗಳನ್ನು ನಿರ್ಮಿಸುವಾಗ ಕಟ್ಟಡದ ಸೆಲ್ಲಾರ್‌ನಲ್ಲಿ ಗ್ರಾಹಕರ ವಾಹನ ಪಾರ್ಕಿಂಗ್‌ಗೆ ಅವಕಾಶ ಕಲ್ಪಿಸಿರಬೇಕು ಎಂಬ ನಿಯಮವಿದೆ. ಆದರೆ ಬಲಾಢ್ಯ ವ್ಯಾಪಾರಿಗಳು ನಗರಪಾಲಿಕೆ ಅಧಿಕಾರಿಗಳ ಕೈ ಬೆಚ್ಚಗೆ ಮಾಡಿ ತಮ್ಮ ಪ್ರಭಾವ ಬಳಸಿ,ನಿಯಮ ಗಾಳಿಗೆ ತೂರಿ ತಮಗೆ ಬೇಕಾದಂತೆ ಕಟ್ಟಡ ನಿರ್ಮಿಸಿ, ಸೆಲ್ಲಾರ್ ಅನ್ನು ತಮ್ಮ ಗೋಡೌನ್ ಅಥವಾ ಮತ್ತೊಂದು ವಾಣಿಜ್ಯ ವ್ಯಾಪಾರಕ್ಕೆ ಬಳಸಿಕೊಂಡು ಪಾಲಿಕೆಗೆ ವಂಚಿಸಿ, ಗ್ರಾಹಕರಿಗೆ ಪಾರ್ಕಿಂಗ್ ಸೌಲಭ್ಯ ನೀಡದೆ ವಂಚಿಸುತ್ತಿದ್ದಾರೆ. ಇದು ನಿಯಮಬಾಹಿರವಾಗಿದೆ. ಆದ್ದರಿಂದ ನಗರ ಪಾಲಿಕೆ ಆಯುಕ್ತರು ಇಂತಹ ವಾಣಿಜ್ಯ ಕಟ್ಟಡಗಳ ಬಗ್ಗೆ ಗಮನಹರಿಸಿ, ಸೆಲ್ಲಾರ್‌ಗಳಲ್ಲಿ ಗ್ರಾಹಕರಿಗೆ ಪಾರ್ಕಿಂಗ್ ವ್ಯವಸ್ಥೆ ಮಾಡಲು ಹಾಗೂ ಇವರಿಗೆ ಕಟ್ಟಡ ಪೂರ್ತಿ ದೃಢೀಕರಣ ನೀಡಿದ ಅಧಿಕಾರಿಗಳ ಮೇಲೂ ಕ್ರಮ ಜರುಗಿಸಲಿ.

–ಬಿ.ಎಂ.ಭ್ರಮರಾಂಭ, ಕನಕದಾಸನಗರ. ಮೈಸೂರು.

■ ಮೊಬೈಲ್ ಕರೆ ವೇಳೆ ಕಿರಿಕಿರಿ ತಪ್ಪಿಸಿ

ಮಾನ್ಯರೆ,

ನಾವು ನಮ್ಮ ಮೊಬೈಲ್ ಕರೆ ಮಾಡಿದಾಗ, ಎಚ್ಚರಿಕೆ, ಸೋಷಿಯಲ್ ಮೀಡಿಯಾ ಜಾಹೀರಾತುಗಳಿಂದ, ನೀವು ಮನೆಯಲ್ಲೇ ಕುಳಿತು ಸುಲಭವಾಗಿ ಹಣಗಳಿಸುವ, ಅಥವಾ ಷೇರು ಮಾರುಕಟ್ಟೆಯಲ್ಲಿ ಹಣ ಹೂಡಿಕೆ ಮಾಡುವಂತೆ ನಿಮಗೆ ಮೋಸದ ಕರೆಗಳು ಬರಬಹುದು, ಇಂತಹ ಕರೆಗಳು ಬಂದರೆ ನೀವು 1930ಗೆ ಡಯಲ್ ಮಾಡಿ, ಇದು ಗೃಹ ಸಚಿವಾಲಯದಿಂದ ಜಾರಿ ಮಾಡಲಾಗಿದೆ ಎಂಬ ಸಂದೇಶ ಸುಮಾರು 10 ಸೆಕೆಂಡ್‌ಗಳ ಕಾಲ ಬರುತ್ತದೆ. ಇದಾದ ನಂತರವೇ ನಾವು ಫೋನ್ ಮಾಡಿದ ವ್ಯಕ್ತಿಯೊಂದಿಗೆ ಮಾತನಾಡಬೇಕು, ಈ ಸಂದೇಶ ಒಮ್ಮೆ ಬಂದರೆ ಸಾಕು, ಪ್ರತಿ ಸಲವೂ ನಾವು ಫೋನ್ ಮಾಡಿದಾಗಲೆಲ್ಲ ಈ ಸಂದೇಶಗಳ, ಕಿರಿ–ಕಿರಿಯೇ ಬೇಸರ ತರಿಸಿದೆ. ನಾವು ತುರ್ತು ಕೆಲಸಗಳಿಗಾಗಿ (ಆಸ್ಪತ್ರೆ, ಕಚೇರಿ), ತುರ್ತು ಕೆರೆ ಮಾಡಿದಾಗ ನಮ್ಮ ತಾಳ್ಮೆಯನ್ನು ಕಳೆದುಕೊಳ್ಳ ಬೇಕಾಗುತ್ತದೆ. ದಯಮಾಡಿ ಕಂಪೆನಿಯವರು ಸಾರ್ವಜನಿಕರಿಗೆ ಈ ಸಂದೇಶಗಳ ಕಿರಿ–ಕಿರಿ, ತಪ್ಪಿಸಲು ವಾರಕ್ಕೊಮ್ಮೆ ಪತ್ರಿಕೆಗಳಿಗೆ ಜಾಹೀರಾತು ನೀಡಿ.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು.

ಕುಳಿತು ತುಕ್ಕು ಹಿಡಿಯದೆ ದುಡಿದು ಸವೆಯೋಣ



ಅನಾದಿ ಕಾಲದಿಂದ ಇಂದಿನವರೆಗೂ, ಬಸವಣ್ಣನವರಿಂದ ವಿಶ್ವೇಶ್ವರಯ್ಯನವರೆಗೂ ಮತ್ತು ಮುಂದೆ ಜೀವಸಂಕುಲಗಳು ಭೂಮಿಯ ಮೇಲೆ ಇರುವವರೆಗೂ **ಕಾಯಕವೇ ಕೈಲಾಸ** ಎನ್ನುವ ಮಂತ್ರ ಶಾಶ್ವತವಾದದ್ದು. ಹನ್ನೆರಡನೇ ಶತಮಾನದಲ್ಲಿ ಜಪಿಸಿದ ಉಕ್ತಿ ಇಪ್ಪತ್ತೊಂದನೇ ಶತಮಾನಕ್ಕೂ ಹರಿದು ಇಲ್ಲಿಗೇ ನಿಲ್ಲುವಂತ ಹದ್ದಲ್ಲ ಬರುವ ದಿನಗಳಿಗೂ ಪ್ರಸ್ತುತವಾಗಿರುತ್ತದೆ. ಇದೇ ಮಂತ್ರದ ಜಪದೊಂದಿಗೆ ವಿಶ್ವೇಶ್ವರಯ್ಯನವರು ನಿರ್ವಹಿಸಿದ ಶಿಸ್ತುಬದ್ಧ ದುಡಿಮೆಯಿಂದ ಕಾಯಕದ ಫಲವನ್ನು ಜಗಕ್ಕೆ ತೋರಿಸಿಕೊಟ್ಟು ಭಾರತ ರತ್ನರೆನಿಸಿಕೊಂಡು ಕರ್ನಾಟಕದ ಹೆಮ್ಮೆಯ ಪುತ್ರನಾಗಿ ಇಂದಿಗೂ ಅವರು ನಿರ್ಮಿಸಿದ ನಾಲೆಗಳು, ಅಣೆಕಟ್ಟೆಗಳು, ಪಾರಂಪರಿಕ ಕಟ್ಟಡಗಳು ಮತ್ತು ಕಾರ್ಖಾನೆಗಳ ರೂಪದಲ್ಲಿ ಬದುಕಿದ್ದಾರೆ.

ಹಸಿವನ್ನು ನೀಗಿಸಲು ಹೊಟ್ಟೆ ತುಂಬಿಸಿಕೊಳ್ಳುವ ಪ್ರಕ್ರಿಯೆ ಹೊತ್ತೊತ್ತಿಗೆ ಆಗುತ್ತಲೇ ಇರಬೇಕು. ಈ ಒಂದು ಮುಖ್ಯ ಕಾರಣಕ್ಕಾಗಿಯೇ ದುಡಿಮೆ ಎನ್ನುವುದು ಬದುಕಿನಲ್ಲಿ ನಡೆಯಲೇಬೇಕು. ಜೀವಿಗಳಿಗೆ ದುಡಿಮೆಯು ತನ್ನ ಅವಶ್ಯಕತೆಗಳನ್ನು ಪರಾವಲಂಬಿಗಳಾಗದೆ ಸ್ವತಃ ಪೂರೈಸಿಕೊಳ್ಳುವ ಸಾಧನ. ನಾನು ಬಡವ ಎನ್ನುವವನೇ ಸೋಮಾರಿ, ಕುಳಿತು ತಿನ್ನುವವನಿಗೆ ಕೊಪ್ಪರಿಗೆ ಚಿನ್ನವಿದ್ದರೂ ಸಾಲದು. ಏನೂ ಮಾಡದೆಯೂ ಕುಳಿತು ತಿನ್ನುವ ಸೋಮಾರಿಗಳಿದ್ದಾರೆ, ಅವರ ಜೀವನವೂ ಹೇಗೋ ಮುಗಿದು ಹೋಗುವುದು. ದುಡಿಯುವವನಿಗೆ ಸಿಕ್ಕುವ ಸ್ಥಾನಮಾನಗಳು ಸೋಮಾರಿಗೆ ಎಂದಿಗೂ ಸಿಗುವುದಿಲ್ಲ. ಬೇಡಿ ತಿನ್ನುವವನಿಗೆ ಯಾವತ್ತಿದ್ದರೂ ಮಾನ್ಯತೆ ಸಿಗುವುದಿಲ್ಲ.

ದುಡಿಮೆಯನ್ನು ಪರವಶ ಮಾಡಿಕೊಂಡು ಅದರಲ್ಲೇ ಮುಳುಗಿ ಶಿಸ್ತುಬದ್ಧ ಜೀವನ ನಡೆಸಿ ದುಡಿದರೆ ಉದ್ಧಾರ, ದುಡಿಯದಿದ್ದರೆ ವಿನಾಶ, ನೀತಿಯನ್ನು ಹೇಳಿಕೊಟ್ಟವರು ನಮ್ಮ ಆದರ್ಶ ಪುರುಷರು. ಚರಿತ್ರೆಯ ಪುಟಗಳಲ್ಲಿ ದಾಖಲಾದವರು ಅನೇಕರು ಮತ್ತು ಅಸಾಧಾರಣ ಸಾಧನೆ ಮಾಡದಿದ್ದರೂ ನಮ್ಮ ನಡುವೆ ಕಾಲಹರಣ ಮಾಡದೆ ದುಡಿಯುವ ಕೈಗಳು ಇಂದಿಗೂ ಇವೆ. ಅವರು ಬೆಳಿಗ್ಗೆ ಸೂರ್ಯ ಹುಟ್ಟುವ ಮೊದಲೇ ಎದ್ದು, ಮನೆಯ ಎಲ್ಲಾ ಕೆಲಸಗಳನ್ನು ಮಾಡಿ ಎಲ್ಲರೂ ಮಲಗಿದ ಮೇಲೆ ಮಲಗುವ ಅಮ್ಮನಿರಬಹುದು, ನನ್ನ ಕುಟುಂಬ ಚೆನ್ನಾಗಿರಲೆಂದು ಹಗಲಿರುಳು ದುಡಿಯುವ ಅಪ್ಪನಿರಬಹುದು ಅಥವಾ ಬೇರೆ ಯಾರಾದರೂ ಇರಬಹುದು. ಅವರೆಲ್ಲರೂ ಸಮಯವನ್ನು ಸದುಪಯೋಗ ಮಾಡಿ ತೋರಿಸುವ ಆದರ್ಶ ವ್ಯಕ್ತಿಗಳಾಗಿ, ಬೆಳೆಯುವ ಮಕ್ಕಳೆದುರಿಗೆ ನಿಲ್ಲುತ್ತಾರೆ.

ಅವರ ನೆರಳಿನಲ್ಲಿ ಬೆಳೆಯುತ್ತಿರುವವರು, ನಮ್ಮನ್ನು ನಾವು ಅರಿತು ಹೇಗೆ ಇದ್ದೇವೆಯೋ ಹಾಗೇ ಇದ್ದು, ಕುಳಿತು ತುಕ್ಕು ಹಿಡಿಯದೆ ದುಡಿದು ಸವೆಯೋಣ. ಒಣ ಜಂಬವನ್ನು ಬಿಟ್ಟು ನೈಜ ಬಣ್ಣದಿಂದ ಬದುಕು ಕಟ್ಟಿಕೊಳ್ಳುವುದೇ ಯಶಸ್ಸಿನ ಮಾರ್ಗ, ನಮ್ಮ ಕಣ್ಣ ಮುಂದಿರುವ ಮಹನೀಯರ ಜೀವನ ನಮಗೆ ಹೆದ್ದಾರಿ, ಹಾಗಾಗಿ ತೋರಿಕೆ ಜೀವನ ಬಿಟ್ಟು ಶ್ರಮದಿಂದ ದುಡಿದು ದೊಡ್ಡವರಾಗುವುದರಿಂದ ಮುಂದಿನ ಪೀಳಿಗೆಯ ನಮ್ಮ ವಂಶದ ಕುಡಿಗಳಿಗಾದರು ಆದರ್ಶ ವ್ಯಕ್ತಿಗಳಾಗಿ ಬಿಂಬಿತವಾಗುತ್ತೇವೆ.

ಆದರ್ಶಗಳು ನಮ್ಮನ್ನು ಕಾಯುವ ಯೋಧರು, ಕರ್ತವ್ಯನಿಷ್ಠೆ, ಶಿಸ್ತು, ಒಳ್ಳೆಯ ಆಲೋಚನೆಗಳು, ಸತ್ಯದ ನಿಲುವು, ನಿಷ್ಪಕ್ಷಪಾತ, ಸರಳತೆಯಂತಹ ತತ್ವಗಳನ್ನು ಕರಾರುವಕ್ಕಾಗಿ ಪಾಲಿಸಿಕೊಂಡು ದುಡಿಮೆಯನ್ನೇ ದೇವರೆಂದು ಬಂದವರು ಆದರ್ಶ ವ್ಯಕ್ತಿಗಳಾಗಿ ಬೆಳೆದು ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಅವುಗಳಲ್ಲಿ ಕೆಲವನ್ನಾದರೂ ನಾವು ಪಾಲಿಸಿದರೆ ದೊಡ್ಡ ಕೊಡುಗೆ ಅಲ್ಲದಿದ್ದರೂ ನಮ್ಮ ಮಕ್ಕಳ ದೃಷ್ಟಿಯಲ್ಲಾದರೂ ಆದರ್ಶರಾಗಿ ನಿಲ್ಲಬಹುದಲ್ಲವೇ?.

ಈ ಕಾರಣಕ್ಕಾಗಿಯೇ ಚರಿತ್ರೆಯನ್ನು ಓದುವುದು ಮುಖ್ಯವಾಗುವುದು, ಚರಿತ್ರೆಯನ್ನು ಸೃಷ್ಟಿಸಿದ ಮಹನೀಯರ ಬದುಕು ನಮಗೆ ಆದರ್ಶವಾಗುವುದು. ಶಿಸ್ತು ಮತ್ತು ದುಡಿಮೆಗೆ ಹೆಸರಾದವರು ಶ್ರೀ ಎಂ.ವಿಶ್ವೇಶ್ವರಯ್ಯನವರು ಶತಾಯುಷಿಗಳಾಗಿ ಬದುಕಿದವರು, ಅವರು ಇಹಲೋಕ ತ್ಯಜಿಸಿ ಅರವತ್ತೆರಡು ವರ್ಷಗಳು ಕಳೆದು ಹೋಗಿದ್ದರೂ ಅವರು ಮಾಡಿದ ನೂರಾರು ಕೆಲಸಗಳು ಇನ್ನೂ ಜೀವಂತವಾಗಿವೆ. ಆ ಮೂಲಕ ಅವರನ್ನು ನೆನಪು ಮಾಡಿಕೊಳ್ಳುತ್ತೇವೆ. ಇಂಜಿನಿಯರ್ ಅಂದರೆ ಸಾರ್ವಜನಿಕರ ಮನದಲ್ಲಿ ಮೊದಲು ಬರುವುದು ವಿಶ್ವೇಶ್ವರಯ್ಯನವರ ಹೆಸರು. ಅವರ ಸ್ಥಾನವನ್ನು ಇದುವರೆಗೂ ಯಾರೂ ತುಂಬಲೇ ಇಲ್ಲ!. ಪ್ರತೀ ವರ್ಷ ಅವರು ಮಾಡಿದ ಲೋಕೋಪಯೋಗಿ ಕೆಲಸಗಳಿಂದಾಗಿ ಅವರ ಜನ್ಮದಿನವನ್ನು ಆಚರಿಸಿಕೊಂಡು ಬರುತ್ತಿದ್ದೇವೆ. ಅವರು ಹುಟ್ಟಿದ್ದು ದಿನಾಂಕ:15–09–1860ರಂದು, ನಾಡಿನ ಸಮಸ್ತ ಜನತೆಯು ಪ್ರತಿ ವರ್ಷ 15 ಸೆಪ್ಟಂಬರ್‌ರಂದು ಇಂಜಿನಿಯರ್ಸ್ ದಿನವನ್ನಾಗಿ ಆಚರಿಸುತ್ತಿರುವುದು.

> **"** ಆದರ್ಶಗಳು ನಮ್ಮನ್ನು ಕಾಯುವ ಯೋಧರು, ಕರ್ತವ್ಯನಿಷ್ಠೆ, ಶಿಸ್ತು, ಒಳ್ಳೆಯ ಆಲೋಚನೆಗಳು, ಸತ್ಯದ ನಿಲುವು, ನಿಷ್ಪಕ್ಷಪಾತ, ಸರಳತೆಯಂತಹ ತತ್ವಗಳನ್ನು ಕರಾರುವಕ್ಕಾಗಿ ಪಾಲಿಸಿಕೊಂಡು ದುಡಿಮೆಯನ್ನೇ ದೇವರೆಂದು ಬಂದವರು ಆದರ್ಶ ವ್ಯಕ್ತಿಗಳಾಗಿ ಬೆಳೆದು ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಅವುಗಳಲ್ಲಿ ಕೆಲವನ್ನಾದರೂ ನಾವು ಪಾಲಿಸಿದರೆ ದೊಡ್ಡ ಕೊಡುಗೆ ಅಲ್ಲದಿದ್ದರೂ ನಮ್ಮ ಮಕ್ಕಳ ದೃಷ್ಟಿಯಲ್ಲಾದರೂ ಆದರ್ಶರಾಗಿ ನಿಲ್ಲಬಹುದಲ್ಲವೇ?.

ಅವರ ನೆನಪಿನಲ್ಲಿ ಕೆಲವು ಸಾಧಕ ಇಂಜಿನಿಯರ್‌ಗಳನ್ನು ಸನ್ಮಾನಿಸುವುದು ಅವರ ದುಡಿಮೆ ಮತ್ತು ಸಾಧನೆಗೆ ನೀಡುವ ಗೌರವವಾಗಿದೆ.

ಈ ಶ್ರೇಷ್ಠ ವ್ಯಕ್ತಿಯ ಜೀವನ ಚರಿತ್ರೆಯನ್ನು ನಿವೃತ್ತ ಇಂಜಿನಿಯರ್ ಶ್ರೀನಿವಾಸ ದೇಸಾಯಿರವರು ಬರೆದಿರುವ **ಶ್ರೀ ವಿಶ್ವೇಶ್ವರಯ್ಯ ದರ್ಶನ** ಪುಸ್ತಕವನ್ನೊಮ್ಮೆ ಓದಿದರೆ ಜಡತ್ವದಿಂದ ಮಲಗಿರುವ ಸೋಮಾರಿಯೂ ದುಡಿಯಲು ಮನಸ್ಸು ಮಾಡುತ್ತಾನೆ. ಆ ಮಟ್ಟದ ಶಿಸ್ತುಬದ್ಧ ಜೀವನ ನಡೆಸಿದವರು ವಿಶ್ವೇಶ್ವರಯ್ಯನವರು. ಅವರೊಬ್ಬ ದಕ್ಷ ಇಂಜಿನಿಯರ್, ಶ್ರೇಷ್ಠ ಆಡಳಿತಗಾರರು ಜೊತೆಗೆ ಸರಳ ಸಜ್ಜನಿಕೆ ವ್ಯಕ್ತಿತ್ವವುಳ್ಳ ಮನುಷ್ಯರಾಗಿದ್ದವರು. ಅವರ ಶಿಸ್ತುಬದ್ಧ ದುಡಿಮೆಯಿಂದಾಗಿ ಶಿಕ್ಷಣ, ಉದ್ಯಮ, ಕೈಗಾರಿಕಾ ಕ್ಷೇತ್ರಗಳು ಮತ್ತು ನೀರಾವರಿ ಯೋಜನೆಗಳು ಕರ್ನಾಟಕದಲ್ಲಿ ವಿಶೇಷವಾಗಿ ಹಳೇಮೈಸೂರು ಭಾಗದಲ್ಲಿ ಅಗಾಧವಾಗಿ ಅಭಿವೃದ್ಧಿ ಆಯಿತು. ಇವರು ಮಾಡಿದ ಕೆಲಸಗಳೇ ಇಂದು ಮೈಸೂರು ಸಾಂಸ್ಕೃತಿ ನಗರಿಯಾಗಿ ವಿಶ್ವದಲ್ಲಿ ಹೊರಹೊಮ್ಮಿರುವುದಕ್ಕೆ ಕಾರಣವಾಗಿರುವುದು.

ಸಮಯವನ್ನು ತೋರುವ ಕಾಲನಿಗೇ ಸೆಡ್ಡು ಒಡೆದು ಸಮಯ ಪರಿಪಾಲನೆ ಮಾಡಿದವರು ಇವರು. ಸರಿಯಾದ ಕಾಲಕ್ಕೆ ಭೋಜನ, ಸರಿಯಾದ ಕಾಲಕ್ಕೆ ವ್ಯಾಯಾಮ, ಸರಿಯಾದ ಕಾಲಕ್ಕೆ ವಿಶ್ರಾಂತಿ, ಆಹಾರದಲ್ಲಿ ಮಿತಿ ಮತ್ತು ಗೊತ್ತು ಪಡಿಸಿದ ಅವಧಿಯಲ್ಲಿ ಕೆಲಸ ಮಾಡುವುದು ಹೀಗೆ ಆಯಾಯ ಸಮಯಕ್ಕೆ ಸರಿಯಾಗಿ ನಿರ್ವಹಿಸಿಕೊಂಡು ಬರುತ್ತಿದ್ದರು.

ವಿಶ್ವೇಶ್ವರಯ್ಯನವರನ್ನು ಒಮ್ಮೆ ನಿಮ್ಮ ಅಂತ್ಯಕಾಲದ ಬಯಕೆ ಏನು? ಎಂದು ಪ್ರಶ್ನಿಸಿದಾಗ ಅವರು ಕೊಟ್ಟ ಉತ್ತರ ಉಸಿರು ನಿಲ್ಲುವ ಕ್ಷಣದವರೆಗೂ ದುಡಿಯುತ್ತಿರಬೇಕು. ಉಳಿದೆಲ್ಲಾ ಆಸೆಗಳಿಗಿಂತ ಹೆಚ್ಚಿನ ಆಸೆ ಇದು. ನನ್ನ ಕಟ್ಟಕಡೆ ಬಯಕೆ ಇದು. ಅಬ್ಬಾ... ಎಂಥಹ ಉತ್ತರ. ಬಹುಶಃ ಶತಾಯುಷಿಯಾಗಿ ಬದುಕಲು ಈ ಬಯಕೆಯೇ ಕಾರಣ ಇರಬಹುದು.

ದುಡಿಮೆ ಎಂದರೆ ಹಣದ ಸಂಪಾದನೆಯೊಂದೇ ಒಳಗೊಂಡಿರುವುದಿಲ್ಲ. ಆ ದುಡಿಮೆ ಸಾರ್ವಜನಿಕರ ಶ್ರೇಯೋಭಿಲಾಷೆಯನ್ನು ಪೂರೈಸುವಂತಿರಬೇಕು. ದುಡಿಮೆಯ ಫಲದ ಕೂಸು ನೂರ್ಕಾಲ ಜೀವಂತವಾಗಿರುವಂತೆ ಇರಬೇಕು, ನಮ್ಮ ಕೆಲಸ ನಾವು ಸತ್ತಮೇಲೂ ದೀರ್ಘಕಾಲದವರೆಗೂ ಮಾತನಾಡುವಂತಿರಬೇಕು. ಆ ನಿಟ್ಟಿನಲ್ಲಿ ಸರ್‌ಎಂವಿಯವರು ಯಶಸ್ಸು ಕಂಡ ಧೀಮಂತ ವ್ಯಕ್ತಿ.

ಬಿ.ಎಂ.ಶ್ರೀಕಂಠಯ್ಯನವರು ತಮ್ಮ ಲೇಖನದಲ್ಲಿ ಹೇಳಿರುವಂತೆ ವಿಶ್ವೇಶ್ವರಯ್ಯನವರೆಂದರೆ ಮೈಸೂರಿನ ನಮಗೆ ಒಬ್ಬ ಆದರ್ಶ ಮಹನೀಯರು. ಈ ಹಿರಿಯರು ಎಷ್ಟರಮಟ್ಟಿಗೆ ಕೆಲಸಗಾರರೊ ಹಾಗೆಯೇ ಕನಸುಗಾರರು. ಸಮಯದ ನಿಯಮವನ್ನು ಪಾಲಿಸುವುದರಲ್ಲಿ ವಿಶ್ವೇಶ್ವರಯ್ಯನವರದು ಎತ್ತಿದ ಕೈ. ಇವರು ನಮ್ಮಂತೆ ನಿದ್ರೆಯಲ್ಲಿ ಕನಸು ಕಂಡವರಲ್ಲ. ಕಾಯಕ ಮಾಡುತ್ತಾ ನಾಳೆಗೆ ಆಗಬೇಕಾಗಿದ್ದನ್ನು ಇಂದು ಕನಸು ಕಂಡು ಯೋಜನೆ ರೂಪಿಸಿದವರು. ಮೈಸೂರು ಪ್ರಾಂತ್ಯದಲ್ಲಿ ಅವರು ಕಟ್ಟಿಸಿದ ಅಣೆಕಟ್ಟೆಗಳು, ಪಾರಂಪರಿಕ ಕಟ್ಟಡಗಳು ಬಹಳಷ್ಟು, ಇವರ ಶ್ರಮದ ಪ್ರತಿಫಲವೇ ಇಂದು ಮೈಸೂರು ಸುಂದರ ನಗರವಾಗಿ ಪ್ರಸಿದ್ಧಿ ಆಗಿರುವುದು. ಇಂದಿಗೂ ನಗರದಲ್ಲಿರುವ ಸುಂದರ ಕಟ್ಟಡಗಳು, ಸಮೀಪದಲ್ಲಿರುವ ಕನ್ನಂಬಾಡಿಕಟ್ಟೆ, ಮೈಸೂರು ವಿಶ್ವವಿದ್ಯಾಲಯ, ಕನ್ನಡ ಸಾಹಿತ್ಯ ಪರಿಷತ್ತು, ಬ್ಯಾಂಕುಗಳು, ವಿದ್ಯುತ್ ಉತ್ಪಾದನಾ ಕೇಂದ್ರ..... ಮುಂತಾದ ಹತ್ತುಹಲವಾರು ಕೆಲಸಗಳಿಂದ ಮೈಸೂರು ಸಾಂಸ್ಕೃತಿಕ ನಗರವಾಗಿ ರೂಪುಗೊಂಡು ಇಂದಿಗೂ ವಿಶ್ವವಿಖ್ಯಾತ ದಸರಾ ಜನಮನರನ್ನು ಸೂರೆಗೊಂಡಿರುವುದು.

ವಿಶ್ವೇಶ್ವರಯ್ಯನವರು ಒಬ್ಬ ನುರಿತ ಇಂಜಿನಿಯರ್, ದಕ್ಷ ಆಡಳಿತಗಾರರಾಗಿ ಇದ್ದರಲ್ಲದೆ ಬರಹಗಾರರು ಸಹ ಆಗಿದ್ದವರು. ಇವರೊಬ್ಬ ಇಂಜಿನಿಯರ್ ಆಗಿದ್ದರಿಂದ ಯೋಜನೆಗಳನ್ನು ಸಿದ್ಧಪಡಿಸುವುದು, ವರದಿಗಳನ್ನು ತಯಾರಿಸುವುದು ಮತ್ತು ಗ್ರಂಥಗಳನ್ನು ಬರೆಯುವ ಹವ್ಯಾಸ ತಮ್ಮ ಬದುಕಿನ ಉದ್ದಕ್ಕೂ ಅವ್ಯಾಹತವಾಗಿ ನಡೆಸಿಕೊಂಡು ಬಂದರು. 1934ರಲ್ಲಿ ಇವರು ಬರೆದು ಪ್ರಕಟಿಸಿದ Planned Economy for India ಪುಸ್ತಕದಲ್ಲಿ ನಾಗರಿಕನು ಸಮರ್ಥನಾಗಲು ಹತ್ತು ನಿಯಮಗಳನ್ನು ಸೂಚಿಸಿದ್ದಾರೆ. ಈ ನಿಯಮಗಳು ವಿಶೇಷವಾಗಿ ಯುವಕರಿಗೆ ಉಪಯುಕ್ತವಾಗುವುದು, ಅವುಗಳೆಂದರೆ: ಸ್ವತಃ ಕೆಲಸ ಮಾಡುವ ಪರಿಪಾಠ, ಜ್ಞಾನವೇ ಶಕ್ತಿ, ಜೊತೆಗೂಡಿ ಕೆಲಸ ಮಾಡುವ ಪ್ರವೃತ್ತಿ, ಮಿತವ್ಯಯ ರೂಡಿಸಿಕೊಳ್ಳಿ, ಉತ್ಪಾದನೆ ಹೆಚ್ಚಿಸಿರಿ ಮತ್ತು ಕೆಲಸ ಮಾಡುವ ವಿಧಾನ ಸರಿಯಾಗಿ ಇರಲಿ, ಭಾರತೀಯ ಉದ್ಯೋಗಗಳನ್ನು ಪೋಷಿಸಿರಿ, ಆಯಾತಗಳು ಕಡಿಮೆ ಇರಲಿ, ಉತ್ತಮ ಮಟ್ಟವನ್ನು ಕಾಯ್ದುಕೊಳ್ಳುವುದು, ಚಿಂತನಶೀಲನಾಗು ಹಾಗೂ ಸಾಂಘಿಕವಾಗಿ ಕಾರ್ಯತತ್ಪರನಾಗು, ಹತ್ತನೆಯದಾಗಿ ದೇಶವನ್ನು ಕುರಿತು ಅಲೋಚನೆ ಮಾಡು. ಇವುಗಳನ್ನು ನಮ್ಮ ನಿತ್ಯದ ಬದುಕಿನಲ್ಲಿ ಅಳವಡಿಸಿಕೊಂಡಿದ್ದೇ ಆದರೆ ವಿಶ್ವೇಶ್ವರಯ್ಯನವರ ಆಸೆಯಂತೆ ಪ್ರತಿಯೊಬ್ಬ ನಾಗರಿಕನು ಸಮರ್ಥನಾಗಿ ರೂಪುಗೊಳ್ಳುವುದರಲ್ಲಿ ಸಂದೇಹವೇ ಇಲ್ಲ. ಇವುಗಳ ಪಾಲನೆಯಿಂದ ಅಭಿವೃದ್ಧಿಯಲ್ಲಿ ಇತರೆ ಎಲ್ಲಾ ದೇಶಗಳಿಗಿಂತ ಮುಂಚೂಣಿಯಲ್ಲಿ ನಮ್ಮ ದೇಶವನ್ನು ಕೊಂಡೊಯ್ಯಬಹುದು.

ಸಿವಿಲ್ ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಈಗಲೂ ಮೇಧಾವಿ ಇಂಜಿನಿಯರ್‌ಗಳಿದ್ದಾರೆ, ಆಕಾಶವನ್ನು ಮುಟ್ಟುವ ಎತ್ತರಕ್ಕೆ ಗಗನ ಚುಂಬಿ ಕಟ್ಟಡಗಳನ್ನು ಕಟ್ಟಿದ್ದಾರೆ, ಉದ್ದದ ಸುರಂಗಗಳನ್ನು ಫ್ಲೈಓವರ್‌ಗಳನ್ನು ನಿರ್ಮಿಸಿದ್ದಾರೆ, ಸಮುದ್ರದ ತಳಭಾಗದಲ್ಲಿ ಸುರಂಗ ಕೊರೆದು ರಸ್ತೆ ಮಾಡಿದ್ದಾರೆ, ದೊಡ್ಡ ಅಣೆಕಟ್ಟೆಗಳನ್ನು ಕಟ್ಟಿದ್ದಾರೆ. ಕುಶಲತೆಯಲ್ಲಿ ಅವರಷ್ಟೇ ದಕ್ಷ ಇಂಜಿನಿಯರ್‌ಗಳು ನಮ್ಮೊಡನೆ ಇದ್ದಾರೆ. ಆದರೆ ಶಿಸ್ತು, ಸಂಯಮ, ಆಡಳಿತಗಾರಿಕೆ, ಬುದ್ಧಿವಂತಿಕೆಗಳನ್ನು ಹೊಂದಿರುವ, ಕಳಂಕರಹಿತವಾಗಿ ಜೀವನ ನಡೆಸಿದವರು ಇಂಜಿನಿಯರ್ ಕ್ಷೇತ್ರದಲ್ಲಿ ಸಿಗುವುದು ಅಸಾಧ್ಯ, ಇಂಥಹ ಇಂಜಿನಿಯರ್‌ನ್ನು ಹುಡುಕಲು ಹೊರಟರೆ ಸಾಹಿತ್ಯ ಕ್ಷೇತ್ರದಲ್ಲಿ ಕುವೆಂಪುರಂತಹ ರಾಷ್ಟ್ರಕವಿಯನ್ನು ಇಂದು ಹುಡುಕಿದಂತೆ.

ದುಡಿದು ತಿನ್ನುವವನು ಅರಸ, ಬೇಡಿ ತಿನ್ನುವವನು ಭಿಕ್ಷುಕ, ಮಾತಿಗೆ ಅಸಾಮಾನ್ಯ ಸಾಧನೆಗೈದವರ ಉದಾಹರಣೆ ಸರ್‌ಎಂವಿಯವರು. ಕುಳಿತು ತುಕ್ಕು ಹಿಡಿಯುವುದಕ್ಕಿಂತ ದುಡಿದು ಸವೆಯುವುದೇ ಲೇಸು ಎನ್ನುವ ಮಾತಿದೆ. ಇದರ ಗೂಢಾರ್ಥ ಏನೂ ಮಾಡದೆ ಸೋಮಾರಿಯಾಗಿ ಕುಳಿತು ಕೊಳೆಯುವುದು ಬೇಡ. ದುಡಿದು ಜೀವನವನ್ನು ಸಾರ್ಥಕತೆಪಡಿಸಿಕೊಳ್ಳಿ ಎನ್ನುವುದು. ಏನೂ ಮಾಡದೆ ಇದ್ದಾಗ ನಮ್ಮ ದೇಹ ಅಲಸ್ಯದಿಂದ ಬಳಲುವುದು, ತಲೆಯಲ್ಲಿ ಬೇಡವಾದ ಯೋಚನೆಗಳು ಮೂಡುವುದು, ಬದಲಾಗಿ ನಮ್ಮನ್ನು ಒಂದಿಲ್ಲೊಂದು ಕೆಲಸಕಾರ್ಯಗಳಲ್ಲಿ ತೊಡಗಿಸಿಕೊಂಡರೆ ಚುರುಕುತನದಿಂದ ಇರಬಹುದು ಮತ್ತು ಮನಸ್ಸು ಇತರೆ ಯೋಚನೆಗಳ ಕಡೆಗೆ ಹರಿಯಬಿಡುವುದಿಲ್ಲ. ಇದರಿಂದ ಆರೋಗ್ಯವಾಗಿ ಇರಬಹುದಲ್ಲದೆ ದೀರ್ಘಾಯುಷಿಗಳಾಗಿ ಬದುಕಬಹುದು ಎಂಬುದನ್ನು ಸರ್ ಎಂ.ವಿಶ್ವೇಶ್ವರಯ್ಯನವರು ನಿರೂಪಿಸಿ ತೋರಿಸಿದ್ದಾರೆ ಅವರ ಮಾರ್ಗದಲ್ಲಿ ನ'ಡ'ದ'ು ನಾವುಗಳು ಸಹ ಆಳಾಗಿ ದುಡಿದು ಅರಸನಾಗಿ ತಿನ್ನೋಣ, ದೇಶದ ಅಭಿವೃದ್ಧಿಗೆ ಕೈಜೋಡಿಸಿ ದೀರ್ಘಾಯುಷಿಗಳಾಗಿ ಬದುಕೋಣ.



ಮಿರ್ಲೆ ಚಂದ್ರಶೇಖರ
ಮೊ: 9916129654

ಲೈಂಗಿಕ ಅಲ್ಪಸಂಖ್ಯಾತರ ಮುಖ್ಯವಾಹಿನಿಗೆ ತರಲು ಸರ್ಕಾರದಿಂದ ಹಲವು ಯೋಜನೆ ಜಾರಿ

ಸಮುದಾಯ ಸಂಗಮ ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆ ಡಿಡಿ ಡಾ.ಬಿ.ಮಲ್ಲಿಕಾ ಮಾಹಿತಿ



ಮೈಸೂರಿನ ನಜರ್‌ಬಾದ್‌ನಲ್ಲಿರುವ ವೈದ್ಯರ ಭವನದಲ್ಲಿ ಆಯೋಜಿಸಿದ್ದ ಸಮುದಾಯ ಸಂಗಮ ಕಾರ್ಯಕ್ರಮವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮೈಸೂರು ವಿಭಾಗದ ಉಪನಿರ್ದೇಶಕಿ ಡಾ.ಬಿ.ಮಲ್ಲಿಕಾ ಉದ್ಘಾಟಿಸಿದರು.

ಮೈಸೂರು,ಮಾ.16(ಎಂಟಿವೈ)–ಲೈಂಗಿಕ ಅಲ್ಪಸಂಖ್ಯಾತರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸರ್ಕಾರ ವಿವಿಧ ಯೋಜನೆಗಳನ್ನು ಜಾರಿಗೆ ತಂದಿದ್ದು, ಆ ಯೋಜನೆಗಳ ಸೌಲಭ್ಯ ಪಡೆದುಕೊಳ್ಳುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮೈಸೂರು ವಿಭಾಗದ ಉಪನಿರ್ದೇಶಕಿ ಡಾ.ಬಿ.ಮಲ್ಲಿಕಾ ಸಲಹೆ ನೀಡಿದ್ದಾರೆ.

ಮೈಸೂರಿನ ನಜರ್‌ಬಾದ್‌ನಲ್ಲಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವೈದ್ಯರ ಭವನದಲ್ಲಿ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಗಾರ್ಡ್ ಸಂಸ್ಥೆಯ ಎಂಎಸ್‌ಎಂ–ಟಿಐ ಯೋಜನೆ ಹಾಗೂ ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಸಮುದಾಯ ಸಂಗಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಲ್ಪಸಂಖ್ಯಾತರು ಸಮಾಜದಲ್ಲಿ ಗೌರವಯುತವಾಗಿ ಬದುಕಬೇಕು. ಸಮಾಜದಲ್ಲಿ ಎಲ್ಲರೂ ವ್ಯಕ್ತಿಗೌರವಕ್ಕೆ ಸಂಬಂಧಿಸಿದಂತೆ ಹಲವು ನಿಯಮಗಳನ್ನು ಜಾರಿಗೊಳಿಸಿದೆ. ಇದರೊಂದಿಗೆ ಲೈಂಗಿಕ ಅಲ್ಪಸಂಖ್ಯಾತರ ಹಿತ ಕಾಯುವ ನಿಟ್ಟಿನಲ್ಲಿ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಿದೆ ಎಂದು ತಿಳಿಸಿದರು.

ಸರ್ಕಾರ ಜಾರಿಗೆ ತಂದಿರುವ ವಿವಿಧ ಯೋಜನೆಗಳ ಸದುಪಯೋಗ ಪಡೆದುಕೊಂಡು ಗೌರವಯುತ ಜೀವನ ನಡೆಸಲು ಮುಂದಾಗಬೇಕು. ಸಮಾಜದ ಮುಖ್ಯವಾಹಿನಿಗೆ ತರಲು ಅನೇಕ ಕಾರ್ಯಕ್ರಮಗಳನ್ನು ಈಗಾಗಲೇ ಅನುಷ್ಠಾನಗೊಳಿಸಲಾಗಿದೆ. ಅವುಗಳ ನೆರವನ್ನು ಪಡೆದುಕೊಳ್ಳಬೇಕು. ಸರ್ಕಾರದ ಯೋಜನೆಗಳನ್ನು ಅರ್ಹರಿಗೆ ತಲುಪಿಸುವ ನಿಟ್ಟಿನಲ್ಲಿ ಸ್ವಯಂಸೇವಾ ಸಂಘಗಳು ಕಾರ್ಯೋನ್ಮುಖವಾಗಬೇಕು ಎಂದು ಸಲಹೆ ನೀಡಿದರು.

ಲೈಂಗಿಕ ಅಲ್ಪಸಂಖ್ಯಾತರನ್ನು ಸ್ವಾವಲಂಬಿಗಳಾಗಿ ರೂಪಿಸಲು ಸರ್ಕಾರ ನೆರವು ನೀಡುತ್ತಿದೆ. ಅವರಿಗೆ ಕೌಶಲ್ಯ ತರಬೇತಿ ನೀಡುವ ಯೋಜನೆಯನ್ನೂ ಜಾರಿಗೆ ತಂದಿದೆ. ಅದರಿಂದ ವಿವಿಧ ತರಬೇತಿ ಪಡೆದುಕೊಂಡು ಸ್ವ–ಉದ್ಯೋಗ ಆರಂಭಿಸಬಹುದಾಗಿದೆ. ಇದಕ್ಕಾಗಿ ಸಾಲ ಸೌಲಭ್ಯವೂ ಸಿಗುತ್ತದೆ ಎಂದರು.

ಸ್ವಾವಲಂಬಿ ಹಾಗೂ ಗೌರವಯುತ ಜೀವನ ನಡೆಸುವುದಕ್ಕೆ ಆದ್ಯತೆ ನೀಡುವುದರೊಂದಿಗೆ ಆರೋಗ್ಯದ ಕಡೆ ಹೆಚ್ಚಿನ ಗಮನ ಕೊಡಬೇಕು. ಪೌಷ್ಟಿಕ ಆಹಾರ ತೆಗೆದುಕೊಳ್ಳಬೇಕು. ಸರಿಯಾದ ಆಹಾರ ಸೇವನೆ ಮಾಡಿದರೆ ಖಾಯಿಲೆ ಬರದಂತೆ ತಡೆಗಟ್ಟಬಹುದು. ಅಗತ್ಯ ಮುನ್ನೆಚ್ಚರಿಕೆ ತೆಗೆದುಕೊಂಡರೆ ಯಾವುದೇ ರೋಗ ಉಲ್ಬಣವಾಗುವುದಿಲ್ಲ. ಹೆಚ್‌ಐವಿ ಸೋಂಕು ಬರದಂತೆ ನೋಡಿಕೊಳ್ಳಬೇಕು. ಸೋಂಕು ತಗುಲಿದ್ದರೆ ಏನು ಮಾಡಬೇಕು, ರೋಗದ ಲಕ್ಷಣಗಳ ಬಗ್ಗೆ ತಿಳಿದುಕೊಳ್ಳಬೇಕು. ಒಳ್ಳೆ ವ್ಯಕ್ತಿತ್ವ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಮೈಸೂರು ವಿಶ್ವವಿದ್ಯಾನಿಲಯದ ಅಣುಜೀವಿ ಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ.ಬಿ.ಅಮೃತಕುಮಾರಿ ಮಾತನಾಡಿ, ಆರೋಗ್ಯ ಕಾಪಾಡಿಕೊಳ್ಳಲು ಹೆಚ್ಚಿನ ಆದ್ಯತೆ ನೀಡಬೇಕು. ಹೆಚ್‌ಐವಿ ಮಾತ್ರವಲ್ಲದೆ, ಸಾಕಷ್ಟು ಗುಪ್ತರೋಗಗಳು ಕಾಡುತ್ತವೆ. ಅವುಗಳ ಬಗ್ಗೆ ಗಮನ ಹರಿಸಬೇಕು. ಗುಪ್ತರೋಗಗಳು ಹೆಚ್ಚಾದರೆ ವ್ಯತಿರಿಕ್ತ ಪರಿಣಾಮ ಬೀರಬಹುದು. ಈ ನಿಟ್ಟಿನಲ್ಲಿ ಗುಪ್ತರೋಗಗಳನ್ನು ನಿರ್ಲಕ್ಷಿಸದೇ ಸಕಾಲದಲ್ಲಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ಸನ್ಮಾನ ಸ್ವೀಕರಿಸಿದ ಬಳಿಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯಾಧಿಕಾರಿ ಡಾ.ಮೊಹಮ್ಮದ್ ಸಿರಾಜ್ ಅಹ್ಮದ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಕಾಲೇಜು ವಿದ್ಯಾರ್ಥಿಗಳಲ್ಲಿ ಎಂಎಸ್‌ಎಂ(ಪುರುಷ–ಪುರುಷರ ಸಂಬಂಧ) ಹೆಚ್ಚಾಗುತ್ತಿರುವ ಆತಂಕಕಾರಿ ಅಂಶ ಗಮನಕ್ಕೆ ಬಂದಿದೆ. ಇಂತಹ ಲಕ್ಷಣಗಳು ಕಂಡು ಬಂದರೆ ಕೌನ್ಸೆಲಿಂಗ್‌ಗೆ ಒಳಗಾಗಬೇಕು. ಆರಂಭದಲ್ಲಿಯೇ ಇಂತಹ ಸಮಸ್ಯೆ ಗುರುತಿಸಿದರೆ, ಬಗೆಹರಿಸಬಹುದಾಗಿದೆ. ಗಾರ್ಡ್ ಸಂಸ್ಥೆ ಎಂಎಸ್‌ಎಂ ಸಮಸ್ಯೆ ಕುರಿತು ಕಾರ್ಯನಿರ್ವಹಿಸುತ್ತಿದೆ. ಇನ್ನಷ್ಟು ಪರಿಣಾಮಕಾರಿಯಾಗಿ ಕೆಲಸ ಮಾಡಿ ಸಾಧ್ಯವಾದಷ್ಟು ಎಂಎಸ್‌ಎಂ ಸಮಸ್ಯೆ ಕಡಿಮೆ ಮಾಡಬೇಕು. ಲೈಂಗಿಕ ಅಲ್ಪಸಂಖ್ಯಾತರು ಆರೋಗ್ಯ ಕಾಪಾಡಿಕೊಳ್ಳಲು ಗಮನ ಹರಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಗಾರ್ಡ್ ಸಂಸ್ಥೆ ಅಧ್ಯಕ್ಷ ಡಾ.ಎಸ್.ದಿವಾಕರ್, ಅಣುಜೀವ ಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಎಂ.ಶ್ವೇತ, ಗಾರ್ಡ್ ಸಂಸ್ಥೆಯ ಯೋಜನಾ ನಿರ್ದೇಶಕ ಎಲ್.ಸುಬ್ರಹ್ಮಣ್ಯ, ಕಾರ್ಯದರ್ಶಿ ಎ.ವಿ.ಮ್ಯಾಥ್ಯೂ ಇನ್ನಿತರರು ಉಪಸ್ಥಿತರಿದ್ದರು.

ನಾಳೆ ವಿಶೇಷ ಸ್ವಾತಿ ಪೂಜೆ



ಮೈಸೂರು, ಮಾ.16–ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಮಾ.18ರಂದು ಸ್ವಾತಿ ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿದೆ. ಅಂದು ಬೆಳಗ್ಗೆ 8ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10.30ಕ್ಕೆ ಅಲಂಕಾರ, 11.30ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಶಾತ್ತುಮೊರೈ, 1 ಗಂಟೆಗೆ ತೀರ್ಥ ಪ್ರಸಾದ ವಿನಿಯೋಗ ಏರ್ಪಡಿಸಲಾಗಿದೆ. ಸಂಜೆ 7.30ಕ್ಕೆ ಪ್ರಾಕಾರೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಮುಖ್ಯಸ್ಥ ವಿದ್ವಾನ್ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಿಳಿಸಿದ್ದಾರೆ. ಮಾಹಿತಿಗೆ ಮೊಬೈಲ್ 9342188323, 7598832271 ಸಂಪರ್ಕಿಸಬಹುದು.

ಡಾ.ಟಿ.ರಮೇಶ್‌ಗೆ ರಾಜ್ಯ ಎನ್‌ಎಸ್‌ಎಸ್ ಪ್ರಶಸ್ತಿ



ಮೈಸೂರು,ಮಾ.16–ಮೈಸೂರಿನ ಬಾಸುದೇವ ಸೋಮಾನಿ ಕಾಲೇಜಿನ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಡಾ.ಟಿ.ರಮೇಶ್ ಅವರಿಗೆ ರಾಷ್ಟ್ರೀಯ ಸೇವಾ ಯೋಜನಾ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ 2022–23ನೇ ಸಾಲಿನ ಅತ್ಯುತ್ತಮ ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಹಾಗೂ ಕಾಲೇಜಿಗೆ ಉತ್ತಮ ಎನ್‌ಎಸ್‌ಎಸ್ ಘಟಕ ರಾಜ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ. ಮಾ.17 ರಂದು ಬೆಂಗಳೂರಿನ ರಾಜಭವನದಲ್ಲಿ ನಡೆಯುವ ಸಮಾರಂಭದಲ್ಲಿ ರಾಜ್ಯಪಾಲರಿಂದ ಪ್ರಶಸ್ತಿಯನ್ನು ಡಾ.ಟಿ.ರಮೇಶ್ ಮತ್ತು ಪ್ರಾಂಶುಪಾಲ ಡಾ.ಎಂ.ಮಹದೇವಸ್ವಾಮಿ ಸ್ವೀಕರಿಸಲಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಒಂದನೇ ಪುಟದಿಂದ

ವಸತಿ ಶಾಲೆ ವಿದ್ಯಾರ್ಥಿ ಸಾವು

ಕೆಲ ಮಕ್ಕಳಲ್ಲಿ ವಾಂತಿ, ಬೇದಿ, ತಲೆ ನೋವು ಕಾಣಿಸಿಕೊಂಡಿದ್ದು, ಮಕ್ಕಳನ್ನು ನೋಡಿಕೊಳ್ಳುತ್ತಿದ್ದವರು ಸ್ಥಳದಲ್ಲೇ ಔಷದೋಪಚಾರ ಮಾಡಿ, ಕೆಲವರನ್ನು ಪೋಷಕರ ಜೊತೆಗೆ ಕಳುಹಿಸಿಕೊಟ್ಟಿದ್ದಾರೆ.

ಶನಿವಾರ ಮಧ್ಯಾಹ್ನದ ವೇಳೆಗೆ ಊಟ ಸೇವಿಸಿದ ಹಲವು ವಿದ್ಯಾರ್ಥಿಗಳು ತೀವ್ರ ಅಸ್ವಸ್ಥಗೊಂಡ ಪರಿಣಾಮ ವಿದ್ಯಾರ್ಥಿಗಳನ್ನು ಭಾನುವಾರ ಬೆಳಿಗ್ಗೆ ಸಂಸ್ಥೆಯ ಲಂಕೇಶ್ ಮಳವಳ್ಳಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಕರೆತಂದು ಚಿಕಿತ್ಸೆ ಕೊಡಿಸಿದ್ದಾರೆ. ಆದರೆ ಬೆಳಿಗ್ಗೆ 8ಗಂಟೆ ಸಮಯದಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಕಿರ್ಶನ್ ಎಂಬ ವಿದ್ಯಾರ್ಥಿ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾನೆ.

ಅನಾಥ ಮಕ್ಕಳಿಗೆ ಆಶ್ರಯ ನೀಡಿದ್ದ ವಸತಿ ಸಂಸ್ಥೆ: ಮಳವಳ್ಳಿ ತಾಲೂಕಿನ ಟಿ.ಕಾಗೇಪುರ ಗ್ರಾಮದ ಗೋಕುಲ ವಿದ್ಯಾ ಸಂಸ್ಥೆಯಲ್ಲಿ ಒಟ್ಟು 202 ಮಕ್ಕಳು 1ರಿಂದ 8ನೇ ತರಗತಿವರೆಗೆ ವಿದ್ಯಾಭ್ಯಾಸ ಮಾಡುತ್ತಿದ್ದು, ಮದ್ದೂರು ತಾಲೂಕಿನ ಲಕ್ಷ್ಮೀಗೌಡನ ದೊಡ್ಡಿ ಗ್ರಾಮದ ಲಂಕೇಶ್ ಮತ್ತು ಜಗದೀಶ್ ಎಂಬುವವರು ಈ ವಿದ್ಯಾಸಂಸ್ಥೆ ನಡೆಸುತ್ತಿದ್ದಾರೆ. ಜೊತೆಗೆ ಮೇಘಾಲಯ ಮೂಲದ 24 ಮಂದಿಯನ್ನು ಅನಧಿಕೃತವಾಗಿ ಇರಿಸಿಕೊಂಡು ಶಿಕ್ಷಣ ನೀಡುತ್ತಿದ್ದರು ಎಂದು ಹೇಳಲಾಗಿದ್ದು, ಅಲ್ಲದೆ, ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ವಿದ್ಯಾಸಂಸ್ಥೆಯಲ್ಲಿ ಟ್ಯೂಷನ್ ನಡೆಸುತ್ತಿದ್ದರು ಎಂಬ ಮಾಹಿತಿ ಲಭ್ಯವಾಗಿದೆ.

ಆಸ್ಪತ್ರೆಗೆ ದಾಖಲಿಸಿದಾಗ ಅಸ್ವಸ್ಥಗೊಂಡ ಮಕ್ಕಳಿಗೆ ತಾಲೂಕು ವೈದ್ಯಾಧಿಕಾರಿ ಡಾ.ಪಿ.ವೀರಭದ್ರಪ್ಪ, ಸಾರ್ವಜನಿಕ ಆಸ್ಪತ್ರೆ ಆಡಳಿತಾಧಿಕಾರಿ ಡಾ.ಸಂಜಯ್ ನೇತೃತ್ವದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಆಸ್ಪತ್ರೆಗೆ ಕ್ಷೇತ್ರದ ಶಾಸಕ ಪಿ.ಎಂ.ನರೇಂದ್ರಸ್ವಾಮಿ, ಮಾಜಿ ಶಾಸಕ ಡಾ.ಕೆ.ಅನ್ನದಾನಿ, ಜಿಲ್ಲಾಧಿಕಾರಿ ಡಾ.ಕುಮಾರ, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಜಿಲ್ಲಾ ಆರೋಗ್ಯ ವೈದ್ಯಾಧಿಕಾರಿ ಡಾ.ಮೋಹನ್, ತಹಶೀಲ್ದಾರ್ ಎಸ್.ವಿ.ಲೋಕೇಶ್ ಭೇಟಿ ನೀಡಿ ಮಾಹಿತಿ ಪಡೆದುಕೊಂಡರು.

ಜಿಲ್ಲಾಧಿಕಾರಿ ಡಾ.ಕುಮಾರ ಮತ್ತು ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಟಿ.ಕಾಗೇಪುರದ ಗೋಕುಲ ವಿದ್ಯಾಸಂಸ್ಥೆಗೂ ಭೇಟಿ ನೀಡಿ ಪರಿಶೀಲನೆ ನಡೆಸಿ, ಅಲ್ಲಿದ್ದ ಕೆಲ ವಿದ್ಯಾರ್ಥಿಗಳಿಂದ ಮಾಹಿತಿ ಪಡೆದು ಕೊಂಡಿದ್ದಾರೆ. ಮಳವಳ್ಳಿ ತಾಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಜೊತೆಗೆ ಗಂಭೀರ ಸ್ಥಿತಿಯಲ್ಲಿರುವ 10ಕ್ಕೂ ಹೆಚ್ಚು ಮಕ್ಕಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಮಂಡ್ಯ ಮಿಮ್ಸ್ ಆಸ್ಪತ್ರೆಗೆ ಡಿಸಿ ಕುಮಾರ ಅವರ ಸೂಚನೆ ಮೇರೆಗೆ ಸ್ಥಳಾಂತರ ಮಾಡಲಾಗಿದೆ.

ಇದಲ್ಲದೇ ಅಸ್ವಸ್ಥಗೊಂಡು ಗಂಭೀರವಾಗಿರುವ ಇನ್ನು ಕೆಲವರು ಮೈಸೂರು ಮತ್ತು ಕೆ.ಎಂ.ದೊಡ್ಡಿಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಊಟದಲ್ಲಿ ವಿಷಾಂಶ ಇತ್ತೇ ಎಂಬುದರ ಬಗ್ಗೆ ಅನುಮಾನ ವ್ಯಕ್ತವಾಗಿದ್ದು, ಮಳವಳ್ಳಿ ಗ್ರಾಮಾಂತರ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಐದು ಮಂದಿ ವಿರುದ್ಧ ಎಫ್‌ಐಆರ್: ಲಕ್ಷ್ಮಿ ನರಸಿಂಹಸ್ವಾಮಿ ಹೋಟೆಲ್‌ನ ಸಿದ್ದರಾಜು, ಮಳವಳ್ಳಿಯ ಮದನ್ ಜ್ಯುವೆಲರ್ಸ್ ಮಾಲೀಕ ಪುಷ್ಪೇಂದ್ರಕುಮಾರ್, ಮದನ್ ಮೋಹನ್ ಸಮುದಾಯ ಭವನದ ಮ್ಯಾನೇಜರ್ ಕೃಷ್ಣ, ಗೋಕುಲ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಲಂಕೇಶ್, ವಿದ್ಯಾಸಂಸ್ಥೆಯ ಸಂಸ್ಥೆಯ ಅಧ್ಯಕ್ಷ ಜಗದೀಶ್, ವಾರ್ಡನ್ ಅಭಿಷೇಕ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಲಂಕೇಶ್, ಸಿದ್ದರಾಜು ಮತ್ತು ಅಭಿಷೇಕ್ ಅವರನ್ನು ಬಂಧಿಸಲಾಗಿದೆ.

ಆಡಳಿತ ಮಂಡಳಿ ವಿರುದ್ಧ ನಿರ್ಧಾಕ್ಷಿಣ್ಯ ಕ್ರಮ: ಮಂಡ್ಯ ಮಿಮ್ಸ್ ಆಸ್ಪತ್ರೆಯಲ್ಲಿ ವಿದ್ಯಾರ್ಥಿಗಳ ಆರೋಗ್ಯ ವಿಚಾರಿಸಿ, ಅಧಿಕಾರಿಗಳಿಂದ ಮಕ್ಕಳ ಆರೋಗ್ಯದ ಬಗ್ಗೆ ಮಾಹಿತಿ ಪಡೆದುಕೊಂಡು, ಪೋಷಕರಿಗೆ ಸಾಂತ್ವಾನ ಹೇಳಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಈ ಪ್ರಕರಣದಲ್ಲಿ ಶಾಲೆ ಆಡಳಿತ ಮಂಡಳಿ ವಿರುದ್ಧ ನಿರ್ಧಾಕ್ಷಿಣ್ಯ ಕ್ರಮ ಕೈಗೊಳ್ಳುತ್ತೇವೆ ಎಂದರು.

ಬಣ್ಣ ಮಿಶ್ರಣ ಆಗಿತ್ತೆಂಬುದರ ಬಗ್ಗೆ ತನಿಖೆ: ಘಟನೆ ಬಗ್ಗೆ ಸಂಪೂರ್ಣ ಮಾಹಿತಿ ಪಡೆದು ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ವಿದ್ಯಾರ್ಥಿ ಸಾವಿನ ಬಗ್ಗೆ ಸೂಕ್ತ ತನಿಖೆ ಮಾಡಲಾಗುತ್ತಿದೆ. ಮೇಲ್ನೋಟಕ್ಕೆ ಫುಡ್ ಪಾಯಿಸನ್ ರೀತಿ ಕಾಣಿಸುತ್ತಿದ್ದು, ಆಹಾರಕ್ಕೆ ಬಣ್ಣ ಮಿಕ್ಸ್ ಆಗಿತ್ತೆ ಎಂದು ತನಿಖೆ ಮಾಡುತ್ತಿದ್ದೇವೆ. ಬಿಇಒ ಅವರಿಂದ ದೂರು ಪಡೆದು ಪ್ರಕರಣ ದಾಖಲು ಮಾಡಿಕೊಂಡಿದ್ದೇವೆ ಎಂದು ತಿಳಿಸಿದರು.

ಊಟ ತೆಗೆದುಕೊಳ್ಳುವುದು ರೂಢಿಯಲ್ಲಿತ್ತು: ಗೋಕುಲ ವಿದ್ಯಾಸಂಸ್ಥೆಯ ಲಂಕೇಶ್ ಮಾತನಾಡಿ, ಮೇಘಾಲಯದ 24 ವಿದ್ಯಾರ್ಥಿಗಳನ್ನು ಪೋಷಕರ ಅನುಮತಿ ಮೇರೆಗೆ ದತ್ತು ಪಡೆದು ಗೋಕುಲ ವಿದ್ಯಾಸಂಸ್ಥೆಯಲ್ಲಿ ಶಿಕ್ಷಣ ನೀಡಲಾಗುತ್ತಿತ್ತು. ಹುಟ್ಟುಹಬ್ಬ ಸೇರಿದಂತೆ ಇತರೆ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳಿಗೆ ಊಟ ಕೊಡುವುದು ರೂಢಿಯಲ್ಲಿತ್ತು. ಅದರಂತೆ ಮದನ್‌ಮೋಹನ್ ಸಮುದಾಯದಲ್ಲಿ ಕಾರ್ಯಕ್ರಮ ನಡೆಸಿ, ಇಲ್ಲಿನ ವಿದ್ಯಾರ್ಥಿಗಳಿಗೆ ಊಟ ಕೊಟ್ಟಿದ್ದಾರೆ. ಊಟ ತಿಂದ ವಿದ್ಯಾರ್ಥಿಗಳಿಗೆ ವಾಂತಿ ಪ್ರಾರಂಭವಾಗಿದೆ. ತಕ್ಷಣವೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ಶಾಲೆಗೆ ಕರೆತರಲಾಗಿತ್ತು, ರಾತ್ರಿ ವಾಂತಿಬೇದಿ ಹೆಚ್ಚಾಗಿದ್ದರಿಂದ ಬೆಳಿಗ್ಗೆ ಆಸ್ಪತ್ರೆಗೆ ಸೇರಿಸಲಾಗಿತ್ತು, ಒರ್ವ ವಿದ್ಯಾರ್ಥಿ ಸಾವನ್ನಪ್ಪಿ ಉಳಿದ ಮಕ್ಕಳು ಚಿಕಿತ್ಸೆ ಪಡೆಯುತ್ತಿದ್ದಾರೆಂದು ಹೇಳಿದರು.

ಮತ್ತೆ ಮರುಕಳಿಸದಂತೆ ಕ್ರಮ ವಹಿಸಿ: ಘಟನೆ ಬಗ್ಗೆ ಟ್ವೀಟ್ ಮಾಡಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮಳವಳ್ಳಿ ತಾಲೂಕಿನ ಟಿ.ಕಾಗೇಪುರದ ಖಾಸಗಿ ವಸತಿ ಶಾಲೆಯಲ್ಲಿ ಕಲುಷಿತ ಆಹಾರ ಸೇವಿಸಿ ವಿದ್ಯಾರ್ಥಿ ಮೃತಪಟ್ಟಿರುವ ಘಟನೆ ಅತ್ಯಂತ ದುರದೃಷ್ಟಕರ. ಇದರಿಂದ ನನಗೆ ಬಹಳ ನೋವುಂಟಾಗಿದೆ ಮೃತ ವಿದ್ಯಾರ್ಥಿಯ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಮತ್ತೆ ಇಂಥ ಘಟನೆಗಳು ಮರುಕಳಿಸದಿರಲಿ. ಘಟನೆ ಬಗ್ಗೆ ಸಂಬಂಧಿತ ಅಧಿಕಾರಿಗಳಿಂದ ಮಾಹಿತಿ ಪಡೆದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಚಿಕಿತ್ಸೆ ಕೊಡಿಸಬೇಕೆಂದು ಸೂಚಿದ್ದೇನೆ. ಬೇಸಿಗೆ ಕಾಲವಾದ್ದರಿಂದ ವಿದ್ಯಾರ್ಥಿಗಳಿಗೆ ನೀಡಲಾಗುವ ಆಹಾರ, ಕುಡಿಯುವ ನೀರಿನ ಬಗ್ಗೆ ಇನ್ನೂ ಹೆಚ್ಚಿನ ಕಟ್ಟೆಚ್ಚರ ವಹಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ತಿಳಿಸಿದ್ದಾರೆ.

ಕಾರ್ಯದರ್ಶಿಗೆ ತಾಳ ಮೇಳ ಇಲ್ಲ

ಎಂದು ಗುಡುಗಿದ್ದಾರೆ. ನಮ್ಮ ಸರ್ಕಾರದಲ್ಲಿ ಸಚಿವರಿಗೆ ಮತ್ತು ಕಾರ್ಯದರ್ಶಿಗೂ ತಾಳ ಮೇಳ ಇಲ್ಲ. ಇದೇ ರೀತಿ ಮುಂದುವರೆದರೆ ಶಾಸಕರು ಬೇರೆ ತೀರ್ಮಾನ ಕೈಗೊಳ್ಳುತ್ತಾರೆ ಎಂದು ಎಚ್ಚರಿಕೆ ನೀಡಿದರು. ಕಾಗವಾಡ ಪಟ್ಟಣದಲ್ಲಿ ಸುಮಾರು 8.60 ಕೋಟಿ ರೂ. ವೆಚ್ಚದಲ್ಲಿ ಪ್ರಜಾ ಸೌಧ ಕಟ್ಟಡ ನಿರ್ಮಾಣ ಮಾಡಲು ಅನುಮೋದನೆ ನೀಡುವಂತೆ ರಾಜು ಕಾಗೆ ರಾಜೇಂದ್ರ ಕಠಾರಿಯಾ ಅವರ ಕಚೇರಿಗೆ ತೆರಳಿದ್ದರು. ಈ ವೇಳೆ ಗ್ರಾಮ ಲೆಕ್ಕಾಧಿಕಾರಿಗಳು ಮತ್ತು ನನ್ನ ಬಗ್ಗೆ ಹಗುರವಾಗಿ ಮಾತನಾಡಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಅಧಿವೇಶನದಲ್ಲಿ ಬಹಿರಂಗಪಡಿಸುತ್ತೇನೆ

ಆದರೆ, ನಮ್ಮ ಕೇಂದ್ರದ ಸಚಿವರು ಇದರಲ್ಲಿ ಭಾಗಿ ಆಗಿಲ್ಲ ಎಂದು ಸ್ಪಷ್ಟಪಡಿಸಿದರು. ರನ್ಯಾಳಿಗೆ ಕೆಐಎಡಿಬಿಯಿಂದ ಜಮೀನು ಕೊಟ್ಟ ವಿಚಾರ ಕುರಿತು ಮಾತನಾಡಿ, ಜಮೀನು ಕೊಟ್ಟಿದ್ದನ್ನು ಸ್ವತಃ ನಿರಾಣಿ ಒಪ್ಪಿಕೊಂಡಿದ್ದಾರೆ. 12 ಏಕರೆ ಜಮೀನು ಕೊಟ್ಟಿದ್ದು, ಹಣ ಕಟ್ಟದೇ ಇರೋದಕ್ಕೆ ಅದು ರದ್ದಾಗಿದೆ. 12 ಎಕರೆಯದ್ದು ಯಾರೋ ಒಬ್ಬರು ಹಣ ಕೊಡುತ್ತೇನೆ ಎಂದಿದ್ದರು ಅವರು ಕೊಟ್ಟಿಲ್ಲ ಎಂದ ಅವರು, ಹಣ ಕೊಡುತ್ತೇನೆ ಎಂದವರು ಸಚಿವರಾ? ಎಂಬ ಪ್ರಶ್ನೆಗೆ ಮುಗುಳ್ನಕ್ಕರು.

ತಿರಸ್ಕರಿಸಿದ ಮೈಸೂರು ಮೃಗಾಲಯ

2019ರಲ್ಲಿ ಮೃಗಾಲಯ ಪ್ರಾಧಿಕಾರವು ಅಕ್ವೇರಿಯಂ ಕಟ್ಟಡವನ್ನು ಅಹ್ಮದಾಬಾದ್‌ನಲ್ಲಿ ಅಕ್ವಾಟಿಕ್ ಲೈಫ್ ಸೈನ್ಸ್ ನಿರ್ಮಿಸಿರುವ ನ್ಯೂಜಿಲೆಂಡ್ ಮೂಲದ ಕಂಪನಿಯಿಂದ ಪೂರ್ಣಗೊಳಿಸಲು ನಿರ್ಧರಿಸಿತ್ತು. ಆದರೆ, ಸರ್ಕಾರದಿಂದ ಅದಕ್ಕೆ ಅನುಮೋದನೆ ದೊರೆಯದ ಕಾರಣ ಮತ್ತೆ ಅಕ್ವೇರಿಯಂ ಕನಸು ಭಗ್ನವಾಯಿತು.

2020ರಲ್ಲಿ ಸ್ವಿಸ್ ಚಾಲೆಂಜ್ ಮೆಥೆಡ್‌ನಲ್ಲಿ ಅಕ್ವೇರಿಯಂ ನಿರ್ಮಾಣಕ್ಕೆ ಮತ್ತೆ ಚಟುವಟಿಕೆ ಗರಿಗೆದರಿತು. ವಿವಿಧ ಕಾರಣ ಹಾಗೂ ನ್ಯೂನತೆಯಿಂದಾಗಿ ಈ ವಿಧಾನದಲ್ಲಿ ಅಕ್ವೇರಿಯಂ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರದಿಂದ ಅನುಮತಿ ಸಿಗಲಿಲ್ಲ. 2024ರಲ್ಲಿ ಅಕ್ವೇರಿಯಂ ಕಟ್ಟಡದ ಸ್ಥಿತಿಗತಿ ಪರಿಶೀಲನೆ ನಡೆಸಿ, ಕಟ್ಟಡದ ವಿನ್ಯಾಸಕ್ಕೆ ಅನುಗುಣವಾಗಿ ಅಕ್ವೇರಿಯಂ ಪೂರ್ಣ ಪ್ರಮಾಣದಲ್ಲಿ ನಿರ್ಮಿಸುವುದಕ್ಕೆ ಬೇಕಾಗುವ ಅನುದಾನದ ಅಂದಾಜು ಪಟ್ಟಿ ತಯಾರಿಸಿ ಡಿಪಿಆರ್ ಸಿದ್ಧಪಡಿಸಲಾಯಿತು. ಅಕ್ವೇರಿಯಂ ಅನ್ನು ಅಂತರರಾಷ್ಟ್ರೀಯ ಗುಣಮಟ್ಟದೊಂದಿಗೆ ದೀರ್ಘ ಬಾಳಿಕೆಯ ಯೋಜನೆಯಾಗಿ ರೂಪಿಸುವುದಕ್ಕಾಗಿ ಅಂದಾಜು 45 ಕೋಟಿ ರೂ. ವೆಚ್ಚವಾಗಲಿರುವ ಅಂಶದೊಂದಿಗೆ ಡಿಪಿಆರ್ ತಯಾರಿಸಿ ಸರ್ಕಾರಕ್ಕೆ ಸಲ್ಲಿಸುವ ಪ್ರಕ್ರಿಯೆಗೆ ಚಾಲನೆ ದೊರೆತ್ತಿತ್ತು. ದೊಡ್ಡ ಮೊತ್ತದ ಹಣ ಬೇಕಾಗಿರುವುದರಿಂದ ಸರ್ಕಾರದ ಮಟ್ಟದಲ್ಲಿಯೇ ನಿರ್ಧಾರ ಕೈಗೊಳ್ಳಬೇಕಾಗುತ್ತದೆ. ಸಂಪುಟದ ಅನುಮೋದನೆ ಅಗತ್ಯವಾಗಿದೆ.

ಕೊಡಗಿನಲ್ಲಿ ಗುಡುಗು ಸಹಿತ ಆಲಿಕಲ್ಲು ಮಳೆ

ಕಣ್ಮರೆಯಾಗಿ ಜನರಲ್ಲಿ ನಿರಾಸೆ ಮೂಡಿಸಿದೆ. ಕಕ್ಕಬ್ಬೆ ಕುಂಜಿಲ ವ್ಯಾಪ್ತಿಯಲ್ಲಿ ಕಳೆದ ಕೆಲವು ದಿನಗಳ ಹಿಂದೆ ಉತ್ತಮ ಮಳೆಯಾಗಿತ್ತು. ಅದರಂತೆ ಎಮ್ಮೆಮಾಡು ವ್ಯಾಪ್ತಿಯಲ್ಲೂ ಕಳೆದ ವಾರ ಒಂದು ಇಂಚಿಗೂ ಅಧಿಕ ಮಳೆ ಸುರಿದಿದ್ದು, ಭಾನುವಾರ ಕೂಡ ಆಲಿಕಲ್ಲು ಸಹಿತ ಉತ್ತಮ ಮಳೆಯಾಗಿದೆ. ಭಾನುವಾರ ಸುರಿದ ಮಳೆ ಜನರ ಸಮಸ್ಯೆಯನ್ನು ಬಗೆಹರಿಸದಿದ್ದರೂ ಜನರಲ್ಲಿ ಮುಂದೆ ಉತ್ತಮ ಮಳೆಯಾಗುವ ನಿರೀಕ್ಷೆ ಮೂಡಿಸಿದೆ.

ಏ.2ರಿಂದ 14ರವರೆಗೆ ವೈರಮುಡಿ ಉತ್ಸವ

ಯಾವುದೇ ಲೋಪವಾಗದಂತೆ ಎಚ್ಚರಿಕೆ ವಹಿಸಲು ಸಚಿವರ ಸೂಚನೆ

ಮಂಡ್ಯ,ಮಾ.16– ಜಿಲ್ಲಾಡಳಿತದ ವತಿಯಿಂದ ಆಯೋಜಿಸಲಾಗುವ ವೈರಮುಡಿ ಉತ್ಸವದಲ್ಲಿ ಯಾವುದೇ ಲೋಪವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ವೈರಮುಡಿ ಉತ್ಸವದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಏಪ್ರಿಲ್ 2ರಿಂದ 14ರವರೆಗೆ ವಿವಿಧ ಪೂಜಾ ಕೈಂಕರ್ಯಗಳು ನಡೆಯಲಿವೆ. ಏಪ್ರಿಲ್ 7 ರಂದು ನಡೆಯಲಿರುವ ವೈರಮುಡಿ ಉತ್ಸವದಲ್ಲಿ ಲಕ್ಷಾಂತರ ಭಕ್ತಾದಿಗಳು ಭಾಗವಹಿಸಲಿದ್ದಾರೆ. ಬೇಸಿಗೆ ಬಿಸಿಲಿನ ತಾಪ ಹೆಚ್ಚಿದ್ದು, ಭಕ್ತಾದಿಗಳಿಗೆ ಮುಖ್ಯವಾಗಿ ಕುಡಿಯುವ ನೀರು ಸೇರಿದಂತೆ ಎಲ್ಲಾ ಮೂಲಭೂತ ವ್ಯವಸ್ಥೆಗಳಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳಲು ಅಧಿಕಾರಿಗಳು ಈಗಿನಿಂದಲೇ ಕಾರ್ಯಪ್ರವೃತ್ತರಾಗಬೇಕು ಎಂದರು.

ಕುಡಿಯುವ ನೀರು, ದಾಸೋಹ ಭವನದಲ್ಲಿ ಆಹಾರ ವಿತರಣೆ ಹಾಗೂ ಪ್ರಸಾದ ವಿತರಣೆ ಭಾಗಗಳಲ್ಲಿ ಆಹಾರ ಸುರಕ್ಷತಾ ಅಧಿಕಾರಿಗಳನ್ನು ನಿಯೋಜಿಸಿ ಪರೀಕ್ಷೆಗೆ ಒಳಪಡಿಸಿದ ನಂತರವೇ ವಿತರಣೆಯಾಗಬೇಕು. ಮೇಲುಕೋಟೆಗೆ ವಿವಿಧ ಭಾಗಗಳಿಂದ ಸಂಪರ್ಕಿಸುವ ರಸ್ತೆಗಳ ದುರಸ್ತಿ ಕೆಲಸಗಳು ವೇಗವಾಗಿ ನಡೆಸಿ ಪೂರ್ಣಗೊಳಿಸಬೇಕು. ವಾಹನ ನಿಲುಗಡೆ ಸ್ಥಳಗಳಲ್ಲಿ ಹೆಚ್ಚಿನ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಬೇಕು ಎಂದು ತಿಳಿಸಿದರು.



ಸಚಿವ ಚಲುವರಾಯಸ್ವಾಮಿ ವೈರಮುಡಿ ಉತ್ಸವದ ಪೂರ್ವಭಾವಿ ಸಭೆ ನಡೆಸಿದರು.

ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಮಾತನಾಡಿ, ಕುಡಿಯುವ ನೀರಿನ ಟ್ಯಾಂಕರ್ ದೇವಸ್ಥಾನದ ಸುತ್ತಲೂ, ಕಲ್ಯಾಣಿ, ಪಾರ್ಕಿಂಗ್ ಸ್ಥಳ ಸೇರಿದಂತೆ ಜನಸಂದಣಿ ಇರುವ ಸ್ಥಳಗಳಲ್ಲಿ ಟ್ಯಾಂಕರ್ ವ್ಯವಸ್ಥೆಯಾಗಬೇಕು. ಭಕ್ತಾದಿಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಿ. ವೈರಮುಡಿ ಉತ್ಸವದಲ್ಲಿ ಭಾಗವಹಿಸುವ ಭಕ್ತಾದಿಗಳಿಗೆ ದಾಸೋಹ ಭವನ ಪ್ರಾರಂಭವಾಗಿರುವ ಬಗ್ಗೆ ಮಾಹಿತಿ ನೀಡಲು ದೇವಸ್ಥಾನದ ಸುತ್ತಲೂ ಸೂಚನಾ ಫಲಕಗಳನ್ನು ಅಳವಡಿಸಿ, ದಸೋಹ ಭವನದಲ್ಲಿ ಜನಸಂದಣಿಯಾಗದಂತೆ ಬ್ಯಾರಿಕೇಡ್ ಹಾಕಬೇಕು. ದಸೋಹಕ್ಕೆ ಬೇಕಿರುವ ಆಹಾರ ಸಾಮಗ್ರಿಗಳ ದಾಸ್ತಾನು ಆಗಬೇಕು ಎಂದರು.

ದೇವಸ್ಥಾನ ಸುತ್ತ ಹೆಚ್ಚಿನ ಟ್ರಾನ್ಸ್‌ಫಾರ್ಮರ್ ಬೇಕಿದ್ದಲ್ಲಿ ವ್ಯವಸ್ಥೆ ಮಾಡಿಕೊಳ್ಳಿ, ಅಗತ್ಯವಿರುವ ಕಡೆ ಹೆಚ್ಚಿನ ವಿದ್ಯುತ್ ದೀಪಗಳ ವ್ಯವಸ್ಥೆಯಾಗಬೇಕು. ಕಲ್ಯಾಣಿಗಳ ಸ್ವಚ್ಛತೆಯನ್ನು ಕೈಗೊಳ್ಳಿ ಎಂದು ಸೂಚಿಸಿದರು.

ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿ, ಈ ಬಾರಿ 19ಲಕ್ಷ ರೂ ವೆಚ್ಚದಲ್ಲಿ ಶಾಶ್ವತವಾಗಿ ಸಿ.ಸಿ.ಟಿವಿ ಅಳವಡಿಸಲಾಗುವುದು. ಇದನ್ನು ವೀಕ್ಷಿಸಲು ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿಯಲ್ಲಿ ಅಗತ್ಯ ವ್ಯವಸ್ಥೆ ಮಾಡಲಾಗುವುದು. ಕಲ್ಯಾಣಿಗಳ ಬಳಿ ನುರಿತ ಈಜುಗಾರರನ್ನು ನೇಮಿಸಬೇಕು. ಕಲ್ಯಾಣಿಯ ಹತ್ತಿರ ವಿದ್ಯುತ್ ದೀಪಗಳು ಹಾಗೂ ಹೆಣ್ಣು ಮಕ್ಕಳಿಗೆ ಬಟ್ಟೆ ಬದಲಾಯಿಸಲು ಶೆಡ್‌ಗಳ ನಿರ್ಮಾಣವಾಗಬೇಕು ಎಂದರು.

ಸಭೆಯಲ್ಲಿ ಶಾಸಕ ಪಿ.ರವಿಕುಮಾರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಆರ್.ನಂದಿನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ, ಪಾಂಡವಪುರ ಉಪವಿಭಾಗಾಧಿಕಾರಿ ಶ್ರೀನಿವಾಸ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಇಂದು ವಿದ್ಯುತ್ ವ್ಯತ್ಯಯ

ನಾಗಮಂಗಲ: ಮೈಸೂರು–ಮಂಡ್ಯ ರಸ್ತೆ ಅಗಲೀಕರಣ ಮಾಡುತ್ತಿರುವುದರಿಂದ ವಿದ್ಯುತ್ ಸರಬರಾಜು ನಿಲುಗಡೆಯಾಗಲಿದೆ. ನಾಗಮಂಗಲ ಅರ್ಬನ್ ಎಚ್‌ಟಿ ಮಾರ್ಗದ ನಿರ್ವಹಣೆ ಕಾಮಗಾರಿ ನಿರ್ವಹಿಸುತ್ತಿರುವುದರಿಂದ ಮಾ.17ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ.

ಮಂಡ್ಯ ವಿವಿ ಸ್ವಾಗತ ಕಮಾನು ಕಾಮಗಾರಿಗೆ ಗುದ್ದಲಿ ಪೂಜೆ

ಮಂಡ್ಯ ವಿವಿ ಮುಚ್ಚೋಯ್ತು ಅನ್ನೋರಿಗೆ ಇದೇ ಉತ್ತರ, ನಾವು ವಿವಿ ಮುಚ್ಚಲ್ಲ: ಶಾಸಕ ಗಣಿಗ ರವಿಕುಮಾರ್

ಮಂಡ್ಯ: ವಿಶ್ವ ವಿದ್ಯಾಲಯದ ಕಮಾನು ಹಾಗೂ ಸಂಪರ್ಕ ರಸ್ತೆಗಳ 3 ಕೋಟಿ ವೆಚ್ಚದ ಕಾಮಗಾರಿಗೆ ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಗಣಿಗ ರವಿಕುಮಾರ್ ಗೌಡ ಗುದ್ದಲಿ ಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಮಂಡ್ಯ ವಿವಿಯ ಮುಖ್ಯದ್ವಾರ ಹಾಗೂ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ಮಾಡಲಾಗಿದೆ. ಮಂಡ್ಯ ವಿವಿ ಮುಚ್ಚೋಯ್ತು ಅನ್ನೋರಿಗೆ ಇದೇ ಉತ್ತರ. ನಾವು ವಿವಿ ಮುಚ್ಚಲ್ಲ, ನಮ್ಮ ಜಿಲ್ಲೆಯ ಯುವಕರಿಗೆ ಮಂಡ್ಯ ವಿವಿ ಇದ್ದೆ ಇರುತ್ತೆ. ಯಾವುದೇ ಕಾರಣಕ್ಕೂ ಮಂಡ್ಯ ವಿವಿ ಮುಚ್ಚುವ ಪ್ರಶ್ನೇ ಇಲ್ಲ ಎಂದು ಹೇಳಿದ ಅವರು, ಪರೋಕ್ಷವಾಗಿ ಬಿಜೆಪಿ–ಜೆಡಿಎಸ್ ನಾಯಕರಿಗೆ ಧನ್ಯವಾದ ತಿಳಿಸಿದರು. ಮಂಡ್ಯ ವಿವಿ ಆವರಣದಲ್ಲಿ ಒಂದು ಲಕ್ಷ ವಿದ್ಯಾರ್ಥಿಗಳ ಸೇರಿಸಿ ಅದ್ಧೂರಿಯಾಗಿ ಸಾಂಸ್ಕೃತಿಕ ಕಾರ್ಯಕ್ರಮ ಮಾಡ್ತೇವೆ ಎಂದು ಇದೆ ಸಂದರ್ಭದಲ್ಲಿ ಹೇಳಿದರು.

ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಮಾತನಾಡಿ, ಶಾಸಕರು ಮಂಡ್ಯ ವಿವಿ ಮುಚ್ಚಲ್ಲ ಎನ್ನುವ ಉತ್ತರ ಕೊಟ್ಟಿದ್ದಾರೆ. ಇವತ್ತು ಶಾಸಕರು ಮಂಡ್ಯ ಆರ್ಚ್‌ಗೆ ಗುದ್ದಲಿ ಪೂಜೆ ಮಾಡಿದ್ದಾರೆ. 5 ಸಾವಿರ ಜನ ಮಕ್ಕಳು ಇಲ್ಲಿ ಇದ್ದಾರೆ. ನಮ್ಮ ಜಿಲ್ಲೆಯ ಹೆಮ್ಮೆ ನಮ್ಮ ವಿವಿ ಇರಲಿ ಯಾವುದೇ ಕಾರಣಕ್ಕೂ ಮಂಡ್ಯ ವಿವಿ ಮುಚ್ಚಬೇಡಿ. ಮುಖ್ಯಮಂತ್ರಿಗಳು ಮಂಡ್ಯ ವಿವಿಗೆ ಹೆಚ್ಚಿನ ಅನುದಾನ ಕೊಟ್ಟು ವಿವಿ ಉಳಿಸಿ ಎಂದು ಮನವಿ ಮಾಡಿದರು.



ಗುದ್ದಲಿ ಪೂಜೆ ನೆರವೇರಿಸುತ್ತಿರುವ ಶಾಸಕ ಗಣಿಗ ರವಿಕುಮಾರ್.

ಇದಕ್ಕೂ ಮುನ್ನ ಕಾಲೇಜಿಗೆ ಆಗಮಿಸಿದ ಶಾಸಕ ಗಣಿಗ ರವಿಕುಮಾರ್‌ಗೆ ವಿದ್ಯಾರ್ಥಿಗಳು ಅದ್ಧೂರಿ ಸ್ವಾಗತ ಕೋರಿದರು.

ಈ ಸಂದರ್ಭದಲ್ಲಿ ಕುಲಪತಿ ಶಿವಚಿತ್ತಪ್ಪ, ಯೋಗನರಸಿಂಹ, ವೀಣಾ, ಸ್ವರ್ಣ, ಪ್ರೊ.ನಾಗರಾಜ್ ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದರು.

ಗ್ಯಾರಂಟಿಯೊಂದಿಗೆ ನಿರುದ್ಯೋಗ, ನೀರಾವರಿ ಸಮಸ್ಯೆಯತ್ತಲೂ ಗಮನ ಕೊಡಿ

ಶ್ರೀಶಂಕರ ಮಠ ಉದ್ಘಾಟಿಸಿದ ಕೇಂದ್ರ ಸಚಿವ ಕುಮಾರಸ್ವಾಮಿ ಮನವಿ

ಪಾಂಡವಪುರ, ಮಾ.16– ರಾಜ್ಯ ಸರ್ಕಾರ ಗ್ಯಾರಂಟಿ ಜಪ ಮಾಡುವ ಜತೆಗೆ ನಿರುದ್ಯೋಗ, ನೀರಾವರಿ ಸಮಸ್ಯೆಗಳ ಪರಿಹಾರಕ್ಕೂ ಮುಂದಾಗಬೇಕು ಎಂದು ಮಾಜಿ ಸಿಎಂ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಸರ್ಕಾರಕ್ಕೆ ಸಲಹೆ ನೀಡಿದರು.

ತಾಲೂಕಿನ ದೊಡ್ಡಬ್ಯಾಡರಹಳ್ಳಿ ಗ್ರಾಮದಲ್ಲಿ ನೂತನವಾಗಿ ಜೀರ್ಣೋದ್ಧಾರಗೊಂಡ ಶ್ರೀಶಂಕರ ಮಠವನ್ನು ಉದ್ಘಾಟಿಸಿದ ಬಳಿಕ ಅವರು ಮಾತನಾಡಿದರು.

ರಾಜ್ಯದ ಸರ್ಕಾರ ಐದು ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯದಲ್ಲಿರುವ ಕೆಲವು ಬಡಕುಟುಂಬಗಳಿಗೆ ಆರ್ಥಿಕ ಸಹಾಯ ಮಾಡಲು ಹೊರಟಿರುವುದು ಒಂದು ಭಾಗ, ಆದರೆ ನಾವು ಅಷ್ಟಕ್ಕೆ ಸಮಾಧಾನಪಟ್ಟುಕೊಳ್ಳಲು ಸಾಧ್ಯವಿಲ್ಲ. ನೀರಾವರಿ, ಮಕ್ಕಳ ಉದ್ಯೋಗ ಸೇರಿದಂತೆ ರಾಜ್ಯದಲ್ಲಿ ಹಲವಾರು ರೀತಿಯ ಸಮಸ್ಯೆಗಳಿದ್ದು ಇವುಗಳಿಗೆ ಪರಿಹಾರ ತರುವುದರಲ್ಲಿ ವಿಫಲವಾಗಿದ್ದಾರೆ. ಬರೀ ಗ್ಯಾರಂಟಿ ಯೋಜನೆಗಳ ಹೆಸರು ಹೇಳಿಕೊಂಡು ಹೋದರೆ ಸಮಸ್ಯೆಗಳಿಗೆ ಪರಿಹಾರ ದೊರೆಯುವುದಿಲ್ಲ, ಜತೆಗೆ ಜನರ ಬದುಕನ್ನು ಸರಿಪಡಿಸಲು ಸಾಧ್ಯವಿಲ್ಲ ಎಂದು ರಾಜ್ಯ ಸರಕಾರಕ್ಕೆ ಟಾಂಗ್ ನೀಡಿದರು.



ಜೀರ್ಣೋದ್ಧಾರಗೊಂಡ ದೇವಸ್ಥಾನವನ್ನು ಕೇಂದ್ರ ಸಚಿವ ಕುಮಾರಸ್ವಾಮಿ ಉದ್ಘಾಟಿಸಿದರು.

ನಾವು ನಮ್ಮ ಮನೆಗಳಲ್ಲಿ ನೆಮ್ಮದಿಯ ಬದುಕು ಕಾಣದೆ ಹೋದರೆ ನಮ್ಮ ದೇಶ ಪ್ರಪಂಚದಲ್ಲಿಯೇ ದೊಡ್ಡಮಟ್ಟದಲ್ಲಿ ಬೆಳೆದು ಸಾಧನೆ ಮಾಡಿದರೆ ಏನು ಪ್ರಯೋಜನ. ಗ್ರಾಮ, ಹಳ್ಳಿಗಳಲ್ಲಿ ನೆಮ್ಮದಿಯಿಂದ ಬದುಕು ಸಾಗಿಸಬೇಕಾದರೆ, ನಾವೆಲ್ಲರು ಒಳ್ಳೆಯ ಭಾವನೆಗಳನ್ನು ಬೆಳೆಸಿಕೊಳ್ಳಬೇಕಾಗಿದೆ ಎಂದರು.

ದೊಡ್ಡಬ್ಯಾಡರಹಳ್ಳಿ ಗ್ರಾಮಸ್ಥರು ಈ ಭಾಗದಲ್ಲಿ ಶಂಕರಾಚಾರ್ಯರು ಓಡಾಡಿದ ನೆನಪಿಗಾಗಿ ಗ್ರಾಮದಲ್ಲಿ ಲಕ್ಷಾಂತರ ಹಣ ಖರ್ಚುಮಾಡಿ ಶಂಕರಾಚಾರ್ಯದ ಮಠ ನಿರ್ಮಾಣ ಮಾಡಿದ್ದಾರೆ. ಶಂಕರಾಚಾರ್ಯರು ಜನರು ನೆಮ್ಮದಿಯ ಬದುಕು ನಡೆಸಲು ಆಶೀರ್ವಾದ ನೀಡಬೇಕೆಂದು ಮನವಿ ಮಾಡಿದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ರಾಜ್ಯದ ಜನಸಾಮಾನ್ಯರ ಮುಖ್ಯಮಂತ್ರಿಗಳಾಗಿ ಕೆಲಸ ಮಾಡಿದ್ದ ಹೆಗ್ಗಳಿಕೆ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಸಲ್ಲುತ್ತದೆ. ಕುಮಾರಸ್ವಾಮಿ ಅವರು ಮುಖ್ಯಮಂತ್ರಿಗಳಾಗಿ ಕೆಲಸ ಮಾಡುತ್ತಿದ್ದ ಸಂದರ್ಭದಲ್ಲಿ ರಾಜ್ಯದ ರೈತರು, ಬಡವರು, ಶೋಷಿತರು, ದುರ್ಬಲರ ಪರವಾಗಿ ಜನಪರವಾದ ಆಡಳಿತ ನೀಡಿದ್ದಾರೆ. ಅಂತಹ ವ್ಯಕ್ತಿಗಳು ಶಂಕರಚಾರ್ಯರ ಮಠ ಉದ್ಘಾಟನೆಗೆ ಆಗಮಿಸಿರುವುದು ನಮ್ಮೆಲ್ಲರ ಸೌಭಾಗ್ಯ ಎಂದು ಬಣ್ಣಿಸಿದರು.

ಇದೇ ವೇಳೆ ದೊಡ್ಡಬ್ಯಾಡರಹಳ್ಳಿ ಗ್ರಾಮಸ್ಥರು ದೊಡ್ಡಬ್ಯಾಡರಹಳ್ಳಿ ರೈಲ್ವೆ ನಿಲ್ದಾಣದ ಬಳಿ ಮೇಲ್ಸೇತುವೆ ನಿರ್ಮಾಣ ಹಾಗೂ ತಿರುಪತಿ ಎಕ್ಸ್‌ಪ್ರೆಸ್ ರೈಲು ನಿಲುಗಡೆ ಮಾಡಿಸುವಂತೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಲ್ಲಿ ಮನವಿ ಮಾಡಿದರು.

ಸಮಾರಂಭದಲ್ಲಿ ಮಾಜಿ ಶಾಸಕಿ ಅನಿತಾಕುಮಾರಸ್ವಾಮಿ, ಮನ್‌ಮುಲ್ ನಿರ್ದೇಶಕರಾದ ಸಿ.ಶಿವಕುಮಾರ್, ಬಿ.ಆರ್.ರಾಮಚಂದ್ರ ಜಿಪಂ ಮಾಜಿ ಸದಸ್ಯ ಎಚ್.ಮಂಜುನಾಥ್, ಶ್ರೀಶಂಕರ ಮಠ ಸೇವಾ ಸಮಿತಿ ಅಧ್ಯಕ್ಷ ಎನ್.ನಿಂಗರಾಜು, ಉಪಾಧ್ಯಕ್ಷ ರಾಮಲಿಂಗೇಗೌಡ, ಕಾರ್ಯದರ್ಶಿ ಡಿ.ಬಿ.ಪ್ರಕಾಶ್, ಸಹ ಕಾರ್ಯದರ್ಶಿ ಕುಮಾರ್, ಖಜಾಂಚಿ ಶಿವಲಿಂಗು, ಸದಸ್ಯರಾದ ಚನ್ನೇಗೌಡ, ಬಿ.ಆರ್.ಗೋಪಾಲ್, ಚಂದನ್, ನಿಂಗರಾಜಚಾರಿ, ಬ್ರಹ್ಮೇಶ್, ಶಿವಲಿಂಗೇಗೌಡ, ಶಂಕರ(ಕಾಠಾರಿ), ಪದ್ಮ, ಧರ್ಮ, ಚಂದ್ರಚಾರಿ, ಶಿವಣ್ಣಚಾರಿ, ಎನ್.ಕೃಷ್ಣ, ಪ್ರಸನ್ನ, ಸಂತೋಷ್, ಆನಂದ್‌ಕುಮಾರ್ ಎನ್.ಕೃಷ್ಣ, ಅನಿಲ್‌ಕುಮಾರ್, ಗ್ರಾಪಂ ಮಾಜಿ ಅಧ್ಯಕ್ಷ ರವಿ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು.

ಡಿಕೆಶಿ ಡಿನ್ನರ್‌ಗೆ ಬಾರದಿದ್ದವರ ಬಗ್ಗೆ ಅಪಾರ್ಥ ಕಲ್ಪಿಸುವುದು ಬೇಡ

ಮದ್ದೂರು,ಮಾ.16– ಇತ್ತೀಚೆಗೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆಯಲಾಗಿದ್ದ ಡಿನ್ನರ್‌ಗೆ ಕೆಲವರು ಬಾರದಿದ್ದಕ್ಕೆ ಬೇರೆ ಅರ್ಥ ಕಲ್ಪಿಸುವುದು ಬೇಡ, ನಮ್ಮ ಪಕ್ಷದಲ್ಲಿ ಯಾವುದೇ ಗೊಂದಲವಿಲ್ಲ ಎಂದು ಶಾಸಕ ಕೆ.ಎಂ.ಉದಯ್ ತಿಳಿಸಿದರು.

ತಾಲೂಕಿನ ಹೊಸಕೆರೆ ಹಾಗೂ ವಳೆಗೆರೆಹಳ್ಳಿ ಗ್ರಾಮಗಳಲ್ಲಿ ಭಾನುವಾರ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ ನಂತರ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೇರಿ ದಂತೆ ಬಹುತೇಕ ಸಚಿವರು ಹಾಗೂ ಪಕ್ಷದ ಶಾಸಕರು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕರೆದಿದ್ದ ಡಿನ್ನರ್‌ಗೆ ಬಂದಿದ್ದರು, ಗೃಹಸಚಿವರಾದ ಪರಮೇಶ್ವರ್ ಹಾಗೂ ಸಚಿವ ರಾಜಣ್ಣರವರು ತುರ್ತು ಕೆಲಸಗಳಿದ್ದರಿಂದ ಬಾರದಿದ್ದಕ್ಕೆ ವಿರೋಧ ಪಕ್ಷದವರು ಬೇರೆ ಅರ್ಥ ಕಲ್ಪಿಸುತ್ತಿದ್ದಾರೆ ಇದಕ್ಕೆ ಮಹತ್ವ ನೀಡುವ ಅಗತ್ಯವಿಲ್ಲ. ನಮ್ಮ ಪಕ್ಷದಲ್ಲಿ ಯಾವುದೇ ಗೊಂದಲವಿಲ್ಲ ಎಂದರು.

ಮಲ್ಲಿಕಾರ್ಜುನ ಗೌಡ ನಿಧನ




ಶ್ರೀರಂಗಪಟ್ಟಣ: ಪಟ್ಟಣದ ಪೋಸ್ಟ್ ಆಫೀಸ್ ರಸ್ತೆ ನಿವಾಸಿ ಹಿರಿಯ ವಕೀಲರು ಹಾಗೂ ನೋಟರಿ ಮಲ್ಲಿಕಾರ್ಜುನ ಗೌಡ (90) ಶುಕ್ರವಾರ ರಾತ್ರಿ ನಿಧನರಾದರು.

ಮೃತರು ಟಿಎಪಿಸಿಎಂಎಸ್ ಅಧ್ಯಕ್ಷರು ಹಾಗೂ ಪುರಸಭಾ ಸದಸ್ಯ ಎಂ.ನಂದೀಶ್ ಸೇರಿದಂತೆ ಇಬ್ಬರು ಪುತ್ರರು, ಓರ್ವ ಪುತ್ರಿಯನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮೈಸೂರಿನ ಕನ್ನೇಗೌಡನಕೊಪ್ಪಲು ರುದ್ರಭೂಮಿಯಲ್ಲಿ ಶನಿವಾರ ಮಧ್ಯಾಹ್ನ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೊಮ್ಮಗನಿಗೆ ನಾಮಕರಣ ಮಾಡಿದ ಸುಮಲತಾ

ಬೆಂಗಳೂರು, ಮಾ.16– ಮಾಜಿ ಸಂಸದೆ, ಹಿರಿಯ ನಟಿ ಸುಮಲತಾ ಅಂಬರೀಶ್ ಅವರ ಮೊಮ್ಮಗ, ನಟ ಅಭಿಷೇಕ್ ಅಂಬರೀಶ್ ಮತ್ತು ಅವಿವಾ ಬಿದ್ದಪ್ಪ ಅವರ ಮಗನ ನಾಮಕರಣ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ನೆರವೇರಿತು. ಅಂಬರೀಷ್ ಕುಟುಂಬಸ್ಥರು, ಸಂಬಂಧಿಕರು, ಹಿತೈಷಿಗಳು, ರಾಜಕೀಯ ಮತ್ತು ಚಿತ್ರರಂಗದ ಹಲವರು ಇಂದಿನ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.



ತಮ್ಮ ವಂಶದ ಕುಡಿಗೆ ಸುಮಲತಾ ಮತ್ತು ಅಭಿಷೇಕ್ ಸೇರಿ ರಾಣಾ ಅಮರ್ ಅಂಬರೀಶ್ ಎಂದು ಹೆಸರಿಟ್ಟಿದ್ದಾರೆ. ಹಿರಿಯ ನಟ ದಿವಂಗತ ಅಂಬರೀಷ್ ಅವರ ಮೊದಲಿನ ಹೆಸರು ಅಮರ್‌ನಾಥ್ ಎಂದಾಗಿತ್ತು ಅವರ ಮೂಲ ಹೆಸರಿಟ್ಟಿದ್ದು ರಾಣಾ ಎಂದರೆ ರಾಜ, ಮಹಾಯೋಧ ಎಂದರ್ಥವಿದೆ.

ಚಾಮುಂಡಿಬೆಟ್ಟದ ನಂದಿ ವಾಯುವಿಹಾರಿಗಳಿಂದ ಹೋಳಿ ಆಚರಣೆ...



ಮೈಸೂರಿನ ಚಾಮುಂಡಿಬೆಟ್ಟದಲ್ಲಿ ನಂದಿ ವಾಯುವಿಹಾರಿಗಳ ಆಶ್ರಯದಲ್ಲಿ ಹೋಳಿ ಹಬ್ಬವನ್ನು ಆಚರಿಸಲಾಯಿತು. ಈ ವೇಳೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಉದ್ಯಮಿ ಎಂ.ಕೆ.ಗುರುರಾಜ್, ಪ್ರಕಾಶನ್, ರಮೇಶ್, ಬಾಬು, ಚಂದ್ರು, ಗಿರೀಶ್, ಮಂಜು, ವೆಂಕಟೇಶ್, ಮಹದೇವು, ಬಸವರಾಜು, ಗೀತಾ, ಸಂಗೀತಾ, ಉಮಾ, ಭಾರತಿ, ಮಹೇಶ್, ಗಣೇಶ್, ಲಕ್ಷ್ಮೀ, ಲೋಕೇಶ್, ಪೊಲೀಸ್ ಸುಬ್ಬಣ್ಣಬಾಬು ಮತ್ತಿತರರು ಹಾಜರಿದ್ದರು.


‘ಮನದ ಕಡಲು’ ಚಿತ್ರ ಜನ ಸಾಗರವನ್ನೇ ತನ್ನತ್ತ ಸೆಳೆಯಲಿದೆ

ನಿರ್ದೇಶಕ ಯೋಗರಾಜ್ ಭಟ್ ವಿಶ್ವಾಸ

ಮೈಸೂರು, ಮಾ.16 (ಎಂಕೆ)–ತಮ್ಮ ನಿರ್ದೇಶನದ ‘ಮನದ ಕಡಲು’ ಚಿತ್ರ ಜನ ಸಾಗರವನ್ನೇ ತನ್ನತ್ತ ಸೆಳೆಯಲಿದೆ ಎಂದು ಚಿತ್ರ ನಿರ್ದೇಶಕ ಯೋಗರಾಜ್ ಭಟ್ ವಿಶ್ವಾಸ ವ್ಯಕ್ತಪಡಿಸಿದರು.

ಮಾರ್ಚ್ ತಿಂಗಳ 28 ರಂದು ರಾಜ್ಯಾದ್ಯಂತ ತೆರೆಕಾಣಲಿರುವ ತಮ್ಮ ನಿರ್ದೇಶನದ 16ನೇ ಚಿತ್ರ ‘ಮನದ ಕಡಲು’ ಸಿನಿಮಾ ಪ್ರಮೋಷನ್‌ಗಾಗಿ ಮೈಸೂರಿಗೆ ಆಗಮಿಸಿರುವ ಅವರು ‘ಮೈಸೂರು ಮಿತ್ರ’ನೊಂದಿಗೆ ಮಾತನಾಡುತ್ತಾ, ಚಿತ್ರ ಮಂದಿರಗಳಲ್ಲಿ ಜಾತ್ರೆಯ ವಾತಾವರಣ ಮತ್ತೆ ನಿರ್ಮಾಣವಾಗಲಿದೆ ಎಂದಿದ್ದಾರೆ.

ಮೈಸೂರು ಕನ್ನಡ ಚಿತ್ರರಂಗದ ಅಕ್ಷಯಪಾತ್ರೆ. ಮುಂಗಾರು ಮಳೆ ಸಿನಿಮಾ ಬಿಡುಗಡೆಯಾದ ಮೊದಲು ಸ್ವಲ್ಪ ಆತಂಕ ಇತ್ತು. ಆದರೆ, ಒಳ್ಳೆಯ ರಿಸಲ್ಟ್ ಬಂದಿದ್ದೆ ಮೈಸೂರಿನಿಂದ. ಅದ್ಭುತ ಪ್ರತಿಕ್ರಿಯೆ ಮತ್ತು ಸಣ್ಣ ಮಟ್ಟದ ವ್ಯಾಪಾರವೂ ಇಲ್ಲಿಂದಲೇ ಶುರುವಾಯಿತು. ಸರಳ, ಸಜ್ಜನಿಕೆಯ, ಸೌಹಾರ್ದತೆಯುಳ್ಳ ಮೈಸೂರಿನ ಜನರು, ಹಾಯ್ ಎಂದರೆ ನೆಮ್ಮದಿ ಸಿಗಲಿದೆ. ಶಾಂತಿ ಮತ್ತು ಸುಂದರ ಮೈಸೂರಿನಲ್ಲಿ ಒಂದು ರೋಮ್ಯಾಂಟಿಕ್ ಸಿನಿಮಾ ಪ್ರಚಾರವನ್ನು ಶುರು ಮಾಡಿದ್ದೇವೆ ಎಂದರು.



ಅಂದಿನ ಮುಂಗಾರು ಮಳೆ, ಇವತ್ತಿನ ಮನದ ಕಡಲು ಆಗಬೇಕು ಎಂಬುದೇ ನನ್ನ ಆಶಯ. ಅವತ್ತಿನ ನಿರ್ಮಾಪಕರೇ ಇವತ್ತು, ಅವತ್ತಿನ ನಿರ್ದೇಶಕರೇ ಇವತ್ತು ಇದ್ದೇವೆ. ಮುಂಗಾರು ಮಳೆಯಂತೆ ಹಸಿರು, ಬೆಟ್ಟ–ಗುಡ್ಡ, ಸುಂದರ ವಾತಾವರಣ ಈ ಸಿನಿಮಾದಲ್ಲೂ ಇದ್ದು, ಪ್ರೇಕ್ಷಕರು ಚಿತ್ರಮಂದಿರದಲ್ಲೇ ಕುಳಿತು ನೋಡಬೇಕು ಎನ್ನುಂತಹ ಸುಂದರ ಛಾಯಾಗ್ರಹಣ ಇದೆ. ಪ್ರೇಮಕಥೆ ಎಂದ ಮೇಲೆ ಕವನಗಳು ಇರಲೇಬೇಕು. ‘ಮನದ ಕಡಲು’ ಕವನಗಳ ಕನವರಿಕೆಯೂ ಆಗಿದೆ. ಪ್ರೇಮಕಥೆ ಬರೋದರಲ್ಲಿಯೂ ಒಂದು ರೀತಿಯ ಮಜಾ ಇದೆ. ಅಂತಹ ಮಸ್ತ್ ಮನರಂಜನೆ ಈ ಸಿನಿಮಾದಲ್ಲಿದೆ. ಪ್ರೇಕ್ಷಕರ ನೀರಿಕ್ಷೆ ಡಬಲ್ ಆಗುವುದರಲ್ಲಿ ಅನುಮಾನವಿಲ್ಲ ಎಂದು ಅವರು ಹೇಳಿದರು.

‘ಮನದ ಕಡಲು’ ಸಿನಿಮಾದಲ್ಲಿ ಸುಮುಖ್ ನಾಯಕ ನಟನಾಗಿದ್ದು, ಅಂಜಲಿ ಅನಿಶ್, ರಾಸಿಕ ಎಂಬ ಇಬ್ಬರು ನಟಿಯರಿದ್ದಾರೆ. ಸುಮುಖ್ ಪ್ರತಿಭಾವಂತ ನಟನಾಗಿದ್ದು, ನ್ಯಾಷನಲ್ ಥಿಯೇಟರ್ ಆರ್ಟಿಸ್ಟ್, ವಿದ್ಯಾವಂತ, ಹಲವು ಭಾಷೆಗಳ ಪಂಡಿತ. ಮುಂದಿನ 20 ವರ್ಷ ಕನ್ನಡ ಚಿತ್ರರಂಗದಲ್ಲಿ ನಾಯಕ ನಟನಾಗಿ ಇರಬಲ್ಲ ಪ್ರತಿಭೆ. ಸಿನಿಮಾ ಬಿಡುಗಡೆಯಾದ ಒಂದು ವಾರದ ನಂತರ ಐದು ಭಾಷೆಗಳಿಗೆ ರೀಮೆಕ್ ಆಗಲಿದೆ.

ಮಂದಿ ಸೋಷಿಯಲ್ ಮಿಡಿಯಾನ ಯೂಸ್ ಮಾಡ್ತಾ ಇದ್ದಾರೋ... ಅಥವಾ ಸೋಷಿಯಲ್ ಮಿಡಿಯಾನೇ ಮಂದಿಯನ್ನು ಯೂಸ್ ಮಾಡ್ತಾ ಇದೆಂಯೋ ಗೊತ್ತಿಲ್ಲ. ಎಐ(ಕೃತಕ ಬುದ್ಧಿಮತೆ) ಬಂದಿದೆ. ಮೊಬೈಲ್‌ನಿಂದ ಪ್ರಪಂಚದ ಜೊತೆಗೆ ಕನೆಕ್ಟ್ ಆಗಬಹುದು. ಆದರೆ, ಏನೇನೋ ನೋಡಿ ಹಾಳಾಗೊರಿಗೋ ಏನ್ ಹೇಳೋದು. ಕನ್ನಡ ಚಿತ್ರರಂಗದ ಮೇಲೂ ಸಾಮಾಜಿಕ ಜಾಲತಾಣ ಪರಿಣಾಮ ಬೀರುತ್ತಿದೆ ಎಂಬುದರಲ್ಲಿ ಎರಡು ಮಾತಿಲ್ಲ ಎಂದರು.

ಅಭಿನಂದನೆ...



ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಎನ್.ಯೋಗಾನಂದ ಅವರನ್ನು ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಆರ್.ರಘು ಅವರು ಅಭಿನಂದಿ ಸಿದರು. ದಿ ಸಿಟಿ ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ವಿ.ಮಧು ಚಿತ್ರದಲ್ಲಿದ್ದಾರೆ.

ಮುಕ್ತ ವಿವಿಯಿಂದ ಸುಹೀಲ್‌ಗೆ ಪಿಹೆಚ್.ಡಿ ಪದವಿ



ಮೈಸೂರು,ಮಾ.16(ಪಿಎಂ)– ಮುಕ್ತ ವಿವಿಯ ನಿರ್ವಹಣಾಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಪ್ರೊ.ಸಿ.ಮಹದೇವಮೂರ್ತಿ ಅವರ ಮಾರ್ಗದರ್ಶನದಲ್ಲಿ ಇ–ಬ್ಯಾಂಕಿಂಗ್ ಭದ್ರತೆ ಕುರಿತು ಸುಹೀಲ್ ಅವರು ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ನಿರ್ವಹಣಾಶಾಸ್ತ್ರ ವಿಷಯದಲ್ಲಿ ರಾಜ್ಯ ಮುಕ್ತ ವಿವಿ, ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ ಎಂದು ಪ್ರಕಟಣೆ ತಿಳಿಸಿದೆ.

ಇಸ್ಮೈಲ್ ಶರೀಫ್ ನೇಮಕ



ಮೈಸೂರು,ಮಾ.16(ಪಿಎಂ)– ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಬೀದಿ ಬದಿ ವ್ಯಾಪಾರಿಗಳ ವಿಭಾಗದ ರಾಜ್ಯಾಧ್ಯಕ್ಷ ರಂಗಸ್ವಾಮಿ ಅವರ ಆದೇಶದಂತೆ ಮೈಸೂರಿನ ಶಾಂತಿನಗರದ ಇಸ್ಮೈಲ್ ಶರೀಫ್ ಅವರನ್ನು ಸಾಹುಕಾರ್ ಚನ್ನಯ್ಯ ಬ್ಲಾಕ್ ಕಾಂಗ್ರೆಸ್ ಸಮಿತಿಯ ಬೀದಿ ಬದಿ ವ್ಯಾಪಾರಿಗಳ ವಿಭಾಗದ ಪ್ರಧಾನ ಕಾರ್ಯದರ್ಶಿಯನ್ನಾಗಿ ನೇಮಕ ಮಾಡಲಾಗಿದೆ ಎಂದು ಕಾಂಗ್ರೆಸ್ ಬೀದಿ ಬದಿ ವ್ಯಾಪಾರಿಗಳ ವಿಭಾಗದ ನಗರಾಧ್ಯಕ್ಷ ಎಂ.ರಸೂಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉತ್ತರ ಭಾರತದಲ್ಲಿ ಶೇ.30 ಎಂಪಿ, ಎಂಎಲ್‌ಎ ಹೆಚ್ಚಿಸಲು ಕೇಂದ್ರ ಸರ್ಕಾರ ಯತ್ನ

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಪ

ಗದಗ, ಮಾ.16– ಉತ್ತರ ಭಾರತದಲ್ಲಿ ಕ್ಷೇತ್ರ ಪುನರ್ ವಿಂಗಡಣೆಯಲ್ಲಿ ಶೇ. 30ರಷ್ಟು ಎಂಪಿ, ಎಂಎಲ್‌ಎ ಹೆಚ್ಚಿಗೆ ಮಾಡಿ, ದಕ್ಷಿಣ ಭಾರತದಲ್ಲಿ ಕಡಿಮೆ ಮಾಡುವ ಪ್ರಯತ್ನ ನಡೆದಿದೆ ಎಂಬ ಮಾತುಗಳು ಕೇಳಿ ಬರುತ್ತಿದೆ. ಇದನ್ನು ತಡೆಯಲೂ ನಾವೆಲ್ಲರೂ ಒಗ್ಗಟ್ಟಾಗಬೇಕಿದೆ ಎಂದು ಎಐಸಿಸಿ ಅಧ್ಯಕ್ಷ ಮತ್ತು ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಕೆ.ಎಚ್. ಪಾಟೀಲ ಪ್ರತಿಷ್ಠಾನದ ವತಿಯಿಂದ ಹಮ್ಮಿಕೊಂಡಿದ್ದ ನಾಡು ಮೆಚ್ಚಿದ ಜನನಾಯಕ ಕೆ.ಎಚ್. ಪಾಟೀಲ ಜನ್ಮ ಶತಮಾನೋತ್ಸವ ಆಚರಣೆ ಮತ್ತು ದಿ. ಗದಗ ಕೋ–ಆಪರೇಟಿವ್ ಕಾಟನ್ ಸೇಲ್ ಸೊಸೈಟಿ ನವೀನ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕದ ವಿಷಯ ಬಂದಾಗ, ಅಭಿವೃದ್ಧಿ ವಿಷಯ ಬಂದಾಗ ಎಲ್ಲರೂ ಒಂದಾಗಿ ಮಾತನಾಡಬೇಕು. ಕೇಂದ್ರೀಯ ವಿದ್ಯಾಲಯಗಳಲ್ಲಿ ಶೇ. 50ರಷ್ಟು ಹುದ್ದೆಗಳು ಖಾಲಿಯಾಗಿದ್ದು, ಶಿಕ್ಷಣ ಕ್ಷೇತ್ರಕ್ಕೆ ಮಹತ್ವ ಕೊಡಬೇಕಾಗಿ ಬಂದಿದೆ ಕೇಂದ್ರ ಸರಕಾರದ ನವೋದಯ ಶಾಲೆಗಳಲ್ಲಿ 47,000, ಕೇಂದ್ರೀಯ ವಿದ್ಯಾಲಯದಲ್ಲಿ 7,400 ಹಾಗೂ ವಿಶ್ವವಿದ್ಯಾಲಯಗಳಲ್ಲಿ 5,400 ಹುದ್ದೆಗಳು ಖಾಲಿಯಿವೆ. ದೇಶದಲ್ಲಿ 90 ಸಾವಿರ ಶಾಲೆಗಳು ಬಂದ್ ಆಗಿವೆ. 50 ಸಾವಿರ ಉತ್ತರ ಪ್ರದೇಶ, ಬಿಹಾರ ರಾಜ್ಯದಲ್ಲಿ ಶಾಲೆಗಳು ಬಂದ್ ಆಗಿವೆ ಎಂದು ಕಳವಳ ವ್ಯಕ್ತಪಡಿಸಿದರು.

ಹೆಚ್.ಆರ್.ನಾಗರಾಜು ನಿಧನ



ಮೈಸೂರು, ಮಾ.16– ಮೈಸೂರಿನ ಜಯನಗರ ನಿವಾಸಿ, ರೇಸ್ ಕ್ಲಬ್‌ನ ಆಪರೇಷನ್ ಇಂಜಿನಿಯರ್ ಹೆಚ್.ಆರ್.ನಾಗರಾಜು(54) ಅವರು ನಿಧನರಾದರು. ಇವರು ಪತ್ನಿ, ಪುತ್ರಿ, ತಂದೆ, ತಾಯಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಚಾಮುಂಡಿಬೆಟ್ಟ ತಪ್ಪಲಿನ ರುದ್ರಭೂಮಿಯಲ್ಲಿ ಇಂದು ಸಂಜೆ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವೃದ್ಧ ದಂಪತಿ ಖಾತೆಯಲ್ಲಿದ್ದ 50 ಲಕ್ಷ ದೋಚಿ ಮೋಜು–ಮಸ್ತಿ

ಖಾಸಗಿ ಬ್ಯಾಂಕ್ ಮಹಿಳಾ ಅಧಿಕಾರಿ ಸೇರಿ ನಾಲ್ವರ ಬಂಧನ

ಬೆಂಗಳೂರು, ಮಾ.16– ವೃದ್ಧ ದಂಪತಿಯ ಜಂಟಿ ಖಾತೆಯಲ್ಲಿದ್ದ 50 ಲಕ್ಷ ರೂ.ಗಳನ್ನು ಬೇರೊಂದು ಖಾತೆಗೆ ವರ್ಗಾಯಿಸಿಕೊಂಡು ಪತಿಯೊಂದಿಗೆ ಪ್ರವಾಸ, ಮೋಜು–ಮಸ್ತಿ ಹಾಗೂ ಸಾಲಗಾರರಿಗೆ ಕೊಟ್ಟಿದ್ದ ಕೊಂಚ ಸಾಲವನ್ನೂ ತೀರಿಸಿದ್ದ ಖಾಸಗಿ ಬ್ಯಾಂಕ್‌ನ ಡೆಪ್ಯೂಟಿ ಮ್ಯಾನೇಜರ್ ಹಾಗೂ ಆಕೆಯ ಪತಿ ಸೇರಿದಂತೆ ನಾಲ್ವರನ್ನು ಬೆಂಗಳೂರಿನ ಗಿರಿನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಮೈಸೂರು ಮೂಲದ ಮೇಘನಾ (33), ಶಿವಪ್ರಸಾದ್ (36), ಮೇಘನಾ ವಂಚನೆ ಕೃತ್ಯಕ್ಕೆ ಸಹಕಾರ ನೀಡಿದ್ದ ಉತ್ತರ ಕನ್ನಡ ಜಿಲ್ಲೆ ಅಂಕೋಲಾ ಮೂಲದ ರೆಸಾರ್ಟ್‌ವೊಂದರ ಮಾಲೀಕ ವರದರಾಜು ಹಾಗೂ ಅನ್ವರ್ ಗೌಸ್ ಎಂಬುವವರು ಜೈಲು ಪಾಲಾಗಿದ್ದಾರೆ.

ಬನಶಂಕರಿ ಮೂರನೇ ಹಂತದ ನಿವಾಸಿ ಸಾವಿತ್ರಮ್ಮ (73), ಅವರ ಪತಿ ಬಸವರಾಜಯ್ಯ (78) ಗಿರಿನಗರದ ಖಾಸಗಿ ಬ್ಯಾಂಕ್‌ನಲ್ಲಿ ಜಂಟಿ ಖಾತೆ ಹಾಗೂ ನಿಶ್ಚಿತ ಠೇವಣಿಯ ಎರಡು ಖಾತೆಗಳನ್ನು ಹೊಂದಿದ್ದರು. ಇಬ್ಬರಿಗೂ ಬ್ಯಾಂಕ್‌ನಲ್ಲಿ ಹಣ ಡ್ರಾ ಮಾಡುವುದೂ ಸೇರಿದಂತೆ ಇತರೆ ಕೆಲಸಗಳಿಗೆ ಡೆಪ್ಯೂಟಿ ಮ್ಯಾನೇಜರ್ ಮೇಘನಾ ಸಹಕರಿಸಿ ವಿಶ್ವಾಸ ಗಿಟ್ಟಿಸಿದ್ದರು. ಸಾವಿತ್ರಮ್ಮ ದಂಪತಿ ಇಬ್ಬರೇ ವಾಸಿಸುತ್ತಿದ್ದು, ಅವರ ಮಕ್ಕಳು ಬೇರೆಡೆ ನೆಲೆಸಿರುವ ವಿಷಯವನ್ನು ಮೇಘನಾ ತಿಳಿದುಕೊಂಡಿದ್ದರು.



ಮೇಘನಾ

ಇದೇ ಜನವರಿ ತಿಂಗಳಲ್ಲಿ ಚಾಮರಾಜಪೇಟೆಯಲ್ಲಿದ್ದ ಮನೆಯೊಂದನ್ನು ಮಾರಾಟ ಮಾಡಿದ್ದ ಸಾವಿತ್ರಮ್ಮ ದಂಪತಿ 50 ಲಕ್ಷ ರೂ.ಗಳನ್ನು ತಮ್ಮ ಉಳಿತಾಯ ಜಂಟಿ ಖಾತೆಗೆ ಡೆಪಾಸಿಟ್ ಮಾಡಿದ್ದರು. ಈ ವಿಚಾರ ಗೊತ್ತಿದ್ದ ಮೇಘನಾ, ವೃದ್ಧರ ಖಾತೆಯಲ್ಲಿದ್ದ ಹಣ ಲೂಟಿಗೆ ಯೋಜನೆ ರೂಪಿಸಿದ್ದರು.

ಫೆ.12ರಂದು ಬ್ಯಾಂಕ್‌ಗೆ ತೆರಳಿದ್ದ ಸಾವಿತ್ರಮ್ಮ ಅವರಿಗೆ ನಿಮ್ಮ ಖಾತೆಯಲ್ಲಿರುವ ಹಣ ಬೇರೊಂದು ಹೊಸ ನಿಶ್ಚಿತ ಠೇವಣಿಯಲ್ಲಿಟ್ಟರೆ ಹೆಚ್ಚಿನ ಬಡ್ಡಿ ಸಿಗಲಿದೆ ಎಂದಿದ್ದ ಮೇಘನಾ, ಇದಕ್ಕೆ ಅಗತ್ಯವಾದ ದಾಖಲೆಗಳನ್ನು ಮನೆಗೆ ಬಂದು ಪಡೆಯುವುದಾಗಿ ತಿಳಿಸಿದ್ದರು.

ಫೆ.13ರಂದು ಸಾವಿತ್ರಮ್ಮ ಅವರ ಮನೆಗೆ ತೆರಳಿದ್ದ ಮೇಘನಾ, ಸಾವಿತ್ರಮ್ಮ ಅವರ ಬಳಿ ಒಂದು ಚೆಕ್ ಹಾಗೂ ಕೆಲವು ದಾಖಲೆಗಳಿಗೆ ಸಹಿ ಮಾಡಿಸಿಕೊಂಡು ಹೋಗಿದ್ದರು. ಅದೇ ದಿನ ಸಾವಿತ್ರಮ್ಮ ಅವರ ಖಾತೆಯಲ್ಲಿದ್ದ 50 ಲಕ್ಷ ರೂ.ಗಳನ್ನು ಅನ್ವರ್ ಗೌಸ್ ಎಂಬಾತನ ಖಾತೆಗೆ ಆರ್‌ಟಿಜಿಎಸ್ ಮೂಲಕ ವರ್ಗಾಯಿಸಿದ್ದರು ಎಂದು ಪೊಲೀಸರು ತಿಳಿಸಿದರು.

ಫೆ.14ರಂದು ಅನ್ವರ್‌ಗೌಸ್ ತನ್ನ ಬ್ಯಾಂಕ್ ಖಾತೆಗೆ ವರ್ಗಾವಣೆಗೊಂಡಿದ್ದ 50 ಲಕ್ಷ ರೂಪೈಕಿ 30 ಲಕ್ಷರೂ. ಡ್ರಾ ಮಾಡಿ, ಅಂಕೋಲಾಗೆ ತೆರಳಿದ್ದ ಮೇಘನಾ ಹಾಗೂ ಶಿವಪ್ರಸಾದ್‌ಗೆ ನೀಡಿದ್ದ. ಈ ಹಣ ಪಡೆದ ಮೇಘನಾ ತನ್ನ ಪತಿ ಜತೆ ಗೋಕರ್ಣ ಪ್ರವಾಸ ಮುಗಿಸಿ ವಾಪಸ್ ಬೆಂಗಳೂರಿಗೆ ಬಂದಿದ್ದರು.

ಫೆ.27ರಂದು ಸಾವಿತ್ರಮ್ಮ ಮನೆಗೆ ಪುತ್ರ ಚೆನ್ನಮಲ್ಲಿಕಾರ್ಜುನ್ ಬಂದಿದ್ದರು. ತಮ್ಮ ತಂದೆಯ ಮೊಬೈಲ್‌ಗೆ ಬಂದ ಮೆಸೇಜ್ ಪರಿಶೀಲಿಸಿದಾಗ 50 ಲಕ್ಷ ರೂ. ಅನ್ವರ್‌ಗೌಸ್ ಖಾತೆಗೆ ಆರ್‌ಟಿಜಿಎಸ್ ಆಗಿರುವುದು ಗೊತ್ತಾಗಿ ಕಂಗಾಲಾದರು. ಈ ಬಗ್ಗೆ ತಾಯಿಯನ್ನು ಪ್ರಶ್ನಿಸಿದಾಗ ಮೇಘನಾ ಎಂಬುವವರು ಕೆಲವು ದಾಖಲೆಗಳಿಗೆ ಸಹಿ ಪಡೆದು ಹೋಗಿದ್ದರು ಎಂದು ತಿಳಿಸಿದ್ದಾರೆ. ಹೀಗಾಗಿ, ಮಾರನೇ ದಿನ ಚೆನ್ನಮಲ್ಲಿಕಾರ್ಜುನ್ ತಾಯಿ ಜತೆ ಬ್ಯಾಂಕ್‌ಗೆ ತೆರಳಿ ಮೇಘನಾರನ್ನು ಹಣ ವರ್ಗಾವಣೆ ಬಗ್ಗೆ ಪ್ರಶ್ನಿಸಿದ್ದರು.

ಈ ವೇಳೆ ಹೊಸ ಕಥೆ ಹೇಳತೊಡಗಿದ್ದ ಮೇಘನಾ, ಬೇರೊಂದು ಖಾತೆಗೆ 50 ಲಕ್ಷ ರೂ. ಆರ್‌ಟಿಜಿಎಸ್ ಮಾಡಲು ಒಪ್ಪಿಗೆ ಸೂಚಿಸಿ ಸಾವಿತ್ರಮ್ಮ ಸಹಿ ಮಾಡಿದ್ದ ಫಾರಂ ತೋರಿಸಿದ್ದಾರೆ. ಜತೆಗೆ, ಹಣ ವರ್ಗಾವಣೆಯಲ್ಲಿ ತನ್ನ ಪಾತ್ರವೇನಿಲ್ಲ ಎಂದು ಸುಳ್ಳು ಹೇಳಿದ್ದಾರೆ.

ಮೇಘನಾ ವಂಚನೆ ಬಗ್ಗೆ ಎಚ್ಚೆತ್ತ ಚೆನ್ನಮಲ್ಲಿಕಾರ್ಜುನ್ ಹಾಗೂ ಸಾವಿತ್ರಮ್ಮ, ಹಣ ಲಪಟಾಯಿಸುವ ದುರುದ್ದೇಶದಿಂದಲೇ ಸುಳ್ಳು ಮಾಹಿತಿ ನೀಡಿ ಆರ್‌ಟಿಜಿಎಸ್ ಫಾರಂಗೆ ಸಹಿ ಮಾಡಿಕೊಂಡಿದ್ದ ಮೇಘನಾ ವಿರುದ್ಧ ಪೊಲೀಸರಿಗೆ ದೂರು ನೀಡಿದ್ದರು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಹೇಳಿದರು.

ಸಾವಿತ್ರಮ್ಮ ನೀಡಿದ ದೂರಿನ ಅನ್ವಯ ಪ್ರಕರಣ ದಾಖಲಿಸಿಕೊಂಡು ಪೊಲೀಸರು ಕ್ಷಿಪ್ರ ತನಿಖೆ ನಡೆಸಿ ಅನ್ವರ್‌ಗೌಸ್ ಖಾತೆಯಲ್ಲಿದ್ದ ಬಾಕಿ 20 ಲಕ್ಷ ರೂ.ಗಳನ್ನು ಫ್ರೀಜ್ ಮಾಡಿಸಿದ್ದಾರೆ. ಬಳಿಕ ಆರೋಪಿ ಮೇಘನಾರನ್ನು ಬಂಧಿಸಿದಾಗ ತನ್ನ ಪ್ರಿಯಕರನ ವೈಯಕ್ತಿಕ ಸಾಲ ಹಾಗೂ ಖರ್ಚಿಗಾಗಿ ಮೋಸದ ಮಾರ್ಗದಲ್ಲಿ ಸಾವಿತ್ರಮ್ಮ ಖಾತೆಯಲ್ಲಿದ್ದ ಹಣ ದೋಚಿದ್ದಾಗಿ ತಪ್ಪೊಪ್ಪಿಕೊಂಡರು. ಬಳಿಕ ಶಿವಪ್ರಸಾದ್‌ನನ್ನು ಬಂಧಿಸಲಾಯಿತು ಎಂದು ಅಧಿಕಾರಿ ಹೇಳಿದರು.

ಜೀಪ್ ಮಗುಚಿ ಅರಣ್ಯಾಧಿಕಾರಿ ಸೇರಿ ನಾಲ್ವರಿಗೆ ಗಾಯ



ಮಡಿಕೇರಿ, ಮಾ.16– ಅರಣ್ಯಕ್ಕೆ ತಗುಲಿದ ಬೆಂಕಿ ಹತೋಟಿಗೆ ಬಂದಿದೆಯೇ ಎಂದು ಸ್ಥಳ ಪರಿಶೀಲನೆಗೆ ತೆರಳುತ್ತಿದ್ದ ಅರಣ್ಯ ಇಲಾಖಾಧಿಕಾರಿ ಹಾಗೂ ಸಿಬ್ಬಂದಿಗಳಿದ್ದ ಜೀಪ್ ಮಗುಚಿ ಬಿದ್ದು ಅರಣ್ಯಾಧಿಕಾರಿ ಸೇರಿ ನಾಲ್ವರು ಗಾಯಗೊಂಡಿರುವ ಘಟನೆ ಸೋಮವಾರಪೇಟೆ ತಾಲೂಕಿನ ಯಡವನಾಡು ಬಳಿ ನಡೆದಿದೆ.

ಸೋಮವಾರಪೇಟೆ ತಾಲೂಕಿನ ಯಡವನಾಡು ಸಮೀಪ ರಾಜ್ಯ ಹೆದ್ದಾರಿ ಪಕ್ಕದ ಮೀಸಲು ಅರಣ್ಯದಲ್ಲಿ ಶನಿವಾರ ಬೆಂಕಿ ಅವಘಡ ಸಂಭವಿಸಿದ್ದು, ಅಗ್ನಿ ಶಾಮಕ ಮತ್ತು ಅರಣ್ಯ ಇಲಾಖೆ ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿ ತಡರಾತ್ರಿ ಬೆಂಕಿ ನಂದಿಸಿದ್ದರು.

ಮೀಸಲು ಅರಣ್ಯದ ಕಾಡ್ಗಿಚ್ಚು ಹತೋಟಿಗೆ ಬಂದಿರುವ ಬಗ್ಗೆ ಪರಿಶೀಲನೆ ನಡೆಸಿ, ಹಿಂತಿರುಗುತ್ತಿದ್ದ ಅರಣ್ಯಾಧಿಕಾರಿ ಮತ್ತು ಸಿಬ್ಬಂದಿಗಳಿದ್ದ ಜೀಪ್ ಭಾನುವಾರ ಮಧ್ಯಾಹ್ನ ಸೋಮವಾರಪೇಟೆ–ಕುಶಾಲನಗರ ರಾಜ್ಯ ಹೆದ್ದಾರಿಯ ಯಡವನಾಡು ಬಳಿ ಚಾಲಕನ ನಿಯಂತ್ರಣ ತಪ್ಪಿ ಮಗುಚಿ ಬಿದ್ದಿದೆ. ಜೀಪ್‌ನಲ್ಲಿದ್ದ ಅರಣ್ಯಾಧಿಕಾರಿ ಚಂದ್ರೇಶ್, ಸಿಬ್ಬಂದಿಗಳಾದ ವೆಂಕಟೇಶ್, ಸಚಿನ್, ದಳವಾಯಿ ಎಂಬವರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಗಾಯಾಳುಗಳನ್ನು ಮಡಿಕೇರಿಯ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಜೀಪ್ ಅನ್ನು ಚಾಲಕ ವಿನು ಚಲಾಯಿಸುತ್ತಿದ್ದರು ಎನ್ನಲಾಗಿದೆ.

ಕೆರೆಗೆ ಬಿದ್ದು ಬಾಲಕಿ ಸಾವು



ಗೋಣಿಕೊಪ್ಪ: ಆಟವಾಡುತ್ತಿದ್ದಾಗ ಕಾಲು ಜಾರಿ ಕೆರೆಗೆ ಬಿದ್ದು ಬಾಲಕಿ ಮೃತ ಪಟ್ಟಿದ್ದಾಳೆ. ಚೆನ್ನಂಗೊಲ್ಲಿಯ ಪ್ರವೀಣ್, ಭವಾನಿ ದಂಪತಿ ಪುತ್ರಿ ಲಾವಣ್ಯ(9) ಮೃತ ಬಾಲಕಿ. ಚೆನ್ನಂ ಗೊಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಯ 4ನೇ ತರಗತಿ ಓದುತ್ತಿದ್ದಳು. ಭಾನುವಾರ ಮಧ್ಯಾಹ್ನ 3 ಗಂಟೆ ಸುಮಾರಿಗೆ ಅಣ್ಣನೊಂದಿಗೆ ಆಟವಾಡುತ್ತಿದ್ದಾಗ ಘಟನೆ ನಡೆದಿದೆ. ಗೋಣಿಕೊಪ್ಪ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಗೋಣಿಕೊಪ್ಪ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ, ಕುಟುಂಬಕ್ಕೆ ನೀಡಲಾಯಿತು.

ಮುಂದಿನ ದಿನಗಳಲ್ಲಿ ಲೋಕಸಭಾ ಸ್ಥಾನಗಳ ಪುನರ್ವಿಂಗಡನಾ ಕಾರ್ಯ

ನನಸಾಗುವುದೇ ಕೊಡಗು ಪ್ರತ್ಯೇಕ ಲೋಕಸಭಾದ ಕನಸು

ಇಲ್ಲವೇ ಬೇರೊಂದು ಲೋಕಸಭಾ ಕ್ಷೇತ್ರದೊಂದಿಗೆ ವಿಲೀನವಾಗುವ ಆತಂಕ

ಮಡಿಕೇರಿ,ಮಾ.16– ರಾಷ್ಟ್ರದ ಲೋಕಸಭಾ ಸ್ಥಾನಗಳ ಪುನರ್ವಿಂಗಡಣಾ ಕಾರ್ಯ ಮುಂದಿನ ಸಾಲಿನಲ್ಲಿ ನಡೆಯಬೇಕಿದ್ದು, ಕೊಡಗಿನ ಹಲವು ದಶಕಗಳ 'ಪ್ರತ್ಯೇಕ ಲೋಕಸಭಾ ಕ್ಷೇತ್ರ' ಕನಸು ನನಸಾಗಬಲ್ಲುದೆ ಎನ್ನುವ ಕುತೂಹಲ ಚಿಗುರೊಡೆಯುತ್ತಿದೆ. ಈ ಹಂತದಲ್ಲೇ ಮತ್ತೆ ಕೊಡಗನನ್ನು ಬೇರೊಂದು ಕ್ಷೇತ್ರಕ್ಕೆ ವಿಲೀನಗೊಳಿಸಿಬಿಡುವ ಆತಂಕದ ಕರಿ ಛಾಯೆಯೂ ಕಂಡು ಬರುತ್ತಿದೆ.

ಪ್ರತ್ಯೇಕ 'ಸಿ' ರಾಜ್ಯದ ಸ್ಥಾನಮಾನಗಳನ್ನು ಹೊಂದಿದ್ದ ಕೊಡಗು, ಕರ್ನಾಟಕದೊಂದಿಗೆ ವಿಲೀನಗೊಂಡ ಬಳಿಕ ಜಿಲ್ಲೆಯಾಗಿ ಪರಿವರ್ತಿತವಾಗಿ 3 ವಿಧಾನ ಸಭಾ ಸ್ಥಾನಗಳನ್ನು ಪಡೆದಿತ್ತು. ಹೀಗಿದ್ದೂ ಲೋಕಸಭಾ ಸ್ಥಾನಕ್ಕೆ ಬಂದಾಗ, ಜಿಲ್ಲೆಯನ್ನು ಮಂಗಳೂರು ಲೋಕಸಭಾ ಕ್ಷೇತ್ರಕ್ಕೆ ವಿಲೀನಗೊಳಿಸುವ ಮೂಲಕ ಹಲವು ದಶಕಗಳ ಹಿಂದೆಯೇ ಕೊಡಗು ಅನ್ಯಾಯಕ್ಕೆ ಒಳಗಾಗಿತ್ತು. ಮಂಗಳೂರು ಲೋಕಸಭಾ ಕ್ಷೇತ್ರದೊಂದಿಗೆ ಗುರುತಿಸಿಕೊಂಡಿದ್ದ ಕೊಡಗನ್ನು ಲೋಕ ಸಭೆಯಲ್ಲಿ 1977ರಿಂದ ಜನಾರ್ಧನ ಪೂಜಾರಿ ಅವರು ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷವನ್ನು ಪ್ರತಿನಿಧಿಸಿ 4 ಬಾರಿ ಸಂಸದರಾಗಿದ್ದರು.

1991ರ ಬಳಿಕ ಬಿಜೆಪಿಯ ವಿ.ಧನಂಜಯ ಕುಮಾರ್ 4 ಬಾರಿ ಭಾರತೀಯ ಜನತಾ ಪಾರ್ಟಿಯಿಂದ ಪ್ರತಿನಿಧಿಸಿ ಸಂಸದರಾಗಿದ್ದರು. ಲೋಕಸಭಾ ಕ್ಷೇತ್ರಗಳ ಪುನರ್ ವಿಂಗಡಣೆಗೂ ಮುನ್ನ 2004ರಿಂದ 2009ರ



ವರೆಗೆ ಭಾರತೀಯ ಜನತಾ ಪಾರ್ಟಿಯ ವಿ.ಸದಾನಂದ ಗೌಡ ಅವರು ಕೊಡಗನ್ನು ಒಳಗೊಂಡ ಮಂಗಳೂರು ಕ್ಷೇತ್ರವನ್ನು ಪ್ರತಿನಿಧಿಸಿದ ಕೊನೆಯ ಸಂಸದರಾಗಿದ್ದರು.

ಮೈಸೂರು ಕ್ಷೇತ್ರದ ಭಾಗ: ನೂತನ ಪುನರ್ವಿಂಗಡಿತ ಕೊಡಗು–ಮೈಸೂರು ಕ್ಷೇತ್ರದಲ್ಲಿ 2009ರಲ್ಲಿ ಕಾಂಗ್ರೆಸ್ ಪಕ್ಷದಿಂದ ಅಡಗೂರು ಹೆಚ್.ವಿಶ್ವನಾಥ್ ಸಂಸತ್ ಸದಸ್ಯರಾಗಿದ್ದರು. 2014ರಿಂದ 2 ಬಾರಿ ಬಿಜೆಪಿಯಿಂದ ಪ್ರತಾಪ ಸಿಂಹ ಸಂಸದರಾಗಿ ಆಯ್ಕೆಯಾಗಿದ್ದರು. ಇದೀಗ ಪ್ರಸ್ತುತ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ. ಮಂಗಳೂರು ಮತ್ತು ಮೈಸೂರು ಕ್ಷೇತ್ರಗಳಿಗೆ ಕೊಡಗು ವಿಲೀನವಾದ ಸಂದರ್ಭಗಳಲ್ಲಿ ಇಲ್ಲಿವರೆಗೆ ಆಯ್ಕೆಯಾದ ಪ್ರತಿಯೊಬ್ಬರು ಹೊರ ಜಿಲ್ಲೆಯವರೇ. ಕೊಡಗಿನ ಯಾವೊಬ್ಬರು ಲೋಕ ಸಭೆಯನ್ನು ಪ್ರತಿನಿಧಿಸಲು ಸಾಧ್ಯವಾಗದಿರುವ ಕೊಡಗಿನ ದುರ್ವಿದಿ ಎಂದೇ ಹೇಳಲಾಗುತ್ತಿದೆ.

ಮಾನದಂಡದಿಂದ ಕೊಡಗಿಗೆ ಅನ್ಯಾಯ: ವಿಶಿಷ್ಟ ಭೌಗೋಳಿಕ ಪರಿಸರ, ವಿಭಿನ್ನ ಸಂಸ್ಕೃತಿ, ರಾಜ್ಯದ ಬೇರೆ ಯಾವುದೇ ಜಿಲ್ಲೆಗಳಲ್ಲಿ ಕಾಣದ ಮೂಲಭೂತ ಸಮಸ್ಯೆಗಳು ಕೊಡಗು ಜಿಲ್ಲೆಯಲ್ಲಿವೆ. ಈ ಹಿನ್ನೆಲೆಯಲ್ಲಿ ಕೊಡಗನ್ನು ಕೇಂದ್ರದಲ್ಲಿ ಪ್ರತಿನಿಧಿಸುವ ನಮ್ಮವರೆ ಒಬ್ಬರು ಸಂಸದರ ಅಗತ್ಯ ಹಿಂದೆಂದಿಗಿಂತಲೂ ಇಂದು ಹೆಚ್ಚಿದೆ. ಹೀಗಿದ್ದೂ, ಲೋಕಸಭಾ ಕ್ಷೇತ್ರ ಪುನರ್ವಿಂಗಡಣೆಯಲ್ಲಿ 'ಜನ ಸಂಖ್ಯೆಯೇ' ಪ್ರಮುಖ ಮಾನದಂಡವಾಗಿರುವುದು ಕೊಡಗಿಗೆ ನುಂಗಲಾರದ ಬಿಸಿತುಪ್ಪವಾಗಿ ಪರಿಣಮಿಸಿದೆ.

ರಾಷ್ಟ್ರದ ಈಶಾನ್ಯ ರಾಜ್ಯಗಳಲ್ಲಿ ಜನಸಂಖ್ಯೆಗೂ ಮಿಗಿಲಾಗಿ, ಅಲ್ಲಿನ ಭೌಗೋಳಿಕ ಪರಿಸರ, ಸಂಸ್ಕೃತಿ, ಪರಂಪರೆಗಳನ್ನು ಮಾನದಂಡವಾಗಿರಿಸಿಕೊಂಡು ಕಡಿಮೆ ಜನಸಂಖ್ಯೆಗೂ ಒಂದು ಲೋಕಸಭಾ ಕ್ಷೇತ್ರವನ್ನು ನೀಡಲಾಗಿದೆ. ಅದೇ ರೀತಿ ಪ್ರತ್ಯೇಕ ಲೋಕಸಭಾ ಕ್ಷೇತ್ರವನ್ನು ಕೊಡಗು ಜಿಲ್ಲೆಗೂ ನೀಡಬೇಕೆನ್ನುವ ಆಶಯ ಜಿಲ್ಲೆಯ ಜನತೆಯದ್ದಾಗಿದೆ.

ಸುಳ್ಯದೊಂದಿಗೆ 'ಕೊಡಗು'?

ಲೋಕಸಭಾ ಕ್ಷೇತ್ರಗಳ ಪುನರ್ವಿಂಗಡಣೆಯ ಹಂತದಲ್ಲಿ ಜನಸಂಖ್ಯೆಯನ್ನು ಸರಿದೂಗಿಸಲು ಮತ್ತೊಮ್ಮೆ ದಕ್ಷಿಣ ಕನ್ನಡದ ಭಾಗವಾದ, ಕೊಡಗಿನ ಸಮೀಪದಲ್ಲಿರುವ 'ಸುಳ್ಯ' ತಾಲೂಕನ್ನು ಸೇರಿಸುವ ಸಾಧ್ಯತೆಗಳಿವೆ ಎನ್ನಲಾಗುತ್ತಿದೆ. ಪ್ರಸ್ತುತ ಕೊಡಗಿನ ಜನಸಂಖ್ಯೆ 5,54,519 ಆಗಿದ್ದು, ಲೋಕಸಭಾ ಸ್ಥಾನ ರಚನೆಗೆ ಅಗತ್ಯವಾದ ಜನ ಸಂಖ್ಯೆಯನ್ನು ಹೊಂದಿಕೊಳ್ಳಲು ಸುಳ್ಯ ತಾಲೂಕನ್ನು ಸೇರ್ಪಡೆ ಮಾಡಿದಲ್ಲಿ ಮತ್ತೆ ಕೊಡಗು ಅನ್ಯಾಯಕ್ಕೆ ಒಳಗಾಗಲಿದೆ.

ಕೊಡಗಿಗೆ ಎಂ.ಪಿ ಸ್ಥಾನ ಅವಶ್ಯ



ಕೊಡಗು ಜಿಲ್ಲೆ ಈ ಹಿಂದಿನಿಂದಲೂ ಲೋಕಸಭಾ ಸ್ಥಾನದಿಂದ ವಂಚಿತಗೊಳ್ಳುತ್ತಲೆ ಬಂದಿದೆ. ಈಶಾನ್ಯ ರಾಜ್ಯಗಳ ಮಾದರಿಯಲ್ಲಿ ಕೊಡಗಿಗೆ, ಕ್ಷೇತ್ರ ಪುನರ್ವಿಂಗಡಣೆಯ ಸಂದರ್ಭ ಪ್ರತ್ಯೇಕ ಲೋಕಸಭಾ ಕ್ಷೇತ್ರವನ್ನು ನೀಡಬೇಕು. ಇದು ಜಿಲ್ಲೆಯ ಜನತೆಯ ಹಕ್ಕಾಗಿದೆ. –ಎನ್.ಯು.ನಾಚಪ್ಪ, ಸಿಎನ್‌ಸಿ ಅಧ್ಯಕ್ಷ

ಲೈನ್ ಮನೆಯಲ್ಲಿ ನವಜಾತ ಶಿಶು ಪತ್ತೆ

- ಆಗ ತಾನೇ ಹುಟ್ಟಿದ ಮಗು ಬಿಟ್ಟು ಹೋಗಿರುವ ನಿರ್ದಯಿ ತಾಯಿ
- ಸ್ಥಳೀಯರ ಮಾಹಿತಿ ಮೇರೆಗೆ ಮಗು ರಕ್ಷಿಸಿದ ಪೊಲೀಸರು

ಮಡಿಕೇರಿ,ಮಾ.16– ನಾಪೋಕ್ಲು ಪೊಲೀಸ್ ಠಾಣಾ ವ್ಯಾಪ್ತಿಯ ಬಲ್ಲಮಾವಟಿ ಪಂಚಾಯಿತಿ ವ್ಯಾಪ್ತಿಯ ಪೇರೂರು ಗ್ರಾಮದ ತೋಟವೊಂದರ ಲೈನ್ ಮನೆಯಲ್ಲಿ ನವಜಾತ ಹೆಣ್ಣು ಶಿಶು ಪತ್ತೆಯಾದ ಘಟನೆ ಶನಿವಾರ ರಾತ್ರಿ ವರದಿಯಾಗಿದೆ.

ಬಲ್ಲಮಾವಟಿ ಪೇರೂರು ಗ್ರಾಮದ ತೋಳಂಡ ಪೂಣಚ್ಚ ಎಂಬುವರ ಲೈನ್ ಮನೆಯಲ್ಲಿ ಶನಿವಾರ ರಾತ್ರಿ 9.45ರ ವೇಳೆ ನವಜಾತ ಶಿಶು ಪತ್ತೆಯಾಗಿದ್ದು, ಮಗುವಿಗೆ ಜನ್ಮ ನೀಡಿದ ಬಳಿಕ ತಾಯಿ ಪರಾರಿಯಾಗಿದ್ದಾಳೆ ಎಂದು ಶಂಕಿಸಲಾಗಿದೆ. ಮಗು ಜನಿಸಿ ಕೇವಲ 3 ಗಂಟೆಗಳು ಕಳೆದಿರಬಹುದು ಎಂದು ಅಂದಾಜಿಸಲಾಗಿದೆ.

ಪೂಣಚ್ಚ ಎಂಬವರ ಮನೆ ಸಮೀಪದ ತೋಟದಲ್ಲಿ ಯಾರು ವಾಸವಿಲ್ಲದ ಲೈನ್ ಮನೆಯ ಕೋಣೆಯಲ್ಲಿ ಶಿಶುವಿನ ಕೂಗು ಕೇಳಿದ ಸ್ಥಳೀಯರು, ಮನೆ ಮಾಲೀಕ ಪೂಣಚ್ಚ ಅವರಿಗೆ ಮಾಹಿತಿ ನೀಡಿದ್ದಾರೆ. ಪರಿಶೀಲಿಸಿದ ಮಾಲೀಕ ಪೂಣಚ್ಚ ನವಜಾತ ಶಿಶುವಿನ ಬಳಿ ಯಾರು ಇಲ್ಲದಿರುವುದನ್ನು ಗಮನಿಸಿ 112 ಪೊಲೀಸ್ ಸಹಾಯವಾಣಿಗೆ ಕರೆಮಾಡಿ ಮಾಹಿತಿ ನೀಡಿದ್ದಾರೆ. ಮಾಹಿತಿ ತಿಳಿದು ತಕ್ಷಣ ಸ್ಥಳಕ್ಕೆ ಧಾವಿಸಿದ 112 ಪೊಲೀಸ್ ಸಿಬ್ಬಂದಿಗಳಾದ ಮುಖ್ಯಪೇದೆ ರಾಜೇಶ್ ಮತ್ತು ವೊಣ್ಣಪ್ಪ ಅವರು ರಕ್ತದ ಮಡುವಿನಲ್ಲಿ ಇರುವೆಗಳು ಮುತ್ತಿ ಜೀವ ಕಳೆದುಕೊಳ್ಳುವ ಸ್ಥಿತಿಯಲ್ಲಿದ್ದ ಶಿಶುವನ್ನು ರಕ್ಷಣೆ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಬಳಿಕ ಶಿಶುವನ್ನು ನಾಪೋಕ್ಲು ಸಮುದಾಯ ಆರೋಗ್ಯ ಕೇಂದ್ರಕ್ಕೆ ಕರೆತಂದು ಪ್ರಥಮ ಚಿಕಿತ್ಸೆ ಕೊಡಿಸಿದ್ದಾರೆ. ಬಳಿಕ ಆಂಬುಲೆನ್ಸ್‌ನಲ್ಲಿ ಮಡಿಕೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದಾರೆ. ಇದೀಗ ಜಿಲ್ಲಾಸ್ಪತ್ರೆಯ ನವಜಾತ ಶಿಶುಗಳ ತೀವ್ರ ನಿಘಾ ಘಟಕದಲ್ಲಿ ಮಗುವಿಗೆ ಚಿಕಿತ್ಸೆ ನೀಡಲಾಗುತ್ತಿದ್ದು, ಮಗು ಚೇತರಿಸಿಕೊಳ್ಳುತ್ತಿದೆ.



ಮಡಿಕೇರಿ ಆಸ್ಪತ್ರೆಯಲ್ಲಿ ಮಗುವಿಗೆ ಚಿಕಿತ್ಸೆ

ಮಡಿಕೇರಿ ಜಿಲ್ಲಾಸ್ಪತ್ರೆಗೆ ನಾಪೋಕ್ಲು ಠಾಣಾಧಿಕಾರಿ ಮಂಜುನಾಥ್ ಭೇಟಿ ನೀಡಿ ಶಿಶುವಿನ ಆರೋಗ್ಯದ ಬಗ್ಗೆ ವೈದ್ಯರಿಂದ ಮಾಹಿತಿ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ. ಶಿಶುವಿನ ವಾರಸುದಾರರ ಪತ್ತೆ ಕಾರ್ಯದಲ್ಲಿ ಪೊಲೀಸರು ತೊಡಗಿದ್ದು, ಬಲ್ಲಮಾವಟಿ ಪೇರೂರು ಗ್ರಾಮದಲ್ಲಿರುವ ಗ್ರಾಮಸ್ಥರಿಗೆ ಶಿಶುವಿನ ವಾರಸುದಾರರ ಬಗ್ಗೆ ಮಾಹಿತಿ ತಿಳಿದಲ್ಲಿ ನಾಪೋಕ್ಲು ಪೊಲೀಸ್ ಠಾಣೆಯ 9480804948 ಮೊಬೈಲ್ ಸಂಖ್ಯೆಗೆ ಮಾಹಿತಿ ನೀಡುವಂತೆ ಕೋರಿದ್ದಾರೆ. ಮಾಹಿತಿ ನೀಡಿದವರ ವಿಳಾಸವನ್ನು ಗೌಪ್ಯವಾಗಿಡಲಾಗುವುದು ಎಂದು ಪೊಲೀಸರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಣ್ಣು ಮಕ್ಕಳು ಶಿಕ್ಷಣ ಪಡೆದು ಮುಖ್ಯ ವಾಹಿನಿಗೆ ಬರಬೇಕು

ವಿರಾಜಪೇಟೆ, ಮಾ.16– ಹೆಣ್ಣು ಮಕ್ಕಳು ಶಿಕ್ಷಣವಂತರಾಗಬೇಕು. ಮಹಿಳೆಯರಿಗೆ ಇರುವ ಸೌಲಭ್ಯಗಳನ್ನು ಪಡೆದುಕೊಂಡು ಸಮಾಜದ ಮುಖ್ಯ ವಾಹಿನಿಗೆ ಬರಬೇಕು ಎಂದು ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಅಚ್ಚಪಂಡ ಮಹೇಶ್ ಗಣಪತಿ ಹೇಳಿದರು.

ಸಮೀಪದ ಹೆಗ್ಗಳ ಗ್ರಾಮದ ನಿರ್ಮಲಗಿರಿ ಅಂಗನವಾಡಿ ಕೇಂದ್ರದ ವಾರ್ಷಿಕೋತ್ಸವ ಮತ್ತು ಪ್ರಾಥಮಿಕ ಆರೋಗ್ಯ ಸುರಕ್ಷಾ ನಿವೃತ್ತ ಅಧಿಕಾರಿ ಕೆ.ಕೆ.ರಮಿತ ಅವರಿಗೆ ಏರ್ಪಡಿಸಿದ್ದ ಸನ್ಮಾನ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿ, ಗ್ರಾಮದಲ್ಲಿ ಕೊರೋನ ಸಂದರ್ಭ ಆಸ್ಪತ್ರೆಗೆ ತೆರಳಲು ಮತ್ತು ಲಸಿಕೆ ಹಾಕಿಸಿಕೊಳ್ಳಲು ಅಧಿಕಾರಿ ರಮಿತ ಅವರು ಜನರಿಗೆ ಸಾಕಷ್ಟು ಸಹಾಯ ಮಾಡಿದ್ದಾರೆ ಎಂದರು.

ಗ್ರಾಮಸ್ಥರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಪ್ರಾಥಮಿಕ ಆರೋಗ್ಯ ಸುರಕ್ಷ ನಿವೃತ್ತ ಅಧಿಕಾರಿ ಕೆ.ಕೆ.ರಮಿತ ಆರೋಗ್ಯ ಇಲಾಖೆ ತಾಯಿ ಇದ್ದಂತೆ. ಸುಮಾರು 38 ವರ್ಷಗಳ ಹಿಂದೆ ಕರ್ತವ್ಯಕ್ಕೆ ಹೆಗ್ಗಳ ಗ್ರಾಮಕ್ಕೆ ಬಂದ ಸಂದರ್ಭದಲ್ಲಿ ಭಾರಿ ಮಳೆ ನಡುವೆ ಗ್ರಾಮೀಣ ಪ್ರದೇಶದಲ್ಲಿರುವ ಮನೆಗಳಿಗೆ ಕಾಡು ದಾರಿಯಲ್ಲಿ ನಡೆದು ಮಕ್ಕಳಿಗೆ ಲಸಿಕೆ ನೀಡಲು ಬಹಳ ಶ್ರಮ ವಹಿಸಿದ್ದೇನೆ. ಅಧಿಕಾರಿಗಳು ಬಂದು ಪರಿಶೀಲನೆ ನಡೆಸಿದಾಗ ಗ್ರಾಮದ ಎಲ್ಲಾ ಮನೆಗಳಿಗೂ ನಾನು ಭೇಟಿ ಮಾಡಿದ್ದ ಕಾರಣ ನನ್ನ ಸೇವೆಯನ್ನು ಮೆಚ್ಚಿ 30 ವರ್ಷದ ಹಿಂದೆ ಪ್ರಶಸ್ತಿ ನೀಡಿದ್ದರು ಎಂದರು.



ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಅಚ್ಚಪಂಡ ಮಹೇಶ್ ಗಣಪತಿ ಮಾತನಾಡಿದರು.

ಶಿಶು ಅಭಿವೃದ್ಧಿ ಸಹಾಯಕ ಯೋಜನಾಧಿಕಾರಿ ರೀತಾ ವಿಠಲ್ ಮಾತನಾಡಿ ಸರಕಾರಿ ಕೆಲಸ ಅಂದರೆ ಕರ್ತವ್ಯದಲ್ಲಿ ಯಾವ ಜಾಗಕ್ಕೂ ವರ್ಗಾವಣೆ ಮಾಡಿದರೂ ಅಧಿಕಾರಿಗಳು ಹೋಗಬೇಕಾಗುತ್ತದೆ. ಆದರೆ ಪ್ರಾಥಮಿಕ ಆರೋಗ್ಯ ಸುರಕ್ಷ ಅಧಿಕಾರಿಯಾಗಿ ಕೆ.ಕೆ.ರಮಿತ ಅವರ ಅವಧಿಯಲ್ಲಿ ಒಂದೇ ಗ್ರಾಮದಲ್ಲಿ ಸೇವೆ ಸಲ್ಲಿಸಿ ಗ್ರಾಮೀಣ ಭಾಗದ ಜನರ ಸೇವೆ ಮಾಡಿ ಉತ್ತಮ ಹೆಸರು ಪಡೆದಿರುವುದು ಶ್ಲಾಘನೀಯ ಎಂದರು.

ವಿರಾಜಪೇಟೆ ಲಿಟಲ್ ಸ್ಕಾಲರ್ಸ್ ಅಕಾಡೆಮಿಯ ಮುಖ್ಯಸ್ಥರಾದ ಪೂಜಾ ರವಿಂದ್ರ ಅವರು ಮಾತನಾಡಿದರು.

ಬೇಟೋಳಿ ಗ್ರಾಪಂ ಅಧ್ಯಕ್ಷ ಅಚ್ಚಪಂಡ ದಿನೇಶ್ ಬೋಪಣ್ಣ, ಅಭಿವೃದ್ಧಿ ಅಧಿಕಾರಿ ಮಣಿ, ಸದಸ್ಯೆ ಲಕ್ಷ್ಮಿ, ಗ್ರಾಪಂ ಮಾಜಿ ಅಧ್ಯಕ್ಷ ಹಿರಿಯರಾದ ಪೊರೆರ ಬಿದ್ದಪ್ಪ, ಗೋಣಿಕೊಪ್ಪಲು ವರ್ತುಲನ ಸಂಘಟನೆಯ ಕಾರ್ಯದರ್ಶಿ ನಳಿನಾಕ್ಷಿ, ನಿವೃತ್ತ ಅಂಗನವಾಡಿ ಕಾರ್ಯಕರ್ತೆ ಪಾರ್ವತಿ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಮಾ.24 ರಂದು ಮಾಜಿ ಸೈನಿಕರ ರ್‍ಯಾಲಿ

ಮಡಿಕೇರಿ, ಮಾ.16– ಮಡಿಕೇರಿಯಲ್ಲಿ ಮಾಜಿ ಸೈನಿಕರ ಸಂಪರ್ಕ, ರ್‍ಯಾಲಿ ಸೇವಾ ನಿರತ ಸಶಸ್ತ್ರ ಪಡೆಗಳ ಯೋಧರು, ನಿವೃತ್ತ ಸೈನಿಕರು ಜೊತೆ ಸಂಪರ್ಕವನ್ನು ಹೆಚ್ಚಿಸಿಕೊಳ್ಳುವ ನಿಟ್ಟಿನಲ್ಲಿ, ಅವರ ಜೊತೆ ಸಂವಹನ ನಡೆಸಲು ಮತ್ತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ವೇದಿಕೆಯೊಂದನ್ನು ಕಲ್ಪಿಸಲಾಗಿದೆ.

ವಿಶೇಷವಾಗಿ ಕೊಡಗಿನ ಸಶಸ್ತ್ರ ಪಡೆಗಳ ಕುಟುಂಬವು ಇದರ ಪ್ರಯೋಜನ ಪಡೆಯಬಹುದು. ಇದರ ಜೊತೆಗೆ, ಪಿಂಚಣಿ ಮತ್ತು ಇತರ ಸೌಲಭ್ಯಗಳಿಗೆ ಸಂಬಂಧಿಸಿದ ದೂರುಗಳನ್ನು ಒಂದೇ ಸ್ಥಳದಲ್ಲಿ ಪರಿಹರಿಸಿಕೊಳ್ಳಬಹುದಾಗಿದೆ ಹಾಗೂ ವಿವಿಧ ರೀತಿಯ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಿಕೊಳ್ಳಲು ಇದು ಸಹಕಾರಿಯಾಗಿದೆ. ಭಾರತೀಯ ಸೈನ್ಯದ ಶ್ರೇಷ್ಠತೆಯನ್ನು ಇನ್ನಷ್ಟು ಮೇಲಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ ಅನುಭವಿ ಯೋಧರ ಅನುಭವಗಳನ್ನು ಬಳಸಿಕೊಳ್ಳಲು ಈ ವೇದಿಕೆ ಅವಕಾಶ ಕಲ್ಪಿಸುತ್ತಿದೆ.

ಈ ಸಂಬಂಧ ಕೊಡಗು ಜಿಲ್ಲೆಯಲ್ಲಿ ಔಟ್‌ರೀಚ್, ರ್‍ಯಾಲಿಯನ್ನು ಆಯೋಜಿಸಲಾಗಿದ್ದು, ಮಾಜಿ ಸೈನಿಕರ ರ್‍ಯಾಲಿಯು ಮಾ. 24 ರಂದು ಬೆಳಗ್ಗೆ 9 ಗಂಟೆಗೆ ಕ್ಯಾಪಿಟಲ್ ಹಾಲ್, ಹಿಲ್‌ಡೇಲ್ ರೆಸಾರ್ಟ್, ಐಒಸಿ ಪೆಟ್ರೋಲ್ ಪಂಪ್ ಎದುರು, ಸ್ಟುವರ್ಟ್ ಹಿಲ್, ಮಡಿಕೇರಿ ಇಲ್ಲಿ ನಡೆಯಲಿದೆ.

ಎಲ್ಲಾ ಮಾಜಿ ಸೈನಿಕರು, ವೀರ ನಾರಿಗಳು ಔಟ್‌ರೀಚ್‌ಗೆ ಹಾಜರಾಗಲು ಹೃತ್ಪೂರ್ವಕವಾಗಿ ಆಹ್ವಾನಿಸಲಾಗಿದೆ. ದಕ್ಷಿಣ ಕಮಾಂಡ್‌ನ GOC-in-C ಮತ್ತು ಹಲವಾರು ಹಿರಿಯ ಸೇವಾ ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ವಾಟ್ಸ್‌ಆಪ್: 63607–42654, ಇ–ಮೇಲ್: oicesmbangalore@yahoo.co.in

ಮಹದೇಶ್ವರಬೆಟ್ಟದ ಅಂತರಗಂಗೆ ಸುತ್ತ–ಮುತ್ತ ಶ್ಯಾಂಪೂ, ಸೋಪು ಬಳಕೆ, ಮಾರಾಟ ನಿಷೇಧ

ಮಲೆ ಮಹದೇಶ್ವರಸ್ವಾಮಿ ಅಭಿವೃದ್ಧಿ ಪ್ರಾಧಿಕಾರದಿಂದ ಆದೇಶ

- ಸ್ನಾನ ಘಟ್ಟಗಳಲ್ಲಿನ ಪರಿಸರ, ಜಲಚರ ಪ್ರಾಣಿಗಳ ಸಂರಕ್ಷಣೆಗೆ ಕ್ರಮ
- ಧ್ವನಿವರ್ಧಕಗಳ ಮೂಲಕ ಜಾಗೃತಿ

ಹನೂರು, ಮಾ.16– ತಾಲೂಕಿನ ಶ್ರೀ ಮಲೆ ಮಹದೇಶ್ವರಸ್ವಾಮಿ ಬೆಟ್ಟದ ಅಂತರಗಂಗೆಯ ಸ್ನಾನ ಘಟ್ಟದಲ್ಲಿ ಭಕ್ತರು ಶ್ಯಾಂಪೂ, ಸೋಪು ಬಳಕೆ ಹಾಗೂ ಸ್ನಾನ ಘಟ್ಟದ 500 ಮೀ. ವ್ಯಾಪ್ತಿಯಲ್ಲಿ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಿ, ಮಲೆ ಮಹದೇಶ್ವರಸ್ವಾಮಿ ಅಭಿವೃದ್ಧಿ ಪ್ರಾಧಿಕಾರ ಆದೇಶ ಹೊರಡಿಸಿದೆ.



ಎ.ಈ. ರಘು

ಈ ಸಂಬಂಧ ಪ್ರಾಧಿಕಾರದ ವತಿಯಿಂದ ಬೆಟ್ಟದ ಅಂತರ ಗಂಗೆಯ ಸ್ನಾನ ಘಟ್ಟದ ಸುತ್ತಮುತ್ತಲು ಗೂಡ್ಸ್ ವಾಹನದಲ್ಲಿ ಧ್ವನಿವರ್ಧಕವನ್ನು ಅಳವಡಿಸಿಕೊಂಡು ಭಕ್ತರಿಗೆ ಹಾಗೂ ಚಿಲ್ಲರೆ ಅಂಗಡಿಗಳ ವ್ಯಾಪಾರಿಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.

ಪವಿತ್ರ ಕ್ಷೇತ್ರಗಳ ನದಿಗಳು ಹಾಗೂ ಸ್ನಾನ ಘಟ್ಟಗಳಲ್ಲಿ ಪರಿಸರ ಹಾಗೂ ಜಲಚರಗಳ ಸಂರಕ್ಷಣೆಯ ದೃಷ್ಟಿಯಿಂದ ಶ್ಯಾಂಪೂ ಹಾಗೂ ಸೋಪು ಸೇರಿದಂತೆ ರಾಸಾಯನಿಕ ವಸ್ತುಗಳು, ಪ್ಲಾಸ್ಟಿಕ್ ವಸ್ತುಗಳನ್ನು ಬಳಸದಂತೆ ಇದೇ ಮಾ.10ರಂದು ರಾಜ್ಯ ಸರ್ಕಾರ ಆದೇಶ ಹೊರಡಿಸಿದ ಹಿನ್ನೆಲೆಯಲ್ಲಿ ಬೆಟ್ಟದಲ್ಲಿಯೂ ನಿಯಮ ಜಾರಿಗೊಳಿಸಿ, ಭಕ್ತರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಪ್ರಾಧಿಕಾರದ ಅಧಿಕಾರಿಗಳು ಮಾಹಿತಿ ನೀಡಿದರು.

ಈ ಸಂಬಂಧ ಪ್ರಾಧಿಕಾರದ ಕಾರ್ಯದರ್ಶಿ ಎ.ಈ. ರಘು ಮಾತನಾಡಿ, ಶ್ರೀಕ್ಷೇತ್ರ ಮಲೆ ಮಹದೇಶ್ವರಸ್ವಾಮಿ ಬೆಟ್ಟದ ಅಂತರಗಂಗೆಯ ಸ್ನಾನ ಘಟ್ಟದಲ್ಲಿ ಭಕ್ತಾದಿಗಳು ಸೋಪು, ಶ್ಯಾಂಪೂ ಬಳಸಬಾರದು. ಈ ಬಗ್ಗೆ ಭಕ್ತರಲ್ಲಿ ಜಾಗೃತಿ ಮೂಡಿಸಲು ಪ್ರಾಧಿಕಾರದ ಸಿಬ್ಬಂದಿಗಳಿಗೆ ಮಾರ್ಗದರ್ಶನ ನೀಡಲಾಗಿದೆ ಎಂದರು.

500 ಮೀ. ಸುತ್ತಮುತ್ತ ಮಾರಾಟಕ್ಕೂ ನಿರ್ಬಂಧ: ರಾಜ್ಯದ ಪುಣ್ಯ ಕ್ಷೇತ್ರಗಳ ನದಿಗಳು ಮತ್ತು ಕಲ್ಯಾಣಿ ಸುತ್ತಮುತ್ತ 500 ಮೀಟರ್ ವ್ಯಾಪ್ತಿಯಲ್ಲಿ ಸೋಪು ಮತ್ತು ಶ್ಯಾಂಪೂ ಮಾರಾಟವನ್ನು ರಾಜ್ಯ ಸರ್ಕಾರ ನಿಷೇಧಿಸಿರುವ ನಿಯಮದಂತೆ ಮಲೆ ಮಹದೇಶ್ವರಸ್ವಾಮಿ ಬೆಟ್ಟದಲ್ಲಿಯೂ ಜಾಗೃತಿ ಮೂಡಿಸಲಾಗುತ್ತಿದ್ದು, ಅಂತರ ಗಂಗೆಯ ಸ್ನಾನ ಘಟ್ಟದ ಸುತ್ತಮುತ್ತಲು 500 ಮೀಟರ್ ವ್ಯಾಪ್ತಿಯಲ್ಲಿರುವ ಅಂಗಡಿ, ಮುಂಗಟ್ಟುಗಳಲ್ಲಿ ಸೋಪು, ಶ್ಯಾಂಪೂ ಮಾರಾಟವನ್ನು ನಿರ್ಬಂಧಿಸಲಾಗಿದೆ.

ನೀರಿನ ಮಾಲಿನ್ಯ ತಡೆಗೆ ನಿರ್ಧಾರ: ನದಿಯಲ್ಲಿ ಸ್ನಾನ ಮಾಡುವ ಭಕ್ತರು ಬಳಸುವ ಶ್ಯಾಂಪೂ ಪ್ಯಾಕೆಟ್‌ಗಳು ಮತ್ತು ಸ್ನಾನ ಸೋಪುಗಳು, ರಾಸಾಯನಿಕ ವಸ್ತುಗಳು ನೀರನ್ನು ಮಾಲಿನ್ಯಗೊಳಿಸುತ್ತಿದ್ದು, ಇದು ಜನರ ಮತ್ತು ಜಲಚರ ಪ್ರಾಣಿಗಳ ಆರೋಗ್ಯಕ್ಕೆ ತೀವ್ರ ಹಾನಿಯನ್ನು ಉಂಟು ಮಾಡುತ್ತಿದೆ. ಅಲ್ಲದೆ, ಯಾತ್ರಾ ಸ್ಥಳಗಳಲ್ಲಿ ಬಟ್ಟೆ ತ್ಯಜಿಸುವ ಪ್ರವೃತ್ತಿ ತಡೆಗಟ್ಟಲು ಕಟ್ಟುನಿಟ್ಟಿನ ನಿಯಮ ಜಾರಿಗೊಳಿಸಲಾಗಿದೆ.

ಈ ಹಿನ್ನೆಲೆ ರಾಜ್ಯದ ಮಲೆ ಮಹದೇಶ್ವರ ಬೆಟ್ಟದಲ್ಲಿಯೂ ಸೋಪು, ಶ್ಯಾಂಪು ಮಾರಾಟ ಮಾಡುವ ಹಾಗಿಲ್ಲ. ಭಕ್ತರು ನದಿಯಲ್ಲಿ ಯಾವುದೇ ವಸ್ತುಗಳನ್ನು ಬಿಸಾಡುವಂತಿಲ್ಲ, ಭಕ್ತರ ಆರೋಗ್ಯದ ಸುರಕ್ಷತೆ ದೃಷ್ಟಿಯಿಂದ ನಿಯಮ ಪಾಲನೆ ಮಾಡಬೇಕು ಎಂದು ಧ್ವನಿವರ್ಧಕದ ಮೂಲಕ ಭಕ್ತಾದಿಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.

ನೀನು ಚೆನ್ನಾಗಿಲ್ಲ. ತಲೆಯಲ್ಲಿ ಕೂದಲಿಲ್ಲ ಎಂದು ಹಂಗಿಸುತ್ತಿದ್ದ ಪತ್ನಿ

ಕಿರುಕುಳ ತಾಳಲಾರದೆ ಪತಿ ನೇಣಿಗೆ ಶರಣು

ಚಾಮರಾಜನಗರ: ನೀನು ಚೆನ್ನಾಗಿಲ್ಲ. ತಲೆಯಲ್ಲಿ ಕೂದಲು ಉದುರಿ ಹೋಗಿದೆ ಎಂದು ಹಂಗಿಸುತ್ತಿದ್ದುದಲ್ಲದೇ, ಮಾನಸಿಕ ಕಿರುಕುಳ ನೀಡುತ್ತಿದ್ದರಿಂದ ಮನನೊಂದ ಪತಿ ಡೆತ್‌ನೋಟ್ ಬರೆದಿಟ್ಟು ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಉಡಿಗಾಲ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಪರಶಿವ(32) ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿ. ಟಿಪ್ಪರ್ ಡ್ರೈವರ್ ಆಗಿ ಕೆಲಸ ಮಾಡುತ್ತಿದ್ದ ಪರಶಿವ ಎರಡು ವರ್ಷಗಳ ಹಿಂದೆ ತಾಲೂಕಿನ ಕಿಳಲೀಪುರದ ಮಮತಾಳನ್ನು ಮದುವೆಯಾಗಿದ್ದ. ಮದುವೆಯಾದ ಒಂದೇ ವರ್ಷದಲ್ಲೇ ತಲೆಗೂದಲು ಉದುರಿ ಹೋಯಿತು ಎನ್ನಲಾಗಿದೆ. ಇದರಿಂದ ಗಂಡ–ಹೆಂಡತಿಗೆ ಹೊಂದಾಣಿಕೆ ಇರಲಿಲ್ಲ. ಹೆಂಡತಿ ಮಮತಾ ಪರಶಿವನನ್ನು ನಿನ್ನ ತಲೆಯಲ್ಲಿ ಕೂದಲಿಲ್ಲ, ಬಾಂಡ್ಲಿ ಎಂದು ಹಂಗಿಸುತ್ತಿದ್ದಳು. ಇದಲ್ಲದೇ ತಿಂಗಳ ಹಿಂದೆ ಪತಿ ತನಗೆ ಕಿರುಕುಳ ನೀಡುತ್ತಿದ್ದಾನೆ ಎಂದು ದೂರು ನೀಡಿ, ಪೊಲೀಸರು ಬಂಧಿಸಿ ಜೈಲಿಗೂ ಹೋಗಿ ಬಂದಿದ್ದ.



ಪರಶಿವ

ಇದರಿಂದ ತೀವ್ರವಾಗಿ ಮನನೊಂದಿದ್ದ ಪರಶಿವ ಶನಿವಾರ ರಾತ್ರಿ ಮನೆಯಲ್ಲಿ ತಂದೆ ತಾಯಿ ಇಲ್ಲದ ಸಮಯದಲ್ಲಿ, ಮನೆಯ ಜಂತಿಗೆ ಬಟ್ಟೆ ಒಣಗಿ ಹಾಕುವ ವೈರ್ ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ತನ್ನ ಹೆಂಡತಿ ನೀಡುತ್ತಿದ್ದ ಕಿರುಕುಳದ ಬಗ್ಗೆ ಡೆತ್‌ನೋಟ್ ಬರೆದಿಟ್ಟಿದ್ದು, ಇದನ್ನು ತಜ್ಞರ ಪರೀಕ್ಷೆಗೆ ಕಳುಹಿಸಿಕೊಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಇಷ್ಟೇ ಅಲ್ಲದೆ ರೀಲ್ಸ್ ಗೀಳಿಗೆ ಬಿದ್ದಿದ್ದ ಈಕೆ ನಿನ್ನ ಜೊತೆ ರೀಲ್ಸ್ ಮಾಡಲು ನೀನು ಚೆನ್ನಾಗಿಲ್ಲ ಎಂದು ಹಂಗಿಸುತ್ತಿದ್ದಳಲ್ಲದೆ, ತಾಳಿಯನ್ನು ತೆಗೆದಿಟ್ಟು, ತಾನಿನ್ನು ಕನ್ಯೆ, ತನಗೆ ಮದುವೆಯಾಗಿಲ್ಲ ಎಂಬಂತೆ ರೀಲ್ಸ್‌ಗಳನ್ನೂ ಮಾಡುತ್ತಿದ್ದಳು ಎಂದು ಪೊಲೀಸರ ತನಿಖೆ ವೇಳೆ ಬಯಲಿಗೆ ಬಂದಿದೆ.

ಈ ಸಂಬಂಧ ಮೃತನ ತಂದೆ ನಂಜುಂಡಶೆಟ್ಟಿ ಅವರು, ಮಮತಾ ಮತ್ತು ಅವರ ತಂದೆ ತಾಯಿ ವಿರುದ್ಧ ದೂರು ನೀಡಿದ್ದು, ಗ್ರಾಮಾಂತರ ಠಾಣೆ ಪಿಎಸ್‌ಐ ಚಿಕ್ಕರಾಜಶೆಟ್ಟಿ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.


ಮರಕ್ಕೆ ಡಿಕ್ಕಿ ಹೊಡೆದು ಉರುಳಿದ ಕಾರು

ಮೈಸೂರಿನ ಇಬ್ಬರು ಯುವಕರು ದುರ್ಮರಣ

ಚಾಮರಾಜನಗರ: ಮದುವೆಗೆ ಭಾಗವಹಿಸಲು ಬಂದಿದ್ದವರ ಕಾರು ಮರಕ್ಕೆ ಡಿಕ್ಕಿ ಹೊಡೆದು ಮಗುಚಿ ಬಿದ್ದು ಮೈಸೂರಿನ ಇಬ್ಬರು ಯುವಕರು ಸಾವಿಗೀಡಾಗಿರುವ ಘಟನೆ ಚಾಮರಾಜನಗರ ತಾಲೂಕಿನ ಪುಣಜನೂರು ಬಳಿ ನಡೆದಿದೆ.

ಭಾನುವಾರ ಬೆಳಗಿನ ಜಾವ 1 ಗಂಟೆಯಲ್ಲಿ ಅಪಘಾತ ನಡೆದಿದೆ. ಮೈಸೂರಿನ ರಮಾಬಾಯಿ ನಗರದ ಜೀವನ್(24) ಹಾಗೂ ನಂದನ್(24) ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಜೀವನ್ ಮೆಡಿಕಲ್ ರೆಪ್ರೆಸೆಂಟೇಟಿವ್ ಆಗಿದ್ದು ನಂದನ್ ಡೆಲಿವರಿ ಬಾಯ್ ಆಗಿ ಕೆಲಸ ನಿರ್ವಹಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಮೈಸೂರಿನ ರಮಾಬಾಯಿ ನಗರದ ಶಶಾಂಕ್, ವಿದ್ಯಾರಣ್ಯಪುರಂನ ಧನುಷ್, ಗುಂಡ್ಲುಪೇಟೆ ತಾಲೂಕು ಬೆಳವಾಡಿಯ ಸುನೀಲ್ ಕುಮಾರ್ ಗಾಯಗೊಂಡು ನಗರದ ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.



ಮರಕ್ಕೆ ಡಿಕ್ಕಿ ಹೊಡೆದು ಜಖಂಗೊಂಡಿರುವ ಕಾರು.

ಇವರೆಲ್ಲ ಚಾಮರಾಜನಗರ ತಾಲೂಕಿನ ಬೆಜ್ಜಲಪಾಳ್ಯದಲ್ಲಿ ಇಂದು ನಡೆಯುತ್ತಿದ್ದ ಮದುವೆಗೆ ಮೈಸೂರಿನಿಂದ ಆಗಮಿಸಿದ್ದರು. ಶಶಾಂಕ್ ಕಾರು ಚಾಲನೆ ಮಾಡುತ್ತಿದ್ದ. ತಡ ರಾತ್ರಿ ಮದುವೆ ಮನೆಯಿಂದ ಪುಣಜನೂರಿಗೆ ತೆರಳಿ, ವಾಪಸ್ ಮದುವೆ ಮನೆಗೆ ಬರುವಾಗ ಅಪಘಾತ ನಡೆದಿದೆ.

ಪುಣಜನೂರು ಆರ್‌ಟಿಓ ಚೆಕ್ ಪೋಸ್ಟ್ ಸಮೀಪ ಮರಕ್ಕೆ ಕಾರು ಡಿಕ್ಕಿಯಾಗಿ ಬಳಿಕ ರಸ್ತೆ ಬದಿ ಮಗುಚಿ ಬಿದ್ದಿತು ಎಂದು ಪೂರ್ವ ಠಾಣೆ ಪೊಲೀಸರು ತಿಳಿಸಿದ್ದಾರೆ.

ಪೂರ್ವ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಎಸ್ಪಿ ಡಾ. ಬಿ.ಟಿ.ಕವಿತಾ, ಎಎಸ್ಪಿ ಶಶಿಧರ್, ಡಿಎಸ್ಪಿ ಲಕ್ಷ್ಮಯ್ಯ, ಇನ್ಸ್‌ಪೆಕ್ಟರ್ ನವೀನ್ ಸ್ಥಳಕ್ಕೆ ಭೇಟಿ ನೀಡಿದ್ದರು.

ಮಹಾಬೋಧಿ ಮಹಾವಿಹಾರ ಬೌದ್ಧರಿಗೆ ಬಿಟ್ಟುಕೊಡಿ



ಮಹಾವನ ಬುದ್ಧವಿಹಾರದ ವತಿಯಿಂದ ಪ್ರತಿಭಟನೆಯನ್ನು ನಡೆಸಲಾಯಿತು.

ಯಳಂದೂರು: ಬಿಹಾರದಲ್ಲಿರುವ ಬುದ್ಧ ಗಯಾದ ಮಹಾಬೋಧಿ, ಮಹಾ ವಿಹಾರದ ಆಡಳಿತವನ್ನು ಸಂಪೂರ್ಣವಾಗಿ ಬುದ್ಧರಿಗೆ ವಹಿಸಬೇಕೆಂದು ಚೆನ್ನಲಿಂಗನಹಳ್ಳಿ ಚೇತವನ ಬುದ್ಧವಿಹಾರದ ಮನೋರಖ್ಖಿತ ಬಂತೇಜಿ ಆಗ್ರಹಿಸಿದರು.

ಪಟ್ಟಣದಲ್ಲಿ ಹೊನ್ನೂರು ಗ್ರಾಮದ ಮಹಾವನ ಬುದ್ಧವಿಹಾರದ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ತಥಾಗತ ಗೌತಮ ಬುದ್ಧರಿಗೆ ಜ್ಞಾನೋದಯವಾದ ಸ್ಥಳ ಹಾಗೂ ಪ್ರಪಂಚದಲ್ಲೇ ಬುದ್ಧರಿಗೆ ಪವಿತ್ರವಾದ ಸ್ಥಳವಾದ ಬಿಹಾರದ ಬುದ್ಧ ಗಯಾದ ಮಹಾಬೋಧಿ, ಮಹಾ ವಿಹಾರದ ಬೋಧ್ಗಯ ಟೆಂಪಲ್ ಆಕ್ಟ್–1949 ನ್ನು ರದ್ದುಗೊಳಿಸಬೇಕು. ಮಹಾ ವಿಹಾರದ ಆಡಳಿತವನ್ನು ಸಂಪೂರ್ಣವಾಗಿ ಬುದ್ಧರಿಗೆ ವಹಿಸಬೇಕೆಂದು ಆಗ್ರಹಿಸಿ ನೂರಾರು ಬೌದ್ಧ ಬಿಕ್ಕುಗಳು ಕಳೆದ ಫೆಬ್ರವರಿ 12 ರಿಂದಲೂ ಅನಿರ್ದಿಷ್ಟಾವಧಿ ಅಮರಣಾಂತ ಉಪವಾಸ ಸತ್ಯಾಗ್ರಹವನ್ನು ಶಾಂತಿಯುತವಾಗಿ ನಡೆಸಲಾಗುತ್ತಿದೆ ಎಂದರು.

ಈ ಹೋರಾಟವನ್ನು ವಿಫಲಗೊಳಿಸಲು ಕೆಲವು ಪುರೋಹಿತಶಾಹಿಗಳು ನಿರಂತರ ಯತ್ನಗಳನ್ನು ನಡೆಸುತ್ತಲೇ ಇವೆ. ಅಲ್ಲದೆ ಇದರ ಮುಂಭಾಗ ನಕಲಿ ಬುದ್ಧ ಬಿಕ್ಕುಗಳನ್ನು ಸೃಷ್ಟಿಸಿ ಅವರಿಗೆ ಭೋಜನವನ್ನು ನೀಡಿ ನಮ್ಮ ಹೋರಾಟಕ್ಕೆ ಅವಮಾನ ಮಾಡಿದ್ದಾರೆ. ಅಲ್ಲದ ಮಹಾಬೋಧಿಯ ಪಾವಿತ್ರ್ಯಯತೆಯನ್ನು ಹಾಳು ಮಾಡಿದ್ದಾರೆ. ಆದರೂ ಕೂಡ ಬುದ್ಧ ಪರಂಪರೆಯಿಂದ ಬಂದಿರುವ ಬಿಕ್ಕುಗಳು ಶಾಂತಿಯುತವಾಗಿ ತಮ್ಮ ಸತ್ಯಾಗ್ರಹವನ್ನು ಮುಂದುವರೆಸಿದ್ದರು. ಆದರೆ ಬಿಹಾರದ ಸರ್ಕಾರದ ಕುತಂತ್ರ ಬುದ್ಧಿಯಿಂದ ಫೆ. 27 ರಂದು ಮಧ್ಯರಾತ್ರಿ ಸಮಯದಲ್ಲಿ ಸತ್ಯಾಗ್ರಹ ನಿರತ ಬಂತೇಜಿಗಳು ಮಲಗಿರುವ ಸ್ಥಳದಲ್ಲಿ ಅನಾರೋಗ್ಯದ ಸುಳ್ಳು ಬೆಪವೊಡ್ಡಿ ಅವರನ್ನು ಬಲವಂತವಾಗಿ ಆಂಬುಲೆನ್ಸ್‌ನಲ್ಲಿ ಎತ್ತಿಕೊಂಡು ಹೋಗಲಾಗಿದೆ. ಸತ್ಯಾಗ್ರಹಕ್ಕೆ ಅನುಮತಿ ಪಡೆದಿಲ್ಲ ಎಂಬ ವೆಪವೊಡ್ಡಿ ಪೊಲೀಸ್ ವ್ಯಾನಿಗೆ ಬಲವಂತವಾಗಿ ಎತ್ತಿ ಹಾಕಿ ಹಿಂಸೆ ನೀಡಿ ದೌರ್ಜನ್ಯ ಎಸಗಲಾಗಿದೆ. ಇದರೊಂದಿಗೆ ಮಹಿಳೇ ಬಿಕ್ಕುಣಿಯರೊಂದಿಗೆ ಅನುಚಿತವಾಗಿ ವರ್ತಿಸಲಾಗಿದೆ. ಅನಾರೋಗ್ಯದಿಂದ ಬಳಲುತ್ತಿದ್ದ ಪ್ರತಿಭಟನಾ ನಿರತ ಬಂತೇಜಿಗಳನ್ನು ಕನಿಷ್ಠ ಆಸ್ಪತ್ರೆಗೂ ದಾಖಲಿಸಿಲ್ಲ.

ಹೊನ್ನೂರು ಮಹಾವನ ಬುದ್ಧವಿಹಾರದ ಬುದ್ಧರತ್ನ ಬಂತೇಜಿ ನೇತೃತ್ವದಲ್ಲಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ತಹಶೀಲ್ದಾರ್ ಕಚೇರಿಗೆ ತಲುಪಿ ಗ್ರೇಡ್–02 ತಹಶೀಲ್ದಾರ್ ಶಿವರಾಜು ಅವರಿಗೆ ಮನವಿ ಪತ್ರವನ್ನು ಸಲ್ಲಿಸಲಾಯಿತು. ಮುಖಂಡರಾದ ಚೇತವನದ ಸುಗತಪಾಲ ಬಂತೇಜಿ, ಸಿ. ರಾಜಣ್ಣ, ಕಂದಹಳ್ಳಿ ನಾರಾಯಣ, ಸಂಗಸೇನ, ಮಹೇಶ, ಸಿ.ಎಂ.ಕೃಷ್ಣಮೂರ್ತಿ, ಶಾಂತರಾಜು ಸೇರಿದಂತೆ ಅನೇಕರು ಇದ್ದರು.

ಇಂದು ವಿದ್ಯುತ್ ಜನಸಂಪರ್ಕ ಸಭೆ

ಚಾಮರಾಜನಗರ: ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ವತಿಯಿಂದ ಗುಂಡ್ಲುಪೇಟೆ ಮತ್ತು ಬೇಗೂರು ಉಪವಿಭಾಗಗಳ ವ್ಯಾಪ್ತಿಯಲ್ಲಿ ಮಾ.17 ರಂದು ವಿದ್ಯುತ್ ಜನಸಂಪರ್ಕ ಸಭೆಯನ್ನು ಏರ್ಪಡಿಸಲಾಗಿದೆ.

ಮಾ.17ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 12 ಗಂಟೆಯವರೆಗೆ ಬೇಗೂರು ಉಪವಿಭಾಗ ಹಾಗೂ ಮಧ್ಯಾಹ್ನ 1 ರಿಂದ 2 ಗಂಟೆಯವರೆಗೆ ಗುಂಡ್ಲುಪೇಟೆ ಉಪವಿಭಾಗ ವ್ಯಾಪ್ತಿಯಲ್ಲಿ ಜನಸಂಪರ್ಕ ಸಭೆ ನಡೆಯಲಿದೆ.

ಗಾಯಾಳುಗಳಿಗೆ ಹಣ್ಣು–ಹಂಪಲು ವಿತರಣೆ

ಚಾಮರಾಜನಗರ: ನಿಶ್ಚಿತಾರ್ಥಕ್ಕೆ ತೆರಳಿ ಗ್ರಾಮಕ್ಕೆ ವಾಪಸ್ ಆಗುತ್ತಿದ್ದಾಗ ಹನೂರು ತಾಲೂಕಿನ ಬಂಡಳ್ಳಿ ಹೊರ ವಲಯದ ತೆಳ್ಳನೂರು ರಸ್ತೆಯಲ್ಲಿ ಸಂಭವಿಸಿದ ಬಸ್ ಅಪಘಾತದಲ್ಲಿ ಗಾಯಗೊಂಡು ನಗರದ ಹೊರವಲಯದ ಯಡಬೆಟ್ಟದಲ್ಲಿರುವ ಸಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳನ್ನು ವಿಧಾನ ಪರಿಷತ್ ಸದಸ್ಯ ಡಾ. ತಿಮ್ಮಯ್ಯ ಭೇಟಿ ಮಾಡಿ ಹಣ್ಣು– ಹಂಪಲು ವಿತರಿಸಿ ಸಾಂತ್ವಾನ ಹೇಳಿದರು.

ಹನೂರು ತಾಲೂಕಿನ ಶಾಗ್ಯ ಗ್ರಾಮದ ಆದಿಜಾಂಬವ ಸಮುದಾಯದವರು ಕನಕಪುರ ಸಮೀಪದ ಹನಿಯೂರು ಗ್ರಾಮಕ್ಕೆ ನಿಶ್ಚಿತಾರ್ಥಕ್ಕೆ ತೆರಳಿ ವಾಪಸ್ ಗ್ರಾಮಕ್ಕೆ ಆಗಮಿಸುತ್ತಿದ್ದಾಗ ಖಾಸಗಿ ಬಸ್ ಪಲ್ಟಿಯಾಗಿ 70ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು. ಚಾಮರಾಜನಗರ ಸಿಮ್ಸ್ ಹಾಗೂ ಕೊಳ್ಳೇಗಾಲ ಉಪವಿಭಾಗ ಆಸ್ಪತ್ರೆ ದಾಖಲು ಮಾಡಲಾಗಿತ್ತು. ಈ ಹಿನ್ನೆಲೆ ಅವರು ಚಾಮರಾಜನಗರ ಸಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಪ್ರತಿಯೊಬ್ಬರ ಆರೋಗ್ಯ ವಿಚಾರಿಸಿದರು.

ಈ ಸಂದರ್ಭದಲ್ಲಿ ಸಿಮ್ಸ್‌ನ ಡೀನ್ ಮಂಜುನಾಥ್, ನಿವಾಸಿ ವೈದ್ಯಾಧಿಕಾರಿ ಡಾ.ಮಹೇಶ್, ಡಾ.ಅಭಿಷೇಕ, ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ಎಂ. ಶಿವಮೂರ್ತಿ, ಲಿಂಗರಾಜು ಯಡಹೊರೆ, ಹಂಗಳ ರಾಜೇಶ್, ನಾಗಮಲ್ಲು, ಲಿಂಗರಾಜು, ಶಾಗ್ಯ ಲೋಕೇಶ್, ಸೌರಭ, ಇತರರಿದ್ದರು.

ಮಾಂಬಳ್ಳಿ ಪೊಲೀಸರ ಕಾರ್ಯಾಚರಣೆ : ಒಣ ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪಿ ಸೆರೆ

ಕೊಳ್ಳೇಗಾಲ: ಅಕ್ರಮವಾಗಿ ಒಣ ಗಾಂಜಾ ಮಾರಾಟ ಮಾಡಲು ಯತ್ನಿಸುತ್ತಿದ್ದ ವ್ಯಕ್ತಿಯನ್ನು ಅಗರ–ಮಾಂಬಳ್ಳಿ ಪೊಲೀಸರು ಬಂಧಿಸಿದ್ದಾರೆ.

ಕೊಳ್ಳೇಗಾಲದ ನೂರ್ ಮೊಹಲ್ಲಾ ಫೈಜಾನ್ ಪಾಷ ಬಂಧಿತ ಆರೋಪಿ. ಈತನಿಂದ ಸುಮಾರು 108 ಗ್ರಾಂ ಒಣ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿದೆ.

ಆರೋಪಿ ತಾಲೂಕಿನ ಕುಣಗಳ್ಳಿ ಗ್ರಾಮದ ಕೆರೆಯ ರಸ್ತೆಯ ಬಳಿ ಒಣಗಾಂಜಾ ಮಾರಾಟ ಮಾಡುತ್ತಿರುವುದರ ಖಚಿತ ಮಾಹಿತಿ ಮೇರೆಗೆ ಪೊಲೀಸರು ಆರೋಪಿಯನ್ನು ಒಣಗಾಂಜಾ ಸಮೇತ ಬಂಧಿಸಿದ್ದಾರೆ.

ಈ ಸಂಬಂಧ ಅಗರ–ಮಾಂಬಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು, ಬಂಧಿತನನ್ನು ನ್ಯಾಯಾಧೀಶರ ಮುಂದೆ ಹಾಜರು ಪಡಿಸಿದ್ದಾರೆ.

ದಾಳಿಯಲ್ಲಿ ಅಗರ – ಮಾಂಬಳ್ಳಿ ಪೊಲೀಸ್ ಠಾಣೆಯ ಪಿಎಸ್‌ಐ ಕರಿಬಸಪ್ಪ, ಹೆಚ್.ಸಿ ಸಕ್ರುನಾಯ್ಕ, ಸಿದ್ದರಾಜು, ಕಾನ್ಸ್‌ಟೇಬಲ್ ಶಿವಕುಮಾರ್, ಬಸವರಾಜು, ಶಿವಕುಮಾರ್, ಚಾಲಕ ಮಲ್ಲೇಶ್ ಇದ್ದರು.

ಶ್ರೀ ಭ್ರಮರಾಂಬ ಶ್ರೀಮಲ್ಲಿಕಾರ್ಜುನಸ್ವಾಮಿ ದೇವಾಲಯ ಜೀರ್ಣೋದ್ಧಾರ ಕಾಮಗಾರಿ ಪರಿಶೀಲನೆ

ಡಿಸೆಂಬರ್‌ನೊಳಗೆ ಮೊದಲ ಹಂತದ ಕಾಮಗಾರಿ ಪೂರ್ಣ

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಭರವಸೆ

ತಿ.ನರಸೀಪುರ, ಮಾ.16– ಮುಂದಿನ ಡಿಸೆಂಬರ್ ತಿಂಗಳೊಳಗೆ ಮುಡುಕುತೊರೆ ಶ್ರೀಭ್ರಮರಾಂಬ ಶ್ರೀಮಲ್ಲಿಕಾರ್ಜುನಸ್ವಾಮಿ ದೇವಾಲಯದ ಮೊದಲ ಹಂತದ ಜೀರ್ಣೋದ್ಧಾರ ಕಾಮಗಾರಿ ಪೂರ್ಣಗೊಳಿಸಿ, ಭಕ್ತರ ಧಾರ್ಮಿಕ ಭಾವನೆಗಳಿಗೆ ಧಕ್ಕೆಯಾಗದಂತೆ ಉತ್ಸವಗಳಿಗೆ ಅನುವು ಮಾಡಿಕೊಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಭರವಸೆ ನೀಡಿದರು.

ಶನಿವಾರ ಸಂಜೆ ತಾಲೂಕಿನ ಮುಡುಕತೊರೆ ಶ್ರೀಭ್ರಮರಾಂಬ ಶ್ರೀಮಲ್ಲಿಕಾರ್ಜುನಸ್ವಾಮಿ ದೇವಾಲಯ ಜೀರ್ಣೋದ್ಧಾರ ಕಾಮಗಾರಿ ಪರಿಶೀಲಿಸಿ, ಸಮೂಹ ದೇವಾಲಯಗಳ ವ್ಯವಸ್ಥಾಪನಾ ಹಾಗೂ ಜೀರ್ಣೋದ್ಧಾರ ಸಮಿತಿ ಪದಾಧಿಕಾರಿಗಳಿಂದ ಮಾಹಿತಿ ಪಡೆದು ಮಾತನಾಡಿದ ಅವರು, ಮೊದಲ ಹಂತದಲ್ಲಿ ಗರ್ಭಗುಡಿ ಮತ್ತು ನೆಲಮಟ್ಟದ ಕಾಮಗಾರಿಯನ್ನು ಡಿಸೆಂಬರ್ ತಿಂಗಳೊಳಗೆ ಪೂರ್ಣಗೊಳಿಸಿ ದಿನನಿತ್ಯದ ಧಾರ್ಮಿಕ ಉತ್ಸವ ಮತ್ತು ಜಾತ್ರೋತ್ಸವ ಆಚರಣೆಗೆ ಅವಕಾಶ ಮಾಡಿಕೊಡಲಾಗುವುದು ಎಂದರು.

ಜೀರ್ಣೋದ್ಧಾರಕ್ಕಾಗಿ ದೇವಾಲಯ ನೆಲಸಮ ಮಾಡಿರುವುದರಿಂದ ಲಕ್ಷಾಂತರ ಭಕ್ತರ ಧಾರ್ಮಿಕ ನಂಬಿಕೆಗೆ ಧಕ್ಕೆಯಾಗಿದೆ. ಇನ್ನು ವಿಳಂಬ ಮಾಡುವುದು ಸರಿಯಲ್ಲ. ಹೀಗಾಗಿ ಪ್ರವಾಸೋದ್ಯಮ ಇಲಾಖೆ ಅನುದಾನ ಹಾಗೂ ಭಕ್ತರ ದೇಣಿಗೆ ಹಣದಿಂದ ದೇವಾಲಯ ಜೀರ್ಣೋದ್ಧಾರ ಕಾಮಗಾರಿ ಪ್ರಗತಿಯಲ್ಲಿದ್ದು, ಶೀಘ್ರ ರಾಜ್ಯ ಸರ್ಕಾರದಿಂದ ಯೋಜನಾ ವೆಚ್ಚದ ಅನುದಾನ ಮಂಜೂರು ಮಾಡಲಾಗುವುದು. ಹಾಗೆಯೇ ತಾಲೂಕಿನಲ್ಲಿ ಆಗಬೇಕಿರುವ ಅಭಿವೃದ್ಧಿ ಮತ್ತು ಶಾಶ್ವತ ಯೋಜನೆಗಳ ಅನುಷ್ಠಾನವನ್ನು ನಮ್ಮ ಸರ್ಕಾರದ ಅವಧಿಯಲ್ಲಿ ಮಾಡುತ್ತೇವೆ ಎಂದರು.

ತಲಕಾಡು ಸಮೂಹ ದೇವಾಲಯಗಳ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಎಂ.ನಾಗರಾಜು ಮಾತನಾಡಿ, ದೇವಾಲಯದ ಚಂದ್ರ ಶಾಲೆಗೆ ತುರ್ತಾಗಿ 20 ಕೋಟಿ ರೂ.ಗಳನ್ನು ಸರ್ಕಾರದಿಂದ ಮಂಜೂರು ಮಾಡಬೇಕು. ಗೋಪುರ, ಪ್ರವೇಶ ದ್ವಾರ ಹಾಗೂ 2 ಬದಿ ನಂದಿಗಳನ್ನು ಪ್ರತಿಷ್ಠಾಪಿಸಲು 20 ಕೋಟಿ ಬೇಕು. ಶ್ರೀಭ್ರಮರಾಂಬ ಮತ್ತು ಶ್ರೀಮಲ್ಲಿಕಾರ್ಜುನಸ್ವಾಮಿ ಅವರ ಗರ್ಭಗುಡಿಗಳ ಯೋಜನಾ ವೆಚ್ಚವೇ ಬದಲಾಗಿದೆ. ರಾಜ್ಯ ಸರ್ಕಾರ ಮಂಜೂರು ಮಾಡಿರುವ 3.40 ಕೋಟಿ ಹಾಗೂ ಭಕ್ತರ ದೇಣಿಗೆ 2.90 ಕೋಟಿ ರೂ. ಯಾವುದಕ್ಕೂ ಸಾಲುವುದಿಲ್ಲ. ಕಳೆದ 4 ವರ್ಷಗಳಿಂದ ಧಾರ್ಮಿಕ ಉತ್ಸವಗಳಿಗೆ ಹಿನ್ನೆಡೆಯಾಗಿದೆ. ಹಾಗಾಗಿ ದೇವಾಲಯ ಜೀರ್ಣೋದ್ಧಾರಕ್ಕೆ ಅನುದಾನ ಮಂಜೂರು ಆಗಬೇಕೆಂದು ಸಚಿವರ ಗಮನಕ್ಕೆ ತಂದರು.

ಜೀರ್ಣೋದ್ಧಾರ ಸಮಿತಿ ಪದಾಧಿಕಾರಿಗಳಾದ ಹಂಚ್ಯಾ ಮಹೇಶ್ ಹಾಗೂ ಪಿ.ಎಂ.ಪರಶಿವಮೂರ್ತಿ ಮಾತನಾಡಿ, ಸರ್ಕಾರ ಅನುದಾನ ಮಂಜೂರು ಮಾಡಲು ವಿಳಂಬ ಮಾಡುತ್ತಿರುವುದರಿಂದ ಭಕ್ತರಿಂದ ದೇಣಿಗೆ ಸಂಗ್ರಹಿಸಿ, ಕಾಮಗಾರಿ ನಿಲ್ಲದಂತೆ ನೋಡಿಕೊಳ್ಳುತ್ತಿದ್ದೇವೆ. ಹೀಗಾಗಿ ಜೀರ್ಣೋದ್ಧಾರ ಸಮಿತಿಗೆ ಕಾಮಗಾರಿ ಹೊಣೆ ನೀಡಬೇಕು ಎಂದು ಒತ್ತಾಯಿಸಿದರು.

ಹಿರಿಯ ಅರ್ಚಕ ವಿಶ್ವನಾಥ್ ಮಾತನಾಡಿ, ದೇವಾಲಯದಲ್ಲಿ ಧ್ವಜಸ್ತಂಬ ನಿರ್ಮಾಣ ಮಾಡಿದರಷ್ಟೇ ಜಾತ್ರೋತ್ಸವ ವೇಳೆ ಧಾರ್ಮಿಕ ಉತ್ಸವ ಕಾರ್ಯಗಳಿಗೆ ಚಾಲನೆ ನೀಡಲು ಸಾಧ್ಯ. ಇಲ್ಲವಾದರೆ ದೇವಾಲಯದಲ್ಲಿನ ಗರ್ಭಗುಡಿಯಲ್ಲಿ ಪೂಜೆಗಳಿಗಷ್ಟೇ ಜಾತ್ರೋತ್ಸವ ಸೀಮಿತಗೊಳ್ಳಲಿದೆ ಎಂದು ಸಚಿವರ ಗಮನಕ್ಕೆ ತಂದರು.

ಬಸವ ಭವನಕ್ಕೆ ನಿವೇಶನ: ದೇವಾಲಯ ಜೀರ್ಣೋದ್ಧಾರ ಕಾಮಗಾರಿ ವೀಕ್ಷಿಸಿ, ನಿರ್ಗಮಿಸುವ ವೇಳೆ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವರನ್ನು ಭೇಟಿಯಾದ ಜಾಗತಿಕ ಲಿಂಗಾಯಿತ ಮಹಾಸಭಾ ಅಧ್ಯಕ್ಷ ತೊಟ್ಟವಾಡಿ ರವಿ ಹಾಗೂ ಮುಖಂಡ ಚಂದ್ರಧರ ಅವರು ಬಸವ ಭವನಕ್ಕೆ ನಿವೇಶನ ಮತ್ತು ಅನುದಾನ ಮಂಜೂರು ಮಾಡುವಂತೆ ಮನವಿ ಮಾಡಿದರು. ಕೂಡಲೇ ಪ್ರತಿಕ್ರಿಯಿಸಿದ ಸಚಿವರು ಜೊತೆಯಲ್ಲಿದ್ದ ಜಿಲ್ಲಾಧಿಕಾರಿಗಳಿಗೆ ತಾಲೂಕು ಮಟ್ಟದಲ್ಲಿ ಬಸವ ಭವನ ನಿರ್ಮಾಣಕ್ಕೆ ಸೂಕ್ತ ನಿವೇಶನ ಕಲ್ಪಿಸಿ ಕೊಡುವಂತೆ ಸೂಚಿಸಿದರು.

ಮುರಾರ್ಜಿ ಶಾಲೆಯಲ್ಲಿ ಪಿಯು ತರಗತಿ ಆರಂಭ: ಬಳಿಕ ಪಕ್ಕದ ಬೆಟ್ಟದಲ್ಲಿರುವ ಮೊರಾರ್ಜಿ ವಸತಿ ಶಾಲೆಗೆ ಭೇಟಿ ನೀಡಿ ಒಂದು ಸುತ್ತು ಹಾಕಿ ಸಚಿವರು ಪರಿಶೀಲಿಸಿದರು. ಉತ್ತಮ ಪ್ರದೇಶದಲ್ಲಿ ಸುಸಜ್ಜಿತವಾಗಿರುವ ಶಾಲೆಯಲ್ಲಿ ಪಿಯು ತರಗತಿಗಳನ್ನು ಆರಂಭಿಸುವಂತೆ ಪೋಷಕರು ಹಾಗೂ ಸ್ಥಳೀಯರು ಮನವಿ ಮಾಡಿದ ಹಿನ್ನೆಲೆಯಲ್ಲಿ ಮುಂದಿನ ಶೈಕ್ಷಣಿಕ ವರ್ಷದಿಂದಲೇ ಶಾಲೆಯಲ್ಲಿ ತರಗತಿಗಳನ್ನು ಮೇಲ್ದರ್ಜೆಗೇರಿಸಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಈ ವೇಳೆ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ್ ರೆಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ, ಜಿಪಂ ಸಿಇಓ ಯುಕೇಶ್ ಕುಮಾರ್, ಸಚಿವರ ಕರ್ತವ್ಯ ಅಧಿಕಾರಿ ಎನ್.ರವಿಕುಮಾರ್, ಕಾರ್ಯಪಾಲಕ ಇಂಜಿನಿಯರ್‌ಗಳಾದ ರಾಜು, ಹಿರಣ್ಣಯ್ಯ, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳಾದ ಎಸ್.ಸತೀಶ್ ಚಂದ್ರನ್, ಪಿ.ಎನ್.ಚರಿತ, ಕೆ.ಶಿವರಾಜು, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಂಗೇಗೌಡ, ಸಹಾಯಕ ನಿರ್ದೇಶಕ ರಾಮೇಗೌಡ, ತಹಸೀಲ್ದಾರ್ ಸುರೇಶ್ ಆಚಾರ್, ಸಮೂಹ ದೇವಾಲಯಗಳ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಎಂ.ವೆಂಕಟೇಶ್ ಪ್ರಸಾದ್, ಸಹಾಯಕ ಎಂ.ಎಸ್.ವಿಕಾಸ್, ತಾಪಂ ಮಾಜಿ ಸದಸ್ಯರಾದ ಗಣೇಶ್, ನರಸಿಂಹ ಮಾದನಾಯಕ, ಮಲ್ಲಾಜಮ್ಮ, ಶೆಟ್ಟಹಳ್ಳಿ ಗ್ರಾಪಂ ಅಧ್ಯಕ್ಷೆ ಪುಟ್ಟಮ್ಮ, ಉಪಾಧ್ಯಕ್ಷ ದಕ್ಷಿಣಮೂರ್ತಿ, ಅಭಿವೃದ್ಧಿ ಅಧಿಕಾರಿ ಕೆ.ಪಿ.ಕೆಂಪೇಗೌಡ, ತಲಕಾಡು ಪಿಡಿಓ ಟಿ.ಎಂ.ಮಾದೇಶ್, ಮಲ್ಲಣ್ಣಿ, ಮುಖ್ಯ ಅಧಿಕಾರಿಗಳಾದ ಬಿ.ಕೆ.ವಸಂತ ಕುಮಾರಿ, ಆರ್.ಹೇಮಂತ್ ರಾಜ್, ಹಿಂದುಳಿದ ವರ್ಗಗಳ ಇಲಾಖೆ ವಿಸ್ತರಣಾಧಿಕಾರಿ ಎಂ. ರಾಜಣ್ಣ, ವ್ಯವಸ್ಥಾಪನಾ ಸಮಿತಿ ಸದಸ್ಯರಾದ ಕೋಕಿಲ, ಆರ್. ಮಾದೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಡಿ.ಬಸವರಾಜು, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎ.ಎನ್.ಸ್ವಾಮಿ, ಮುಖಂಡರಾದ ವಿಜಯಕುಮಾರ್, ಮಹೇಂದ್ರ ಇತರರಿದ್ದರು.




ಮುಡುಕುತೊರೆಯಲ್ಲಿ ಶ್ರೀಭ್ರಮರಾಂಬ ಶ್ರೀಮಲ್ಲಿಕಾರ್ಜುನಸ್ವಾಮಿ ದೇವಾಲಯ ಜೀರ್ಣೋದ್ಧಾರ ಕಾಮಗಾರಿಯನ್ನು ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪರಿಶೀಲಿಸಿದರು.

ಅಧಿವೇಶನ ಬಳಿಕ ಕೆಡಿಪಿ ಸಭೆ

ಮುಡುಕುತೊರೆಯಲ್ಲಿ ದೇವಾಲಯ ಜೀರ್ಣೋದ್ಧಾರ ಕಾಮಗಾರಿ ಪರಿಶೀಲಿಸಿ ಪಕ್ಕದಲ್ಲಿದ್ದ ರೆಸಾರ್ಟ್‌ನಲ್ಲಿ ಭೋಜನ ಮುಗಿಸಿದ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಔಪಚಾರಿಕವಾಗಿ ಅಧಿಕಾರಿಗಳ ಸಭೆ ನಡೆಸಿ, ಅಧಿವೇಶನ ಮುಗಿದ ಬಳಿಕ ತಿ.ನರಸೀಪುರ, ನಂಜನಗೂಡು ಹಾಗೂ ಹೆಚ್.ಡಿ.ಕೋಟೆ ತಾಲೂಕು ಕೇಂದ್ರದಲ್ಲಿ ಆಯಾಯ ತಹಸೀಲ್ದಾರರೊಂದಿಗೆ ಸಮಾಲೋಚನೆ ನಡೆಸಿ ಕೆಡಿಪಿ ಸಭೆಗಳನ್ನು ಆಯೋಜಿಸುವಂತೆ ಜಿಪಂ ಸಿಇಓ ಯುಕೇಶ್ ಕುಮಾರ್ ಅವರಿಗೆ ಸೂಚಿಸಿದರು. ತಲಕಾಡಿನ ಹಳೇ ಬೀದಿಯಲ್ಲಿ ರಸ್ತೆ ಅಗಲೀಕರಣಕ್ಕೆ ನಿವೇಶನ ಬಿಟ್ಟುಕೊಡದೆ ಪರಿಹಾರಕ್ಕೆ ನೋಂದಣಿ ಮಾಡಿಕೊಳ್ಳಲು ಹಿಂದೇಟು ಹಾಕುತ್ತಿದ್ದ ನಿವಾಸಿಗಳಿಗೆ ಮೊದಲು ಪರಿಹಾರ ಪಡೆದುಕೊಳ್ಳಿ. ಬಳಿಕ ನಿವೇಶನ ಕಲ್ಪಿಸುತ್ತೇವೆ ಎಂದು ಸಚಿವರು ಮೌಖಿಕ ಭರವಸೆ ಕೊಟ್ಟು ಮನವೊಲಿಸಿದರು. ತಾಲೂಕು ಮಟ್ಟದ ಅಧಿಕಾರಿಗಳು ಸಾರ್ವಜನಿಕರಿಂದ ದೂರುಗಳು ಬರದಂತೆ ಕಾರ್ಯ ನಿರ್ವಹಿಸುವಂತೆ ಸೂಚಿಸಿದರು.

ನೂತನ ನಿರ್ದೇಶಕರಿಗೆ ಸನ್ಮಾನ



ತಿ.ನರಸೀಪುರ ತಾಲೂಕಿನ ಸೋಸಲೆ ಕೃಷಿ ಪತ್ತಿನ ಸಹಕಾರ ಸಂಘದ ನೂತನ ನಿರ್ದೇಶಕರಾದ ಎಸ್.ನಂಜುಂಡಯ್ಯ, ಬಿ.ಎಸ್.ಬಸಪ್ಪ ಹಾಗೂ ಗೌಡ್ರು ರಾಜಶೇಖರ್ ಅವರನ್ನು ಸನ್ಮಾನಿಸಿದರು. ವೈದ್ಯಾಧಿಕಾರಿ ಡಾ.ರೇವಣ್ಣ, ಡಾ.ಮಲ್ಲಿಕಾರ್ಜುನಸ್ವಾಮಿ, ಪ್ರಗತಿಪರ ಚಿಂತಕ ಸೋಸಲೆ ಶಶಿಕಾಂತ್, ಶಿವಕುಮಾರ್ ಬಡ್ಡು ಇತರರಿದ್ದರು.

ಅಪರಿಚಿತ ಶವ ಪತ್ತೆ

ತಿ.ನರಸೀಪುರ, ಮಾ.16– ಪಟ್ಟಣದ ಲಿಂಕ್ ರಸ್ತೆಯಲ್ಲಿರುವ ಚೌಡಯ್ಯ ಸ್ಮಾರಕಕ್ಕೆ ಬಿಟ್ಟಿರುವ ಖಾಲಿ ನಿವೇಶನದಲ್ಲಿ ಅಪರಿಚಿತ ಶವ ಪತ್ತೆಯಾಗಿದೆ. ಈತನ ವಾರಸುದಾರರಿದ್ದಲ್ಲಿ ತಿ.ನರಸೀಪುರ ಪೊಲೀಸ್ ಠಾಣೆ ದೂ. 08227261227 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ದೇವಾಲಯ ಜೀರ್ಣೋದ್ಧಾರ ಕಾಮಗಾರಿ ಪರಿಶೀಲನೆ

ಕೆ.ಆರ್.ನಗರ, ಮಾ.16– ಪಟ್ಟಣದ ಹೊರವಲಯದ ಮೀನಾಕ್ಷಿ ಸಮೇತ ಅರ್ಕೇಶ್ವರಸ್ವಾಮಿ ದೇವಾಲಯದ ಜೀರ್ಣೋದ್ಧಾರ ಕಾಮಗಾರಿ ಮುಂದಿನ 4 ತಿಂಗಳೊಳಗೆ ಪೂರ್ಣಗೊಳಿಸಲಾಗುವುದು ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ದೇವಾಲಯದ ಜೀರ್ಣೋದ್ಧಾರ ಕಾಮಗಾರಿ ಪರಿಶೀಲಿಸಿ ಮಾತನಾಡಿದ ಅವರು, 89 ಲಕ್ಷಕ್ಕೆ ಟೆಂಡರ್ ಕರೆಯಲಾಗಿದ್ದು ನಿಗದಿತ ಅವಧಿಯೊಳಗೆ ಕೆಲಸ ಮುಗಿಸುವಂತೆ ಸೂಚಿಸಲಾಗಿದೆ ಎಂದರು.

ಕಳೆದ ವರ್ಷ ಕಾಮಗಾರಿ ಆರಂಭಿಸಲಾಗಿದ್ದು, ಇದರಿಂದ ಈ ಬಾರಿ ರಥ ಸಪ್ತಮಿಯಂದು ದೇವರ ರಥೋತ್ಸವ ನಡೆಸಲು ಸಾಧ್ಯವಾಗಿಲ್ಲ. ಮುಂದಿನ ವರ್ಷ ಅತ್ಯಂತ ವೈಭವಯುತವಾಗಿ ಜಾತ್ರೆ ಮತ್ತು ರಥೋತ್ಸವ ನಡೆಸಲಾಗುತ್ತದೆ ಎಂದು ಮಾಹಿತಿ ನೀಡಿದರು.

ಜೊತೆಗೆ ದೇವಾಲಯಕ್ಕೆ ಬರುವ ಭಕ್ತರು ಮತ್ತು ಪ್ರವಾಸಿಗರಿಗೆ ಮೂಲ ಸೌಕರ್ಯ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳಲಿದ್ದು, ಮುಂದಿನ ದಿನಗಳಲ್ಲಿ ಈ ಪವಿತ್ರ ಸ್ಥಳವನ್ನು ಉತ್ತಮ ಧಾರ್ಮಿಕ ತಾಣವನ್ನಾಗಿ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆಂದು ತಿಳಿಸಿದರು.

ಈ ಸಂದರ್ಭ ಅಧಿಕಾರಿಗಳು, ಗುತ್ತಿಗೆದಾರರು, ದೇವಾಲಯದ ಸಿಬ್ಬಂದಿಗಳ ಸಭೆ ನಡೆಸಿದ ಶಾಸಕರು ಗುಣಮಟ್ಟದ ಕಾಮಗಾರಿ ನಡೆಸುವ ಜೊತೆಗೆ ಯಾವುದೇ ಸಮಸ್ಯೆ ಮತ್ತು ಅಗತ್ಯತೆಗಳು ಇದ್ದಲ್ಲಿ ನನ್ನ ಗಮನಕ್ಕೆ ತರಬೇಕು ಎಂದರು.

ಕೆಪಿಸಿಸಿ ಕಾರ್ಯಕಾರಿಣಿ ಸದಸ್ಯ ದೊಡ್ಡಸ್ವಾಮೇಗೌಡ, ಪುರಸಭೆ ಅಧ್ಯಕ್ಷ ಶಿವುನಾಯಕ್, ಸ್ಥಾಯಿ ಸಮಿತಿ ಅಧ್ಯಕ್ಷ ಸಿ.ಶಂಕರ್, ಸದಸ್ಯರಾದ ಪ್ರಕಾಶ್, ನಟರಾಜು, ಶಂಕರ್, ಮಾಜಿ ಅಧ್ಯಕ್ಷ ನರಸಿಂಹರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಎಸ್.ಮಹದೇವ್, ಉದಯಶಂಕರ್, ವಕ್ತಾರ ಸೈಯದ್ ಜಾಬೀರ್, ಪಿಎಲ್‌ಡಿ ಬ್ಯಾಂಕ್ ಉಪಾಧ್ಯಕ್ಷ ಹೆಚ್.ಕೆ.ಪ್ರದೀಪ್, ತಾಲೂಕು ಕುರುಬರ ಸಂಘದ ನಿರ್ದೇಶಕ ಕೆ.ಹೆಚ್.ಬುಡಿಗೌಡ, ಹೊಸ ಕೋಟೆ ಗ್ರಾಪಂ ಮಾಜಿ ಅಧ್ಯಕ್ಷ ಸಿ.ಕೆ.ಬಸವರಾಜು, ಪ್ರಾಚ್ಯವಸ್ತು ಇಲಾಖೆ ಎಇಇ ಅಂಬರೀಶ್, ಗುತ್ತಿಗೆದಾರ ರಾಮಚಂದ್ರ, ಕಾಂಗ್ರೆಸ್ ಮುಖಂಡರಾದ ಸಂಪತ್, ಕೇಬಲ್ ಮಹದೇವ್, ಸುರೇಶ್, ಮಹದೇವ್, ಸುಕೇಂದ್ರ, ಬಿ.ಎಂ.ಮಲ್ಲಿಕಾರ್ಜುನ, ನವೀದ್, ದೇವಾಲಯದ ಪಾರುಪತ್ತೇದಾರ್ ಆರತಿ ಸೇರಿದಂತೆ ಇನ್ನಿತರರಿದ್ದರು.



ಮೀನಾಕ್ಷಿ ಸಮೇತ ಅರ್ಕೇಶ್ವರಸ್ವಾಮಿ ದೇವಾಲಯ ಕಾಮಗಾರಿಯನ್ನು ಶಾಸಕ ಡಿ.ರವಿಶಂಕರ್ ಪರಿಶೀಲಿಸಿದರು.

ನಾಳೆ ಶ್ರೀಲಕ್ಷ್ಮಿಕಾಂತಸ್ವಾಮಿ ಜಾತ್ರಾ ಮಹೋತ್ಸವ

ನಂಜನಗೂಡು, ಮಾ.16– ತಾಲೂಕಿನ ಕಳಲೆ ಗ್ರಾಮದ ಶ್ರೀಲಕ್ಷ್ಮಿಕಾಂತ ಸ್ವಾಮಿ ಜಾತ್ರಾ ಮಹೋತ್ಸವ ಮಾ.18ರಂದು ಬೆಳಗ್ಗೆ 6 ರಿಂದ 6.15 ರೊಳಗೆ ಸಲ್ಲುವ ಕುಂಭ ಲಗ್ನದಲ್ಲಿ ನಡೆಯಲಿದೆ ಎಂದು ದೇವಾಲಯದ ಪಾರುಪತ್ತೇದಾರ್ ಜಯರಾಂ ತಿಳಿಸಿದ್ದಾರೆ.

ಅಂದು ರಾತ್ರಿ 10 ಗಂಟೆಗೆ ಸ್ವಾಮಿಯ ತೇರಡಿ ಉತ್ಸವ ಜರುಗಲಿದೆ. ಮಾ.19 ರಂದು ಸಂಜೆ ಡೋಲೋತ್ಸವ, ಶತಮಾನೋತ್ಸವ, ಅಶ್ವರೋಹಣ ಮಹೋತ್ಸವ ನಡೆಯಲಿದೆ. ಮಾ.20ರಂದು ಸಂಜೆ 7 ಗಂಟೆಗೆ ಗ್ರಾಮದ ಚೆಲುವಾಂಬ ಕೆರೆಯಲ್ಲಿ ವಿದ್ಯುತ್ ದೀಪಗಳಿಂದ ತೇಲುವ ಅಲಂಕೃತ ದೇವಾಲಯದಲ್ಲಿ ಶ್ರೀಯವರ ತೆಪ್ಪೋತ್ಸವ ನಡೆಯಲಿದೆ. ಅಲ್ಲದೇ ಮಾ.18 ರಂದು ಸಂಜೆ 6 ಗಂಟೆಗೆ ಭರತ ನಾಟ್ಯ ಸೇರಿದಂತೆ ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

ವಿದ್ಯಾರ್ಥಿಗಳಿಗೆ ಉಚಿತ ಸಿಇಟಿ ತರಬೇತಿ

ನಂಜನಗೂಡು, ಮಾ.16– ತಾಲೂಕಿನ ತಾಂಡವಪುರದ ಮಹಾರಾಜ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಮಾ.20 ರಿಂದ 2 ವಾರಗಳ ಕಾಲ ವಿದ್ಯಾರ್ಥಿಗಳಿಗೆ ಉಚಿತ ಸಿಇಟಿ ತರಬೇತಿ ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ನೋಂದಾಯಿಸಿಕೊಳ್ಳುವಂತೆ ಎಂಐಟಿ ಕಾಲೇಜು ಆಡಳಿತ ಮಂಡಳಿ ಜಂಟಿ ನಿರ್ದೇಶಕ ಡಾ.ಹೆಚ್.ಕೆ.ಚೇತನ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಾಮರಾಜನಗರ, ಮಂಡ್ಯ ಹಾಗೂ ಮೈಸೂರು ಜಿಲ್ಲೆಯ ಗ್ರಾಮೀಣ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕಳೆದ 8 ವರ್ಷಗಳಿಂದ ಮಹಾರಾಜ ತಾಂತ್ರಿಕ ಮಹಾ ವಿದ್ಯಾಲಯದಿಂದ ಉಚಿತ ಸಿಇಟಿ ಕೋಚಿಂಗ್ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಸಾವಿರಾರು ವಿದ್ಯಾರ್ಥಿಗಳು ಶಿಬಿರದ ನೆರವು ಪಡೆದುಕೊಂಡಿದ್ದಾರೆ. ಈ ವರ್ಷವೂ ಉಚಿತ ಕೋಚಿಂಗ್ ಶಿಬಿರ ನಡೆಯಲಿದೆ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಮಧ್ಯಾಹ್ನದ ಊಟದ ವ್ಯವಸ್ಥೆ ಹಾಗೂ ಮೈಸೂರು, ಚಾಮರಾಜನಗರ, ನಂಜನಗೂಡು, ಗುಂಡ್ಲುಪೇಟೆ, ಸರಗೂರು, ಹೆಚ್.ಡಿ.ಕೋಟೆ, ತಿ.ನರಸೀಪುರ, ಹುಣಸೂರು, ಕೆ.ಆರ್.ನಗರ, ಮಳವಳ್ಳಿ, ಶ್ರೀರಂಗಪಟ್ಟಣ, ಕೆ.ಆರ್.ಪೇಟೆ ಹಾಗೂ ಮಂಡ್ಯದಿಂದ ಉಚಿತ ಸಾರಿಗೆ ಸೌಕರ್ಯ ಕಲ್ಪಿಸಲಾಗಿದೆ. ಆಸಕ್ತರು ಈ ಅವಕಾಶ ಬಳಸಿಕೊಂಡು ಪರೀಕ್ಷೆ ಎದುರಿಸಿ ಸರಕಾರಿ ಕೋಟಾದಲ್ಲಿ ಇಂಜಿನಿಯರಿಂಗ್ ಕಾಲೇಜುಗಳಿಗೆ ಪ್ರವೇಶ ಪಡೆಯಬಹುದಾಗಿದ್ದು, ಆ ಮೂಲಕ ತಮ್ಮ ಇಂಜಿನಿಯರಿಂಗ್ ಕನಸು ನನಸಾಗಿಸಿ ಕೊಂಡು ದೇಶದ ಪ್ರಗತಿಗೆ ನೆರವಾಗಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಮೊ.8310854887, 9980832371 ಸಂಪರ್ಕಿಬಹುದು.

ಸುದ್ದಿಗೋಷ್ಠಿಯಲ್ಲಿ ಮಹಾರಾಜ ತಾಂತ್ರಿಕ ಮಹಾ ವಿದ್ಯಾಲಯದ ಪ್ರೊ.ಮೊಹಮ್ಮದ್ ಸಲಾಮತ್, ಸಿಇಟಿ ಶಿಬಿರದ ಸಂಯೋಜಕ ಪ್ರೊ.ಪ್ರದೀಪ್, ಪ್ರೊ.ಗಣೇಶ್ ಉಪಸ್ಥಿತರಿದ್ದರು.



ಸುದ್ದಿಗೋಷ್ಠಿಯಲ್ಲಿ ಎಂಐಟಿ ಕಾಲೇಜು ಆಡಳಿತ ಮಂಡಳಿ ಜಂಟಿ ನಿರ್ದೇಶಕ ಡಾ.ಹೆಚ್.ಕೆ.ಚೇತನ್ ಮಾತನಾಡಿದರು.

ಗೃಹಿಣಿ ಆತ್ಮಹತ್ಯೆ

ನಂಜನಗೂಡು, ಮಾ.16– ಹೊಟ್ಟೆ ನೋವು ತಾಳಲಾರದೆ ಗೃಹಿಣಿಯೊಬ್ಬರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಅಳಗಂಚಿಪುರ ಗ್ರಾಮದಲ್ಲಿ ನಡೆದಿದೆ.

ತಾಲೂಕಿನ ವೀರೇಗೌಡನಹುಂಡಿಯ ಸಿದ್ದರಾಜು ಅವರ ಪತ್ನಿ ವಿನೋದ (21) ಆತ್ಮಹತ್ಯೆ ಮಾಡಿಕೊಂಡವರು. ಕಳೆದ 2 ವರ್ಷಗಳ ಹಿಂದೆ ತಾಲೂಕಿನ ಅಳಗಂಚಿಪುರ ಗ್ರಾಮದ ಲೇ.ಸುರೇಶ್ ಅವರ ಪುತ್ರಿ ವಿನೋದಳನ್ನು ತಾಲೂಕಿನ ವೀರೇಗೌಡನ ಹುಂಡಿ ಗ್ರಾಮದ ಸಿದ್ದರಾಜು ಅವರಿಗೆ ಮದುವೆ ಮಾಡಿಕೊಡಲಾಗಿತ್ತು. ದಂಪತಿಗೆ ಒಂದು ವರ್ಷದ ಗಂಡು ಮಗುವಿದೆ. ದಂಪತಿಗಳು ತಾಲೂಕಿನ ಅಳಗಂಚಿಪುರ ಗ್ರಾಮದ ವಿನೋದಳ ತವರು ಮನೆಯಲ್ಲಿ ಕಳೆದ 20 ದಿನಗಳಿಂದ ವಾಸವಿದ್ದರು ಎನ್ನಲಾಗಿದೆ. ವಿನೋದಳಿಗೆ ಆಗಾಗ ಹೊಟ್ಟೆ ನೋವು ಬರುತ್ತಿತ್ತು. ಆದರೆ ಇದನ್ನು ತಾಳಲಾರದೆ ಜೀವನದಲ್ಲಿ ಜಿಗುಪ್ಸೆಗೊಂಡು ಶನಿವಾರ ಮಧ್ಯಾಹ್ನ ಮನೆಯಲ್ಲಿ ಯಾರು ಇಲ್ಲದ ವೇಳೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ತಹಸೀಲ್ದಾರ್ ಶಿವಕುಮಾರ್ ಕಾಸ್ನೂರ್ ನೇತೃತ್ವದಲ್ಲಿ ಶವವನ್ನು ಮರಣೋತ್ತರ ಪರೀಕ್ಷೆಗೆ ಒಳಪಡಿಸಿ ವಾರಸುದಾರರಿಗೆ ಹಸ್ತಾಂತರಿಸಿದರು. ಈ ಸಂಬಂಧ ತಾಲೂಕಿನ ಬಿಳಿಗೆರೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜಲಜೀವನ್ ಮಿಷನ್ ಅನುಷ್ಠಾನ ಯಶಸ್ವಿ

ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರಾಜೇಂದ್ರ



ಗ್ರಾಪಂ ಅಧ್ಯಕ್ಷರು, ಪಿಡಿಓಗಳಿಗೆ ಕಾರ್ಯಾಗಾರ ನಡೆಯಿತು.

ಹುಣಸೂರು, ಮಾ.16– ಪ್ರತಿಯೊಬ್ಬರಿಗೂ ಶುದ್ಧ ಕುಡಿಯುವ ನೀರನ್ನು ತಲುಪಲು ಗ್ರಾಪಂ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಕಾರ್ಯ ನಿರ್ವಹಿಸುವುದರಿಂದ ಜಲಜೀವನ್ ಮಿಷನ್ ಅನುಷ್ಠಾನಗೊಳಿಸಲು ಯಶಸ್ವಿಯಾಗಿದೆ ಎಂದು ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರಾಜೇಂದ್ರ ತಿಳಿಸಿದರು.

ನಗರದ ತಾಪಂ ಸಭಾಂಗಣದಲ್ಲಿ ಜಿಪಂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಹಾಗೂ ಭಗೀರಥ ಸಂಸ್ಥೆ ಸಹಯೋಗದಲ್ಲಿ ತಾಲೂಕಿನ 41 ಗ್ರಾಪಂ ಅಧ್ಯಕ್ಷರು ಮತ್ತು ಪಿಡಿಓಗಳಿಗೆ ಹಮ್ಮಿಕೊಂಡಿದ್ದ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಪ್ರತಿಯೊಂದು ಗ್ರಾಮಕ್ಕೂ ಶುದ್ಧ ಕುಡಿಯುವ ನೀರು ಯೋಜನೆ ಜಾರಿಗೊಳಿಸಿ ಈಗಾಗಲೇ ಅನುಷ್ಠಾನಗೊಂಡಿದೆ. ಗ್ರಾಮಗಳಲ್ಲಿ ಸಾರ್ವಜನಿಕರ ಮನೆ–ಮನೆಗೆ ನಳ ಸಂಪರ್ಕ ಕಾರ್ಯ ಮುಕ್ತಾಯವಾಗಿದ್ದು ನೀರು ಸರಬರಾಜಿನ ಕಾರ್ಯ ಭರದಿಂದ ಸಾಗಿದೆ. ಈ ಹಂತದಲ್ಲಿ ಪಿಡಿಓ ಮತ್ತು ಸ್ಥಳೀಯ ಜನಪ್ರತಿನಿಧಿಗಳ ಸಹಕಾರದಿಂದ ನೀರು ಸಮರ್ಪಕವಾಗಿ ನಿರ್ವಹಣೆ ಮಾಡಿದಲ್ಲಿ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ಪರಿಪೂರ್ಣವಾಗಿ ಸರಬರಾಜು ಮಾಡಲು ಸಹಕಾರವಾಗಲಿದೆ ಎಂದರು.

ತಾಪಂ ಇಓ ಹೊಂಗಯ್ಯ ಮಾತನಾಡಿ, ಜಲಜೀವನ್ ಮಿಷನ್ ಯೋಜನೆಯಡಿ ಪ್ರತಿ ಮನೆಗೂ ನಳ ಸಂಪರ್ಕ ನೀಡಿ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವುದು ಸರ್ಕಾರದ ಉದ್ದೇಶವಾಗಿದ್ದು, ಈ ನಿಟ್ಟಿನಲ್ಲಿ ಎಲ್ಲಾ ಕಡೆಯಲ್ಲೂ ಹೊಸದಾಗಿ ನಳ ಸಂಪರ್ಕ ನೀಡಿ ನೀರು ಸಂಗ್ರಹ ಟ್ಯಾಂಕ್ ನಿರ್ಮಿಸಿ ಪಂಚಾಯಿತಿ ಹೊರೆ ತಗ್ಗಿಸಿದೆ. ಪಂಚಾಯಿತಿಯಿಂದಲೇ ನೀರು ನಿರ್ವಹಣೆ ಮಾಡುವ ಜವಾಬ್ದಾರಿ ಹೊತ್ತು ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದ ರೀತಿ ಕಾರ್ಯನಿರ್ವಹಿಸಿ ಎಂದರು.

ಕಾರ್ಯಾಗಾರದಲ್ಲಿ ರಾಜ್ಯ ಸಂಪನ್ಮೂಲ ವ್ಯಕ್ತಿ ಪ್ರಶಸ್ತಿ ಪುರಸ್ಕೃತ ಜೋಸೆಫ್ ಜಿ.ಎಂ. ರೆಬೆಲೊ ಅವರು ಜಲಜೀವನ್ ಮಿಷನ್ ಯೋಜನೆ ಹಾಗೂ ಸ್ವಚ್ಛ ಭಾರತ ಮಿಷನ್ ಯೋಜನೆ ಕುರಿತು ಸಮಗ್ರ ಮಾಹಿತಿ ನೀಡಿ ದರು. ಕಾರ್ಯಕ್ರಮದಲ್ಲಿ ಜಲ ಜೀವನ್ ಮಿಷನ್ ಜಿಲ್ಲಾ ಯೋಜನಾ ವ್ಯವಸ್ಥಾಪಕ ಚೇತನ್ ಕುಮಾರ್, ಜಿಲ್ಲಾ ತಂಡದ ನಾಯಕ ಮಹೇಶ್, ಸಿಬ್ಬಂದಿಗಳಾದ ನಿರಂಜನ್ ಮತ್ತು ನಾಗೇಶ್, ಆನಂದ್, ಸುಚಿತ್ರ ಹಾಜರಿದ್ದರು.

ಸಗಣಿ, ಗೋಮೂತ್ರ ಮೌಲ್ಯವರ್ಧನೆ ಕುರಿತು ವಿಚಾರ ಮಂಡನೆ



ಕಾರ್ಯಕ್ರಮದಲ್ಲಿ ಡಾ.ಬಿ.ಎನ್.ಜ್ಞಾನೇಶ್ ಮಾತನಾಡಿದರು.

ಸರಗೂರು, ಮಾ.16– ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನ ಸಾಮಾಜಿಕ ಆರ್ಥಿಕ ಸಬಲೀಕರಣ ವಿಭಾಗ, ಕೃಷಿ ವಿಜ್ಞಾನ ಕೇಂದ್ರ ಸುತ್ತೂರು, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆ, ಮೈಮುಲ್ ಮೈಸೂರು ಹಾಗೂ ಸ್ಥಳೀಯ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಪಟ್ಟಣದಲ್ಲಿ ನಡೆಯುತ್ತಿರುವ ಹೈನುಗಾರಿಕೆ ಮತ್ತು ಕೃಷಿ ಮೇಳದ 2ನೇ ದಿನ ಹಿರಿಯ ವಿಜ್ಞಾನಿ ಹಾಗೂ ಕೃಷಿ ವಿಜ್ಞಾನ ಕೇಂದ್ರ (ಸುತ್ತೂರು) ಮುಖ್ಯಸ್ಥ ಡಾ.ಬಿ.ಎನ್.ಜ್ಞಾನೇಶ್ ಸಗಣಿ ಮತ್ತು ಗೋಮೂತ್ರ ಮೌಲ್ಯವರ್ಧನೆ ಕುರಿತು ವಿಚಾರ ಮಂಡಿಸಿದರು.

ಅಲ್ಲದೇ ಮಣ್ಣಿನ ಫಲವತ್ತತೆ, ಅವಲಂಬನೆ ಬೆಳೆಗಳ ಬೆಳವಣಿಗೆಗೆ ಬೇಕಾದ ಕ್ರಮಗಳು, ಬೀಜಾಮೃತ, ಜೀವಾಮೃತ, ಘನ ಜೀವಾಮೃತ ಮತ್ತು ಸಿರಿಧಾನ್ಯಗಳ ಮಹತ್ವದ ಕುರಿತು ರೈತರಿಗೆ ವಿವರವಾಗಿ ಮಾಹಿತಿ ನೀಡಿದರು.

ನಿಖರ ಕೃಷಿ ಸಂರಕ್ಷಣೆ ಮತ್ತು ನೀರಾವರಿ ಸಂಬಂಧಿತ ಮಾಹಿತಿ ಹಂಚಿಕೊಳ್ಳುವ ಮೂಲಕ ಪರಿಸರ ಸ್ನೇಹಿ ಕೃಷಿ ಮಹತ್ವವನ್ನು ವಿಸ್ತೃತವಾಗಿ ವಿವರಿಸಿದರು. ರೈತರು ಟ್ರೈಕೊಡರ್ಮಾ ಮತ್ತು ಸ್ಯೂಡೋಮೋನಾಸ್ ಜೈವಿಕ ಗೊಬ್ಬರಗಳ ಪ್ರಯೋಜನ ಪಡೆದುಕೊಳ್ಳಲು SVYM ಸಹಾಯ ಮಾಡಬಹುದಾಗಿದೆ ಎಂಬ ಮಾಹಿತಿ ನೀಡಿದರು.

ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರ (ಸುತ್ತೂರು) ಸಂಸ್ಥೆಯ ಗೃಹ ವಿಜ್ಞಾನ ವಿಭಾಗದ ತಜ್ಞ ಡಾ.ದೀಪಕ್ ಮಾತನಾಡಿ, ಹಾಲು ಉತ್ಪಾದನೆ, ಸಂಸ್ಕರಣೆ ಹಾಗೂ ಮಾರುಕಟ್ಟೆ ಪ್ರಕ್ರಿಯೆಗಳ ಕುರಿತು ಮಾಹಿತಿ ನೀಡಿದರು. ಅಲ್ಲದೇ ಹಾಲಿನ ದರ ಪ್ರಕ್ರಿಯಾತ್ಮಕ ವೃದ್ಧಿ ಮತ್ತು ಮಾರುಕಟ್ಟೆ ತಂತ್ರಗಳ ಕುರಿತು ಸಂಪೂರ್ಣ ಮಾಹಿತಿ ನೀಡಿ ಹಾಲಿನ ಉತ್ಪನ್ನಗಳಾದ ಮೊಸರು, ಬೆಣ್ಣೆ, ತುಪ್ಪ ಮುಂತಾದವುಗಳನ್ನು ಮೌಲ್ಯವರ್ಧನೆ ಮಾಡುವ ಮೂಲಕ ರೈತರು ಹೆಚ್ಚಿನ ಆದಾಯ ಗಳಿಸಬಹುದು ಎಂದು ತಿಳಿಸಿದರು. NABARD ಸಂಸ್ಥೆಯ `Dairy Entrepreneurship Development' ಯೋಜನೆಯಡಿ ಸಬ್ಸಿಡಿ ಲಭ್ಯವಿದ್ದು, ಇದರ ಸದುಪಯೋಗ ಪಡೆದುಕೊಂಡು ಹೈನುಗಾರಿಕೆ ವಿಸ್ತರಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ಸಾಮಾಜಿಕ ಮತ್ತು ಆರ್ಥಿಕ ಸಬಲೀಕರಣ ಕಾರ್ಯಕ್ರಮದ ನಿರ್ದೇಶಕ ಡೆನ್ನಿಸ್ ಡಿ.ಚೌಹಾನ್, ಹಿರಿಯ ವ್ಯವಸ್ಥಾಪಕ ನಾಯಕ್ ವ್ಯವಸ್ಥಾಪಕರಾದ ರವಿಕುಮಾರ್ ಪಿ.ಜಿ, ಚಿನ್ನಮಹದೇವ, ಸಿಬ್ಬಂದಿಗಳಾದ ನಾಗೇಶ್, ಅಕ್ಷಯ್, ಅಜಿಮ್, ಭಾಗ್ಯ, ಶಿವಕುಮಾರ್, ನಾಗೇಂದ್ರ, ಶಂಕರ್ ಹಾಗೂ ರೈತರು ಮತ್ತು ಮಹಿಳೆಯರು ಇದ್ದರು.

ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ



ಮಹಿಳಾ ವಿಚಾರ ಗೋಷ್ಠಿಯನ್ನು ಗಣ್ಯರು ಉದ್ಘಾಟಿಸಿದರು.

ಕಂಪಲಾಪುರ, ಮಾ.16– ಹೆಣ್ಣು ಕೇವಲ ಮಕ್ಕಳನ್ನು ಹಡೆದರೆ ಸಾಲದು ಆ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಸಂಸ್ಕಾರವಂತರನ್ನಾಗಿ ಮಾಡಬೇಕು ಎಂದು ಮಡಿಕೇರಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪ ಪ್ರಾಂಶುಪಾಲರಾದ ಡಾ.ಎಸ್.ಜಿ.ಚೈತ್ರ ಅಭಿಪ್ರಾಯಪಟ್ಟರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್‌ನ ಜ್ಞಾನ ವಿಕಾಸ ಕೇಂದ್ರದ ಸಹಯೋಗದಲ್ಲಿ ನಡೆದ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಕಾರ್ಯಕ್ರಮದಲ್ಲಿ 'ಮಕ್ಕಳಿಗೆ ಶಿಕ್ಷಣ ನೀಡುವಲ್ಲಿ ಪೋಷಕರ ಪಾತ್ರ' ಎಂಬ ವಿಷಯದ ಕುರಿತು ಮಾತನಾಡಿದ ಅವರು, ಇತಿಹಾಸ ಗಮನಿಸುವುದಾದರೆ ಮಹಿಳೆಗೆ ಶಿಕ್ಷಣದ ಅಸ್ಮಿತೆ ಹೇಗಿದೆ ಎಂಬುದನ್ನು ಮೆಲುಕು ಹಾಕುತ್ತಾ 14, 15ನೇ ಶತಮಾನದಲ್ಲಿ ಮಹಿಳೆಯರಿಗೆ ಸ್ಥಾನಮಾನ ಈಗಿನ ರೀತಿ ಇರಲಿಲ್ಲ. ಆಕೆ 4 ಗೋಡೆಗೆ ಮಾತ್ರ ಸೀಮಿತವಾಗಿ ಮಕ್ಕಳನ್ನು ಹಡೆಯುವುದು. ಅಡುಗೆ ಮಾಡುವುದೇ ಆಗಿತ್ತು. ಸಮಾಜದಲ್ಲಿ ಮೊದಲು ಬಾಲ್ಯವಿವಾಹದಂತಹ ಅನಿಷ್ಟ ಪದ್ಧತಿ ದೂರವಾಗಬೇಕು. ಮಹಿಳೆಗೆ ಉತ್ತಮ ಶಿಕ್ಷಣ ದೊರಕಬೇಕೆಂಬ ಉದ್ದೇಶದಿಂದ ಜ್ಯೋತಿ ಬಾಪುಲೆ ಎಂಬ ಮಹಾನ್ ವ್ಯಕ್ತಿ ಹೆಣ್ಣು ಮಕ್ಕಳಿಗಾಗಿಯೇ ಶಾಲೆಯನ್ನು ತೆರೆದರು. ಆದ್ದರಿಂದ ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ ಎಂದರು.

ರಾಜ್ಯ ವೈಜ್ಞಾನಿಕ ಪರಿಷತ್ ಕೊಡಗು ಜಿಲ್ಲಾಧ್ಯಕ್ಷೆ ವನಿತಾ ಮೋಹನ್ 'ಆರೋಗ್ಯವಂತ ಕುಟುಂಬ ನಿರ್ವಹಣೆಯಲ್ಲಿ ಮಹಿಳೆಯರ ಪಾತ್ರ' ಎಂಬ ವಿಷಯದ ಬಗ್ಗೆ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ವೈಭವೀಕರಿಸಿದ ಜಾಹೀರಾತು ನೋಡಿಕೊಂಡು ಮಹಿಳೆಯರು ಆಹಾರ ಪದಾರ್ಥಗಳನ್ನು ತಯಾರು ಮಾಡುತ್ತಿರುವುದು ವಿಷಾದನೀಯ. ನಾಲಿಗೆ ರುಚಿ ಗೋಸ್ಕರ ದೇಹದ ಆರೋಗ್ಯವನ್ನು ನಾವೇ ಹಾಳು ಮಾಡಿಕೊಳ್ಳುತ್ತಿದ್ದೇವೆ. ರಾಸಾಯನಿಕಯುಕ್ತ ಪದಾರ್ಥಗಳನ್ನು ದೂರವಿಟ್ಟು ನಮ್ಮ ಸುತ್ತಲ ಪರಿಸರದಲ್ಲಿರುವ ಗಿಡಮೂಲಿಕೆಗಳನ್ನು ಸೇವಿಸಿ ಆರೋಗ್ಯವಂತರಾಗಿ ಬಾಳಿ. ಅಡುಗೆ ಮನೆಗೆ ಮಹಿಳೆಯೇ ಡಾಕ್ಟರ್ ಎಂದರು. ತಾಲೂಕು ಕಸಾಪ ಮಹಿಳಾ ಘಟಕದ ಅಧ್ಯಕ್ಷೆ ಆಶಾ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಕೊಡಗು ಜಿಲ್ಲಾ ನಿರ್ದೇಶಕಿ ಲೀಲಾವತಿ, ಪಿರಿಯಾಪಟ್ಟಣ ಪುರಸಭಾ ಸದಸ್ಯೆ ಮಂಜುಳಾ ಮಾತನಾಡಿದರು. ಇದೇ ವೇಳೆ ಬ್ಯುಟಿಷಿಯನ್, ಟೈಲರಿಂಗ್‌ನಲ್ಲಿ ತರಬೇತಿ ಪಡೆದವರಿಗೆ ಪ್ರಮಾಣಪತ್ರ ವಿತರಿಸಲಾಯಿತು.

ವೇದಿಕೆಯಲ್ಲಿ ತಾಲೂಕು ಯೋಜನಾಧಿಕಾರಿ ರವಿ, ಪತ್ರಕರ್ತ ಸದಾಶಿವ, ಮೇಲ್ವಿಚಾರಕಿ ರವಿಕಲಾ ಸೇರಿದಂತೆ ತಾಲೂಕು ಜ್ಞಾನವಿಕಾಸ ಕೇಂದ್ರದ ಸಮನ್ವಯಾಧಿಕಾರಿಗಳು, ಸೇವಾಪ್ರತಿನಿಧಿಗಳು, ಸದಸ್ಯರು ಹಾಜರಿದ್ದರು.

ಮೈಸೂರಲ್ಲಿ ಸುಗಮ ಸಂಗೀತಕ್ಕೂ ಪ್ರೋತ್ಸಾಹವಿದೆ

●ಕಸಾಪ ಮಾಜಿ ಅಧ್ಯಕ್ಷ, ಗಾಯಕ ಡಾ.ವೈ.ಡಿ.ರಾಜಣ್ಣ ಅಭಿಮತ ●ನಾಗರಾಜ್ ವಿ.ಬೈರಿ ಅವರಿಗೆ 'ಕಲಾ ಪೋಷಕ ರತ್ನ ಪ್ರಶಸ್ತಿ' ಪ್ರದಾನ

ಮೈಸೂರು, ಮಾ.16(ಎಸ್‌ಪಿಎನ್)– ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಶಾಸ್ತ್ರೀಯ ಸಂಗೀತ, ದಾಸ ಸಾಹಿತ್ಯ, ಜಾನಪದ ಗಾಯನ ಜೊತೆಗೆ ಸುಗಮ ಸಂಗೀತಕ್ಕೂ ಹೆಚ್ಚು ಆದ್ಯತೆ ನೀಡಲಾಗುತ್ತಿದೆ ಎಂದು ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ, ಗಾಯಕ ಡಾ.ವೈ.ಡಿ.ರಾಜಣ್ಣ ಅಭಿಪ್ರಾಯಪಟ್ಟರು.

ಇಲ್ಲಿನ ಜೆಎಲ್‌ಬಿ ರಸ್ತೆಯಲ್ಲಿನ ನಾದ ಬ್ರಹ್ಮ ಸಭಾಂಗಣದಲ್ಲಿ ಮೈಸೂರಿನ ಗಾನನಂದನ ಮತ್ತು ಸ್ಟಾರ್ ಸಿಂಗರ್ಸ್ ತಂಡದ ವತಿಯಿಂದ 'ಗಾನಯಾನ' ಶೀರ್ಷಿಕೆಯಡಿ ಏರ್ಪಡಿಸಿದ್ದ ಕನ್ನಡ, ಹಿಂದಿ, ತಮಿಳು ಹಾಗೂ ತೆಲುಗು ಚಲನಚಿತ್ರ ಗೀತೆಗಳ ರಾಗಸಂಗಮ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕರ್ನಾಟಕ ಸುಗಮ ಸಂಗೀತ ಪರಿಷತ್ತಿನ ರಾಜ್ಯದ ವಿವಿಧ ಜಿಲ್ಲಾ ಘಟಕಗಳ ಪೈಕಿ ಮೈಸೂರು ಘಟಕ ಅತ್ಯಂತ ಕ್ರಿಯಾಶೀಲವಾಗಿದೆ. ಬೆಂಗಳೂರು ಸೇರಿದಂತೆ ರಾಜ್ಯದೆಲ್ಲೆಡೆ ಮೈಸೂರಿಗೆ ಸಾಂಸ್ಕೃತಿಕ ಕಾರ್ಯಕ್ರಮವಾದ ಸಂಘಟನೆಯಲ್ಲಿ ವಿಶೇಷ ಸ್ಥಾನಮಾನವಿದೆ ಎಂದರು.



ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ನಾಗರಾಜ್ ವಿ.ಬೈರಿ, ಶಾಲಿನಿ ನಾಗರಾಜ ವಿ. ಬೈರಿ, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಯೋಗೇಶ್, ನಿರ್ದೇಶಕರಾದ ಗಿರೀಶ್, ಸೋಮಣ್ಣ, ಹರೀಶ್ ಕುಮಾರ್, ನಿರಂಜನ, ಯೋಗಾನರಸಿಂಹೇಗೌಡ ಅವರನ್ನು ಸನ್ಮಾನಿಸಲಾಯಿತು.

ಮುಖ್ಯ ಅತಿಥಿಯಾಗಿದ್ದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿ, ಬೈರಿ ಅವರು ಕಳೆದ ಒಂದು ವರ್ಷದಲ್ಲಿ 20ಕ್ಕೂ ಹೆಚ್ಚು ಸುಗಮ ಸಂಗೀತ ಕಾರ್ಯಕ್ರಮಗಳನ್ನು ನಡೆಸಿದ್ದಾರೆ. 300ಕ್ಕೂ ಹೆಚ್ಚು ಕಲಾವಿದರಿಗೆ ವೇದಿಕೆಯನ್ನು ಒದಗಿಸಿದ್ದಾರೆ. ಕರೋಕೆ ಬದಲು ನೈಜ ವಾದ್ಯ ಸಂಗೀತಗಾರರಿಗೆ ಅವಕಾಶ ನೀಡುತ್ತಾ, ಸಾಂಸ್ಕೃತಿಕ ನಗರಿಯಲ್ಲಿ ಸುಗಮ ಸಂಗೀತದ ಬೆಳವಣಿಗೆಗೆ ಪ್ರೋತ್ಸಾಹ ನೀಡುತ್ತಿದ್ದಾರೆ ಎಂದರು.

ಮೋಡಿ ಮಾಡಿದ ರಸಮಂಜರಿ: ಗಾನಯಾನ ರಸಸಂಜೆಯಲ್ಲಿ ಗಣೇಶನ ಮಹಿಮೆ, ಸ್ನೇಹಿತರೇ ನಿಮಗೆ ಸ್ವಾಗತ, ಮಡಿಕೇರಿ ಸಿಪಾಯಿ, ಐಸೇ ದಿವಾನ, ವಾದಾ ಕರ್ಲೇ ಸಾಜನ್, ತಾನನ ತುದನ ಕುಣಿಸಿದೆ ಯೌವನ, ಒಲಿದ ಜೀವ ಜೊತೆಯಲಿರಲು, ಯಾರೇ ನೀನು ರೋಜಾ ಹೂವೇ, ಪ್ರೀತಿ ನೀನಿಲ್ಲದೆ, ಪ್ರಿಯತಮೆ, ಒಲುವೆ ಸಿರಿಯಲಿ, ಏನು ಮಾಯಾವೋ, ಮೈನ್ ದುನಿಯಾ, ರಾಗ ಅನುರಾಗ, ಮಾತೊಂದ ಹೇಳುವೆ, ಆ ಮೋಡ ಬಾನಲ್ಲಿ, ಹೆಣ್ಣೆಂದರೇನು, ಈ ಬಿಂಕ ಬಿಡು ಬಿಡು, ಬಾಳ ಬಂಗಾರ ನೀನು, ತಾರೆಯು ಬಾನಿಗೆ, ನಿನ್ನಾಣೆ ನಾನು ಬೆಂಕಿಯಲಿ ಸೇರಿದಂತೆ ಇತರೆ ಹಾಡುಗಳನ್ನು ಗಾನ ನಂದನ ಮತ್ತು ಸ್ಟಾರ್ ಸಿಂಗರ್ಸ್ ತಂಡದ ಹಿರಿಯ ಗಾಯಕ ಎನ್. ಬೆಟ್ಟೇಗೌಡರ ನೇತೃತ್ವದಲ್ಲಿ ಗಾಯಕರಾದ ಎ.ಡಿ.ಶ್ರೀನಿವಾಸ್, ಇಂದ್ರಾಣಿ ಅನಂತ ರಾವ್, ಡಾ. ವೈ.ಡಿ. ರಾಜಣ್ಣ, ಅಬ್ದುಲ್ ಖಯ್ಯುಮ್, ಪೂರ್ಣಿಮಾ, ಶ್ರೀಲತಾ ಮನೋಹರ್, ವಾಣಿ, ಗೀತಾ ಲಕ್ಷ್ಮಿ ಕಿಣಿ, ಸುಜಾತಾ ಹಾಗೂ ಅಮೃತೇಶ್ ತಮ್ಮ ಗಾಯನದ ಮೂಲಕ ಎಲ್ಲರ ಮನರಂಜಿಸಿದರು.

ಈ ವೇಳೆ ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ನಾಗರಾಜ್ ವಿ.ಬೈರಿ ಅವರಿಗೆ ಕಲಾ ಪೋಷಕ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್‌ನ ಅಧ್ಯಕ್ಷ ಯೋಗೇಶ್, ನಿರ್ದೇಶಕರಾದ ಗಿರೀಶ್, ಸೋಮಣ್ಣ, ಹರೀಶ್ ಕುಮಾರ್, ನಿರಂಜನ, ಯೋಗಾನರಸಿಂಹೇಗೌಡ ಅವರನ್ನು ಸನ್ಮಾನಿಸಲಾಯಿತು. ಶಾಲಿನಿ ನಾಗರಾಜ ವಿ. ಬೈರಿ, ಎಸ್. ವೆಂಕಟೇಶ್, ಎನ್. ಬೆಟ್ಟೇಗೌಡ ಮೊದಲಾದವರು ಇದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಗಗನ ಕುಸುಮ(ಕ) + ರಾಬರ್ (ತ)	2+2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಭೀಮ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಬಡಾಸ್ ರವಿಕುಮಾರ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಸಂಕ್ರಾಂತಿಕು ವಸ್ತುನಾರು (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಅಪ್ಪು (ಕ)	4 ಪ್ರದರ್ಶನಗಳು
ರಾಜಕಮಲ್	
ಸ್ವೀಟ್ ಹಾರ್ಟ್(ತ)	4 ಪ್ರದರ್ಶನಗಳು
ಸಂಗಂ	
ಕೋರ್ಟ್(ತೆ)	4 ಪ್ರದರ್ಶನಗಳು
ಲಿಡೋ	
ಡಾಕೂ ಮಹಾರಾಜ್(ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ಡಸ್ಟರ್ (ತ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ವಿದ್ಯಾರ್ಥಿಗಳಿಂದ ಪರಿಸರ ಜಾಗೃತಿ ಜಾಥಾ



ಮೈಸೂರು ತಾಲೂಕಿನ ಮೂಡಲಹುಂಡಿ ಗ್ರಾಮದಲ್ಲಿ ಕುವೆಂಪುನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಪರಿಸರ ಜಾಗೃತಿ ಜಾಥಾ ನಡೆಸಿದರು.

ಮೈಸೂರು, ಮಾ.16(ಎಂಟಿವೈ)– ಮೈಸೂರು ತಾಲೂಕಿನ ಮೂಡಲಹುಂಡಿ ಗ್ರಾಮದಲ್ಲಿ ಕುವೆಂಪುನಗರ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆಯ ಕುರಿತು ಜಾಗೃತಿ ಜಾಥಾ ನಡೆಸಿ ಗಮನ ಸೆಳೆದರು.

ಮೂಡಲಹುಂಡಿ ಗ್ರಾಮದಲ್ಲಿ ಮೈಸೂರಿನ ಕುವೆಂಪುನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ 60ಕ್ಕೂ ಹೆಚ್ಚು ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಜ.15ರಿಂದ 21ರವರೆಗೆ 'ನನ್ನ ಭಾರತಕ್ಕಾಗಿ ಯುವ ಜನತೆ' ಶೀರ್ಷಿಕೆಯಲ್ಲಿ ಎನ್‌ಎಸ್‌ಎಸ್ ಶಿಬಿರದಲ್ಲಿ ಪಾಲ್ಗೊಂಡು ವಿವಿಧ ಶ್ರಮದಾನವನ್ನು ನಡೆಸಲು ಉದ್ದೇಶಿಸಿದ್ದು, ಇಂದು ಬೆಳಗ್ಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಪರಿಸರ ಸಂರಕ್ಷಣೆ ಕುರಿತಂತೆ ವಿವಿಧ ಘೋಷಣಾ ಫಲಕಗಳನ್ನು ಪ್ರದರ್ಶಿಸಿ ಗ್ರಾಮಸ್ಥರಲ್ಲಿ ಪರಿಸರ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸಿದರು.

ಶಿಬಿರಕ್ಕೆ ಚಾಲನೆ: ಮೂಡಲಹುಂಡಿ ಗ್ರಾಮದ ಶ್ರೀರಾಮ ಮಂದಿರದ ಬಳಿ ಎನ್‌ಎಸ್‌ಎಸ್ ಶಿಬಿರಕ್ಕೆ ಗ್ರಾಮದ ಮುಖಂಡರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಕುವೆಂಪು ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಪುಟ್ಟರಾಜು, ಮೈಸೂರು ವಿಶ್ವವಿದ್ಯಾನಿಲಯದ ಎನ್‌ಎಸ್‌ಎಸ್ ಯೋಜನೆಯ ಸಂಯೋಜನಾಧಿಕಾರಿ ಡಾ. ಎಂ.ಬಿ.ಸುರೇಶ್, ವಿಇಓ ಪ್ರಕಾಶ್, ಶಿಬಿರಾಧಿಕಾರಿಗಳಾದ ಪ್ರೊ. ಬಿ.ನಾಗೇಂದ್ರಕುಮಾರ್, ಡಾ. ಅಶ್ವಿನಿ ಆರ್.ಎಸ್., ಸಹ ಶಿಬಿರಾಧಿಕಾರಿಗಳಾದ ಪ್ರೊ ರವಿಕುಮಾರ್, ಡಾ. ಉಷಾದೇವಿ ಎ., ಶಿಶು ಅಭಿವೃದ್ಧಿ ಕಾರ್ಯಕ್ರಮಾಧಿಕಾರಿ ಡಾ. ಹೇಮಾವತಿ, ಗ್ರಾಪಂ ಅಧ್ಯಕ್ಷ ಕೃಷ್ಣ, ಉಪಾಧ್ಯಕ್ಷೆ ಸುಮಿತ್ರಾ, ಸದಸ್ಯರಾದ ಬೀರೇಗೌಡ, ರಾಧಾ ಮಹದೇವ್, ಮುಖಂಡರಾದ ಸಾಕೇಗೌಡ, ಹುಚ್ಚೇಗೌಡ, ಸಣ್ಣೇಗೌಡ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಬಾಹ್ಯಾಕಾಶ ನಿಲ್ದಾಣ ತಲುಪಿದ 'ಕ್ರ್ಯೂ–10' ಸಿಬ್ಬಂದಿ: ಸುನಿತಾ, ಬುಚ್ ಸ್ವಾಗತ

ಫ್ಲಾರಿಡಾ (ಅಮೆರಿಕ), ಮಾ.16– ನಾಸಾದ 'ಕ್ರ್ಯೂ–10' ಮಿಷನ್‌ನ ನಾಲ್ವರು ಗಗನಯಾತ್ರಿಗಳು ಭಾನುವಾರ ಬೆಳಿಗ್ಗೆ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ (ಐಎಸ್‌ಎಸ್) ಯಶಸ್ವಿಯಾಗಿ ತಲುಪಿದ್ದು, ಸುನಿತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಅವರ ಭೂಮಿಗೆ ಬರುವ ಹಾದಿಯನ್ನು ಸುಗಮಗೊಳಿಸಿದ್ದಾರೆ.



ಸುಮಾರು 9 ತಿಂಗಳಿನಿಂದ ಬಾಹ್ಯಾಕಾಶ ನಿಲ್ದಾಣದಲ್ಲಿ ಉಳಿದುಕೊಂಡಿರುವ 'ಕ್ರ್ಯೂ–9' ಮಿಷನ್‌ನ ಸಿಬ್ಬಂದಿಯನ್ನು (ಸುನಿತಾ ಮತ್ತು ಬುಚ್) ಕರೆತರಲು ಕ್ರ್ಯೂ–10 ಮಿಷನ್‌ಅನ್ನು ನಾಸಾ ಶುಕ್ರವಾರ ಯಶಸ್ವಿಯಾಗಿ ಉಡಾವಣೆ ಮಾಡಿತ್ತು. ಸ್ಪೇಸ್‌ಎಕ್ಸ್‌ನ 'ಕ್ರ್ಯೂ ಡ್ರ್ಯಾಗನ್' ಗಗನ ನೌಕೆಯಲ್ಲಿ ನಾಸಾದ ಆ್ಯನ್ ಮೆಕ್ಲೇನ್ ಮತ್ತು ನಿಕೋಲ್ ಆಯೆರ್ಸ್, ಜಪಾನ್‌ನ ತಕುಯಾ ಒನಿಶಿ ಹಾಗೂ ರಷ್ಯಾದ ಕಿರಿಲ್ ಪೆಸ್ಕೊವ್ ಐಎಸ್‌ಎಸ್‌ಗೆ ತೆರಳಿದ್ದರು.

ಐಎಸ್‌ಎಸ್‌ನಲ್ಲಿ 9 ತಿಂಗಳು ಕಳೆದ ಸುನಿತಾಬುಚ್: ಸುನಿತಾ ಹಾಗೂ ವಿಲ್ಮೋರ್ ಅವರು ಕಳೆದ ವರ್ಷ ಜೂನ್ 5ರಂದು, ಬೋಯಿಂಗ್ ಸಂಸ್ಥೆಯ ಸ್ಟಾರ್‌ಲೈನರ್ ಗಗನನೌಕೆಯಲ್ಲಿ ಐಎಸ್‌ಎಸ್‌ನತ್ತ ಪ್ರಯಾಣ ಬೆಳೆಸಿದ್ದರು. 8 ದಿನಗಳ ನಂತರ ಅವರು ಭೂಮಿಗೆ ಮರಳಬೇಕಿತ್ತು. ಆದರೆ, ಗಗನನೌಕೆಯಲ್ಲಿ ತಾಂತ್ರಿಕ ದೋಷ ಕಂಡುಬಂದ ಕಾರಣ ಅವರಿಗೆ ಮರಳಲು ಸಾಧ್ಯವಾಗದೆ ಅಲ್ಲೇ ಉಳಿದುಕೊಂಡಿದ್ದಾರೆ.

ಪುಣ್ಯಸ್ಮರಣೆ



ಮೈಸೂರಿನ ನರಸಿಂಹರಾಜ ಮೊಹಲ್ಲಾದಲ್ಲಿರುವ ಟಿಎನ್‌ಎನ್ ಆದರ್ಶ ವಿದ್ಯಾರ್ಥಿನಿಲಯದ ಆವರಣದಲ್ಲಿ ಎನ್.ಮಂಜುನಾಥ್ ಅವರ ಎಂಟನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಈ ಸಂದರ್ಭದಲ್ಲಿ ಎನ್.ಮಂಜುನಾಥ್ ಪತ್ನಿ ಡಾ.ಆಶಾ ಮಂಜುನಾಥ್, ಪುತ್ರ ಹಾಗೂ ಟಿಎನ್‌ಎನ್ ಆದರ್ಶ ವಿದ್ಯಾರ್ಥಿ ನಿಲಯದ ಅಧ್ಯಕ್ಷ ಎಂ. ಪ್ರಫುಲ್‌ಕುಮಾರ್ ಅವರು ಎನ್. ಮಂಜುನಾಥ್‌ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ನಿಲಯದ ಕಾರ್ಯದರ್ಶಿ ಎಂ.ಪಾಟೀಲ್, ಟೆಲಿಫೋನ್ ಇಲಾಖೆಯ ರಾಚಪ್ಪ, ದುರ್ಗೇಶ್, ಪುಟ್ಟರಾಜು, ಇ. ಹೃದಯರಾಜು, ಬಿಲ್ಲಯ್ಯ, ಪ್ರಸಾದ್, ಶಂಕರನಾರಾಯಣ್ ಪುಟ್ಟಯ್ಯ ಮುಂತಾದವರಿದ್ದರು.

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ದಿ ಡಿಪ್ಲೊಮೆಟ್ (ಹಿಂ): ಬೆ.10ಕ್ಕೆ, ಮ.12.50ಕ್ಕೆ, ರಾ.7ಕ್ಕೆ, ಇಂಟರ್‌ಸ್ಟೆಲ್ಲರ್ (ಇಂ): ಮ.3.40ಕ್ಕೆ, ರಾ.9.50ಕ್ಕೆ.
ಸ್ಕ್ರೀನ್ 2	ನೊವೊಕೇನ್ (ಇಂ): ಬೆ.10.30ಕ್ಕೆ, ರಾ.10.20ಕ್ಕೆ, ಡ್ರ್ಯಾಗನ್ (ತ): ಮ.1ಕ್ಕೆ, ಕೋರ್ಟ್ ಸ್ಟೇಟ್ V/s ಎ ನೋಬಡಿ (ತೆ): ಸಂ.4.10ಕ್ಕೆ, ದಿಲ್‌ರೂಬ (ತೆ): ರಾ.7.15ಕ್ಕೆ.
ಸ್ಕ್ರೀನ್ 3	ಡ್ರ್ಯಾಗನ್ (ತ): ಬೆ.10ಕ್ಕೆ, ಸ್ವೀಟ್‌ಹಾರ್ಟ್ (ತ): ಮ.1.05ಕ್ಕೆ, ಅ (ಕ): ಸಂ.4.10ಕ್ಕೆ, ಛಾವಾ (ಹಿಂ): ರಾ.7.10ಕ್ಕೆ, ದಿ ಡಿಪ್ಲೊಮೆಟ್ (ಹಿಂ): ಬೆ.10
ಸ್ಕ್ರೀನ್ 4	ಅಪ್ಪು (ಕ): ಬೆ.10.40ಕ್ಕೆ, ಮ.1.30ಕ್ಕೆ, ಸಂ.4.15ಕ್ಕೆ, ರಾ.7ಕ್ಕೆ, ರಾ.9.45ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಫಾರೆಸ್ಟ್ (ಕ): ಮ.1.30ಕ್ಕೆ, ಪೆರುಸು (ತ): ಸಂ.6.30ಕ್ಕೆ, ಸ್ವೀಟ್ ಹಾರ್ಟ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ಅಪ್ಪು (ಕ): ಬೆ.10.30ಕ್ಕೆ, ಮ.1.15ಕ್ಕೆ, ಸಂ.4.15ಕ್ಕೆ, ರಾ.7ಕ್ಕೆ, ದಿಲ್‌ರೂಬಾ (ತೆ): ರಾ.9.25ಕ್ಕೆ.
ಸ್ಕ್ರೀನ್ 3	ಛಾವಾ (ಹಿಂ): ಸಂ.6.10ಕ್ಕೆ, ಅಪ್ಪು (ಕ): ರಾ.9.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139


ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಆಸ್ತಿ ಬರೆಸಿಕೊಂಡು ಪೋಷಕರನ್ನು ಆಸ್ಪತ್ರೆಯಲ್ಲಿ ಬಿಟ್ಟು ಹೋಗುವ ಮಕ್ಕಳಿಗೆ ಬಿಗ್ ಶಾಕ್

ಆಸ್ತಿ ವರ್ಗಾವಣೆ ರದ್ದತಿಗೆ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ಆದೇಶ

ಬೆಂಗಳೂರು, ಮಾ.16– ಕರ್ನಾಟಕದಲ್ಲಿ ಇತ್ತೀಚೆಗೆ ವೃದ್ಧ ಪೋಷಕರನ್ನು ಮಕ್ಕಳು ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಬಿಟ್ಟು ಹೋಗುತ್ತಿರುವ ಉದಾಹರಣೆಗಳು ಹೆಚ್ಚಾಗಿವೆ. ಅದೂ ಆಸ್ತಿಯನ್ನು ತಮ್ಮ ಹೆಸರಿಗೆ ಬರೆಯಿಸಿಕೊಂಡ ಪೋಷಕರನ್ನು ಚಿಕಿತ್ಸೆ ನೆಪದಲ್ಲಿ ಆಸ್ಪತ್ರೆಗೆ ಬಿಟ್ಟು ಮಕ್ಕಳು ನಾಪತ್ತೆಯಾಗುತ್ತಿದ್ದಾರೆ.



ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ (ಬಿಐಎಂಎಸ್) ಒಂದರಲ್ಲೇ 150ಕ್ಕೂ ಹೆಚ್ಚು ಹಿರಿಯ ನಾಗರಿಕರನ್ನು ಮಕ್ಕಳು ತೊರೆದ ಪ್ರಕರಣಗಳು ವರದಿಯಾಗಿವೆ. ರಾಜ್ಯಾದ್ಯಂತ ಇತರ ವೈದ್ಯಕೀಯ ಸಂಸ್ಥೆಗಳಲ್ಲಿ ಇಂಥ 100 ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿವೆ.

ಈ ವಿಷಯವನ್ನು ಅರಿತ ವೈದ್ಯಕೀಯ ಶಿಕ್ಷಣ, ಕೌಶಲಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್, ತೀವ್ರ ಬೇಸರ ವ್ಯಕ್ತಪಡಿಸಿದರಲ್ಲದೇ, ಕೂಡಲೇ ವಿಲ್‌ಗಳು ಮತ್ತು ಆಸ್ತಿ ವರ್ಗಾವಣೆಗಳನ್ನು ರದ್ದುಗೊಳಿಸುವಂತೆ ಕ್ರಮ ಕೈಗೊಳ್ಳಲು ಸಚಿವರು ಆದೇಶ ನೀಡಿದ್ದಾರೆ.

ಕಳೆದ ಒಂದು ವಾರದಿಂದ ವಿಕಾಸಸೌಧದಲ್ಲಿ ರಾಜ್ಯದ ವಿವಿಧ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಆಡಳಿತ ಮಂಡಳಿಯ ನಿರ್ದೇಶಕರು ಹಾಗೂ ಇತರ ಸದಸ್ಯರ ಸಭೆ ನಡೆಸಿ ಮಾಹಿತಿ ಪಡೆದುಕೊಂಡಿದ್ದಾರೆ.

ಈ ಕುರಿತು ತೀವ್ರ ಕಳವಳ ವ್ಯಕ್ತಪಡಿಸಿದ ಸಚಿವರು, ಈ ಕುರಿತ ಪ್ರಕರಣಗಳು ಕಂಡು ಬಂದ ಕೂಡಲೇ ವೈದ್ಯಕೀಯ ಶಿಕ್ಷಣ ನಿರ್ದೇಶಕರು (ಡಿಎಂಇ) ಕೂಡಲೇ ಸಹಾಯಕ ಆಯುಕ್ತರಿಗೆ (ಕಂದಾಯ ಉಪ ವಿಭಾಗ) ದೂರುಗಳನ್ನು ಸಲ್ಲಿಸುವಂತೆ ಸೂಚನೆ ನೀಡಿದರು. ತಮ್ಮ ಮಕ್ಕಳ ಪರವಾಗಿ ಮಾಡಿದ ವಿಲ್‌ಗಳು ಮತ್ತು ಆಸ್ತಿ ವರ್ಗಾವಣೆಗಳನ್ನು ರದ್ದುಗೊಳಿಸುವಂತೆ ಪರಿತ್ಯಕ್ತ ಪೋಷಕರಿಗೆ ಸಚಿವರು ಕರೆ ನೀಡಿದರು.

ತಮ್ಮ ಮಕ್ಕಳು ನಮ್ಮನ್ನು ನೋಡಿಕೊಳ್ಳಲು ಆಗದೇ ತೊರೆದಿದ್ದಾರೆ. ಕೆಲವರು ಆರ್ಥಿಕ ಸಂಕಷ್ಟಗಳಿಂದ ನಮ್ಮನ್ನು ಇಲ್ಲಿ ಬಿಟ್ಟಿದ್ದಾರೆ. ನಮ್ಮ ಆಸ್ತಿಗಳನ್ನು ತಮ್ಮ ಹೆಸರಿಗೆ ವರ್ಗಾಯಿಸಿಕೊಂಡ ನಂತರ ಮಕ್ಕಳು ಚಿಕಿತ್ಸೆ ನೆಪದಲ್ಲಿ ಆಸ್ಪತ್ರೆಗೆ ಸೇರಿಸಿ ಹೊರಟುಹೋಗಿದ್ದಾರೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಊಟ, ವಸತಿ, ಆಶ್ರಯ ಉಚಿತವಾಗಿ ಸಿಗುತ್ತದೆ ಎಂಬ ಉದ್ದೇಶದಿಂದ ನಮ್ಮನ್ನು ಇಲ್ಲಿ ಬಿಟ್ಟುಹೋಗಿದ್ದಾರೆ ಎಂದು ಪೋಷಕರು ತಿಳಿಸಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಇಂಥ ಪರಿತ್ಯಕ್ತ ಹಿರಿಯ ನಾಗರಿಕರನ್ನು ಬಿಐಎಂಎಸ್ ಅಧಿಕಾರಿಗಳು ಬೆಳಗಾವಿ ಮತ್ತು ಸುತ್ತಮುತ್ತಲಿನ 70 ಹಿರಿಯ ನಾಗರಿಕರ ನಿವೃತ್ತಿ ಗೃಹಗಳಲ್ಲಿ ಅಥವಾ ವೃದ್ಧಾಶ್ರಮಗಳಲ್ಲಿ ಆಶ್ರಯ ಕಲ್ಪಿಸಿಕೊಟ್ಟಿದ್ದಾರೆ. ಆದರೆ ಇನ್ನೂ ಅನೇಕರು ಆಸ್ಪತ್ರೆಗಳಲ್ಲಿಯೇ ಇದ್ದಾರೆ.

ಹಿರಿಯ ನಾಗರಿಕರ ಕಾಯ್ದೆಯಡಿ ಕಾನೂನು ಕ್ರಮ

ವೈದ್ಯಕೀಯ ಸಂಸ್ಥೆಗಳ ನಿರ್ದೇಶಕರು ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ, 2007 ರ ಅಡಿಯಲ್ಲಿ ಸಹಾಯಕ ಆಯುಕ್ತರು ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳಲು ದೂರುಗಳನ್ನು ಸಲ್ಲಿಸಬೇಕು ಎಂದು ಡಾ. ಪಾಟೀಲ್ ಎಲ್ಲಾ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಈ ಕಾನೂನಿನ ಬಗ್ಗೆ ಅನೇಕ ಜನರಿಗೆ ತಿಳಿದಿಲ್ಲ. ಮಕ್ಕಳು ಅಥವಾ ಸಂಬಂಧಿಕರು ಹಿರಿಯ ನಾಗರಿಕರಿಗೆ ಆರ್ಥಿಕ ಮತ್ತು ವೈದ್ಯಕೀಯ ಬೆಂಬಲವನ್ನು ಒದಗಿಸಬೇಕು ಎಂಬ ನಿಯಮವಿದೆ. ಅವರು ಹಾಗೆ ಮಾಡಲು ವಿಫಲವಾದರೆ, ಪೋಷಕರು ತಮ್ಮ ಮಕ್ಕಳ ಪರವಾಗಿ ಮಾಡಿದ ಆಸ್ತಿ ವರ್ಗಾವಣೆಯನ್ನು ರದ್ದುಗೊಳಿಸುವ ಕಾನೂನುಬದ್ಧ ಹಕ್ಕು ಹೊಂದಿರುತ್ತಾರೆ ಎಂದು ಡಾ.ಪಾಟೀಲ್ ಹೇಳಿದರು.

ಕಾಯ್ದೆಯ ಸೆಕ್ಷನ್ 23 ರ ಪ್ರಕಾರ, ಮಕ್ಕಳು ಆಸ್ತಿಯನ್ನು ಆನುವಂಶಿಕವಾಗಿ ಪಡೆದ ನಂತರ ಹೆತ್ತವರನ್ನು ನಿರ್ಲಕ್ಷಿಸಿದರೆ ಅಥವಾ ತ್ಯಜಿಸಿದರೆ, ವಿಲ್ ಅಥವಾ ಆಸ್ತಿ ವರ್ಗಾವಣೆಯನ್ನು ರದ್ದುಗೊಳಿಸಲು ಮತ್ತು ವಯಸ್ಸಾದ ಪೋಷಕರಿಗೆ ಮಾಲೀಕತ್ವವನ್ನು ಪುನಃ ಪಡೆಯಲು ಕಾಯ್ದೆಯಲ್ಲಿ ಅನುಮತಿ ಇದೆ ಎಂದು ತಿಳಿಸಲಾಗಿದೆ.

ಇಂದು ಹಲವೆಡೆ ನೀರು ಸರಬರಾಜಿನಲ್ಲಿ ವ್ಯತ್ಯಯ

ಮೈಸೂರು, ಮಾ.16(ಎಸ್‌ಪಿಎನ್)– ಹೊಂಗಳ್ಳಿ 2ನೇ ಹಂತ ಹಾಗೂ ಬೆಳಗೊಳ ಯಂತ್ರಾಗಾರಕ್ಕೆ ವಿದ್ಯುತ್ ಸರಬರಾಜು ಮಾಡುವ ಮೇಟಗಳ್ಳಿ 66/11 ಕೆವಿ ಸಬ್ ಸ್ಟೇಷನ್‌ನಲ್ಲಿ ಮಾ.17ರಂದು ಬೆಳಗ್ಗೆ 10ರಿಂದ 6ರವರೆಗೆ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಮ್ಮಿಕೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಮೈಸೂರು ನಗರದ ವಿವಿಧೆಡೆ ನೀರು ಸರಬರಾಜಲ್ಲಿ ವ್ಯತ್ಯಯವಾಗಲಿದೆ. ಹೆಚ್‌ಎಎಲ್ ಬಡಾವಣೆ ಮತ್ತು ಸುತ್ತಮುತ್ತ, ಮಂಡಿ ಮೊಹಲ್ಲಾ, ಲಷ್ಕರ್ ಮೊಹಲ್ಲಾ, ಯಾದವಗಿರಿ, ಬನ್ನಿಮಂಟಪ, ಎಬಿಸಿ ಲೇಔಟ್, ಪುಲಿಕೇಶಿ ರಸ್ತೆ, ವೀರನಗೆರೆ, ಸಿದ್ದಿಖಿನಗರ, ಶಿವರಾತ್ರೀಶ್ವರನಗರ, ತಿಲಕ್‌ನಗರ, ಬಡೇಮಕಾನ್, ಹಲೀಮ್‌ನಗರ, ದೇವರಾಜ ಮೊಹಲ್ಲಾ, ನಜರ್‌ಬಾದ್, ವಿದ್ಯಾರಣ್ಯಪುರಂ, ವಿಶ್ವೇಶ್ವರನಗರ, ಚಾಮುಂಡಿಪುರಂ, ಲೂರ್ದ್ ನಗರ, ಮೀನಾಬಜಾರ್, ವಾರ್ಡ್ ನಂ: 8, 17, 18, 19, 23ರಿಂದ 27, 40, 41, 55, 60, 61, 62, ಮೇಟಗಳ್ಳಿ, ಹೆಬ್ಬಾಳು ಕೈಗಾರಿಕಾ ಪ್ರದೇಶಗಳ ನೀರು ವ್ಯತ್ಯಯವಾಗಲಿದೆ.

ಇಂದಿನಿಂದ ಮೈಸೂರಿನಲ್ಲಿ ಯುವ ಜನೋತ್ಸವ

ಮೈಸೂರು, ಮಾ.16(ಎಂಟಿವೈ)– ಮೈಸೂರಿನ ಸರಸ್ವತಿಪುರಂನಲ್ಲಿರುವ ಎನ್‌ಎಸ್‌ಎಸ್ ಭವನದಲ್ಲಿ ನಾಳೆ (ಮಾ.17)ಯಿಂದ ಮಾ.21ರವರೆಗೆ ಯುವ ಜನೋತ್ಸವ ಕಾರ್ಯಕ್ರಮ ಜರುಗಲಿದೆ.

ರಾಜ್ಯ ಎನ್‌ಎಸ್‌ಎಸ್ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೈಸೂರು ವಿಶ್ವವಿದ್ಯಾನಿಲಯ ರಾಷ್ಟ್ರೀಯ ಸೇವಾ ಯೋಜನೆಯ ಸಂಯುಕ್ತಾಶ್ರಯದಲ್ಲಿ ನಡೆಯಲಿರುವ ಯುವ ಜನೋತ್ಸವ ಕಾರ್ಯಕ್ರಮವನ್ನು ನಾಳೆ ಬೆಳಗ್ಗೆ 11 ಗಂಟೆಗೆ ಕರ್ನಾಟಕ ರಾಜ್ಯ ಎನ್‌ಎಸ್‌ಎಸ್ ಕೋಶದ ಅಧಿಕಾರಿ ಡಾ. ಪ್ರತಾಪ್ ಲಿಂಗಯ್ಯ ಉದ್ಘಾಟಿಸಲಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಎಂ.ಕೆ.ಲೋಕನಾಥ್ ಅಧ್ಯಕ್ಷತೆ ವಹಿಸುವ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ವಿಶ್ವವಿದ್ಯಾನಿಲಯಗಳ ಪ್ರತಿನಿಧಿಗಳಾಗಿ 125 ಮಂದಿ ರಾಷ್ಟ್ರೀಯ ಸ್ವಯಂ ಸೇವಕರು ಪಾಲ್ಗೊಳ್ಳಲಿದ್ದಾರೆ. ಪ್ರತೀ ದಿನ ಶ್ರಮದಾನ, ವಿಶೇಷ ಉಪನ್ಯಾಸ, ಸಾಂಸ್ಕೃತಿಕ ಸ್ಪರ್ಧೆ ಸೇರಿದಂತೆ ವಿವಿಧ ಕಾರ್ಯಕ್ರಮಗಳು ಜರುಗಲಿದ್ದು, ಮಾ.21ರಂದು ಬೆಳಗ್ಗೆ 11 ಗಂಟೆಗೆ ಯುವ ಜನೋತ್ಸವದ ಸಮಾರೋಪ ಸಮಾರಂಭ ಜರುಗಲಿದ್ದು, ಮೈಸೂರು ವಿವಿಯ ಕುಲಸಚಿವೆ ಎಂ.ಕೆ.ಸವಿತಾ ಅಧ್ಯಕ್ಷತೆ ವಹಿಸಲಿದ್ದಾರೆ. ರಾಷ್ಟ್ರೀಯ ಸೇವಾ ಯೋಜನೆಯ ಪ್ರಾದೇಶಿಕ ನಿರ್ದೇಶಕರಾದ ಡಿ. ಕಾರ್ತಿಗೇಯನ್ ಸಮಾರೋಪ ಭಾಷಣ ಮಾಡಲಿದ್ದಾರೆ ಎಂದು ಕಾರ್ಯಕ್ರಮ ಸಂಯೋಜನಾಧಿಕಾರಿ ಪ್ರೊ. ಎಂ.ಬಿ.ಸುರೇಶ್ ತಿಳಿಸಿದ್ದಾರೆ.

ದೇಶ - ವಿದೇಶ

ಎ.ಆರ್.ರೆಹಮಾನ್‌ಗೆ ಎದೆ ನೋವು; ಆಸ್ಪತ್ರೆಯಲ್ಲಿ ಚಿಕಿತ್ಸೆ

ಚೆನ್ನೈ: ಖ್ಯಾತ ಸಂಗೀತ ನಿರ್ದೇಶಕ ಎ.ಆರ್.ರೆಹಮಾನ್ ಅವರಿಗೆ ಇದ್ದಕ್ಕಿದ್ದಂತೆ ಎದೆನೋವು ಕಾಣಿಸಿಕೊಂಡಿದೆ. ಆತಂಕಕ್ಕೆ ಒಳಗಾಗಿ ಕೂಡಲೇ ಅವರನ್ನು ಕುಟುಂಬಸ್ಥರು ಆಸ್ಪತ್ರೆಗೆ ದಾಖಲಿಸಿದ್ದಾರೆ. ಅವರಿಗೆ ಅಪೋಲೋ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿದ್ದು, ಚೆಕಪ್ ಬಳಿಕ ಅವರನ್ನು ಇದೀಗ ಡಿಸ್ಚಾರ್ಜ್ ಮಾಡಲಾಗಿದೆ.



ಆಸ್ಕರ್ ಪ್ರಶಸ್ತಿ ವಿಜೇತ ಮತ್ತು ಸಂಗೀತ ಸಂಯೋಜಕ ಎಆರ್ ರೆಹಮಾನ್ ಅವರು ಭಾನುವಾರ ಬೆಳಿಗ್ಗೆ (ಮಾರ್ಚ್ 16) ಎದೆ ನೋವಿನಿಂದ ಆಸ್ಪತ್ರೆಗೆ ದಾಖಲಾಗಿದ್ದರು. ವೈದ್ಯರು ಸೂಕ್ಷ್ಮವಾಗಿ ಅವರ ಆರೋಗ್ಯ ಸ್ಥಿತಿಯನ್ನು ಗಮನಿಸಿದ್ದರು. ರೆಹಮಾನ್ ಅವರಿಗೆ ಇಸಿಜಿ ಸೇರಿದಂತೆ ಇನ್ನಿತರ ಪರೀಕ್ಷೆಗಳನ್ನು ವೈದ್ಯರು ಮಾಡಿದ್ದು, ಜೊತೆಗೆ ಅವರಿಗೆ ಆಂಜಿಯೋಗ್ರಾಮ್ ಪರೀಕ್ಷೆಗೆ ಒಳಪಡಿಸಲಾಗಿದೆ ಎಂದು ವರದಿಯಾಗಿದೆ. ವರದಿಗಳ ಪ್ರಕಾರ ಅವರು ಚಿಕಿತ್ಸೆಗೆ ಉತ್ತಮವಾಗಿ ಸ್ಪಂದಿಸುತ್ತಿದ್ದು, ಮಧ್ಯಾಹ್ನದ ವೇಳೆಗೆ ಎಆರ್ ರೆಹಮಾನ್ ಅವರನ್ನು ಡಿಸ್ಚಾರ್ಜ್ ಮಾಡುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿತ್ತು. ಇದೀಗ ಅವರು ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ.

ಪಾಕ್‌ನಲ್ಲಿ ಆತ್ಮಾಹುತಿ ದಾಳಿಗೆ ಭದ್ರತಾ ಪಡೆಗಳಿದ್ದ ಬಸ್ ಛಿದ್ರ

ಬಲೋಚಿಸ್ತಾನ: ಪಾಕಿಸ್ತಾನದ ನೈರುತ್ಯ ಭಾಗದಲ್ಲಿ ಭದ್ರತಾ ಪಡೆಗಳನ್ನು ಗುರಿಯಾಗಿರಿಸಿಕೊಂಡು ಬಲೋಚ್ ಲಿಬರೇಷನ್ ಆರ್ಮಿ ದಾಳಿ ನಡೆಸಿದೆ. ಭಾನುವಾರ ಭದ್ರತಾ ಪಡೆಗಳನ್ನು ಹೊತ್ತೊಯ್ಯುತ್ತಿದ್ದ ಬಸ್ ಬಳಿ ರಸ್ತೆಬದಿ ಬಾಂಬ್ ಸ್ಫೋಟಗೊಂಡು ಕನಿಷ್ಠ ಐದು ಅಧಿಕಾರಿಗಳು ಸಾವನ್ನಪ್ಪಿದ್ದು, 10 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.



ಬಲೋಚಿಸ್ತಾನದ ನೌಷ್ಕಿ ಜಿಲ್ಲೆಯಲ್ಲಿ ಈ ದಾಳಿ ನಡೆದಿದೆ ಎಂದು ಸ್ಥಳೀಯ ಪೊಲೀಸ್ ಮುಖ್ಯಸ್ಥ ಜಾಫರ್ ಜಮಾನಾನಿ ತಿಳಿಸಿದ್ದಾರೆ. ಸ್ಫೋಟದಿಂದಾಗಿ ಹತ್ತಿರದ ಮತ್ತೊಂದು ಬಸ್‌ಗೆ ತೀವ್ರ ಹಾನಿಯಾಗಿದೆ. ಮೃತರು ಮತ್ತು ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗೆ ಸಾಗಿಸಲಾಗಿದೆ ಎಂದು ಅವರು ಹೇಳಿದರು.

ಬಲೋಚಿಸ್ತಾನದ ಮುಖ್ಯಮಂತ್ರಿ ಸರ್ಫ್ರಾಜ್ ಬುಗ್ತಿ ದಾಳಿಯನ್ನು ಖಂಡಿಸಿದ್ದಾರೆ. ಏತನ್ಮಧ್ಯೆ ಬಲೋಚ್ ಲಿಬರೇಶನ್ ಆರ್ಮಿ (ಬಿಎಲ್‌ಎ) ದಾಳಿಯ ಹೊಣೆಯನ್ನು ಹೊತ್ತುಕೊಂಡಿದ್ದು, 90 ಸಿಬ್ಬಂದಿ ಸಾವನ್ನಪ್ಪಿದ್ದಾರೆ ಎಂದು ಹೇಳಿದೆ. ತನ್ನ ಮಜೀದ್ ಬ್ರಿಗೇಡ್ ರಕ್ಷಾನ್ ಮಿಲ್ ಬಳಿಯ ಆರ್‌ಸಿಡಿ ಹೆದ್ದಾರಿಯಲ್ಲಿ ಪ್ರಯಾಣಿಸುತ್ತಿದ್ದ ಬೆಂಗಾವಲು ಪಡೆಯ ಮೇಲೆ ವಾಹನದಿಂದ ಆತ್ಮಾಹುತಿ ಬಾಂಬ್ ದಾಳಿ ನಡೆಸಿದ್ದೇವೆ ಎಂದು ಬಿಎಲ್‌ಎ ಗುಂಪು ಹೇಳಿದೆ.

ಯೆಮೆನ್‌ನ ಹೌತಿ ಮೇಲೆ ಅಮೆರಿಕ ಮಿಲಿಟರಿ ದಾಳಿ: ಕನಿಷ್ಠ 31 ಮಂದಿ ಸಾವು

ಸನಾ: ಜನವರಿಯಲ್ಲಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಧಿಕಾರ ವಹಿಸಿಕೊಂಡ ನಂತರ ಯೆಮೆನ್‌ನ ಹೌತಿ ಸಂಘಟನೆ ವಿರುದ್ಧ ಅಮೆರಿಕ ನಡೆಸಿದ ಮೊದಲ ದಾಳಿಯಲ್ಲಿ ಕನಿಷ್ಠ 31 ಜನರು ಮೃತಪಟ್ಟಿದ್ದಾರೆ ಎಂದು ಬಂಡುಕೋರರು ಭಾನುವಾರ ತಿಳಿಸಿದ್ದಾರೆ. ಇರಾನ್ ಬಂಡುಕೋರ ಗುಂಪಿಗೆ ಬೆಂಬಲ ನೀಡುವುದನ್ನು ನಿಲ್ಲಿಸಬೇಕೆಂದು ಅಮೆರಿಕ ಎಚ್ಚರಿಕೆ ನೀಡಿದೆ.



ಗಾಜಾ ಯುದ್ಧದ ಉದ್ದಕ್ಕೂ ಇಸ್ರೇಲ್ ಮತ್ತು ಕೆಂಪು ಸಮುದ್ರದ ಹಡಗು ಸಾಗಣೆಯ ಮೇಲೆ ದಾಳಿ ಮಾಡಿದ ಹೌತಿಗಳ ವಿರುದ್ಧ ನಡೆದ ದಾಳಿಯಲ್ಲಿ ಮಕ್ಕಳು ಕೂಡ ಸೇರಿದ್ದಾರೆ. ಕೆಂಪು ಸಮುದ್ರದ ಹಡಗು ಸಾಗಣೆಯ ಮೇಲೆ ಯೆಮೆನ್‌ನ ಇರಾನ್ ಒಡಂಬಡಿಕೆ ಹೌತಿಗಳು ನಡೆಸಿದ ದಾಳಿಯನ್ನು ಖಂಡಿಸಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸರ್ಕಾರ ದಾಳಿ ನಡೆಸಿದೆ.

ಬಂಡುಕೋರರ ಹಿಡಿತದಲ್ಲಿರುವ ರಾಜಧಾನಿ ಸನಾದಲ್ಲಿನ ಎಎಫ್‌ಪಿ ಛಾಯಾಗ್ರಾಹಕರೊಬ್ಬರು ಸೆರೆಹಿಡಿದ ದೃಶ್ಯದಲ್ಲಿ ಮೂರು ಸ್ಫೋಟಗಳು ವಸತಿ ಪ್ರದೇಶಗಳಿಂದ ಬರುತ್ತಿರುವುದು ಕಾಣುತ್ತಿದೆ. ಹೌತಿಗಳ ಭದ್ರಕೋಟೆಯಾದ ಯೆಮೆನ್‌ನ ಉತ್ತರ ಸಾದಾ ಪ್ರದೇಶದಲ್ಲಿಯೂ ದಾಳಿಗಳು ನಡೆದಿವೆ.

ದೇವಾಲಯದ ಲೆಕ್ಕಾಧಿಕಾರಿ ಮೇಲೆ ಹಲ್ಲೆ,ಇಬ್ಬರು ಅರ್ಚಕರ ಬಂಧನ

ಹೈದರಾಬಾದ್: ಇಲ್ಲಿನ ದೇವಸ್ಥಾನವೊಂದರ ಲೆಕ್ಕಾಧಿಕಾರಿ ಮೇಲೆ ರಾಸಾಯನಿಕ ಪದಾರ್ಥ ಎಸೆದು ಗಾಯಗೊಳಿಸಿದ ಆರೋಪದಲ್ಲಿ ಇಬ್ಬರು ಅರ್ಚಕರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಭಾನುವಾರ ತಿಳಿಸಿದ್ದಾರೆ. ಮಾರ್ಚ್ 14 ರಂದು ಸೈದಾಬಾದ್‌ನಲ್ಲಿರುವ ಶ್ರೀ ಭೂಲಕ್ಷ್ಮಿ ಮಾತಾ ದೇವಸ್ಥಾನದಲ್ಲಿ ಈ ಘಟನೆ ಸಂಭವಿಸಿದೆ.

ದೇವಸ್ಥಾನದಲ್ಲಿ ಅಕೌಂಟೆಂಟ್ ಆಗಿ ಕೆಲಸ ಮಾಡುತ್ತಿದ್ದ 60 ವರ್ಷದ ಲೆಕ್ಕಾಧಿಕಾರಿ ರಿಸೆಪ್ಷನ್ ಟೇಬಲ್‌ನಲ್ಲಿ ಕುಳಿತಿದ್ದಾಗ ಅಲ್ಲಿಗೆ ಬಂದ ಮಾಸ್ಕ್ ಧರಿಸಿದ ಅಪರಿಚಿತ ವ್ಯಕ್ತಿಯೋರ್ವ ಅನ್ನದಾಸೋಹ ಕಾರ್ಯಕ್ರಮದ ಬಗ್ಗೆ ವಿಚಾರಿಸಿದ್ದಾರೆ. ಸ್ವಲ್ಪ ಸಮಯದ ನಂತರ ಅನ್ನದಾನದ ರಶೀದಿ ನೀಡುವಂತೆ ಲೆಕ್ಕಾಧಿಕಾರಿಯನ್ನು ಕೇಳಿದ್ದಾನೆ. ಅಕೌಂಟೆಂಟ್ ಬರೆಯುತ್ತಿದ್ದಾಗ ಆತನ ನೆತ್ತಿಯ ಮೇಲೆ ಹೆಚ್ಚಾಗಿ ಗೊತ್ತಿಲ್ಲದ ದ್ರವವೊಂದನ್ನು ಸುರಿದು ಹೋಳಿ ಶುಭಾಶಯಗಳು ಎಂದು ಹೇಳಿ ಅಪರಿಚಿತ ವ್ಯಕ್ತಿ ಪರಾರಿಯಾಗಿದ್ದ.

ಹಲ್ಲೆಯಿಂದ ಅಕೌಂಟೆಂಟ್‌ನ ನೆತ್ತಿ, ಮುಖ, ಕಣ್ಣು ಮತ್ತು ಕುತ್ತಿಗೆಗೆ ಸುಟ್ಟ ಗಾಯಗಳಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಕರಣ ಸಂಬಂಧ ದೇವಾಲಯದ ಇಬ್ಬರು ಅರ್ಚಕರನ್ನು ಬಂಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಪಾಕ್ ಕಾಲೇಜುಗಳಲ್ಲಿ ಬಾಲಿವುಡ್ ಹಾಡುಗಳಿಗೆ ನೃತ್ಯ ಮಾಡುವುದು ನಿಷೇಧ

ಇಸ್ಲಾಮಾಬಾದ್: ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದ ಕಾಲೇಜುಗಳಲ್ಲಿ ಬಾಲಿವುಡ್ ಹಾಡುಗಳನ್ನು ಹಾಡುವುದು ಮತ್ತು ಬಾಲಿವುಡ್ ಹಾಡುಗಳಿಗೆ ನೃತ್ಯ ಮಾಡುವುದನ್ನು ನಿಷೇಧಿಸಲಾಗಿದೆ. ಪಂಜಾಬ್ ಉನ್ನತ ಶಿಕ್ಷಣ ಆಯೋಗ ಈ ನಿರ್ಧಾರ ತೆಗೆದುಕೊಂಡಿದೆ. ಈ ಆದೇಶ ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳೆರಡಕ್ಕೂ ಅನ್ವಯಿಸುತ್ತದೆ. ಆಯೋಗವು ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು ಮತ್ತು ನಿರ್ದೇಶಕರಿಗೆ ಈ ಕುರಿತು ಸುತ್ತೋಲೆಯನ್ನು ಹೊರಡಿಸಿದೆ. ಕಾಲೇಜುಗಳಲ್ಲಿ 'ಅನೈತಿಕ ಮತ್ತು ಅಶ್ಲೀಲ' ಚಟುವಟಿಕೆಗಳನ್ನು ನಿಲ್ಲಿಸಬೇಕು ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಅನುಚಿತ ಬಟ್ಟೆಗಳನ್ನು ಧರಿಸಿ ಭಾರತೀಯ ಹಾಡುಗಳಿಗೆ ನೃತ್ಯ ಮಾಡುವುದು ಮತ್ತು ಹಾಡುವುದಕ್ಕೆ ಅನುಮತಿ ನೀಡಬಾರದು ಎಂದು ಸೂಚಿಸಿದೆ. ಭಾರತೀಯ ಹಾಡುಗಳು ಮತ್ತು ನೃತ್ಯಗಳನ್ನು ನಿಷೇಧಿಸುವ ಆದೇಶವನ್ನು ಮಾರ್ಚ್ 14ರಂದು ಜಾರಿಗೆ ತರಲಾಯಿತು. ವಿದ್ಯಾರ್ಥಿಗಳ ಶಿಕ್ಷಣ ಮತ್ತು ನೈತಿಕ ಶಿಕ್ಷಣವನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಆಯೋಗವು ವಾದಿಸಿದೆ. ಈ ಆದೇಶದ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಮಿಶ್ರ ಪ್ರತಿಕ್ರಿಯೆಗಳು ಕಂಡುಬಂದಿವೆ. ಅನೇಕ ಜನರು ಇದನ್ನು ಸ್ವಾಗತಿಸಿದ್ದಾರೆ, ಆದರೆ ಕೆಲವು ವಿದ್ಯಾರ್ಥಿಗಳು ಇದನ್ನು ಗೌಪ್ಯತೆಯ ಮೇಲಿನ ಆಕ್ರಮಣ ಎಂದು ಟೀಕಿಸಿದ್ದಾರೆ.

ಬೇಸಿಗೆ ಝಳ: ಮೈಸೂರು ಮೃಗಾಲಯದಲ್ಲಿ ಪ್ರಾಣಿಗಳಿಗೆ ವಿಶೇಷ ಆರೈಕೆ

●ನೀರು ಚಿಮುಕಿಸುವ ವಾಟರ್ ಜೆಟ್ ಅಳವಡಿಕೆ ●ಎಳನೀರು, ಕಲ್ಲಂಗಡಿ, ಕರಬೂಜ, ಓಆರ್‌ಎಸ್ ಪೂರೈಕೆ ●ಏರ್‌ಕೂಲರ್, ಐಸ್‌ಬ್ಲಾಕ್ ಬಳಕೆ

●ಎಂ.ಟಿ.ಯೋಗೇಶ್‌ಕುಮಾರ್

ಮೈಸೂರು, ಮಾ.16– ಬೇಸಿಗೆಯ ತಾಪಮಾನ ಹೆಚ್ಚಾಗುತ್ತಿದ್ದಂತೆಯೇ ಮೈಸೂರಿನ ಮೃಗಾಲಯದ ಪ್ರಾಣಿ–ಪಕ್ಷಿಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರದಂತೆ ಕಟ್ಟೆಚ್ಚರ ವಹಿಸಲಾಗಿದೆ.

ದೇಶದ ಮುಂಚೂಣಿ ಮೃಗಾಲಯಗಳಲ್ಲಿ ಒಂದಾಗಿರುವ ಮೈಸೂರಿನ ಚಾಮರಾಜೇಂದ್ರ ಮೃಗಾಲಯದಲ್ಲಿ ಅಪರೂಪದ, ಅಳಿವಿನಂಚಿನಲ್ಲಿರುವ ಹಾಗೂ ವಿದೇಶಿ ಪ್ರಾಣಿ–ಪಕ್ಷಿಗಳೂ ಒಳಗೊಂಡಂತೆ ಅಪಾರ ಪ್ರಮಾಣದ ವನ್ಯಜೀವಿಗಳಿದ್ದು, ಅವುಗಳನ್ನು ಬಿಸಿಲಿನ ಬೇಗೆಯಿಂದ ರಕ್ಷಣೆ ಮಾಡುವುದೇ ಮೃಗಾಲಯದ ಆಡಳಿತ ವರ್ಗಕ್ಕೆ ಸವಾಲಾಗಿದೆ. ಪ್ರಸಕ್ತ ಸಾಲಿನ ಬೇಸಿಗೆ ಆರಂಭದಲ್ಲಿಯೇ ಬಿಸಿಲಿನ ಝಳ ಹೆಚ್ಚಾಗಿದ್ದು, ಮೈಸೂರಲ್ಲಿ 35 ರಿಂದ 37 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ. ಮುಂದಿನ ದಿನಗಳಲ್ಲಿ ತಾಪಮಾನ ಹೆಚ್ಚಾಗುವ ಸಂಭವವಿದೆ. ಅಲ್ಲದೆ, ವಾತಾವರಣದಲ್ಲಿ ಬಿಸಿ ಗಾಳಿ ಪ್ರಮಾಣವೂ ಹೆಚ್ಚಾಗಿರುವುದರಿಂದ ಮೃಗಾಲಯದಲ್ಲಿರುವ ಪ್ರಾಣಿ–ಪಕ್ಷಿಗಳು ತತ್ತರಿಸುವಂತಾಗಿದೆ. ಈ ಹಿನ್ನೆಲೆಯಲ್ಲಿ ಪ್ರಾಣಿಗಳನ್ನು ಬೇಸಿಗೆ ಬೇಗೆಯಿಂದ ರಕ್ಷಿಸಲು ಕ್ರಮ ಕೈಗೊಳ್ಳಲಾಗಿದೆ.


ವಾಟರ್ ಜೆಟ್‌ನಲ್ಲಿ ನೀರಿನ ಸಿಂಚನ: ಮೃಗಾಲಯದಲ್ಲಿರುವ ಹುಲಿ, ಸಿಂಹ, ಚಿರತೆ, ಬಬೂನ್, ಆನೆ, ಜಿರಾಫೆ, ಕಾಡೆಮ್ಮೆ, ಚಿಂಪಾಂಜಿ, ಗೊರಿಲ್ಲಾ ಸೇರಿದಂತೆ ವಿವಿಧ ಪ್ರಾಣಿಗಳ ದೇಹ ತಣಿಸಲು ತಂಪಾದ ವಾತಾವರಣ ಸೃಷ್ಟಿಸಲು ಈ ಪ್ರಾಣಿಗಳು ವಿಹರಿಸುವ ಆವರಣದಲ್ಲಿ ವಾಟರ್ ಜೆಟ್(ಸ್ಪ್ರಿಂಕ್ಲರ್) ಅಳವಡಿಸಲಾಗಿದ್ದು, ದಿನಕ್ಕೆ 3–4 ಬಾರಿ ಅರ್ಧ ಗಂಟೆ ನೀರು ಚಿಮ್ಮಿಸಲಾಗುತ್ತದೆ. ಇದರಿಂದ ಪ್ರಾಣಿಗಳ ಮನೆ ಹಾಗೂ ವಿಹರಿಸುವ ಆವರಣದಲ್ಲಿ ತಾಪಮಾನ ಕಡಿಮೆಯಾಗುತ್ತದೆ. ಅಲ್ಲದೆ, ನೀರು ಚಿಮ್ಮುವ ವೇಳೆ ಪ್ರಾಣಿಗಳು ಮೈಯೊಡ್ಡಿ ತಂಪಾಗಿಸಿಕೊಳ್ಳುತ್ತಿವೆ. ನೆಲ ನೀರಿನಿಂದ ತೇವಗೊಂಡಿದ್ದರಿಂದ ಅಲ್ಲಿನ ವಾತಾವರಣ ತಂಪಾದಂತಾಗುತ್ತದೆ. ಇದರಿಂದ ಪ್ರಾಣಿಗಳು ಬಿಸಿಲಿನ ಬೇಗೆಯಿಂದ ಬಸವಳಿಯುವುದು ತಪ್ಪಿದಂತಾಗಿದೆ.

ನೀರಿನಂಶ ಹೆಚ್ಚಿರುವ ಆಹಾರ ಪೂರೈಕೆ: ಬಿಸಿಲಿನ ಬೇಗೆಗೆ ದೇಹದಲ್ಲಿರುವ ನೀರಿನ ಅಂಶ ಕಡಿಮೆಯಾಗುವ ಸಾಧ್ಯತೆ ಹೆಚ್ಚಾಗಿರುವುದರಿಂದ ಪ್ರಾಣಿ ಪಕ್ಷಿಗಳಿಗೆ ನೀರಿನ ಅಂಶ ಹೆಚ್ಚಾಗಿರುವ ಆಹಾರ ಪದಾರ್ಥವನ್ನು ನೀಡಲಾಗುತ್ತಿದೆ. ಗೊರಿಲ್ಲಾ, ಚಿಂಪಾಂಜಿಯಂತಹ ಪ್ರಾಣಿಗಳಿಗೆ ತರಕಾರಿ, ಕಲ್ಲಂಗಡಿ, ಕರಬೂಜ, ಸೌತೇಕಾಯಿ, ಪರಂಗಿ ಹಣ್ಣು ಸೇರಿದಂತೆ ಇನ್ನಿತರ ಹಣ್ಣುಗಳನ್ನು ನೀಡಲಾಗುತ್ತಿದೆ. ಅಲ್ಲದೆ, ಹಸಿ ಸೊಪ್ಪು, ವಿವಿಧ ತರಕಾರಿಯನ್ನು ನೀಡುತ್ತಿರುವುದರಿಂದ ಪ್ರಾಣಿಗಳ ದೇಹದಲ್ಲಿ ನೀರಿನಂಶ ಹೆಚ್ಚಾಗುವ ಮೂಲಕ ಬಿಸಿಲಿನ ತಾಪಕ್ಕೆ ಬಳಲದಂತೆ ನೋಡಿಕೊಳ್ಳಬಹುದಾಗಿದೆ.


ಐಸ್‌ಬ್ಲಾಕ್, ಓಆರ್‌ಎಸ್: ಮೃಗಾಲಯದಲ್ಲಿರುವ ಹಿಮಾಲಯದ ಕಪ್ಪು ಕರಡಿಗೆ ಐಸ್‌ಬ್ಲಾಕ್ ನೀಡಲಾಗುತ್ತಿದೆ. ಇದರಿಂದ ಕರಡಿ ಐಸ್‌ಬ್ಲಾಕ್ ಮೇಲೆ ಹೊರಳಾಡಿ ದೇಹವನ್ನು ತಂಪಾಗಿಸಿಕೊಳ್ಳುತ್ತಿದೆ. ಚಿಂಪಾಂಜಿ, ಗೊರಿಲ್ಲಾ ಹಾಗೂ ಇನ್ನಿತರ ಪ್ರಾಣಿಗಳಿಗೆ ನೀರಿನಲ್ಲಿ ಓಆರ್‌ಎಸ್ ಮಿಶ್ರಣ ಮಾಡಿ ನೀಡಲಾಗುತ್ತಿದೆ.

ಚಪ್ಪರ, ಕೆಸರಿನ ಕೊಳ: ಮೃಗಾಲಯದಲ್ಲಿರುವ ಜಿಂಕೆ, ಸಾಂಬರ್, ಕಾಡೆಮ್ಮೆ ಸೇರಿದಂತೆ ಸಸ್ಯಾಹಾರಿ ಪ್ರಾಣಿಗಳಿಗಾಗಿ ಅವುಗಳಿರುವ ಸ್ಥಳದಲ್ಲಿ ಕೆಸರಿನ ಕೊಳ ನಿರ್ಮಿಸಲಾಗಿದೆ. ಕೆಸರಿಗೆ ನೀರನ್ನು ಪೂರೈಸುತ್ತಿರುವುದರಿಂದ ಪ್ರಾಣಿಗಳ ಕೆಸರಿನಲ್ಲಿ ಒದ್ದಾಡಿ ದೇಹವನ್ನು ತಣಿಸಿಕೊಳ್ಳುತ್ತಿವೆ. ಅಲ್ಲದೆ ಬಹುತೇಕ ಎಲ್ಲಾ ಪ್ರಾಣಿಗಳ ಮನೆಗಳ ಆವರಣದಲ್ಲಿ ಚಪ್ಪರ ನಿರ್ಮಿಸಿದ್ದು, ಬಿಸಿಲಿನ ತಾಪ ನೀಗಿಸಿಕೊಳ್ಳಲು ಚಪ್ಪರದಡಿ ನೆರಳಿನ ಆಶ್ರಯ ಪಡೆದುಕೊಳ್ಳುತ್ತಿವೆ.

ಏರ್‌ಕೂಲರ್: ಪ್ರಾಣಿ, ಪಕ್ಷಿಗಳ ಮನೆಯೊಳಗೆ ಏರ್ ಕೂಲರ್ ಹಾಗೂ ಫ್ಯಾನ್‌ಗಳನ್ನು ಅಳವಡಿಸಲಾಗಿದೆ. ಹುಲಿ, ಚಿರತೆ, ಸಿಂಹ, ಕರಡಿ, ಚಿಂಪಾಂಜಿ, ಗೊರಿಲ್ಲಾ ಸೇರಿದಂತೆ ಅನೇಕ ಪ್ರಾಣಿಗಳ ಮನೆಯೊಳಗೆ ಏರ್‌ಕೂಲರ್ ಹಾಗೂ ಫ್ಯಾನ್ ಪ್ರಾಣಿಗಳನ್ನು ತಂಪಾಗಿಸುತ್ತಿವೆ. ಇದರಿಂದ ಸುಡು ಬಿಸಿಲಿನಲ್ಲೂ ಮೈಸೂರು ಮೃಗಾಲಯದ ಪ್ರಾಣಿಗಳು ಸಾಮಾನ್ಯ ವಾತಾವರಣದಲ್ಲಿರುವಂತೆ ಲವಲವಿಕೆಯಿಂದ ಕೂಡಿದ್ದು, ಪ್ರವಾಸಿಗರಿಗೆ ಮುದ ನೀಡುತ್ತಿವೆ.


ಮೈಸೂರು ಮೃಗಾಲಯದಲ್ಲಿ ವಾಟರ್ ಜೆಟ್‌ನಿಂದ ಚಿಮ್ಮಿದ ನೀರಿಗೆ ಮೈಯೊಡ್ಡಿ ನಿಂತಿರುವ ಜಿರಾಫೆಗಳು


ಬಿಸಿಲಿನ ಬೇಗೆ ತಾಳದೆ ಕೊಳದಲ್ಲಿ ವಿರಮಿಸುತ್ತಿರುವ ಹುಲಿ.


ಚಿಮ್ಮುವ ನೀರಿಗೆ ಮೈಯೊಡ್ಡಿನಿಂತಿರುವ ಸಿಂಹಿಣಿ.

ಬೇಸಿಗೆಯಲ್ಲಿ ಪ್ರಾಣಿಗಳ ಹಿತ ಕಾಯಲು ಕ್ರಮ

"ಬೇಸಿಗೆಯಿಂದಾಗಿ ತಾಪಮಾನ ಹೆಚ್ಚಾಗುತ್ತಿದ್ದು, ಮೈಸೂರು ಮೃಗಾಲಯದಲ್ಲಿರುವ ಪ್ರಾಣಿ–ಪಕ್ಷಿಗಳ ಹಿತ ಕಾಯಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ವಾಟರ್ ಜೆಟ್ ಅಳವಡಿಸಿ ನೀರನ್ನು ಚಿಮುಕಿಸಲಾಗುತ್ತಿದೆ. ಪ್ರಾಣಿಗಳಿಗೆ ಎಳನೀರು, ನೀರಿನ ಅಂಶ ಹೆಚ್ಚಿರುವ ಹಣ್ಣು, ಹಸಿ ತರಕಾರಿಯನ್ನು ನೀಡಲಾಗುತ್ತಿದೆ. ಕೆಲವಾರು ಪ್ರಾಣಿಗಳಿಗೆ ಐಸ್‌ಬ್ಲಾಕ್ ನೀಡಲಾಗುತ್ತಿದೆ. ಬೇಸಿಗೆಯಲ್ಲಿ ಯಾವುದೇ ಪ್ರಾಣಿಗಳಿಗೂ ತೊಂದರೆಯಾಗದಂತೆ ಕಟ್ಟೆಚ್ಚರ ವಹಿಸಲಾಗಿದೆ.

–ರಂಗಸ್ವಾಮಿ, ಕಾರ್ಯನಿರ್ವಾಹಕ ನಿರ್ದೇಶಕ, ಮೈಸೂರು ಮೃಗಾಲಯ


ಮೃಗಾಲಯದಲ್ಲಿರುವ ಸಸ್ಯಾಹಾರಿ ಪ್ರಾಣಿಗಳಿಗೆ ಹಸಿ ಸೊಪ್ಪು, ಹುಲ್ಲಿನ ಸರಬರಾಜು ಮಾಡುತ್ತಿರುವುದು. **ಚಿತ್ರಗಳು:** ಎಂ.ಎಸ್.ಲಕ್ಷ್ಮೀನಾರಾಯಣ ಯಾದವ್.

ಸ್ವರಾಜ್ ಅಭಿವೃದ್ಧಿ ಪರಿಕಲ್ಪನೆಯು ನಿಜವಾದ ಪ್ರಜಾಪ್ರಭುತ್ವ ರೂಪಿಸುತ್ತದೆ

ಮೇಲುಕೋಟೆ ಜನಪದ ಸೇವಾ ಟ್ರಸ್ಟ್‌ನ ಡಾ.ಸುಮನಸ್ ಕೌಲಗಿ ಅಭಿಮತ


'ಅಭಿವೃದ್ಧಿಗಾಗಿ ಸ್ವರಾಜ್' ಕುರಿತು ಮೇಲುಕೋಟೆ ಜನಪದ ಸೇವಾ ಟ್ರಸ್ಟ್‌ನ ಡಾ.ಸುಮನಸ್ ಕೌಲಗಿ ವಿಶೇಷ ಉಪನ್ಯಾಸ ನೀಡಿದರು.

"ಇವತ್ತಿನ ಆಧುನಿಕ ಶಿಕ್ಷಣ ವ್ಯವಸ್ಥೆಯಲ್ಲಿ ಯಾರು ಯಾರ ಕೈಕೆಳಗೆ ಕೆಲಸ ಮಾಡಬೇಕು ಎಂಬ ಯೋಚನೆ ಹೊರತು ಬೇರೆನೂ ಇಲ್ಲ. ಸರ್ಟಿಫಿಕೆಟ್ ಮುಖ್ಯ ಮಾನದಂಡವೆಂಬಂತೆ ಪರಿಗಣಿಸಲಾಗಿದೆ. ಆದರೆ ಮುಖ್ಯವಾಗಿ ಶಿಕ್ಷಣ ಎಂಬುದು ಜ್ಞಾನಾರ್ಜನೆಯಾಗಿರಬೇಕು. ಸ್ವರಾಜ್ ಪರಿಕಲ್ಪನೆಯಲ್ಲಿ ಗುಣಮಟ್ಟದ ಜ್ಞಾನ ಸಂಪಾದನೆಗೆ ಅವಕಾಶ ನೀಡಲಾಗುತ್ತದೆ. ಗುಣಮಟ್ಟದ ಶಿಕ್ಷಣದಿಂದ ಮಾತ್ರವೇ ಜ್ಞಾನಾಧಾರಿತ, ಸಮ ಸಮಾಜ ನಿರ್ಮಾಣ ಸಾಧ್ಯ.

–ಡಾ.ಸುಮನಸ್ ಕೌಲಗಿ

ಮೈಸೂರು, ಮಾ.16(ಎಂಕೆ)– ಸ್ವರಾಜ್ ಅಭಿವೃದ್ಧಿ ಪರಿಕಲ್ಪನೆಯಿಂದಾಗಿ ನೆಮ್ಮದಿಯಿಂದ ಕೂಡಿದ, ಪರಿಸರಕ್ಕೆ ಹತ್ತಿರವಾದ, ಸಮಾನತೆ ವ್ಯವಸ್ಥೆಯನ್ನು ಕಟ್ಟಿಕೊಳ್ಳಲು ಸಾಧ್ಯ' ಎಂದು ಮೇಲುಕೋಟೆ ಜನಪದ ಸೇವಾ ಟ್ರಸ್ಟ್‌ನ ಡಾ.ಸುಮನಸ್ ಕೌಲಗಿ ಹೇಳಿದರು.

ಮೈಸೂರಿನ ವಿಜಯನಗರ 4ನೇ ಹಂತದ ಕಲ್ಪಕ್ಷೇತ್ರ ಸಭಾಂಗಣದಲ್ಲಿ ಮೈಸೂರ್ ಓಪನ್ ಫೋರಂ ವತಿಯಿಂದ ಆಯೋಜಿಸಿದ್ದ 'ಅಭಿವೃದ್ಧಿಗಾಗಿ ಸ್ವರಾಜ್' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ವರಾಜ್ ಅಭಿವೃದ್ಧಿ ಪರಿಕಲ್ಪನೆಯು ನಿಜವಾದ ಪ್ರಜಾಪ್ರಭುತ್ವವನ್ನು ರೂಪಿಸುವುದರ ಜೊತೆಗೆ ಆರ್ಥಿಕ ಸಮತೋಲನ ಸೃಷ್ಟಿಸಲಿದೆ ಎಂದರು.

ಡೆವಲಪ್ಮೆಂಟ್ (ಅಭಿವೃದ್ಧಿ) ಎಂಬುದು ಎಲ್ಲರಿಗೂ ಅವಶ್ಯವಾಗಿದ್ದು, ಗ್ರಾಮೀಣ ಮಟ್ಟದಿಂದ ರಾಷ್ಟ್ರ ಮಟ್ಟದವರೆಗೂ ಚಾಲ್ತಿಯಲ್ಲಿರುವ ಪರಿಕಲ್ಪನೆಯಾಗಿದೆ. ಆಧುನಿಕ ಅಭಿವೃದ್ಧಿ ಮಾದರಿಯಲ್ಲಿ ಬಡತನದಿಂದ ಶ್ರೀಮಂತರಾಗುವುದು, ಐಷಾರಾಮಿ ವಸ್ತುಗಳ ಸಂಗ್ರಹಣೆ, ಸಮಾಜದಲ್ಲಿ ಪವರ್ ಫುಲ್ ವ್ಯಕ್ತಿಗಳಾಗಿ ರೂಪುಗೊಳ್ಳುವುದನ್ನು ಡೆವಲಪ್ಮೆಂಟ್ ಎನ್ನಬಹುದು. ವಿಪರ್ಯಾಸವೆಂದರೆ ಮಾರ್ಡನ್ ಡೆವಲಪ್ಮೆಂಟ್ ಹೆಸರಿನಲ್ಲಿ ಮೂಲಭೂತ ಸಂಪನ್ಮೂಲಗಳು ನಾಶವಾಗುತ್ತಿರುವುದು ಎಲ್ಲರನ್ನು ಕಾಡುವ ಪ್ರಶ್ನೆಯಾಗಿದೆ. ಗಾಳಿ, ನೀರು, ಮಣ್ಣು ಮಲಿನವಾಗುತ್ತಿದ್ದು, ಪರಿಸರ ವಿನಾಶದತ್ತ ಸಾಗುತ್ತಿದೆ ಎಂದು ಕೆಲ ಅಧ್ಯಯನಗಳು ಹೇಳುತ್ತಿವೆ ಎಂದು ಎಚ್ಚರಿಸಿದರು.

ಅಸಮತೋಲನ ಹೆಚ್ಚಾಗುತ್ತಿದ್ದು, ದೇಶದ ಬಹುತೇಕ ಸಂಪತ್ತು ಶೇ.11ರಷ್ಟು ಜನರ ಬಳಿ ಮಾತ್ರವಿದೆ. ಶ್ರೀಮಂತರು ಶ್ರೀಮಂತರಾಗಿ, ಬಡವರು ಬಡವರಾಗಿಯೇ ಉಳಿಯುತ್ತಿದ್ದಾರೆ. ಇದೇ ರೀತಿ ಮುಂದುವರೆದರೆ ಸಾಮಾಜಿಕ ಬಿಕ್ಕಟ್ಟನ್ನು ಎದುರಿಸಬೇಕಾದ ಅನಿವಾರ್ಯತೆ ಇದೆ. ಮುಖ್ಯವಾಗಿ ನೆಮ್ಮದಿಯ ಬದುಕು ಇಲ್ಲದಂತಾಗಿದ್ದು, ಪ್ರತಿಯೊಬ್ಬರು ಒಂದಲ್ಲ ಒಂದು ಬಗೆಯ ಒತ್ತಡದಲ್ಲಿ ಜೀವನ ನಡೆಸುತ್ತಿದ್ದು, ಮಾರ್ಡನ್ ಡೆವಲಪ್ಮೆಂಟ್ ನಮ್ಮನೆಲ್ಲಾ ಸಾವಿನ ಕಡೆಗೆ ಕರೆದುಕೊಂಡು ಹೋಗುತ್ತಿದೆ ಎಂಬ ಅರಿವಾಗುತ್ತಿದೆ ಎನ್ನುವಾಗಲೇ ಮಹಾತ್ಮ ಗಾಂಧಿ ಹಾಗೂ ಅವರೊಂದಿಗೆ ಸುಮಾರು 20 ವರ್ಷಗಳ ಕಾಲ ಜೊತೆಗಿದ್ದ ಜೆ.ಸಿ. ಕುಮಾರಪ್ಪ ಅವರ ಸ್ವರಾಜ್ಯ ಅಭಿವೃದ್ಧಿ ಕಲ್ಪನೆ ನೆನಪಾಗುತ್ತದೆ ಎಂದರು.

ಡೆವಲಪ್ಮೆಂಟ್ ಎಂಬುದು ವಿಶ್ವ ವಿಜ್ಞಾನದಿಂದ ಬಂದಂತಹ ಅಂಶವಾಗಿದ್ದು, ಆಧುನಿಕತೆಗೆ ಹೊಂದಿಕೊಂಡಂತೆ ನಾನು, ನನ್ನದು, ನನ್ನ ಜೀವನ ನನ್ನ ಕೈಯಲ್ಲಿದೆ ಎಂಬ ಹಂತಕ್ಕೆ ಬಂದಿದೆ. ಅದೇ ಗಾಂಧಿ ಮತ್ತು ಜೆ.ಸಿ.ಕುಮಾರಪ್ಪ ಅವರ ಸ್ವರಾಜ್ ಅಭಿವೃದ್ಧಿ ಮಾದರಿಯು ಹೊಂದಾಣಿಕೆ, ಪರಸ್ಪರ ಹಂಚಿಕೆ, ಆರ್ಥಿಕ ಸಮಾನತೆ ಹೊಂದಿದ್ದು, ಪ್ರತಿಯೊಂದು ಅಂಶದ ನಡುವೆಯೂ ಸಂಬಂಧವನ್ನು ಬೆಸೆಯುತ್ತದೆ. ಇದನ್ನು ಜೆ.ಸಿ.ಕುಮಾರಪ್ಪ ಅವರ ಎನಾಕಮಿ ಆಫ್ ಪರ್ಮನೆನ್ಸ್ ಎಂಬ ಕೃತಿಯಲ್ಲಿ (ಕನ್ನಡದಲ್ಲಿ 'ಶಾಶ್ವತ ಆರ್ಥಿಕತೆ') ನೋಡಬಹುದಾಗಿದೆ. ಸ್ವರಾಜ್ಯ ಎಂದರೆ ಬ್ರಿಟಿಷರಿಂದ ಸ್ವತಂತ್ರ್ಯ ಪಡೆಯುವುದೆಂದು ಆಗಿನ ಕಾಲದಲ್ಲಿ ಸಾಕಷ್ಟು ಜನರು ಅಂದುಕೊಂಡಿದ್ದರು. ಆದರೆ ಗಾಂಧಿ ಮತ್ತು ಕುಮಾರಪ್ಪ ಅವರ ಸ್ವರಾಜ್ಯ ಕಲ್ಪನೆಯು ಶೋಷಣೆ ಮುಕ್ತ ಸಮಾಜ ನಿರ್ಮಾಣ ಮಾಡುವುದಾಗಿತ್ತು ಎಂದು ತಿಳಿಸಿದರು.

ಸ್ವರಾಜ್ ಅಭಿವೃದ್ಧಿ ಪರಿಕಲ್ಪನೆಯಡಿ ಮೇಲುಕೋಟೆಯಲ್ಲಿ ಖಾದಿ ಬಟ್ಟೆಗಳ ತಯಾರಿಕೆ ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದ್ದೇವೆ. ಎಲ್ಲರೂ ಮಾಲೀಕರು, ಎಲ್ಲರೂ ಕೆಲಸಗಾರರು ಎಂಬ ಕಲ್ಪನೆಯಲ್ಲಿ ಬರುವ ಆದಾಯದ ಸಮಾನ ಹಂಚಿಕೆಗೆ ಆದ್ಯತೆ ನೀಡಲಾಗಿದೆ. ನಮ್ಮಂತಹ ಗುಂಪುಗಳು ಬೇರೆ ಬೇರೆಗಳಲ್ಲಿಯೂ ಆಗಬೇಕು ಎಂಬ ಚಿಂತನೆಯಲ್ಲಿ ಸಾಗುತ್ತಿದ್ದು, ಟಾರ್ಗೆಟ್ ಇಲ್ಲದೆ ಉತ್ಪನ್ನಗಳ ತಯಾರಿಕೆ ಜೊತೆಗೆ ಬೇಕು ಬೇಕು ಎಂಬುದರ ಬದಲು ಸಾಕು ಸಾಕು ಎನ್ನುವ ಮೂಲಕ ನೆಮ್ಮದಿಯ ಬದುಕನ್ನು ಕಟ್ಟಿಕೊಳ್ಳಲು ಸ್ವರಾಜ್ ಅಭಿವೃದ್ಧಿ ಪರಿಕಲ್ಪನೆ ಅವಶ್ಯವಾಗಿದೆ ಎಂದರು.

ಬಳಿಕ ಸ್ವರಾಜ್ ಅಭಿವೃದ್ಧಿ ಕುರಿತು ಸಂವಾದ ನಡೆಯಿತು. 'ಮೈಸೂರು ಮಿತ್ರ', ಹಾಗೂ 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ, ಭಾರತ ಸರ್ಕಾರ ಸಚಿವ ಸಂಪುಟದ ನಿವೃತ್ತ ಜಂಟಿ ಕಾರ್ಯದರ್ಶಿ ರವಿ ಜೋಷಿ, ನಿವೃತ್ತ ಮೇಜರ್ ಜನರಲ್ ಸುದೀರ್ ಒಂಬತ್ಕೆರೆ, ಜಿ.ವೆಂಕಟೇಶ್‌ಕುಮಾರ್, ರವಿಶಂಕರ್ ಬಳೆ, ಎಂ.ಸಿ.ಚಂದ್ರಶೇಖರ್, ಕೆ.ವಿ.ಶ್ರೀನಿವಾಸ್, ಡಾ.ಲತಾ ಬಿಡ್ಡಪ್ಪ ಮತ್ತಿತರರು ಉಪಸ್ಥಿತರಿದ್ದರು.

ಆಧಾರ್–ಚುನಾವಣಾ ಗುರುತು ಪತ್ರ ಜೋಡಣೆ

ನಾಳೆ ಸಿಇಸಿಯಿಂದ ಉನ್ನತ ಮಟ್ಟದ ಸಭೆ



ನವದೆಹಲಿ, ಮಾ.16– ಮತದಾರರ ಪಟ್ಟಿಯ ವಿವಾದದ ನಡುವೆ, ಮತದಾರರ ಗುರುತಿನ ಚೀಟಿಯನ್ನು ಆಧಾರ್ ಕಾರ್ಡ್‌ನೊಂದಿಗೆ ಲಿಂಕ್ ಮಾಡುವ ಬಗ್ಗೆ ಚರ್ಚಿಸಲು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಮಂಗಳವಾರ ಉನ್ನತ ಮಟ್ಟದ ಸಭೆ ಕರೆದಿದ್ದಾರೆ,

ಮುಖ್ಯ ಚುನಾವಣಾ ಆಯುಕ್ತರು ಮಾ.18 ರಂದು ಗೃಹ ಕಾರ್ಯದರ್ಶಿ ಗೋವಿಂದ್ ಮೋಹನ್, ಶಾಸಕಾಂಗ ಇಲಾಖೆಯ ಕಾರ್ಯದರ್ಶಿ ರಾಜೀವ್ ಮಣಿ ಮತ್ತು ಯುಐಡಿಎಐ ಸಿಇಒ ಭುವನೇಶ್ ಕುಮಾರ್ ಅವರೊಂದಿಗೆ ಈ ವಿಷಯವನ್ನು ಚರ್ಚಿಸಲಿದ್ದಾರೆ.

ಇದು ಚುನಾವಣಾ ಆಯೋಗದ ಹಿಂದಿನ ನಿಲುವಿಗೆ ವಿರುದ್ಧವಾಗಿದೆ. ಸೆಪ್ಟೆಂಬರ್ 2023ರಲ್ಲಿ, ಮತದಾರರ ನೋಂದಣಿ (ತಿದ್ದುಪಡಿ) ನಿಯಮಗಳು 2022 ರ ನಿಯಮ 26–ಬಿ ಅಡಿಯಲ್ಲಿ ಆಧಾರ್ ಸಂಖ್ಯೆಯನ್ನು ಸಲ್ಲಿಸುವುದು ಕಡ್ಡಾಯವಲ್ಲ ಎಂದು ಚುನಾವಣಾ ಆಯೋಗ ಸುಪ್ರೀಂ ಕೋರ್ಟ್‌ಗೆ ತಿಳಿಸಿತ್ತು

2022 ರಲ್ಲಿ, ಕೇಂದ್ರ ಕಾನೂನು ಸಚಿವರಾಗಿದ್ದ ಕಿರಣ್ ರಿಜಿಜು ಲೋಕಸಭೆಗೆ ಆಧಾರ್ ನ್ನು ಚುನಾವಣಾ ಗುರುತು ಪತ್ರದೊಂದಿಗೆ ಲಿಂಕ್ ಮಾಡುವುದು ಸ್ವಯಂಪ್ರೇರಿತವಾಗಿದೆ, ಆಧಾರ್ ಸಂಖ್ಯೆ ಇಲ್ಲದೆ ಮತದಾರರನ್ನು ಸೇರಿಸುವುದರಿಂದ 'ಫಾರ್ಮ್ 6B ನಲ್ಲಿ ಒದಗಿಸಲಾದ ಇತರ ಐಚ್ಛಿಕ ದಾಖಲೆ ಗಳನ್ನು ಒದಗಿಸಬಹುದು ಎಂದು ಹೇಳಿದ್ದರು.

ಮತದಾರರ ಗುರುತಿನ ಚೀಟಿ ಸಂಖ್ಯೆ ನಕಲು ಮತ್ತು ಮತದಾರರ ಪಟ್ಟಿಯ ದತ್ತಾಂಶದ ವಂಚನೆಯ ಆರೋಪಗಳನ್ನು ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮತ್ತು ಕಾಂಗ್ರೆಸ್ ಸೇರಿದಂತೆ ವಿರೋಧ ಪಕ್ಷಗಳು ಎತ್ತಿರುವ ಹಿನ್ನೆಲೆಯಲ್ಲಿ ಮುಂದಿನ ಮಂಗಳವಾರದ ಸಭೆ ಮಹತ್ವ ಪಡೆದಿದೆ.

ಮಾ.20ರಂದು ಬ್ರಹ್ಮರಥೋತ್ಸವ

ಮೈಸೂರು,ಮಾ.16– ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ, ಶ್ರೀ ಮಹಾಬಲೇಶ್ವರ ಸ್ವಾಮಿಯವರ ಬ್ರಹ್ಮ ರಥೋತ್ಸವದ ಶ್ರೀ ಮಹಾಬಲೇಶ್ವರ ಸ್ವಾಮಿಯವರ ಬ್ರಹ್ಮ ರಥೋತ್ಸವ ಮಾ.20ರಂದು ನಡೆಯುತ್ತದೆ. ಅಂದು ಬೆಳಗ್ಗೆ 7:55ರಿಂದ 8:25ಕ್ಕೆ ಸಲ್ಲುವ ಶುಭ ಮುಹೂರ್ತದಲ್ಲಿ "ಶ್ರೀಮದ್ ದಿವ್ಯ ಬ್ರಹ್ಮರಥೋತ್ಸವ' ಸಂಜೆ ಹಂಸ ವಾಹನ ನಂತರ ನಟೇ ಶೋತ್ಸವ ನಡೆಯಲಿದೆ.



ಮಾ.17 ರಾತ್ರಿ ತೃತೀಯ ಪುಷ ಮಂಡಲ ಪಾರೋಹಣ ಕಾರ್ಯಕ್ರಮ, ಮಾ.18ರಂದು ರಾತ್ರಿ ಚತುರ್ಥಿ ವೃಷಭ ವಾಹನ ಕಾರ್ಯಕ್ರಮ, ಮಾ.19ರಂದು ಪಂಚಮಿ ಸಂಜೆ ಪಂಚಮಿ ಕಳಶಾರೋಹಣ, ನಂತರ ಗಜಾರೋಹಣ, ಕಾರ್ಯಕ್ರಮ ಏರ್ಪಡಿಸಲಾಗಿದೆ. ಮಾ.21ರಂದು ಬೆಳಗ್ಗೆ ಸಪ್ತಮಿ ಅಶ್ವಾರೋಹಣ, ಭೂತವಾಹನ ಕಾರ್ಯಕ್ರಮ, ಮಾ.22ರಂದು ರಾತ್ರಿ ಅಷ್ಟಮಿ ತೀರ್ಥಸ್ನಾನ, ಪಲ್ಲಕ್ಕಿ ಉತ್ಸವ, ಆಂದೋಳಿಕಾರೋಹಣ, ಮಾ.23ರಂದು ಸಂಜೆ ನವಮಿ ಪಂಚೋಪಚಾರ, ಕೈಲಾಸ ವಾಹನ, ಶಯನೋತ್ಸವ, ಮಾ.24ರಂದು ಬೆಳಗ್ಗೆ ದಶಮಿ ಮಹಾಭಿಷೇಕ, ವೃಷಭ ವಾಹನ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ: ಕೋರ್ಟ್ ಮೊರೆ ಹೋಗಲು ಬಿಜೆಪಿ ನಿರ್ಧಾರ

ಬೆಂಗಳೂರು, ಮಾ.16– ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿ ನೀಡುವ ಕರ್ನಾಟಕ ಸರಕಾರದ ತೀರ್ಮಾನ ಸಂವಿಧಾನ ಬಾಹಿರ ಎಂದು ಬಿಜೆಪಿ ಟೀಕಿಸಿದೆ. ಇದೇ ವೇಳೆ ಸರಕಾರದ ಕ್ರಮದ ವಿರುದ್ಧ ಕೋರ್ಟ್ ಮೊರೆ ಹೋಗುವುದಾಗಿ ಹೇಳಿದೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, 'ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು' ತತ್ವಕ್ಕೆ ಬಿಜೆಪಿ ಸದಾ ಬದ್ಧ, ಆದರೆ ಕಾಂಗ್ರೆಸ್ ಸರ್ಕಾರ 'ಮುಸ್ಲಿಮರಿಗೆ ಬಹುಪಾಲು ಇತರರಿಗೆ ಅಲ್ಪಪಾಲು' ಎಂಬ ನೀತಿ ಅನುಸರಿಸಲು ಹೊರಟು ಕುವೆಂಪು ಅವರು ಕಲ್ಪಿಸಿದ ಸರ್ವ ಜನಾಂಗದ ಶಾಂತಿಯ ತೋಟಕ್ಕೆ ಬೆಂಕಿ ಇಡಲು ಹೊರಟಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನಕ್ಕೆ ಅಪಚಾರವಾದರೂ ಸರಿ ನಾವು ಅಧಿಕಾರದಲ್ಲುಳಿಯಲು ಮುಸ್ಲಿಂ ಸಮುದಾಯವನ್ನು ಓಲೈಸುವುದೇ ನಮ್ಮ ಹೆಗ್ಗುರಿ ಎಂಬ ನಿರ್ಧಾರಕ್ಕೆ ಕಾಂಗ್ರೆಸ್ ಬಂದುಬಿಟ್ಟಿದೆ. ಕರ್ನಾಟಕದಲ್ಲಿ ಗುತ್ತಿಗೆ ಕಾಮಗಾರಿ ಹಂಚುವಲ್ಲಿಯೂ ಶೇ.4 ಮೀಸಲಾತಿ ನಿಗದಿಪಡಿಸುವ ಮೂಲಕ ಸಮಾಜದಲ್ಲಿ ಒಡಕು ಮೂಡಿಸಿ, ಧರ್ಮಗಳ ನಡುವೆ ಬಿರುಕು ಮೂಡಿಸುವ ಕೆಲಸಕ್ಕೆ ಕಾಂಗ್ರೆಸ್ ಸರ್ಕಾರ ಕೈ ಹಾಕಿದೆ ಎಂದು ಅವರು ಆರೋಪಿಸಿದ್ದಾರೆ.



ಈ ಬಗ್ಗೆ ಎಕ್ಸ್ ಖಾತೆಯಲ್ಲಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಗುತ್ತಿಗೆ ಕಾಮಗಾರಿ ಹಂಚುವಲ್ಲಿ ಮುಸಲ್ಮಾನರಿಗೆ ಶೇ.4 ಮೀಸಲಾತಿ ನೀಡುವ ತೀರ್ಮಾನವನ್ನು ಖಂಡಿಸಿದ್ದಾರೆ. ಮುಸ್ಲಿಮರಿಗಷ್ಟೇ ಮೀಸಲಾತಿ ನಿಗದಿಯಾಗಿದ್ದರೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ರಾಜ್ಯದ ಜನತೆಯನ್ನು ದಿಕ್ಕು ತಪ್ಪಿಸುವ ಹೇಳಿಕೆ ನೀಡಿ, ಅಲ್ಪಸಂಖ್ಯಾತರು ಎಂದರೆ ಮುಸ್ಲಿಮರು ಮಾತ್ರವಲ್ಲ, ಕ್ರೈಸ್ತರು, ಜೈನ, ಪಾರ್ಸಿ, ಸಿಖ್ ಹೀಗೆ ಎಲ್ಲರೂ ಸೇರುತ್ತಾರೆ ಎಂದು ಹೇಳಿದ್ದಾರೆ. ಇದು 'ಕೋತಿ ಮೊಸರು ತಿಂದು ಮೇಕೆ ಬಾಯಿಗೆ ಸವರಿದಂತೆ' ಎಂಬಂತೆ ರಾಜ್ಯದ ಜನರನ್ನು ಮೂರ್ಖರನ್ನಾಗಿಸಲು ಹೊರಟಿದ್ದಾರೆ. ಅಲ್ಪಸಂಖ್ಯಾತರ ಹೆಸರಿನಲ್ಲಿ ಮುಸ್ಲಿಮರೂ ಸೇರಿದಂತೆ ಇತರ ಧಾರ್ಮಿಕ ಅಲ್ಪಸಂಖ್ಯಾತರೆಲ್ಲರಿಗೂ ಸಮಾನವಾಗಿ ಹಕ್ಕು, ಸವಲತ್ತುಗಳು ಹಂಚಿಕೆಯಾಗಬೇಕು, ಆದರೆ ಸಾಮಾಜಿಕ ನ್ಯಾಯದ ಬಗ್ಗೆ ಬೊಬ್ಬೆ ಹೊಡೆಯುವ ಕಾಂಗ್ರೆಸ್ ತನ್ನ ಆಡಳಿತದ ರಾಜ್ಯ ಸರ್ಕಾರದ ವ್ಯವಸ್ಥೆಯಲ್ಲಿ ಸಾಮಾಜಿಕ ನ್ಯಾಯವನ್ನು ಮೆಟ್ಟಿ ನಿಂತು ಮುಸ್ಲಿಂ ಪಕ್ಷಪಾತಿ ಧೋರಣೆ ಅನುಸರಿಸುತ್ತಿರುವುದು ಸಂವಿಧಾನಕ್ಕೆ ದ್ರೋಹ ಬಗೆದಂತಾಗಿದೆ ಎಂದು ಬರೆದುಕೊಂಡಿದ್ದಾರೆ.